# ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಆಗಸ್ಟ್ 30 ಶುಕ್ರವಾರ 2024

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

45

ಸಂಪುಟ: 45 | ಸಂಚಿಕೆ: 135 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4



## ಸಿಎಂ ಸಿದ್ದರಾಮಯ್ಯ ತನಿಖೆಗೆ ರಾಜ್ಯಪಾಲರ ಅನುಮತಿ ಪ್ರಕರಣ

# ನಾಳೆಗೆ ವಿಚಾರಣೆ

- ಸಿದ್ದರಾಮಯ್ಯರ ಪರ ಅಭಿಷೇಕ್ ಮನು ಸಿಂಘ್ವಿ ಸುದೀರ್ಘ ವಾದ ಮಂಡನೆ
- ಜನಪ್ರತಿನಿಧಿಗಳ ಕೋರ್ಟ್ ಸದ್ಯ ವಿಚಾರಣೆ ಕೈಗೆತ್ತಿಕೊಳ್ಳದಂತೆ ಸೂಚನೆ



'ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡುವ ಮುನ್ನ ಸೂಕ್ತ ಕಾರಣಗಳನ್ನೇ ನೀಡಿಲ್ಲ. ಕೇವಲ ನಾಲ್ಕು ಪುಟಗಳ ವಿವರಣೆ ನೀಡಿ ಕೈತೊಳೆದುಕೊಂಡಿದ್ದಾರೆ. ಮುಖ್ಯಮಂತ್ರಿ ಅವರ ಪತ್ನಿ ಪ್ರಾಧಿಕಾರದ ನಿವೇಶನಗಳನ್ನು ತಮ್ಮ ಪತಿಯ ಅಧಿಕಾರ ದುರ್ಬಳಕೆ ಮಾಡಿಕೊಂಡು ಪಡೆದಿಲ್ಲ. ಅವರ ಜಮೀನನ್ನು ಮುಡಾ ವಶಪಡಿಸಿಕೊಂಡಿತ್ತು. ಅದಕ್ಕೆ ಪರ್ಯಾಯವಾಗಿ 14 ನಿವೇಶನ ನೀಡಿದೆ. ಇದರಲ್ಲಿ ಏನೂ ತಪ್ಪಿಲ್ಲ.–ಸಿಎಂ ಸಿದ್ದರಾಮಯ್ಯ ಪರ ನ್ಯಾಯವಾದಿ ಅಭಿಷೇಕ್ ಮನು ಸಿಂಘ್ವಿ.

**ಬೆಂಗಳೂರು ಆ.29(ಕೆಎಂಶಿ)–ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ನಿವೇಶನ ಹಂಚಿಕೆ ಪ್ರಕರಣದ ವಿಚಾರಣೆಯನ್ನು ರಾಜ್ಯ ಹೈಕೋರ್ಟ್ ಆಗಸ್ಟ್ 31ಕ್ಕೆ ಮುಂದೂಡಿದೆ.**

ಇಂದು ಮುಂದುವರೆದ ವಿಚಾರಣೆ ಕೈಗೆತ್ತಿಕೊಂಡ ಏಕ ಸದಸ್ಯ ಪೀಠದ ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರು, ವಿಚಾರಣೆಯನ್ನು ಮುಂದೂಡಿದ್ದಲ್ಲದೆ ಅಲ್ಲಿಯವರೆವಿಗೂ ಜನಪ್ರತಿನಿಧಿಗಳ ನ್ಯಾಯಾಲಯವು ವಿಚಾರಣೆ ಕೈಗೆತ್ತಿಕೊಳ್ಳುವಂತಿಲ್ಲ ಎಂದು ಆದೇಶ ಮಾಡಿದ್ದಾರೆ.

ನ್ಯಾಯಾಲಯದ ಆದೇಶದಿಂದ ಮುಖ್ಯಮಂತ್ರಿ ಅವರಿಗೆ ಮತ್ತೆ 2 ದಿನಗಳ ತಾತ್ಕಾಲಿಕ ರಿಲೀಫ್ ದೊರೆತಿದೆ. ವಿಚಾರಣೆ ಆರಂಭವಾಗುತ್ತಿದ್ದಂತೆ ಸಿದ್ದರಾಮಯ್ಯ ಅವರ ಪರವಾಗಿ ಸುದೀರ್ಘ ವಾದ ಮಂಡಿಸಿದ ಸುಪ್ರೀಂಕೋರ್ಟ್‌ನ ಹಿರಿಯ ನ್ಯಾಯವಾದಿ ಅಭಿಷೇಕ್ ಮನು ಸಿಂಘ್ವಿ, ಮುಖ್ಯಮಂತ್ರಿಯವರು ತಮ್ಮ ಅಧಿಕಾರವನ್ನು ದುರುಪಯೋಗ ಮಾಡಿಕೊಂಡಿಲ್ಲ. ರಾಜ್ಯಪಾಲರು ಯಾವ ಆಧಾರದ ಮೇಲೆ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ್ದಾರೋ ತಿಳಿಯದು. ಇದರಲ್ಲಿ ಯಾವುದೇ ಹಗರಣ ನಡೆದಿಲ್ಲ. ಈಗಲಾದರೂ ರಾಜ್ಯಪಾಲರು ತಮ್ಮ ನಿರ್ಧಾರವನ್ನು ಬದಲಿಸಿ, ಪ್ರಾಸಿಕ್ಯೂಷನ್‌ಗೆ ನೀಡಿರುವ ಅನುಮತಿಯನ್ನು ಹಿಂದಕ್ಕೆ ಪಡೆಯಬೇಕೆಂದು ಪೀಠಕ್ಕೆ ಮನವಿ ಮಾಡಿದರು. ರಾಜ್ಯಪಾಲರ ಅನುಮತಿಯಿಂದ


ಮುಖ್ಯಮಂತ್ರಿ ಸಿದ್ದರಾಮಯ್ಯ

ಸಮಸ್ಯೆ ಎದುರಾಗಲಿದೆ. ಅವರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡುವ ಮುನ್ನ ಸೂಕ್ತ ಕಾರಣಗಳನ್ನೇ ನೀಡಿಲ್ಲ. ಕೇವಲ ನಾಲ್ಕು ಪುಟಗಳ ಅನುಮತಿ ನೀಡಿ ಕೈತೊಳೆದುಕೊಂಡಿದ್ದಾರೆ. ಮುಖ್ಯಮಂತ್ರಿ ಅವರ ಪತ್ನಿ ಪ್ರಾಧಿಕಾರದ ನಿವೇಶನಗಳನ್ನು ತಮ್ಮ ಪತಿಯ ಅಧಿಕಾರ ದುರ್ಬಳಕೆ ಮಾಡಿಕೊಂಡು ಪಡೆದಿಲ್ಲ. ಅವರ ಜಮೀನನ್ನು ಮುಡಾ ವಶಪಡಿಸಿಕೊಂಡಿತ್ತು. ಅದಕ್ಕೆ ಪರ್ಯಾಯವಾಗಿ 14 ನಿವೇಶನ ನೀಡಿದೆ. ಇದರಲ್ಲಿ ಏನೂ ತಪ್ಪಿಲ್ಲ ಎಂದು ಅವರು ಸಿದ್ದರಾಮಯ್ಯ ಅವರ ಪತ್ನಿಯ ಜಮೀನಿಗೆ ಸಂಬಂಧಿಸಿದಂತೆ ಪೂರ್ಣ ದಾಖಲೆಗಳನ್ನು ಪೀಠದ ಮುಂದೆ ಇಟ್ಟರು.

ಹಿಂದೆ ಹಲವಷ್ಟು ಡಿ ನೋಟಿಫಿಕೇಷನ್ ಪ್ರಕರಣಗಳಾಗಿವೆ. ಅದರಲ್ಲಿ ಯಾವುದರ ಬಗ್ಗೆಯೂ ತನಿಖೆ ಅಥವಾ ಶಿಕ್ಷೆಯಾಗಿಲ್ಲ ಎಂದರು. ರಾಜ್ಯಪಾಲರು ಮೊದಲು ದೂರುದಾರನಿಗೆ ದಂಡ ಹಾಕಬೇಕು. ದೂರುದಾರ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡುವ ಮೊದಲೇ ಜನಪ್ರತಿನಿಧಿಗಳ ನ್ಯಾಯಾಲಯಕ್ಕೆ ಹೋಗಿದ್ದಾರೆ.

ಲೋಕಾಯುಕ್ತ ಪೊಲೀಸರಿಗೂ ದೂರು ಕೊಟ್ಟಿದ್ದಾರೆ. ಹೀಗೆ ಸಮಯ ವ್ಯರ್ಥ ಮಾಡಿರುವ ದೂರುದಾರನಿಗೆ ಮೊದಲು ದಂಡಹಾಕಿ. ನಾನು ಲೋಕಾಯುಕ್ತ ಮತ್ತು ರಾಜ್ಯಪಾಲರನ್ನು ದೂಷಣೆ ಮಾಡಲ್ಲ. ದೂರು ಕೊಟ್ಟಿದ್ದ ಇವರು ಪ್ರಾಸಿಕ್ಯೂಷನ್‌ಗೂ ಅನುಮತಿ ಕೇಳಿದ್ದಾರೆ.

ಅರ್ಜಿ ರಾಜ್ಯಪಾಲರ ಬಳಿ ಇರಬೇಕಾದರೆ ಕೆಳ ನ್ಯಾಯಾಲಯದಲ್ಲಿ ದೂರು ದಾಖಲಿಸಿದ್ದಾರೆ. ರಾಜ್ಯಪಾಲರಿಗೆ ದಂಡ ಹಾಕುವ ಅಧಿಕಾರ ಇಲ್ಲ. ಮಾನ್ಯ ನ್ಯಾಯಮೂರ್ತಿಗಳು ದಂಡ ಹಾಕಬೇಕು ಎಂದು ಹೇಳಿದರು. ಎರಡು ಕಡೆ ಅರ್ಜಿ ಸಲ್ಲಿಸಿದರೆ ರಾಜ್ಯಪಾಲರು ಇದನ್ನು ಪರಿಶೀಲನೆ ಮಾಡಬೇಕು. ಇಂತಹ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸದೇ ಇದ್ದಲ್ಲಿ ದಾರಿಹೋಕರು ಕೂಡ ಅರ್ಜಿ ಸಲ್ಲಿಸುತ್ತಾರೆ. ಪ್ರಾಸಿಕ್ಯೂಷನ್‌ಗೆ ಅನುಮತಿ ಕೊಡುವಾಗ ರಾಜ್ಯಪಾಲರು ಎಲ್ಲವನ್ನು ಪರಿಶೀಲನೆ ಮಾಡಿಲ್ಲ. ಮುಖ್ಯಮಂತ್ರಿ ಅವರ ವಿರುದ್ಧ ತನಿಖೆಗೆ ■5ನೇ ಪುಟಕ್ಕೆ







### ಪೋಕ್ಸೋ ಪ್ರಕರಣ

## ಯುವಕನಿಗೆ 20 ವರ್ಷ ಸಜೆ

ಮೈಸೂರು, ಆ.29–ಅಪ್ರಾಪ್ತ ಬಾಲಕಿಯನ್ನು ಪ್ರೀತಿಸಿ ಮದುವೆಯಾಗುವುದಾಗಿ ನಂಬಿಸಿದ್ದಲ್ಲದೇ ಬಲವಂತವಾಗಿ ಲೈಂಗಿಕ ಕ್ರಿಯೆ ನಡೆಸಿ, ಆಕೆ ತಾಯಿಯಾಗಲು ಕಾರಣನಾದ ಕಾಮುಕನಿಗೆ ಪೋಕ್ಸೋ ವಿಶೇಷ ನ್ಯಾಯಾಲಯದ ನ್ಯಾಯಾಧೀಶರಾದ ಆನಂದ್ ಹೊಗಾಡೆ ಅವರು 20 ವರ್ಷ ಕಠಿಣ ಸಜೆ ಹಾಗೂ 50 ಸಾವಿರ ರೂ. ದಂಡ ವಿಧಿಸಿ, ತೀರ್ಪು ನೀಡಿದ್ದಾರೆ. ಸಾಲಿಗ್ರಾಮ ಪೊಲೀಸ್ ಠಾಣಾ ವ್ಯಾಪ್ತಿಯ ಹಲಗೆಗೌಡನ ಕೊಪ್ಪಲು ■5ನೇ ಪುಟಕ್ಕೆ

### ಯಾರೇ ಕೂಗಾಡಲಿ... ಊರೇ ಹೋರಾಡಲಿ...

## ಮುಡಾ ಮಾಜಿ ಆಯುಕ್ತ ದಿನೇಶ್‌ಕುಮಾರ್

# ಈಗ ಹಾವೇರಿ ವಿವಿ ಕುಲಸಚಿವ!

ಮೈಸೂರು, ಆ.29– ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದಲ್ಲಿನ ನಿವೇಶನ ಹಗರಣ ಸಂಬಂಧ ದಿಢೀರ್ ವರ್ಗಾವಣೆಗೊಂಡು ಸ್ಥಳ ನಿರೀಕ್ಷಣೆಯಲ್ಲಿದ್ದ ಜಿ.ಟಿ.ದಿನೇಶ್‌ಕುಮಾರ್ ಅವರನ್ನು ಹಾವೇರಿ ವಿಶ್ವವಿದ್ಯಾನಿಲಯದ ಕುಲಸಚಿವ(ಆಡಳಿತ) ರನ್ನಾಗಿ ನಿಯೋಜಿಸಲಾಗಿದೆ.


ಜಿ.ಟಿ.ದಿನೇಶ್‌ಕುಮಾರ್

ರಾಜ್ಯ ಸರ್ಕಾರ ವರ್ಗಾವಣೆ/ಸ್ಥಳ ನಿಯುಕ್ತಿಗೊಳಿಸಿರುವ 16 ಕೆಎಎಸ್ ಅಧಿಕಾರಿಗಳ ಪಟ್ಟಿಯಲ್ಲಿ ಎರಡನೇ ಹೆಸರೇ ಮುಡಾ ಮಾಜಿ ಆಯುಕ್ತ ಜಿ.ಟಿ.ದಿನೇಶ್ ಕುಮಾರ್ ಅವರದ್ದಾಗಿದೆ. ಈ ಸಂಬಂಧ ರಾಜ್ಯಪಾಲರ ಆದೇಶಾನುಸಾರ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಸರ್ಕಾರದ ಅಧೀನ ಕಾರ್ಯದರ್ಶಿ ಉಮಾದೇವಿ, ಗುರುವಾರ ಅಧಿಸೂಚನೆ ಹೊರಡಿಸಿದ್ದಾರೆ.

**ಸರ್ಕಾರದ ನಡೆ ಏನು?:** ಮುಡಾದ ಶೇ.50:50ರ ಅನುಪಾತದಡಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಪತ್ನಿ ಶ್ರೀಮತಿ ಪಾರ್ವತಿ ಅವರಿಗೆ 14 ನಿವೇಶನಗಳ ಮಂಜೂರು ಮಾಡಿರುವುದು ಸೇರಿದಂತೆ ಪ್ರಾಧಿಕಾರದ ಬ್ರಹ್ಮಾಂಡ ಭ್ರಷ್ಟಾಚಾರ ಬಯಲಾಗುತ್ತಲೇ ಇದೆ. ಈ ಹಗರಣ ಬೆಳಕಿಗೆ ಬರುತ್ತಿದ್ದಂತೆ ಜುಲೈ 1ರಂದು ಹೆಲಿಕಾಪ್ಟರ್ ಮೂಲಕ ಧಾವಿಸಿ, ಮುಡಾದಲ್ಲಿ ದಿಢೀರ್ ಸಭೆ ನಡೆಸಿದ್ದ ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್, ಸಿಎಂ ಕುಟುಂಬದ ಮೇಲಿನ ಆರೋಪವನ್ನು ತಳ್ಳಿಹಾಕಿದರಾದರೂ ಹಗರಣ ನಡೆದಿರುವುದನ್ನು ಒಪ್ಪಿಕೊಂಡರು. ಅಲ್ಲದೆ ಮುಡಾ ಆಯುಕ್ತರಾಗಿದ್ದ ಜಿ.ಟಿ.ದಿನೇಶ್ ಕುಮಾರ್ ಇನ್ನಿತರ ಅಧಿಕಾರಿಗಳ ವರ್ಗಾವಣೆ ಪ್ರಕಟಿಸಿದರು. ಮರುದಿನ ವರ್ಗಾವಣೆ ಪ್ರಹಸನವೂ ನಡೆದು ಹಿರಿಯ ಕೆಎಎಸ್ ಅಧಿಕಾರಿ ಎ.ಎನ್.ರಘುನಂದನ್ ಅವರನ್ನು ಮುಡಾ ಆಯುಕ್ತರನ್ನಾಗಿ ನಿಯೋಜಿಸಿದರು. ನಂತರ ಕಾಂಗ್ರೆಸ್ ಜನಾಂದೋಲನ ಸಮಾವೇಶದ ಮೂಲಕ ಸಿಎಂ ಬೆನ್ನಿಗೆ ನಿಂತರೆ, ವಿಪಕ್ಷಗಳಾದ ಬಿಜೆಪಿ–ಜೆಡಿಎಸ್ ಮೈಸೂರು ಚಲೋ ಪಾದಯಾತ್ರೆ ಮೂಲಕ ಸಿದ್ದರಾಮಯ್ಯ ರಾಜೀನಾಮೆಗೆ ಆಗ್ರಹಿಸಿದವು. ■5ನೇ ಪುಟಕ್ಕೆ



# ಬಳ್ಳಾರಿ ಜೈಲಲ್ಲಿ ದರ್ಶನ್

## ವಿಚಾರಣಾಧೀನ ಕೈದಿ ನಂ.511

### ನಿಯಮ ಉಲ್ಲಂಘನೆ ಆಗದಂತೆ ಕಟ್ಟೆಚ್ಚರ

ಬಳ್ಳಾರಿ, ಆ.29– ಚಿತ್ರದುರ್ಗದ ರೇಣುಕಾಸ್ವಾಮಿ ಹತ್ಯೆ ಪ್ರಕರಣದಲ್ಲಿ ಜೈಲು ಸೇರಿ ಜೈಲಿನಲ್ಲಿ ರಾಜಾತಿಥ್ಯ ಪಡೆದ ಆರೋಪದ ಹಿನ್ನೆಲೆಯಲ್ಲಿ ನಟ ದರ್ಶನ್‌ರನ್ನು ಇಂದು (ಗುರುವಾರ) ಬೆಳಗ್ಗೆ ಬೆಂಗಳೂರು ಪರಪ್ಪನ ಅಗ್ರಹಾರ ಕಾರಾಗೃಹದಿಂದ ಬಳ್ಳಾರಿ ಕೇಂದ್ರ ಕಾರಾಗೃಹಕ್ಕೆ ಕರೆತರಲಾಯಿತು. ಬೆಳಗ್ಗೆ 4.30ಕ್ಕೆ ಬೆಂಗಳೂರಿನಿಂದ ಹೊರಟ ದರ್ಶನ್ ಇದ್ದ ಪೊಲೀಸ್ ವ್ಯಾನ್ 10ಕ್ಕೆ ಬಳ್ಳಾರಿ ಕೇಂದ್ರ ಕಾರಾಗೃಹ ತಲುಪಿತು.

ದರ್ಶನ್ ಅವರನ್ನು ಬೆಂಗಳೂರಿನ ಪರಪ್ಪನ ಅಗ್ರಹಾರ ಜೈಲಿನಿಂದ ಬಳ್ಳಾರಿ ಜೈಲಿಗೆ ಸ್ಥಳಾಂತರ ಮಾಡಲಾಗುತ್ತದೆ ಎಂಬ ಸುದ್ದಿ ಹರಡುತ್ತಿದ್ದಂತೆ ಮಂಗಳವಾರ ಮಧ್ಯರಾತ್ರಿಯಿಂದಲೇ ಅಭಿಮಾನಿಗಳು ಜೈಲಿನ ಬಳಿ ಜಮಾಯಿಸಿ, ದರ್ಶನ್ ದರ್ಶನಕ್ಕೆ ಕಾಯುತ್ತಿದ್ದರು. ಬಳ್ಳಾರಿ ನಗರ ಮಾತ್ರವಲ್ಲದೆ ಸುತ್ತಮುತ್ತಲಿನ ತಾಲೂಕುಗಳಿಂದಲೂ ಅಭಿಮಾನಿಗಳ ದಂಡು ಬಂದು, ನೆರೆದಿತ್ತು. ಇಂದು ಬೆಳಗ್ಗೆ 10 ಗಂಟೆ ಸುಮಾರಿಗೆ ಬ್ರಾಂಡೆಡ್ ಟೀ ಶರ್ಟ್ ಧರಿಸಿ, ನೀರಿನ ಬಾಟಲ್, ಸನ್ ಗ್ಲಾಸ್, ಹೊದಿಕೆ ಹಿಡಿದು ನಟ ದರ್ಶನ್ ಬಳ್ಳಾರಿ ಕೇಂದ್ರ ಕಾರಾಗೃಹದ ಒಳಗೆ ಪ್ರವೇಶಿಸುತ್ತಿದ್ದಂತೆ ಜೈಲಿನ ಹೊರಗೆ ಜಮಾಯಿಸಿದ್ದ ಅಭಿಮಾನಿಗಳು ಡಿಬಾಸ್‌ಗೆ ಜೈ ಎಂದು ಜೈಕಾರ ಹಾಕುತ್ತಿದ್ದರು. ಅಭಿಮಾನಿಗಳು ಜೈಲಿನ ಬಳಿ ಜಮಾಯಿಸಿದ್ದರಿಂದ ನೂಕುನುಗ್ಗಲು ಉಂಟಾಗಿತ್ತು ಜೈಲಿನ ಮುಂಭಾಗದಲ್ಲಿ ಜಮಾಯಿಸಿದ ನೂರಾರು ಅಭಿಮಾನಿಗಳು ಡಿ ಬಾಸ್, ಡಿ ಬಾಸ್ ಎಂದು ಜೈಕಾರ ಕೂಗಿದ್ದಾರೆ. ಪೊಲೀಸರು ಕೊನೆಗೆ ಲಾಠಿ ಚಾರ್ಜ್ ಮೂಲಕ ಅಭಿಮಾನಿಗಳನ್ನು ಚದುರಿಸಿದರು.

ಪರಪ್ಪನ ಅಗ್ರಹಾರ ಜೈಲಿನಲ್ಲಿ ವಿಚಾರಣಾಧೀನ ಕೈದಿಯಾಗಿದ್ದ ದರ್ಶನ್‌ಗೆ ರಾಜಾತಿಥ್ಯ ಸಿಕ್ಕಿದ್ದರಿಂದ, ಅದು ದೊಡ್ಡ ವಿವಾದವನ್ನೇ ಸೃಷ್ಟಿಸಿತ್ತು. ಪ್ರಕರಣವನ್ನು ಗಂಭೀರವಾಗಿ ತೆಗೆದುಕೊಂಡ ಕಾರಾಗೃಹ ಇಲಾಖೆ ದರ್ಶನ್‌ರನ್ನು ಬಳ್ಳಾರಿ ಜೈಲಿಗೆ ಶಿಫ್ಟ್ ಮಾಡಿದ ನಂತರ ಒಂದಷ್ಟು ಕಠಿಣ ನಿಯಮ ಜಾರಿ ಮಾಡಿದೆ. ಉತ್ತರ ವಲಯ ಕಾರಾಗೃಹಗಳ ಉಪಮಹಾನಿರೀಕ್ಷಕ ಟಿ.ಪಿ.ಶೇಷ ಅವರು ನೀಡಿರುವ ಆದೇಶದಲ್ಲಿ, ಶಿಸ್ತು ಕ್ರಮದ ಮೇರೆಗೆ



ಬಿಗಿ ಭದ್ರತೆಯಲ್ಲಿ ಬಳ್ಳಾರಿ ಜೈಲು ಬಳಿ ನಟ ದರ್ಶನ್

ಬೆಂಗಳೂರು ಕೇಂದ್ರ ಕಾರಾಗೃಹದಿಂದ ಬಳ್ಳಾರಿ ಕೇಂದ್ರ ಕಾರಾಗೃಹಕ್ಕೆ ವರ್ಗಾವಣೆಗೊಂಡಿರುವ ದರ್ಶನ್ ಕನ್ನಡ ಚಿತ್ರರಂಗದ ಪ್ರಭಾವಿ ವ್ಯಕ್ತಿಯಾಗಿದ್ದು, ಹೆಚ್ಚಿನ ಸಂಖ್ಯೆಯ ಅಭಿಮಾನಿ ಜನಸ್ತೋಮ ಹೊಂದಿರುತ್ತಾರೆ. ಈಗಾಗಲೇ ಬೆಂಗಳೂರು ಕೇಂದ್ರ ಕಾರಾಗೃಹದಲ್ಲಿ ಕಾರಾಗೃಹದ ನಿಯಮಗಳನ್ನು ಮೀರಿ ಅಕ್ರಮವಾಗಿ ಸೌಲಭ್ಯಗಳನ್ನು ಹೊಂದಿರುವ ಆಧಾರದ ಮೇಲೆ ಶಿಸ್ತು ಕ್ರಮದ ಮೇರೆಗೆ ಬಳ್ಳಾರಿ ಕೇಂದ್ರ ಕಾರಾಗೃಹಕ್ಕೆ ವರ್ಗಾವಣೆಗೊಂಡಿರುವ ಹಿನ್ನೆಲೆಯಲ್ಲಿ ಮುಂಜಾಗ್ರತಾ ಕ್ರಮವಾಗಿ ಕಾರಾಗೃಹದ ನಿಯಮಗಳನುಸಾರ ಹಾಗೂ ಕಾರಾಗೃಹದ ಆಡಳಿತ ಮತ್ತು ಭದ್ರತೆಯ ಹಿತದೃಷ್ಟಿಯಿಂದ ಈ ಕೆಳಗೆ ■5ನೇ ಪುಟಕ್ಕೆ

# ಶೀಘ್ರವೇ ಟ್ರಾಮಾ ಕೇರ್ ಸೆಂಟರ್‌ನಲ್ಲಿ ಅತ್ಯಾಧುನಿಕ ಸಿಟಿ ಸ್ಕ್ಯಾನಿಂಗ್ ಸೇವೆ



ಟ್ರಾಮಾ ಕೇರ್ ಸೆಂಟರ್‌ನಲ್ಲಿರುವ ಸಿಟಿ ಸ್ಕ್ಯಾನಿಂಗ್ ಘಟಕ

ಮೈಸೂರು, ಆ.29(ಎಂಕೆ)– ಶತಮಾನದ ಸಂಭ್ರಮಾಚರಣೆಯಲ್ಲಿರುವ ಮೈಸೂರು ಮೆಡಿಕಲ್ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯಡಿ ಕಾರ್ಯ ನಿರ್ವಹಿಸುತ್ತಿರುವ ಟ್ರಾಮಾ ಕೇರ್ ಸೆಂಟರ್‌ನಲ್ಲಿ ಅತ್ಯಾಧುನಿಕ ಸಿಟಿ ಸ್ಕ್ಯಾನಿಂಗ್ ಘಟಕ ಉದ್ಘಾಟನೆಗೆ ಸಜ್ಜಾಗಿದೆ.

ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯದ ಸಹಕಾರದೊಂದಿಗೆ ಟ್ರಾಮಾ ಕೇರ್ ಸೆಂಟರ್‌ನಲ್ಲಿ ವೇಗವಾಗಿ ರಿಪೋರ್ಟ್ ನೀಡುವ ಸಿಟಿ ಸ್ಕ್ಯಾನಿಂಗ್ ಘಟಕ ಆ.31 ರಿಂದಲೇ ಕಾರ್ಯಾರಂಭಿಸುವ ಸಾಧ್ಯತೆ ಇದೆ. ನಾಳೆ(ಆ.30) ಸ್ಕ್ಯಾನಿಂಗ್ ಯಂತ್ರಗಳ ಸ್ವಿಚ್ ಆನ್ ಮಾಡಿ, ಬಳಿಕ ಪ್ರಾತ್ಯಕ್ಷಿಕೆ ನಡೆಸಿದ ಬಳಿಕ ರೋಗಿಗಳ ಬಳಕೆಗೆ ಚಾಲನೆ ನೀಡಲಾಗುವುದು. ಈ ಮೂಲಕ ಕೆ.ಆರ್ ಆಸ್ಪತ್ರೆ ಬಳಿಕ ಸಿಟಿ ಸ್ಕ್ಯಾನಿಂಗ್ ಹೊಂದಿರುವ ಸರ್ಕಾರಿ ಆಸ್ಪತ್ರೆ ಎಂಬ ಹೆಗ್ಗಳಿಕೆಗೆ ಟ್ರಾಮಾ ಕೇರ್ ಸೆಂಟರ್ ಪಾತ್ರವಾಗಲಿದೆ.

ಕೆ.ಆರ್.ಆಸ್ಪತ್ರೆಯಲ್ಲಿನ ಸಿಟಿ ಸ್ಕ್ಯಾನ್ ಯಂತ್ರದಲ್ಲಿ ನಿತ್ಯ 80–100 ರೋಗಿಗಳಿಗೆ ಪರೀಕ್ಷೆ ನಡೆಸಿ, ರಿಪೋರ್ಟ್ ನೀಡಲಾಗುತ್ತಿತ್ತು. ಹಳೆ ಯಂತ್ರಕ್ಕಿಂತ ಅಡ್ವಾನ್ಸ್ ಆಗಿರುವ ಹೊಸ ಸಿಟಿ ಸ್ಕ್ಯಾನ್ ಯಂತ್ರಗಳು ವೇಗವಾಗಿ ರಿಪೋರ್ಟ್ ನೀಡಲಿದ್ದು, ಇದರಿಂದ ರೋಗಿಗಳಿಗೆ ಅನುಕೂಲವಾಗಲಿದೆ ಎಂದು ಟ್ರಾಮಾ ಕೇರ್ ಸೆಂಟರ್ ರೇಡಿಯಾಲಜಿ ವಿಭಾಗದ ಮುಖ್ಯಸ್ಥ ಡಾ.ಎನ್.ಮನುಪ್ರತಾಪ್ 'ಮೈಸೂರು ಮಿತ್ರ'ನಿಗೆ ತಿಳಿಸಿದರು. ಖಾಸಗಿ ಆಸ್ಪತ್ರೆಗಳಿಗೆ ಕಡಿಮೆ ಇಲ್ಲದಂತೆ ಇಲ್ಲಿ ಸಿಟಿ ಸ್ಕ್ಯಾನಿಂಗ್ ಘಟಕ ರೂಪಿಸಲಾಗಿದೆ. ರೋಗಿಗಳಿಗೆ ಕಡಿಮೆ ಖರ್ಚಿನಲ್ಲಿ ಗುಣಮಟ್ಟದ ಚಿಕಿತ್ಸೆ ನೀಡುವ ಉದ್ದೇಶದಿಂದ ಅತ್ಯಾಧುನಿಕ ಸಿಟಿ ಸ್ಕ್ಯಾನ್ ಯಂತ್ರಗಳನ್ನು ಅಳವಡಿಸಲಾಗಿದೆ. ಈಗಾಗಲೇ ಡಿಜಿಟಲ್ ರೇಡಿಯಾಗ್ರಫಿ(ಎಕ್ಸರೆ) ಹಾಗೂ ಅಲ್ಟ್ರಾಸೌಂಡ್ ಯಂತ್ರಗಳ ಮೂಲಕ ಚಿಕಿತ್ಸೆ ನೀಡಲಾಗುತ್ತಿದೆ. ಮುಂದಿನ ದಿನಗಳಲ್ಲಿ ಅತ್ಯಾಧುನಿಕ ಡಿಜಿಟಲ್ ರೇಡಿಯಾಗ್ರಫಿ (ಎಕ್ಸರೆ) ಹಾಗೂ ಅಲ್ಟ್ರಾಸೌಂಡ್ ಯಂತ್ರಗಳು ಬರಲಿವೆ ಎಂದು ಮಾಹಿತಿ ನೀಡಿದರು.

> **ಶತಮಾನೋತ್ಸವದ ಸಂಭ್ರಮದಲ್ಲಿ ಹೊತ್ತಿನಲ್ಲಿ ಗುಣಮಟ್ಟದ ಚಿಕಿತ್ಸೆ ಹಾಗೂ ಅಭಿವೃದ್ಧಿಗೆ ಆದ್ಯತೆ ನೀಡಲಾಗಿದೆ. ಇದರ ಭಾಗವಾಗಿ ಟ್ರಾಮಾ ಕೇರ್ ಸೆಂಟರ್‌ನಲ್ಲಿ ಅತ್ಯಾಧುನಿಕ ಸಿಟಿ ಸ್ಕ್ಯಾನಿಂಗ್ ಘಟಕ ಸೇವೆಗೆ ಸಜ್ಜಾಗಿದೆ. ಮುಂದಿನ ದಿನಗಳಲ್ಲಿ ವೈದ್ಯಕೀಯ ಸಲಕರಣೆಗಳು ಬರಲಿದ್ದು, ರೋಗಿಗಳ ಅನುಕೂಲಕ್ಕೆ ತಕ್ಕಂತೆ ಚಿಕಿತ್ಸೆ ನೀಡಲಾಗುವುದು**
> – ಡಾ.ಕೆ.ಆರ್.ದಾಕ್ಷಾಯಣಿ, ಎಂಎಂಸಿ ಅಂಡ್ ಆರ್‌ಐನ ಡೀನ್ ಮತ್ತು ನಿರ್ದೇಶಕರು

# ದಸರಾ ಹಿನ್ನಲೆ: ರಸ್ತೆ ಗುಂಡಿ ಮುಚ್ಚುವ ಕಾರ್ಯ ಆರಂಭ

**● ಮಳೆಯ ನಡುವೆಯೇ ತೇಪೆ ಹಚ್ಚುವ ಸಾಹಸ! ● ಹಲವೆಡೆ ಡಾಂಬರ್ ಕಿತ್ತು ರಸ್ತೆಯೆಲ್ಲಾ ಚೆಲ್ಲಾಪಿಲ್ಲಿಯಾಗಿ ಬಿದ್ದಿರುವ ಜಲ್ಲಿಕಲ್ಲು**



ಹಾರ್ಡಿಂಗ್ ವೃತ್ತದಲ್ಲಿ ರಸ್ತೆ ಗುಂಡಿ ಮುಚ್ಚುತ್ತಿರುವುದು

ಮೈಸೂರು, ಆ.29(ಎಂಕೆ)– ನಾಡಹಬ್ಬ ದಸರಾ ಮಹೋತ್ಸವ ಹಿನ್ನಲೆಯಲ್ಲಿ ಮೈಸೂರಿನ ರಸ್ತೆಗಳ ಗುಂಡಿ ಮುಚ್ಚುವ ಕಾರ್ಯ ಮಳೆಯ ಆತಂಕದ ನಡುವೆ ನಡೆಯುತ್ತಿದ್ದು, ದಸರಾ ಉದ್ಘಾಟನೆಯೊಳಗೆ ನಗರ ಕೇಂದ್ರ ಭಾಗದಲ್ಲಿರುವ ಪ್ರಮುಖ ರಸ್ತೆಗಳ ದುರಸ್ಥಿ ಕಾರ್ಯ ನಡೆಯಲಿದೆ.

ನಗರದ ಹೃದಯ ಭಾಗ ಸೇರಿದಂತೆ ಎಲ್ಲಾ ವಾರ್ಡ್‌ಗಳಲ್ಲಿಯೂ ರಸ್ತೆ ಗುಂಡಿ ಮುಚ್ಚುವ ಕೆಲಸ ಆರಂಭಿಸಿರುವ ಪಾಲಿಕೆ, ದಸರಾ ಉದ್ಘಾಟನೆಗೆ ತಿಂಗಳು ಬಾಕಿ ಇರುವಂತೆ ರಸ್ತೆಗೆ ತೇಪೆ ಹಾಕುವ ಕಾರ್ಯಾರಂಭಿಸಿದೆ. ಸೆಲ್ಫಿಸ್ಪಾಟ್, ಅರಮನೆ, ದಸರಾ ವಸ್ತುಪ್ರದರ್ಶನ, ಮೃಗಾಲಯ ಸೇರಿದಂತೆ ನಗರದ ಪ್ರಮುಖ ರಸ್ತೆಗಳಿಗೆ ಪ್ರಧಾನ ಸಂಪರ್ಕ ಮಾರ್ಗ ಹಾರ್ಡಿಂಗ್ ವೃತ್ತದಲ್ಲಿ ಮಳೆ ಅಬ್ಬರಕ್ಕೆ ಡಾಂಬರ್ ಕಿತ್ತು ಬಂದಿದ್ದ ಜಾಗಕ್ಕೆ ತೇಪೆ ಹಾಕಲಾಗಿದೆ. ಬಾರೀ ಪ್ರಮಾಣದಲ್ಲಿ ಗುಂಡಿ ಬಿದ್ದಿದ್ದ ಗೌರ್ನಮೆಂಟ್ ಹೌಸ್ ರಸ್ತೆ, ಗನ್ ಹೌಸ್ ಎದುರು, ಸಂಗೊಳ್ಳಿ ರಾಯಣ್ಣ ವೃತ್ತ, ಕೃಷ್ಣ ವಿಲಾಸ ರಸ್ತೆ, ರಮಾವಿಲಾಸ ರಸ್ತೆ, ಸೀತಾ ವಿಲಾಸ ರಸ್ತೆ ಸೇರಿದಂತೆ ಪ್ರಮುಖ ರಸ್ತೆಗಳಲ್ಲಿ ಗುಂಡಿ ಮುಚ್ಚುವ ಕಾರ್ಯ ಬಿರುಸಾಗಿ ಸಾಗಿದೆ.

ನಿರಂತರ ಮಳೆಗೆ ಹಾಳಾಗಿದ್ದ ರಸ್ತೆಗಳನ್ನು ಗುರ್ತಿಸಿ, ಮಳೆ ಬಿದ್ದರೂ ಡಾಂಬರ್ ಕಿತ್ತು ಬರದಂತೆ ಮುಂಜಾಗ್ರತೆಯಿಂದ ಮಿಕ್ಸಿಂಗ್ ಮಾಡಿದ್ದ ಡಾಂಬರ್ ಅನ್ನು ಪರೀಕ್ಷೆ ನಡೆಸಿ, ಗುಂಡಿಗಳನ್ನು ಮುಚ್ಚಲಾಗುತ್ತಿದೆ. ಮಳೆ ಬಿಡುವು ನೀಡಿದರೆ ಗುಂಡಿ ಮುಚ್ಚುವ ಕಾರ್ಯ ಇನ್ನಷ್ಟು ವೇಗವಾಗಿ ನಡೆಯಲಿದೆ ಎಂದು ನಗರ ಪಾಲಿಕೆ ಅಧೀಕ್ಷಕ ಅಭಿಯಂತರರು ಕೆ.ಜೆ.ಸಿಂಧು 'ಮೈಸೂರು ಮಿತ್ರ'ನಿಗೆ ಮಾಹಿತಿ ನೀಡಿದರು.

ಪಾಲಿಕೆ ಅನುದಾನದಲ್ಲಿಯೇ ರಸ್ತೆ ಗುಂಡಿ ಮುಚ್ಚುವ ಕಾಮಗಾರಿ ನಡೆಯುತ್ತಿದ್ದು, ದಸರಾ ಪ್ಯಾಕೇಜ್ ಇನ್ನಷ್ಟೇ ಬಿಡುಗಡೆಯಾಗಬೇಕಿದೆ. ಈ ಮೊದಲೇ ರಸ್ತೆ ಗುಂಡಿ ಮುಚ್ಚಲು ಕಾರ್ಯಯೋಜನೆ ರೂಪಿಸಲಾಗಿತ್ತು ಆದರೆ ನಿರಂತರ ಮಳೆಯಿಂದಾಗಿ ಡಾಂಬರ್ ಹಾಕಲು ಸಾಧ್ಯವಾಗುತ್ತಿರಲಿಲ್ಲ. ಸದ್ಯ ದಸರಾ ಕೂಡ ಹತ್ತಿರದಲ್ಲಿರುವುದರಿಂದ ರಸ್ತೆ ಗುಂಡಿ ಮುಚ್ಚುವ ಕಾರ್ಯ ಆರಂಭಿಸಿದ್ದೇವೆ. ಮೈಸೂರಿನ ಎಲ್ಲಾ ವಾರ್ಡ್‌ಗಳಲ್ಲಿಯೂ ಕೆಲಸ ನಡೆಯುತ್ತಿದೆ ಎಂದು ತಿಳಿಸಿದರು.

**ಟೆಂಡರ್ ಪ್ರಕ್ರಿಯೆ ಚಾಲ್ತಿ:** ವಲಯ ಕಚೇರಿ 7ರ ವ್ಯಾಪ್ತಿಯ ಸರ್ಕಾರಿ ಅತಿಥಿ ಗೃಹ, ಫೌಂಟೇನ್ ವೃತ್ತ, ಎಲ್‌ಐಸಿ ವೃತ್ತ ಸೇರಿದಂತೆ ಪ್ರಮುಖ ರಸ್ತೆ ಹಾಗೂ ವೃತ್ತಗಳಲ್ಲಿನ ರಸ್ತೆ ಗುಂಡಿ ಮುಚ್ಚುವ ಕಾಮಗಾರಿಗೆ ಟೆಂಡರ್ ಪ್ರಕ್ರಿಯೆ ನಡೆಯುತ್ತಿದೆ. ಕೆಲ ದಿನಗಳಲ್ಲಿ ಟೆಂಡರ್ ಪ್ರಕ್ರಿಯೆ ಮುಕ್ತಾಯಗೊಳ್ಳಲಿದ್ದು, ದಸರಾ ಉದ್ಘಾಟನೆಗೂ ಮುನ್ನವೇ ಕಾಮಗಾರಿ ಪೂರ್ಣಗೊಳಿಸಲಾಗುವುದು ಎಂದು ವಲಯ ಕಚೇರಿ 7ರ ಅಭಿವೃದ್ಧಿ ಅಧಿಕಾರಿ ರಾಜೀವ್‌ನಾಥ್ ತಿಳಿಸಿದರು.

### ಚೆಲ್ಲಾಪಿಲ್ಲಿಯಾಗಿ ಬಿದ್ದಿರುವ ಜಲ್ಲಿಕಲ್ಲು...!

ಪ್ರತೀ ವರ್ಷ ದಸರಾ ಆರಂಭಕ್ಕೂ ಮುನ್ನ ರಸ್ತೆಗಳ ಗುಂಡಿ ಮುಚ್ಚುವುದು ಸಾಮಾನ್ಯ. ಆದರೆ, ಗುಂಡಿ ಮುಚ್ಚಿದ ಕೆಲ ಗಂಟೆಗಳಲ್ಲಿಯೇ ಡಾಂಬರ್ ಕಿತ್ತು ಬಂದು ಅದರಲ್ಲಿನ ಸಣ್ಣ ಸಣ್ಣ ಜಲ್ಲಿಕಲ್ಲುಗಳು ರಸ್ತೆಯಲ್ಲೆಲ್ಲಾ ಚೆಲ್ಲಾಪಿಲ್ಲಿಯಾಗಿ ಹರಡಿಕೊಳ್ಳಲಿವೆ. ರಸ್ತೆ ಗುಂಡಿಯ ಅಂಚಿಗೆ ಸರಿಯಾಗಿ ಡಾಂಬರ್ ಹಾಕದೆ ಬೇಕಾಬಿಟ್ಟಿ ಸುರಿದು ತೇಪೆ ಹಾಕುವುದರಿಂದ ಡಾಂಬರ್ ಕೆಲ ಗಂಟೆಯಲ್ಲೇ ವಾಹನಗಳ ರಭಸಕ್ಕೆ ಛಿದ್ರವಾಗಿ ರಸ್ತೆಯಲ್ಲಿ ಹರಡಿಕೊಳ್ಳಲಿದೆ. ಅಲ್ಲದೆ ಡಾಂಬರ್ ಸಾಗಿಸುವ ಟಿಪ್ಪರ್‌ಗಳ ಓವರ್ ಲೋಡ್‌ನಿಂದಾಗಿಯೂ ರಸ್ತೆಯುದ್ದಕ್ಕೂ ಡಾಂಬರ್ ಮಿಶ್ರಿತ ಜಲ್ಲಿಕಲ್ಲುಗಳು ಬಿದ್ದರಲಿವೆ. ಇದರಿಂದಾಗಿ ದ್ವಿಚಕ್ರವಾಹನಗಳು ಸ್ಕಿಡ್ ಆಗಿ ಬೈಕ್ ಸವಾರರು ಬೀಳುವುದು ಸಾಮಾನ್ಯವಾಗಿದೆ.

### ಗ್ರಾಮಾಂತರ ಬಸ್ ನಿಲ್ದಾಣದ ಎದುರು ಕಾಂಕ್ರೀಟ್ ರಸ್ತೆ...

ಸದಾ ಗುಂಡಿ ಬೀಳುವ ಮೈಸೂರು ಗ್ರಾಮಾಂತರ ಬಸ್ ನಿಲ್ದಾಣದ ಬೆಂಗಳೂರು–ನೀಲಗಿರಿ ಹೆದ್ದಾರಿಗೆ ಶಾಶ್ವತ ಪರಿಹಾರವಾಗಿ ಲೋಕೋಪಯೋಗಿ ಇಲಾಖೆ(ಪಿಡಬ್ಲೂಡಿ) ಕಾಂಕ್ರೀಟ್ ಮೂಲಕ ಮುಕ್ತಿ ಹಾಡಲು ನಿರ್ಧರಿಸಿದೆ. ಸದಾ ವಾಹನ ದಟ್ಟಣೆ ನಡುವೆ ಮಳೆ ಬಂದರೆ ಸಾಕು ಗುಂಡಿ ಬೀಳುತ್ತಿದ್ದ ಈ ಡಾಂಬರ್ ರಸ್ತೆಗೆ ಕಾಂಕ್ರೀಟ್ ಭಾಗ್ಯ ನೀಡಲಾಗುತ್ತಿದೆ. ಸುಮಾರು 70 ಲಕ್ಷ ರೂ. ವೆಚ್ಚದಲ್ಲಿ ಗ್ರಾಮಾಂತರ ಬಸ್ ನಿಲ್ದಾಣದ ಎದುರಿನ 190 ಮೀಟರ್ ರಸ್ತೆಯನ್ನು ಕಾಂಕ್ರೀಟ್ ರಸ್ತೆಯನ್ನಾಗಿಸುವ ಕಾಮಗಾರಿ ಈಗಾಗಲೇ ಆರಂಭವಾಗಿದ್ದು, 20 ದಿನಗಳಲ್ಲಿ ಮುಕ್ತಾಯಗೊಳ್ಳಲಿದೆ ಎಂದು ಲೋಕೋಪಯೋಗಿ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ.



ಸಂಯ್ಯಾಜಿರಾವ್ ರಸ್ತೆಯಲ್ಲಿ ರಸ್ತೆ ಗುಂಡಿ ಮುಚ್ಚುವ ವೇಳೆ ಪಾಲಿಕೆ ಅಧಿಕಾರಿಗಳು ಪರಿಶೀಲನೆ ನಡೆಸುತ್ತಿರುವುದು

> **ಮೈಸೂರು ದಸರಾ ಹಿನ್ನಲೆಯಲ್ಲಿ ಪಾಲಿಕೆ ಅನುದಾನದಲ್ಲಿಯೇ ಮೈಸೂರಿನ ರಸ್ತೆಗಳಲ್ಲಿ ಗುಂಡಿ ಮುಚ್ಚುವ ಕಾಮಗಾರಿ ನಡೆಯುತ್ತಿದೆ. ಮಳೆ ಬಿಡುವು ನೀಡಿದಂತೆ ಕಾಮಗಾರಿ ವೇಗವಾಗಿ ನಡೆಯುತ್ತಿದೆ. ಆದರೆ ಮಳೆ ಜೋರಾದರೆ ಕಷ್ಟ. ದಸರಾ ಉದ್ಘಾಟನೆ ವೇಳೆ ನಗರದ ಎಲ್ಲಾ ರಸ್ತೆಗಳು ಸುಸ್ಥಿಯಲ್ಲಿರಲಿವೆ.**
> – ಕೆ.ಜೆ.ಸಿಂಧು, ಅಧೀಕ್ಷಕ ಅಭಿಯಂತರರು, ಮೈಸೂರು ನಗರಪಾಲಿಕೆ

# ಪೊಲೀಸ್ ಇಲಾಖೆ ನಿವೃತ್ತ ಸಿಬ್ಬಂದಿ ಕುಟುಂಬಸ್ಥರಿಗೆ ಉಚಿತ ನೇತ್ರ ತಪಾಸಣೆ



ಸಂಗ್ರಹ ಚಿತ್ರ

ಮೈಸೂರು, ಆ.29(ಜಿಎ)–ಅನ್ನಪೂರ್ಣ ಕಣ್ಣಿನ ಆಸ್ಪತ್ರೆಯ 9ನೇ ವಾರ್ಷಿಕೋತ್ಸವದ ಅಂಗವಾಗಿ ಸೆ.3ರಂದು ಬೆಳಗ್ಗೆ 10 ರಿಂದ ಸಂಜೆ 4ಗಂಟೆವರೆಗೆ ಆಲನಹಳ್ಳಿಯ ಕುದೇರು ಮಠದಲ್ಲಿ ಪೊಲೀಸ್ ಇಲಾಖೆಯ ನಿವೃತ್ತ ಸಿಬ್ಬಂದಿಗಳ ಪೋಷಕರು ಹಾಗೂ ಅವರ ಅವಲಂಬಿತರಿಗೆ ಉಚಿತ ನೇತ್ರ ತಪಾಸಣಾ ಶಿಬಿರ ಆಯೋಜಿಸಲಾಗಿದೆ.

ಮೈಸೂರು ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಆಸ್ಪತ್ರೆಯ ತಜ್ಞ ವೈದ್ಯ ಡಾ.ಅಶ್ವತ್‌ಕುಮಾರ್ ಈ ವಿಷಯ ತಿಳಿಸಿ, ಇದಲ್ಲದೆ ನಾಡಹಬ್ಬ ದಸರಾ ಹಿನ್ನೆಲೆಯಲ್ಲಿ ಸೆಪ್ಟೆಂಬರ್ ಮೊದಲ ವಾರದಲ್ಲಿ ಮಾವುತರು ಹಾಗೂ ಅವರ ಕುಟುಂಬದವರಿಗೆ, ಪಾಲಿಕೆಯ ಎಲ್ಲಾ ಪೌರ ಕಾರ್ಮಿಕರು ಹಾಗೂ ಅವರ ಅವಲಂಬಿತರಿಗೆ ಸಹಾ ಉಚಿತ ನೇತ್ರ ತಪಾಸಣೆ ನಡೆಸಲಾಗುವುದು. ನಮ್ಮ ಸೇವೆಯನ್ನು ಮಂಡ್ಯ, ಕೊಡಗು, ಚಾಮರಾಜನಗರಕ್ಕೂ ವಿಸ್ತರಣೆ ಮಾಡಲಾಗಿದೆ ಎಂದು ಮಾಹಿತಿ ನೀಡಿದರು. ಸುದ್ದಿಗೋಷ್ಠಿಯಲ್ಲಿ ಡಾ.ಮಹೇಂದ್ರ, ಡಾ.ಡಿ.ಸಿಂಚನ, ಡಾ.ಶಿವಾನಿ ನಾಯಕ್ ಉಪಸ್ಥಿತರಿದ್ದರು.

# ರಾಜ್ಯಪಾಲರ ಹುದ್ದೆ ರದ್ದತಿಗೆ ಆಗ್ರಹಿಸಿ ಸಿಪಿಐ ಪ್ರತಿಭಟನೆ




ಮೈಸೂರು ಡಿಸಿ ಕಚೇರಿ ಬಳಿ ರಾಜ್ಯಪಾಲರ ಹುದ್ದೆ ರದ್ದತಿಗೆ ಆಗ್ರಹಿಸಿ ಭಾರತ ಕಮ್ಯುನಿಸ್ಟ್ ಪಕ್ಷದಿಂದ ಪ್ರತಿಭಟನೆ ನಡೆಸಲಾಯಿತು.

ಮೈಸೂರು, ಆ.29(ಜಿಎ)–ಒಕ್ಕೂಟ ವ್ಯವಸ್ಥೆ ಅಸ್ಥಿರಗೊಳಿಸುತ್ತಿರುವ, ಪ್ರಜಾತಂತ್ರಕ್ಕೆ ಮಾರಕವಾಗಿರುವ ರಾಜ್ಯಪಾಲರ ಹುದ್ದೆ ರದ್ದುಗೊಳಿಸುವಂತೆ ಆಗ್ರಹಿಸಿ ಭಾರತ ಕಮ್ಯುನಿಸ್ಟ್ ಪಕ್ಷ(ಸಿಪಿಐ)ದಿಂದ ಡಿಸಿ ಕಚೇರಿ ಬಳಿ ಪ್ರತಿಭಟನೆ ನಡೆಸಲಾಯಿತು.

ಕರ್ನಾಟಕದ ಇತ್ತೀಚಿನ ರಾಜಕೀಯ ಬೆಳವಣಿಗೆಗಳನ್ನು ಸೂಕ್ಷ್ಮವಾಗಿ ಅವಲೋಕಿಸಿದರೆ ಜನತಂತ್ರ ವ್ಯವಸ್ಥೆಯಲ್ಲಿ ಜನರಿಂದ ಬಹುಮತ ಪಡೆದು ಆಯ್ಕೆಯಾದ ಚುನಾಯಿತ ಸರ್ಕಾರವನ್ನು ಕೇಂದ್ರ ಸರ್ಕಾರದಿಂದ ನೇಮಕಗೊಂಡ ರಾಜ್ಯಪಾಲರ ಮೂಲಕ ಅಸ್ಥಿರಗೊಳಿಸಲು ಬಿಜೆಪಿ ಯತ್ನಿಸುತ್ತಿದೆ. ಹೀಗಾಗಿ ಭಾರತದ ಒಕ್ಕೂಟ ವ್ಯವಸ್ಥೆ ಅಸ್ಥಿರಗೊಳಿಸಲು ರಾಜಕೀಯವಾಗಿ ದುರ್ಬಳಕೆಯಾಗುತ್ತಿರುವ ಹಾಗೂ ಪ್ರಜಾತಂತ್ರಕ್ಕೆ ಮಾರಕವಾಗಿರುವ ರಾಜ್ಯಪಾಲರ ಹುದ್ದೆಯನ್ನು ರದ್ದುಗೊಳಿಸಲು ಸಂವಿಧಾನಾತ್ಮಕವಾಗಿ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ರಾಜ್ಯದಲ್ಲಿ ನಡೆದಿದೆ ಎನ್ನಲಾದ ಮುಡಾ ಬದಲಿ ನಿವೇಶನ ಹಂಚಿಕೆ ಪ್ರಕರಣ, ವಾಲ್ಮೀಕಿ ಅಭಿವೃದ್ಧಿ ನಿಗಮದ ಭ್ರಷ್ಟಾಚಾರ ಪ್ರಕರಣದಲ್ಲಿ ನ್ಯಾಯಾಂಗದ ಚೌಕಟ್ಟಿನಲ್ಲಿ ನಿಷ್ಪಕ್ಷಪಾತ ತನಿಖೆ ನಡೆಯಬೇಕು. ಆದರೆ ಮುಡಾ ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡುವ ಸಂದರ್ಭದಲ್ಲಿ ರಾಜ್ಯಪಾಲರ ಕಚೇರಿ ಕೇಂದ್ರ ಸರ್ಕಾರದ ರಾಜಕೀಯ ಒತ್ತಡಕ್ಕೆ ಮಣಿದು ತೀರ್ಮಾನ ಕೈಗೊಂಡಿರುವುದು ಸ್ಪಷ್ಟವಾಗಿ ಕಂಡುಬರುತ್ತಿದೆ. ಈ ಹಿಂದೆ ರಾಜ್ಯದ ಹಲವು ಭ್ರಷ್ಟಾಚಾರಗಳ ಕುರಿತಾದ ಪ್ರಕರಣಗಳ ಬಗ್ಗೆ ರಾಜ್ಯಪಾಲರಿಗೆ ದೂರು ಸಲ್ಲಿಸಿ ತನಿಖೆಗೆ ಅನುಮತಿ ನೀಡುವಂತೆ ಕೋರಿ ಹಲವು ವರ್ಷಗಳೇ ಕಳೆದರೂ ಹಿಂದಿನ ಯಾವ ದೂರುಗಳ ಬಗ್ಗೆಯೂ ಕ್ರಮ ಕೈಗೊಳ್ಳದೆ ಕೇವಲ ಖಾಸಗಿ ವ್ಯಕ್ತಿ ನೀಡಿದ ದೂರನ್ನಾಧರಿಸಿ ಮುಖ್ಯಮಂತ್ರಿಗಳ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದು ರಾಜಕೀಯ ಪ್ರೇರಿತ ಎಂಬುದು ಸ್ಪಷ್ಟವಾಗಿ ತಿಳಿಯುತ್ತದೆ ಎಂದು ದೂರಿದರು.

ಈಗಾಗಲೇ ಕರ್ನಾಟಕ ಸೇರಿದಂತೆ ತಮಿಳುನಾಡು, ಕೇರಳ, ಪಾಂಡಿಚೇರಿ, ಪಶ್ಚಿಮ ಬಂಗಾಳ, ರಾಜಸ್ಥಾನದಲ್ಲಿ ಸರ್ಕಾರ ಹಾಗೂ ರಾಜ್ಯಪಾಲರ ನಡುವೆ ಬಹಿರಂಗ ಸಂಘರ್ಷ ಉಂಟಾಗಿದೆ. ರಾಜ್ಯಪಾಲರು ಒಕ್ಕೂಟ ವ್ಯವಸ್ಥೆಗೆ ಪೂರಕವಾಗಿ ಕೆಲಸ ಮಾಡಬೇಕಿತ್ತಾದರೂ ಕೇಂದ್ರ ಸರ್ಕಾರದ ಪ್ರತಿನಿಧಿಯಂತೆ ನಡೆದುಕೊಳ್ಳುತ್ತಿರುವುದು ಸರಿಯಲ್ಲ. ಇದರಿಂದಾಗಿ ಚುನಾಯಿತ ರಾಜ್ಯ ಸರ್ಕಾರವನ್ನು ಅಸ್ಥಿರಗೊಳಿಸಲು ರಾಜ್ಯಪಾಲರ ಹುದ್ದೆ ರಾಜಕೀಯವಾಗಿ ದುರ್ಬಳಕೆಯಾಗುತ್ತಿದೆ. ಇಂತಹ ರಾಜ್ಯಪಾಲರ ಹುದ್ದೆಯನ್ನು ರದ್ದುಗೊಳಿಸಲು ಇದು ಸಕಾಲವಾಗಿದ್ದು, ಕೂಡಲೇ ರಾಜ್ಯಪಾಲರ ಹುದ್ದೆ ರದ್ದುಗೊಳಿಸಬೇಕೆಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಕಾರ್ಯದರ್ಶಿ ಹೆಚ್.ಬಿ.ರಾಮಕೃಷ್ಣ, ಸಹ ಕಾರ್ಯದರ್ಶಿ ಕೆ.ಜಿ.ಸೋಮರಾಜೇ ಅರಸ್, ಖಜಾಂಚಿ ಎನ್.ಕೆ.ದೇವದಾಸ್, ರಾಮು, ಸಿ.ಎ.ರಾಜು ಸೇರಿದಂತೆ ಮತ್ತಿತರರು ಪಾಲ್ಗೊಂಡಿದ್ದರು

# ಅದಮ್ಯ ರಂಗಶಾಲೆ ವತಿಯಿಂದ ಅಭಿನಯ ತರಬೇತಿ ಶಿಬಿರ

ಮೈಸೂರು,ಆ.29–ಮೈಸೂರಿನ ರಂಗಭೂಮಿ ಕ್ಷೇತ್ರದಲ್ಲಿ ಸಕ್ರಿಯವಾಗಿ ಗುರುತಿಸಿಕೊಂಡಿರುವ ಅದಮ್ಯ ರಂಗ ಶಾಲೆಯು 30 ದಿನಗಳ ಅವಧಿಯ ಅಭಿನಯ ಮತ್ತು ರಂಗ ತರಬೇತಿ ಶಿಬಿರ ಆಯೋಜಿಸಿದ್ದು, ಹವ್ಯಾಸಿ ರಂಗಾಸಕ್ತರಿಂದ ಅರ್ಜಿ ಆಹ್ವಾನಿಸಿದೆ ಎಂದು ರಂಗಶಾಲೆಯ ಕಾರ್ಯದರ್ಶಿ ಚಂದ್ರು ಮಂಡ್ಯ ತಿಳಿಸಿದ್ದಾರೆ.

ಶಿಬಿರವು ಸೆ.1ರಿಂದ ಅ.1ರವರೆಗೆ 30 ದಿನಗಳ ಕಾಲ ಪ್ರತಿದಿನ ಸಂಜೆ 6.30 ರಿಂದ ರಾತ್ರಿ 9 ಗಂಟೆವರೆಗೆ ನಡೆಯಲಿದೆ. 18ರಿಂದ 60 ವಯೋಮಿತಿಯೊಳಗಿನ ಮಹಿಳೆಯರು ಮತ್ತು ಪುರುಷರು ಈ ಅಭಿನಯ ತರಬೇತಿ ಶಿಬಿರದಲ್ಲಿ ಭಾಗವಹಿಸಬಹುದಾಗಿದೆ. ಶಿಬಿರದ ಅವಧಿಯಲ್ಲಿ ನಾಟಕವೊಂದನ್ನು ಆಯ್ಕೆ ಮಾಡಿಕೊಂಡು, ಶಿಬಿರಾರ್ಥಿಗಳಿಂದಲೇ ಅಭಿನಯ ಮಾಡಿಸಿ ಸಮಾರೋಪದಲ್ಲಿ ಪ್ರದರ್ಶನ ಮಾಡಲಾಗುವುದು. ಜೊತೆಗೆ ಎಲ್ಲರಿಗೂ ಪ್ರಮಾಣ ಪತ್ರ ನೀಡಲಾಗುವುದು.

> **'ಅಭಿನಯ ಕಲೆಗೆ ಒತ್ತು ನೀಡುವ ರಂಗ ಶಿಬಿರದಲ್ಲಿ ಹಿರಿಯರೊಟ್ಟಿಗೆ ಕಿರಿಯರೂ ಕಲೆತು ರಂಗಭೂಮಿಗೆ ಸಂಬಂಧಿಸಿದ ಬಹುಮುಖಿ ಮಜಲುಗಳನ್ನು ಅರಿಯಲು ಅವಕಾಶವಿದೆ. ಕನ್ನಡ, ಜಾಗತಿಕ ರಂಗಭೂಮಿ, ವಿವಿಧ ನಾಟಕಗಳು, ಅಭಿನಯ ಕಲೆ, ತೆರೆಯ ಹಿಂದಿನ ರಂಗತಾಂತ್ರಿಕ ವಿಷಯಗಳ ಬಗ್ಗೆ ನುರಿತ ರಂಗತಜ್ಞರು ಶಿಬಿರಾರ್ಥಿಗಳಿಗೆ ಪರಿಚಯ ಮಾಡಿಕೊಡುವರು.**

ಆಸಕ್ತರು ಆ.31ರೊಳಗೆ ರಂಗಶಾಲೆಯ ಕಾರ್ಯದರ್ಶಿ ಚಂದ್ರು ಮಂಡ್ಯ ಅವರಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದು. ಗರಿಷ್ಠ 30 ಮಂದಿಗೆ ಮಾತ್ರ ಅವಕಾಶ. ಕಡ್ಡಾಯವಾಗಿ ಸಮಯ ಬದ್ಧತೆ ಹಾಗೂ ಕಲಿಕೆಯಲ್ಲಿ ಆಸಕ್ತಿ ಇರುವವರಿಗೆ ಹೆಚ್ಚಿನ ಒತ್ತು ನೀಡಲಾಗುವುದು. ಹೆಚ್ಚಿನ ಮಾಹಿತಿಗೆ ಮೊ. 8660103141, 8892314554 ಸಂಪರ್ಕಿಸಬಹುದು.

# ನಿಧನ



### ಶಿವಣ್ಣ

ಮೈಸೂರು, ಆ.29– ಕನ್ನೇಗೌಡನ ಕೊಪ್ಪಲು ನಿವಾಸಿ ಕೆ.ಶಿವಣ್ಣ (ವಿಕ್ರಾಂತ್) ಇಂದು ನಿಧನರಾದರು. ಅವರಿಗೆ 70 ವರ್ಷ ವಯಸ್ಸಾಗಿತ್ತು. ಮೃತರು ಪತ್ನಿ ಜಯಲಕ್ಷ್ಮೀ, ಇಬ್ಬರು ಪುತ್ರರು, ಸೊಸೆಯಂದಿರು, ಪುತ್ರಿ, ಅಳಿಯ, ಮೊಮ್ಮಕ್ಕಳು ಹಾಗೂ ಅಪಾರ ಬಂಧು ವರ್ಗವನ್ನು ಅಗಲಿದ್ದಾರೆ. ಇವರ ಅಂತ್ಯಕ್ರಿಯೆ (ಶುಕ್ರವಾರ) ಕನ್ನೇಗೌಡನ ಕೊಪ್ಪಲು (ಕೆ.ಜಿ.ಕೊಪ್ಪಲು) ರುದ್ರಭೂಮಿಯಲ್ಲಿ ನೆರವೇರಲಿದೆ. ಇವರ ನಿಧನಕ್ಕೆ ವಿಕ್ರಾಂತ್ ಟೈರ್ಸ್ ಉದ್ಯೋಗಿಗಳ ಸಹಕಾರಿ ಸಂಘದ ಮಾಜಿ ಉಪಾಧ್ಯಕ್ಷ ವಿಕ್ರಾಂತ್ ಪಿ.ದೇವೇಗೌಡ ತೀವ್ರ ಸಂತಾಪ ಸೂಚಿಸಿದ್ದಾರೆ.


### ಅನುಸೂಯಮ್ಮ



ಮೈಸೂರು, ಆ.29– ಮೈಸೂರಿನ ರಾಮಾನುಜ ರಸ್ತೆಯ ದೊಡ್ಡ ಬಸವೇಶ್ವರ ದೇವಸ್ಥಾನ ನಿವಾಸಿ ದಿವಂಗತ ಸಿ.ಗಂಗಪ್ಪ ಅವರ ಪತ್ನಿ ಅನುಸೂಯಮ್ಮ(92) ಗುರುವಾರ ನಿಧನರಾದರು.

ಮೃತರು ಪುತ್ರ ಕಾಂಗ್ರೆಸ್ ಮುಖಂಡ ಹಾಗೂ ದೊಡ್ಡ ಬಸವೇಶ್ವರ ದೇವಸ್ಥಾನದ ಅಧ್ಯಕ್ಷ ಕೆ.ವಿ.ಯೋಗೇಶ್ ಸೇರಿದಂತೆ ಅಪಾರ ಬಂಧು–ಬಳಗ ಅಗಲಿದ್ದಾರೆ. ಅಂತ್ಯಕ್ರಿಯೆ ನಾಳೆ(ಆ.30) ಮಧ್ಯಾಹ್ನ 1 ಗಂಟೆಗೆ ವಿದ್ಯಾರಣ್ಯಪುರಂನಲ್ಲಿರುವ ವೀರಶೈವ ರುದ್ರಭೂಮಿಯಲ್ಲಿ ನೆರವೇರಲಿದೆ ಎಂದು ಕುಟುಂಬ ಮೂಲಗಳು ತಿಳಿಸಿವೆ.

## ಮೈಸೂರು ಹಾಗೂ ಸುತ್ತಮುತ್ತ ಇಂದು...



### ಇಂದಿನ ಪಂಚಾಂಗ

**30.08.2024 ಶುಕ್ರವಾರ, ಮಳೆ ನಕ್ಷತ್ರ: ಮಖ 17.08.2024 ರಿಂದ 30.08.2024 ಕ್ರೋಧಿನಾಮ ಸಂವತ್ಸರ, ದಕ್ಷಿಣಾಯನ, ವರ್ಷ ಋತು, ಶ್ರಾವಣ ಮಾಸ, ಕೃಷ್ಣ ಪಕ್ಷ, ತಿಥಿ: ದ್ವಾದಶಿ, ನಕ್ಷತ್ರ: ಪುನರ್ವಸು, ರಾಹುಕಾಲ : ಬೆಳಗ್ಗೆ 10.30 ರಿಂದ 12 ರವರೆಗೆ**

■ **ವೀರಭದ್ರಸ್ವಾಮಿ ಹಾಗೂ ಚಾಮರಾಜೇಶ್ವರ ಸ್ವಾಮಿ ದೇವಸ್ಥಾನ:** ಶ್ರೀ ವೀರಭದ್ರೇಶ್ವರಸ್ವಾಮಿಯ ಜಯಂತ್ಯುತ್ಸವ, ಮಹಾರಥೋತ್ಸವ ಹಾಗೂ ಶ್ರಾವಣ ಮಾಸದ ಪೂಜಾ ಕಾರ್ಯಕ್ರಮ, ಸ್ಥಳ: ದೇವಸ್ಥಾನದ ಪ್ರಾಂಗಣ, ಡಿ.ಬನುಮಯ್ಯ ರಸ್ತೆ, ಕೆ.ಆರ್.ಮೊಹಲ್ಲಾ, ಬೆಳಗ್ಗೆಯಿಂದ.

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಹೈಪೋಥೈರಾಯ್ಡಿಸಮ್ ಚಿಕಿತ್ಸಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 9 ರಿಂದ ಸಂಜೆ 4.30ರವರೆಗೆ

■ **ವಿಕ್ರಂ ಎಜುಕೇಷನಲ್ ಟ್ರಸ್ಟ್ :** ಬಿ.ಎಸ್ಸಿ. ವಿದ್ಯಾರ್ಥಿಗಳ ಪ್ರತಿಜ್ಞಾವಿಧಿ ಸ್ವೀಕಾರ ಸಮಾರಂಭ, ಮುಖ್ಯ ಅತಿಥಿಗಳು : ಶಾಸಕ ಕೆ. ಹರೀಶ್‌ಗೌಡ, ಗೌರವ ಅತಿಥಿಗಳು : ಡಾ. ಕೆ.ಎಸ್. ಸದಾನಂದ, ಡಾ. ಸಿ.ಎಸ್. ಶೀಲಾದೇವಿ, ಡಾ. ಟಿ. ಅಮರನಾಥ್, ಅಧ್ಯಕ್ಷತೆ : ವಿಕ್ರಂ ಎಜುಕೇಷನಲ್ ಟ್ರಸ್ಟ್ ಅಧ್ಯಕ್ಷ ಡಾ. ಹೆಚ್.ಎನ್. ಸನತ್ ಕುಮಾರ್, ಟ್ರಸ್ಟಿ ರೇಖಾ ಸನತ್, ಸ್ಥಳ: ಕಲಾಮಂದಿರ, ವಿನೋಬಾ ರಸ್ತೆ, ಬೆಳಗ್ಗೆ 9.30ಕ್ಕೆ

■ **ರಾಮ್‌ಸನ್ಸ್ ಪ್ರತಿಷ್ಠಾನ :** ಬೊಂಬೆ ಮನೆ, ದಸರೆಯ ಬೊಂಬೆ ಪ್ರದರ್ಶನದ 20ನೇ ಅವತರಣಿಕೆ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ಆಮ್ರಪಾಲಿ ಸೀರೆ ಮಳಿಗೆಯ ಮೇಲೆ, ನಜರ್‌ಬಾದ್, ಬೆಳಗ್ಗೆ 10 ರಿಂದ.

■ **ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ :** ರಾಜ್ಯ ಮಟ್ಟದ ಅಧ್ಯಾಪಕರ ತರಬೇತಿ ಕಾರ್ಯಕ್ರಮ, ಮುಖ್ಯ ಅತಿಥಿಗಳು : ಯುಜಿಸಿ ಜಂಟಿ ನಿರ್ದೇಶಕ ಡಾ. ಅವಿಚಲ್ ಕಪೂರ್, ಸಂಪನ್ಮೂಲ ವ್ಯಕ್ತಿ ಎ.ಹೆಚ್. ಸಾಗರ್, ಅಧ್ಯಕ್ಷತೆ : ಕರಾಮುವಿವಿ ಕುಲಪತಿ ಪ್ರೊ. ಶರಣಪ್ಪ ವಿ. ಹಲಸೆ, ಸ್ಥಳ: ಕಾವೇರಿ ಸಭಾಂಗಣ, ಮುಕ್ತ ಗಂಗೋತ್ರಿ, ಬೆಳಗ್ಗೆ 10.30ಕ್ಕೆ.

■ **ಮಹಾರಾಣಿ ಮಹಿಳಾ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜು, ಗೌರವ್ ಪ್ರಕಾಶನ :** ಡಾ. ನಾಗರಾಜ ಪಿ.ವಿ. ರಚಿಸಿರುವ ಗುರುವೇ ನಿಮಗೆ ಶರಣು ಮತ್ತು ಹಚ್ಚೇವು ಕನ್ನಡದ ದೀಪ ಪುಸ್ತಕ ಬಿಡುಗಡೆ ಸಮಾರಂಭ, ಅಧ್ಯಕ್ಷತೆ : ಕಾಲೇಜು ಪ್ರಾಂಶುಪಾಲ ಪ್ರೊ. ಸೋಮಣ್ಣ, ಪುಸ್ತಕ ಬಿಡುಗಡೆ : ಸಂಸ್ಕೃತಿ ಚಿಂತಕ ನಾಡೋಜ ಬರಗೂರು ರಾಮಚಂದ್ರಪ್ಪ, ಮುಖ್ಯ ಅತಿಥಿಗಳು : ಭಾಷಾ ತಜ್ಞ ಪ್ರೊ. ಓ.ಎಲ್. ನಾಗಭೂಷಣಸ್ವಾಮಿ, ವಿಶ್ರಾಂತ ಕನ್ನಡ ಪ್ರಾಧ್ಯಾಪಕ ಡಾ. ರಾಜಪ್ಪ ದಳವಾಯಿ, ಪ್ರಾಧ್ಯಾಪಕರಾದ ಪ್ರೊ. ಬಿ.ಪಿ. ಆಶಾಕುಮಾರಿ, ಡಾ. ಕೆ.ಇ. ಗೋವಿಂದೇಗೌಡ, ಓಂಕಾರಪ್ಪ, ಡಾ. ಪಿ.ವಿ. ನಾಗರಾಜ, ಸ್ಥಳ: ಕಾಲೇಜಿನ ಸಭಾಂಗಣ, ಮಹಾರಾಣಿ ಮಹಿಳಾ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜು, ಬೆಳಗ್ಗೆ 11ಕ್ಕೆ

■ **ಶರಣ ಸಾಹಿತ್ಯ ಪರಿಷತ್ತು (ಮೈಸೂರು ನಗರ ಘಟಕ), ಕದಳಿ ಮಹಿಳಾ ವೇದಿಕೆ :** ವಚನ–ಶ್ರಾವಣ, ಮನೆ ಮನೆಗೆ ಶ್ರಾವಣ ಮಾಸದ ಶರಣ ಸಂದೇಶ, ಲೇಖಕಿ ಶ್ರೀಮತಿ ಅನಸೂಯ ಎಸ್. ಕೆಂಪನಹಳ್ಳಿ ಅವರಿಂದ ಕಾಯಕದಲಿ ನಿರತನಾದಡೆ ಗುರುದರ್ಶನವಾದರೂ ಮರೆಯಬೇಕು–ಆಯ್ದಕ್ಕಿ ಮಾರಯ್ಯ ಕುರಿತು ಉಪನ್ಯಾಸ, ಸ್ಥಳ: ಶ್ರೀಮತಿ ಮಂಜುಳ ಸುರೇಶ್ ಪಾಟೀಲ, ಸರಸ್ವತಿಪುರಂ, ಸಂಜೆ 5.30ಕ್ಕೆ


■ **ಗಾನಭಾರತೀ :** ಗಾನಭಾರತೀ ಕೃಷ್ಣ ಜಯಂತಿ ಉತ್ಸವ, ವೇಣುವಾದನ ಕಾರ್ಯಕ್ರಮ, ವಿದ್ವಾನ್ ಎಸ್.ಜಿ. ಮುರಳೀಧರ್–ಕೊಳಲು, ವಿದುಷಿ ವೀಣಾ ಸುರೇಶ್–ಪಿಟೀಲು, ವಿದ್ವಾನ್ ಎಚ್.ಎಲ್. ಶಿವಶಂಕರ ಸ್ವಾಮಿ–ಮೃದಂಗ, ಸ್ಥಳ: ವೀಣೆ ಶೇಷಣ್ಣ ಭವನ, ಆದಿಚುಂಚನಗಿರಿ ರಸ್ತೆ, ಕುವೆಂಪುನಗರ, ಸಂಜೆ 6ಕ್ಕೆ

■ **ಶ್ರೀ ಸುತ್ತೂರು ಮಠ, ಮೈಸೂರು ಶಾಖೆ :** ಶ್ರಾವಣಮಾಸ ಪೂಜಾನುಷ್ಠಾನ ಮತ್ತು ಪ್ರವಚನ, ವಿದುಷಿ ಧರಿತ್ರಿ ಆನಂದರಾವ್ ಅವರಿಂದ ವಾಚನ, ವಿಶ್ರಾಂತ ಕನ್ನಡ ಪ್ರಾಧ್ಯಾಪಕ ಡಾ. ಕೆ. ಅನಂತರಾಮು ಅವರಿಂದ ಪ್ರವಚನ, ಸಂಜೆ 6ಕ್ಕೆ ಸಾಮೂಹಿಕ ಪ್ರಾರ್ಥನೆ, ಸಂಜೆ 6.30ಕ್ಕೆ ಪ್ರವಚನ, ಸ್ಥಳ: ಶ್ರೀ ಸುತ್ತೂರು ಮಠ, ಚಾಮುಂಡಿಬೆಟ್ಟದ ತಪ್ಪಲು, ಸಂಜೆ 6.30 ರಿಂದ.

■ **ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮ :** ಶ್ರೀ ಶ್ರೀ ದತ್ತವಿಜಯಾನಂದ ತೀರ್ಥ ಸ್ವಾಮೀಜಿಯವರ 21ನೇ ಚಾತುರ್ಮಾಸ್ಯ ವ್ರತದೀಕ್ಷಾ ಮಹೋತ್ಸವ, ಮಹಾಸುದರ್ಶನ ಯಾಗ, ಸ್ಥಳ: ಆಶ್ರಮದ ಆವರಣ.

■ **ನಿರಂತರ ಫೌಂಡೇಶನ್ :** ಮೈಸೂರು ಕಾಲೇಜು ವಿದ್ಯಾರ್ಥಿಗಳಿಗಾಗಿ 'ಸಹಜರಂಗ 2024' ರಂಗ ತರಬೇತಿ ಶಿಬಿರ, ಉಪಸ್ಥಿತರು : ರಂಗಾಯಣ ನಿರ್ದೇಶಕ ಸತೀಶ್ ತಿಪಟೂರು, ಗಾಂಧಿ ಭವನ ನಿರ್ದೇಶಕ ಡಾ. ನರೇಂದ್ರ ಕುಮಾರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಸುದರ್ಶನ್, ರಂಗ ನಿರ್ದೇಶಕ ಪ್ರಸಾದ್ ಕುಂದೂರು, ಸ್ಥಳ: ಗಾಂಧಿ ಭವನ, ಮಾನಸಗಂಗೋತ್ರಿ, ಸಂಜೆ 6.30ಕ್ಕೆ.

### ಮೈಸೂರು ಆಕಾಶವಾಣಿ



**ಬೆಳಗ್ಗೆ:** 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 'ಬಣ್ಣದ ಬಾನಾಡಿಗಳು' ಬಾನುಲಿ ಸರಣಿ, ರಚನೆ : ಡಾ. ಎಸ್. ವಿ. ನರಸಿಂಹನ್, ಪ್ರಸ್ತುತಿ: ಜಿ. ಶಾಂತಕುಮಾರ್, 6.40 ಮತ್ತು ಸಂಜೆ 5.45 ಕರಾಮುವಿವಿ ಮುಕ್ತವಾಣಿ–ಕರ್ನಾಟಕ ರಾಜ್ಯ ಮುಕ್ತ ವಿಶ್ವ ವಿದ್ಯಾನಿಲಯದ ಅಧ್ಯಯನ ಅವಕಾಶಗಳನ್ನು ಕುರಿತ ಪ್ರಾಯೋಜಿತ ಬಾನುಲಿ ಸರಣಿ. ಭಾಗವಹಿಸುತ್ತಾರೆ: ಡಾ. ಭವ್ಯ. ಡಿ.ಎನ್, ಮುಖ್ಯಸ್ಥರು, ಗಣಕ ವಿಜ್ಞಾನ ಅಧ್ಯಯನ ಮತ್ತು ಸಂಶೋಧನಾ ವಿಭಾಗ, ಪ್ರಾಯೋಜಕರು : ಕರ್ನಾಟಕ ರಾಜ್ಯ ಮುಕ್ತ ವಿಶ್ವ ವಿದ್ಯಾನಿಲಯ, ಮೈಸೂರು. ಪ್ರಸ್ತುತಿ: ಎನ್. ಕೇಶವಮೂರ್ತಿ, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು–ಡಾ. ಹೆಚ್. ಎಸ್. ವೆಂಕಟೇಶಮೂರ್ತಿ ಅವರ ರಚನೆಗಳು, 9.00 ನಮ್ಮ ಆರೋಗ್ಯ : ರಾಷ್ಟ್ರೀಯ ದೃಷ್ಟಿದಾನ ಪಾಕ್ಷಿಕದ ಸಂದರ್ಭದಲ್ಲಿ 'ನೇತ್ರದಾನದ ಮಹತ್ವ ಮತ್ತು ಅಗತ್ಯ' ಕುರಿತು ತಿಳಿಸಿಕೊಡಲಿದ್ದಾರೆ ಮೈಸೂರು ಮೆಡಿಕಲ್ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯ ನೇತ್ರ ಭಂಡಾರ ಅಧಿಕಾರಿ ಡಾ. ಚಂದ್ರಕಲಾ. ಪಿ. ಅವರು. ನಂತರ 'ಯಾವ ಆರೋಗ್ಯ ಸಮಸ್ಯೆಯ ಸಂದರ್ಭದಲ್ಲಿ ರುಮೆಟಾಲಜಿಸ್ಟ್ ಮತ್ತು ಇಮ್ಯುನಾಲಜಿಸ್ಟ್ ತಜ್ಞರನ್ನು ಭೇಟಿಯಾಗಬಹುದು' ಕುರಿತು ಮೈಸೂರಿನ ರುಮೆಟಾಲಜಿಸ್ಟ್ ಮತ್ತು ಇಮ್ಯುನಾಲಜಿಸ್ಟ್ ತಜ್ಞರಾದ ಡಾ. ಚೆಂಗಪ್ಪ. ಬಿ. ಸಿ ಅವರೊಂದಿಗೆ ಮಾತುಕತೆ ಆಲಿಸಬಹುದು. ಇವರೊಂದಿಗೆ ಭಾಗವಹಿಸುತ್ತಾರೆ : ಬೇದ್ರೆ ಮಂಜುನಾಥ್, 9.30 ಗಾಂಧಿ ಸ್ಮೃತಿ, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ : ಮೈಸೂರು. ಎಂ. ನಾಗರಾಜ್ ಮತ್ತು ಡಾ. ಎಂ. ಮಂಜುನಾಥ್–ಯುಗಳ ವೈಯೋಲಿನ್ ವಾದನ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ 'ಸೈಕಲ್ ಸವಾರಿ ಮಾತಿನ ಲಹರಿ', ಪ್ರಸ್ತುತಿ : ಜಾಂಪಣ್ಣ ಆಶೀಹಾಳ್

ಮಧ್ಯಾಹ್ನ: 12.30 ದೇವರನಾಮ–ಶ್ರೀ ಲಕ್ಷ್ಮೀ. ಬಿ, 12.45 ಕಾದಂಬರಿ ವಿಹಾರ – ಅ.ನ.ಕೃ ಅವರ 'ಉದಯರಾಗ' ಕಾದಂಬರಿಯ ಬಾನುಲಿ ಓದು, ಪ್ರಸ್ತುತಿ: ಉಮೇಶ್. ಎಸ್. ಎಸ್, 1.20 ಭಾವಗೀತೆಗಳು, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 2.40 ದಾರಿ ದೀಪ–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು: FEBA India, 2.55 ಸಿರಿಗನ್ನಡಂ ಗೆಲ್ಗೆ, ಪ್ರಸ್ತುತಿ: ಜಿ. ಕೆ. ರವೀಂದ್ರಕುಮಾರ್, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ : ಕೃತಿ. ಹೆಚ್. ಆರ್ – ಹಾಡುಗಾರಿಕೆ, 4.00 ಮಹಿಳಾರಂಗ, 4.30 ವೃತ್ತಿ ಮಾರ್ಗದರ್ಶನ, 6.50 ಕೃಷಿರಂಗ : ಮೈಸೂರು ಜಿಲ್ಲೆ ಹೆಚ್. ಡಿ. ಕೋಟೆ ತಾಲೂಕು ಪುರ ಗ್ರಾಮದ ಹೊಸ ಚಿಗುರು ತೋಟದಲ್ಲಿ ನಡೆದ ಬಾನುಲಿ ಕೃಷಿ ಬೆಳಗು ಕಾರ್ಯಕ್ರಮದ ಬಾನುಲಿ ವರದಿ. ಪ್ರಸ್ತುತಿ : ಆರ್. ಲೋಕೇಶ್ವರಿ, 7.45 ಚಿತ್ರಗೀತೆಗಳು, 8.00 ಚರ್ಚೆ, 8.30 ಹಿಂದಿ ಚಿತ್ರಗೀತೆಗಳು, 9.30 ಕರ್ನಾಟಕ ಶಾಸ್ತ್ರೀಯ ಸಂಗೀತ : ಹೆಚ್. ಕೆ. ನಾರಾಯಣ – ಹಾಡುಗಾರಿಕೆ, 10.00 ಹಳ್ಳಿ ಹಾಡು, 10.30 ಸವಿನೆನಪು

ಮೈಸೂರು ಮಿತ್ರ



# ಅ.1ರಿಂದ ಅನ್ನಭಾಗ್ಯದಡಿ ನಗದು ಬದಲು 'ದಿನಸಿ ಕಿಟ್'

ಬೆಂಗಳೂರು, ಆ. 29– ಅನ್ನಭಾಗ್ಯ ಯೋಜನೆಯಡಿ ಐದು ಕೆ.ಜಿ. ಅಕ್ಕಿ ಜತೆಗೆ ನೀಡುತ್ತಿರುವ ನಗದು ಬದಲು 'ದಿನಸಿ ಕಿಟ್' ವಿತರಿಸಲು ರಾಜ್ಯ ಸರ್ಕಾರ ಮುಂದಾಗಿದೆ.

ಅಡುಗೆ ಎಣ್ಣೆ, ಬೇಳೆ, ಸಕ್ಕರೆ, ಉಪ್ಪು ದಿನಸಿ ಕಿಟ್‌ನಲ್ಲಿ ಇರಲಿದೆ. ಈ ಕುರಿತು ಆಹಾರ ಇಲಾಖೆಯು ಆರ್ಥಿಕ ಇಲಾಖೆಗೆ ಪ್ರಸ್ತಾವ ಸಲ್ಲಿಸಿದ್ದು, ಅಕ್ಟೋಬರ್ 1ರಿಂದ ಜಾರಿಗೊಳಿಸಲು ಸಿದ್ಧತೆ ನಡೆದಿದೆ.




'ಅನ್ನಭಾಗ್ಯ'ದ ಗ್ಯಾರಂಟಿಯಡಿ ಬಿಪಿಎಲ್ ಕುಟುಂಬದ ಪ್ರತಿ ಸದಸ್ಯರಿಗೆ 10 ಕೆ.ಜಿ ಅಕ್ಕಿ ನೀಡುವುದಾಗಿ ಕಾಂಗ್ರೆಸ್ ಚುನಾವಣೆ ಪೂರ್ವದಲ್ಲಿ ಘೋಷಿಸಿತ್ತು. ಅಷ್ಟು ಪ್ರಮಾಣದ ಅಕ್ಕಿ ಲಭ್ಯವಾಗದೇ ಇದ್ದಾಗ, ಐದು ಕೆ.ಜಿ ಅಕ್ಕಿ ಜತೆಗೆ, ಉಳಿದ ಐದು ಕೆ.ಜಿ ಲೆಕ್ಕದಲ್ಲಿ ನಗದು ನೀಡುವ ಯೋಜನೆ ಜಾರಿಗೊಳಿಸಿತ್ತು. ನಗದಿನ ಬದಲು ದಿನಸಿ ನೀಡುವ ಯೋಜನೆ ಜಾರಿಗೆ ಬರಲಿದೆ.

ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ, ಯೋಜನೆ ಜಾರಿಗೆ ಅಗತ್ಯವಿದ್ದ ಹೆಚ್ಚುವರಿ ಅಕ್ಕಿ ಒದಗಿಸುವಂತೆ ಕೇಂದ್ರ ಸರ್ಕಾರಕ್ಕೆ ಮನವಿ ಮಾಡಿತ್ತು. ಆದರೆ, ಈ ಹಿಂದೆ ಪ್ರತಿ ವ್ಯಕ್ತಿಗೆ ನೀಡುತ್ತಿದ್ದ ಐದು ಕೆ.ಜಿ ಹೊರತುಪಡಿಸಿ ಹೆಚ್ಚುವರಿ ಅಕ್ಕಿ ಸರಬರಾಜು ಮಾಡಲು ಕೇಂದ್ರ ಒಪ್ಪಿರಲಿಲ್ಲ.

ಅಕ್ಕಿಯನ್ನು ಪ್ರತಿ ಕೆ.ಜಿ.ಗೆ 34 ರೂ. ನೀಡಿ ಖರೀದಿಸಲು ಸಿದ್ಧವಿರುವುದಾಗಿ ರಾಜ್ಯ ಸರ್ಕಾರ ಹೇಳಿತ್ತು. ಆದರೂ ಕೇಂದ್ರ ನೀಡಿರಲಿಲ್ಲ. ಈಗ ಕೇಂದ್ರವೇ 28 ರೂ.ನಂತೆ ಪೂರೈಸಲು ಸಿದ್ಧವಿದ್ದರೂ ಖರೀದಿಸಲು ರಾಜ್ಯ ಸರ್ಕಾರ ನಿರಾಕರಿಸಿದೆ. ಕೇಂದ್ರದಿಂದ ಅಕ್ಕಿಗೆ ಯಾಚನೆ ಮಾಡುವ ಬದಲು, ದಿನಸಿ ಕಿಟ್ ವಿತರಿಸುವ ಯೋಜನೆಯನ್ನು ರೂಪಿಸಿದೆ. ಬಿಪಿಎಲ್ ಕುಟುಂಬದ ಪ್ರತಿ ಸದಸ್ಯರಿಗೆ ಅನ್ನಭಾಗ್ಯದಡಿ ಅಕ್ಕಿ ಹೊಂದಿಸಲು ಸಾಧ್ಯವಾಗದೇ ಹೋದಾಗ ತಲಾ 5 ಕೆ.ಜಿ ಅಕ್ಕಿ ಹಾಗೂ ಪ್ರತಿ ಕೆ.ಜಿ ಅಕ್ಕಿಗೆ ರೂ.34ರಂತೆ ಲೆಕ್ಕಹಾಕಿ ಪ್ರತಿ ಫಲಾನುಭವಿ ಖಾತೆಗೆ ರೂ.170 ನೇರ ಜಮಾ ಮಾಡಲು ಸರ್ಕಾರ ತೀರ್ಮಾನಿಸಿತ್ತು. 2023ರ ಜುಲೈ 10ರಿಂದ ಅಧಿಕೃತ ಚಾಲನೆ ನೀಡಲಾಗಿತ್ತು.

116 ಕೋಟಿ ಪಡಿತರ ಚೀಟಿದಾರರು 4.8 ಕೋಟಿ ಫಲಾನುಭವಿಗಳು 2.29 ಲಕ್ಷ ಟನ್ ಪ್ರತಿ ತಿಂಗಳು ಅಗತ್ಯವಿದ್ದ ಅಕ್ಕಿ 841.06 ಕೋಟಿ ತಲಾ ಐದು ಕೆ.ಜಿ. ಅಕ್ಕಿಗೆ ಪ್ರತಿ ತಿಂಗಳ ವೆಚ್ಚ ರೂ.7,763 ಕೋಟಿ.

ಎಫ್‌ಸಿಐ ಇಲ್ಲಿಯವರೆಗೂ ಪ್ರತಿ ಕೆ.ಜಿ. ಅಕ್ಕಿಗೆ ರೂ.34 ದರದಲ್ಲಿ ಅಕ್ಕಿ ಪೂರೈಸುತ್ತಿತ್ತು. ಈಗ ರೂ.28 ದರದಲ್ಲಿ ನೀಡಲು ಕೇಂದ್ರ ಸರ್ಕಾರ ಮುಂದೆ ಬಂದಿದೆ. ಈ ಕುರಿತು ರಾಜ್ಯ ಸರ್ಕಾರಕ್ಕೆ ಪತ್ರವನ್ನೂ ಬರೆದಿದೆ. ಆಹಾರ ಭದ್ರತಾ ಯೋಜನೆ ಅಡಿ ಕೇಂದ್ರ ನೀಡುತ್ತಿರುವ ಐದು ಕೆ.ಜಿ. ಅಕ್ಕಿಯನ್ನಷ್ಟೇ ಪೂರೈಸುವಂತೆ ರಾಜ್ಯ ಸರ್ಕಾರ ಮನವಿ ಮಾಡಿದ್ದು ಗ್ಯಾರಂಟಿ ಯೋಜನೆಗೆ ಅಗತ್ಯವಿರುವ ಹೆಚ್ಚುವರಿ ಅಕ್ಕಿ ಖರೀದಿಸದಿರಲು ನಿರ್ಧರಿಸಿದೆ.

ಕೇಂದ್ರದ ಆಹಾರ ಭದ್ರತಾ ಯೋಜನೆ ಸೇರಿದಂತೆ ಅನ್ನಭಾಗ್ಯ ಯೋಜನೆ ಅಡಿ ರಾಜ್ಯದಲ್ಲಿ ಆದ್ಯತಾ ವಲಯದ ಕುಟುಂಬದ ಪ್ರತಿ ಸದಸ್ಯರಿಗೆ ಘೋಷಿಸಿರುವುದು 10 ಕೆ.ಜಿ. ಅಕ್ಕಿ ಆದರೆ ವಾಸ್ತವದಲ್ಲಿ ಸಿಗುತ್ತಿರುವುದು ಮೂರು ಕೆ.ಜಿ ಮಾತ್ರ 10 ಕೆ.ಜಿ.ಯಲ್ಲಿ ಐದು ಕೆ.ಜಿ.ಯ ಹಣವನ್ನು ಫಲಾನುಭವಿಗಳ ಖಾತೆಗೆ ಜಮಾ ಮಾಡಲಾಗುತ್ತಿದೆ. ಉಳಿದ ಐದು ಕೆ.ಜಿ.ಯಲ್ಲಿ ಮೂರು ಕೆಜಿ. ಅಕ್ಕಿ ಉಳಿದ ಎರಡು ಕೆಜಿ. ರಾಗಿ ಅಥವಾ ಜೋಳ ನೀಡಲಾಗುತ್ತಿದೆ. ಪ್ರಸ್ತುತ 4 ಲಕ್ಷ ಟನ್ ರಾಗಿ 1 ಲಕ್ಷ ಟನ್ ಜೋಳ ವಿತರಿಸಲಾಗುತ್ತಿದ್ದು. 8 ಲಕ್ಷ ಟನ್ ರಾಗಿ 3 ಲಕ್ಷ ಟನ್ ಜೋಳ ಹೆಚ್ಚುವರಿ ಖರೀದಿಸಲು ರಾಜ್ಯ ಸರ್ಕಾರ ನಿರ್ಧರಿಸಿದೆ.





ಸ್ಥಾಪನೆ: 1916, ರಿ.ಸಂ. 888 — ಫೋ: 0821-2424909, ಮೊ:8904771073

**ದಿ ಭಾವಸಾರ ಕ್ಷತ್ರಿಯ ಕೋ–ಆಪರೇಟಿವ್ ಸೊಸೈಟಿ ಲಿಮಿಟೆಡ್**

'ಎ' ಶ್ರೇಣಿಯ ಸಹಕಾರ ಸಂಘ

ಕಛೇರಿಯ ವಿಳಾಸ: ನಂ.279, ಬೆಂಕಿನವಾಬ ರಸ್ತೆ, ಮಂಡಿಮೊಹಲ್ಲಾ, ಮೈಸೂರು–570021

**ಆಹ್ವಾನ ಪತ್ರಿಕೆ**

ಮೇಲ್ಕಂಡ ನಮ್ಮ ಸಂಘದ 2023–24ನೇ ಸಾಲಿನ 108ನೇ ಸರ್ವಸದಸ್ಯರ ಮಹಾಸಭೆಯನ್ನು ದಿನಾಂಕ 01–09–2024ನೇ ಭಾನುವಾರ ಬೆಳಿಗ್ಗೆ 11:00 ಗಂಟೆಗೆ ಲಷ್ಕರ್ ಮೊಹಲ್ಲಾದ ಕಬೀರ್ ರಸ್ತೆಯಲ್ಲಿರುವ ಶ್ರೀ ಪಾಂಡುರಂಗ ವಿಠ್ಠಲ ಸ್ವಾಮಿ ದೇವಸ್ಥಾನದ ಆವರಣ ಮೈಸೂರು ಇಲ್ಲಿ ಸಂಘದ ಅಧ್ಯಕ್ಷರಾದ ಶ್ರೀ ಎಸ್.ವಿ. ಸತ್ಯನಾರಾಯಣ ಸುಲಾಖೆರವರ ಘನ ಅಧ್ಯಕ್ಷತೆಯಲ್ಲಿ ನಡೆಸಲು ನಿರ್ದೇಶಕ ಮಂಡಳಿಯು ತೀರ್ಮಾನಿಸಿದೆ. ಎಲ್ಲಾ ಸದಸ್ಯರಿಗೂ ಆಹ್ವಾನ ಪತ್ರಿಕೆಯನ್ನು ಕಳುಹಿಸಲಾಗಿದ್ದು ಪತ್ರಿಕೆ ತಲುಪದೇ ಇದ್ದಲ್ಲಿ ಇದೇ ಆಹ್ವಾನ ಪತ್ರಿಕೆ ಎಂದು ತಿಳಿದು ದಯಮಾಡಿ ಸದರಿ ಮಹಾಸಭೆಯಲ್ಲಿ ಭಾಗವಹಿಸಬೇಕಾಗಿ ವಿನಂತಿ.

ಸಹಿ/–
ಕಾರ್ಯದರ್ಶಿ

ಆಡಳಿತ ಮಂಡಳಿಯ ಅಪ್ಪಣೆ ಮೇರೆಗೆ
ಶ್ರೀ ಎಸ್.ವಿ. ಸತ್ಯನಾರಾಯಣ ಸುಲಾಖೆ, ಅಧ್ಯಕ್ಷರು

ವಿಶೇಷ ಸೂಚನೆ: ವಾರ್ಷಿಕ ಮಹಾಸಭೆಯಲ್ಲಿ ಭಾಗವಹಿಸಲು ಸದಸ್ಯರುಗಳು ಷೇರು ಪಾಸ್ ಬುಕ್ ಅಥವಾ ಸೊಸೈಟಿಯ ಐ.ಡಿ. ಕಾರ್ಡ್ ಅನ್ನು ಕಡ್ಡಾಯವಾಗಿ ತರಬೇಕೆಂದು ಈ ಮೂಲಕ ತಿಳಿಸಲಾಗಿದೆ.

# ಜಾನುವಾರು ಗಣತಿ; ನಾಲ್ಕು ತಿಂಗಳ ಗಡುವು

## ಸ್ಮಾರ್ಟ್ ಫೋನ್ ಮೂಲಕ ಗಣತಿ ಪ್ರಕ್ರಿಯೆ ವಿಶೇಷ



**ಹಿಂದಿನ ಗಣತಿಯಲ್ಲಿ 40 ಲಕ್ಷಕ್ಕೂ ಹೆಚ್ಚು ಜಾನುವಾರು**

1919ರಿಂದಲೂ ಜಾನುವಾರು ಗಣತಿ ನಡೆಸಲಾಗುತ್ತಿದೆ. 2019ರಲ್ಲಿ ನಡೆದ 20ನೇ ಗಣತಿಯಲ್ಲಿ ಮೈಸೂರು ಜಿಲ್ಲೆಯಲ್ಲಿ 4,92,598 ದನ, 21,682 ಎಮ್ಮೆ, 2,03,463 ಕುರಿ, 2,08,206 ಮೇಕೆ, 7,349 ಹಂದಿ, 30,95,800 ಕುಕ್ಕುಟ ಸೇರಿ ಒಟ್ಟು 40,29,098 ಜಾನುವಾರುಗಳನ್ನು ಗುರುತಿಸಲಾಗಿತ್ತು. ಐದು ವರ್ಷಗಳ ಬಳಿಕ ಪ್ರಸಕ್ತ ವರ್ಷದಲ್ಲಿ 21ನೇ ಗಣತಿ ನಡೆಯಲಿದೆ. ಸೆಪ್ಟೆಂಬರ್‌ನಲ್ಲಿ ದೇಶದಾದ್ಯಂತ ಏಕಕಾಲದಲ್ಲಿ ಗಣತಿ ಆರಂಭವಾಗುತ್ತದೆ.

ಮೈಸೂರು, ಆ.29(ಎಸ್‌ಬಿಡಿ)– ಐದು ವರ್ಷಗಳಿಗೊಮ್ಮೆ ನಡೆಯುವ ಜಾನುವಾರು ಗಣತಿಗೆ ಪಶು ಸಂಗೋಪನಾ ಇಲಾಖೆ ಸಜ್ಜಾಗಿದೆ.

ಮುಂದಿನ ತಿಂಗಳು ದೇಶದಾದ್ಯಂತ ಏಕಕಾಲದಲ್ಲಿ 21ನೇ ಜಾನುವಾರು ಗಣತಿ ಆರಂಭವಾಗಲಿದೆ. ಈ ಬಾರಿ ಗಣತಿಗೆ ಸ್ಮಾರ್ಟ್ ಫೋನ್ ಬಳಸುತ್ತಿರುವುದು ವಿಶೇಷ. ಇದಕ್ಕಾಗಿ ಕೇಂದ್ರ ಪಶುಸಂಗೋಪನಾ ಸಚಿವಾಲಯವು ಪ್ರತ್ಯೇಕ ಮೊಬೈಲ್ ಅಪ್ಲಿಕೇಷನ್ ಸಿದ್ಧಪಡಿಸುತ್ತಿದೆ.

ಮೈಸೂರು ಜಿಲ್ಲೆಯಲ್ಲಿ ಪಶು ಸಂಗೋಪನಾ ಇಲಾಖೆಯ 180 ಸಿಬ್ಬಂದಿ ಇತರೆ ಇಲಾಖೆಗಳ ಸಹಕಾರದೊಂದಿಗೆ ಜಾನುವಾರ ಗಣತಿ ನಡೆಸಲಿದ್ದಾರೆ. ನಗರ ಪ್ರದೇಶದಲ್ಲಿ 6 ಸಾವಿರ ಕುಟುಂಬಗಳಿಗೆ ಹಾಗೂ ಗ್ರಾಮೀಣ ಪ್ರದೇಶದಲ್ಲಿ 4 ಸಾವಿರ ಕುಟುಂಬಗಳಿಗೆ ಒಬ್ಬರಂತೆ ಜಾನುವಾರು ಗಣತಿಗೆ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ಆರಂಭವಾದ ದಿನದಿಂದ ನಾಲ್ಕು ತಿಂಗಳಲ್ಲಿ ಗಣತಿ ಪೂರ್ಣಗೊಳಿಸಲು ಗಡುವು ನೀಡಲಾಗಿದೆ. ಈಗಾಗಲೇ ಸಿಬ್ಬಂದಿಗೆ ತರಬೇತಿ, ಗಣತಿ ನಕ್ಷೆ ಸೇರಿದಂತೆ ಎಲ್ಲಾ ರೀತಿಯ ಸಿದ್ಧತೆಗಳನ್ನೂ ಮಾಡಿಕೊಳ್ಳಲಾಗಿದೆ.

**ಗಣತಿ ವ್ಯಾಪ್ತಿಯ ಪ್ರಾಣಿಗಳು:** ಪಶು ಸಂಗೋಪನೆ ಮತ್ತು ಹೈನುಗಾರಿಕೆ ಹಾಗೂ ಮೀನುಗಾರಿಕೆ ಸಚಿವಾಲಯದ ನಿರ್ದೇಶನದಂತೆ ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳನ್ನೊಳಗೊಂಡಂತೆ ದೇಶದಾದ್ಯಂತ ಏಕಕಾಲದಲ್ಲಿ ಜಾನುವಾರು ಗಣತಿಯನ್ನು ನಡೆಸಲಾಗುತ್ತದೆ. ದನ, ಎಮ್ಮೆ, ಕುರಿ, ಮೇಕೆ, ಹಂದಿ, ಕುದುರೆ, ಹೇಸರಗತ್ತೆ, ಕತ್ತೆ, ಒಂಟೆ, ನಾಯಿ, ಮೊಲ, ಆನೆ ಮತ್ತು ಕೋಳಿ ಪ್ರಭೇದ(ಬಾತುಕೋಳಿ)ಗಳಂತಹ ಒಟ್ಟು 16 ಜಾತಿಯ ಪ್ರಾಣಿಗಳ ಅಂಕಿ ಸಂಖ್ಯೆಯನ್ನು ಸಂಗ್ರಹಿಸಲಾಗುತ್ತದೆ. ಆದರೆ ಜಾನುವಾರುಗಳ ಸಾಕಾಣಿಕೆಯಲ್ಲಿನ ಪ್ರಾದೇಶಿಕ ಭಿನ್ನತೆ ಇರುವುದರಿಂದ ಮೈಸೂರು ಸೇರಿದಂತೆ ನಮ್ಮ ರಾಜ್ಯದಲ್ಲಿ ಪ್ರಮುಖವಾಗಿ ದನ, ಎಮ್ಮೆ, ಕುರಿ, ಮೇಕೆ ಹಂದಿ ಹಾಗೂ ಕುಕ್ಕುಟದ ಗಣತಿ ನಡೆಸಲಾಗುತ್ತದೆ.

**ಗೋಶಾಲೆಗಳ ಮಾಹಿತಿ:** ಜಿಲ್ಲೆಯಲ್ಲಿರುವ ಗೋ ಶಾಲೆಗಳ ಬಗ್ಗೆಯೂ ಮಾಹಿತಿ ಸಂಗ್ರಹಿಸಲಾಗುತ್ತದೆ. ದೇವಾಲಯ ಹಾಗೂ ಮಠಗಳಲ್ಲಿರುವ ಆನೆಗಳನ್ನೂ ಗಣತಿ ಮಾಡಲಾಗುತ್ತದೆ. 10ಕ್ಕಿಂತ ಹೆಚ್ಚು ದನಗಳು, ಸಾವಿರಕ್ಕಿಂತ ಹೆಚ್ಚು ಕೋಳಿಗಳು, 50ಕ್ಕಿಂತ ಹೆಚ್ಚು ಆಡುಗಳನ್ನು ಸಾಕಾಣಿಕೆ ಮಾಡುತ್ತಿದ್ದರೆ ಅವುಗಳನ್ನು ಫಾರಂ ಎಂದು ಪರಿಗಣಿಸಿ, ಗಣತಿಯಲ್ಲಿ ದಾಖಲಿಸಲಾಗುತ್ತದೆ

**ಗಣತಿಯ ಪ್ರಮುಖ ಉದ್ದೇಶ:** ಸಾಕು ಪ್ರಾಣಿಗಳ ಸಂಖ್ಯೆ ಪ್ರತಿಕ್ಷಣ ಬದಲಾಗುತ್ತದೆ. ಆದಾಗ್ಯೂ ಸರ್ಕಾರಗಳ ಯೋಜನೆ ಹಾಗೂ ಕಾರ್ಯಕ್ರಮಗಳ ಅನುಷ್ಠಾನಗೊಳಿಸುವಲ್ಲಿ ಗಣತಿ ಬಹಳ ಮುಖ್ಯ. ಜಾನುವಾರುಗಳ ರೋಗ ನಿಯಂತ್ರಣ, ಪೌಷ್ಟಿಕ ಆಹಾರ ಪೂರೈಕೆ ಇನ್ನಿತರ ಅಂಶಗಳ ಆಧಾರದಲ್ಲಿ ಯೋಜನೆ ರೂಪಿಸಲು ಗಣತಿ ಮಾಹಿತಿ ನೆರವಾಗುತ್ತದೆ. ಕೃಷಿ ಅಭಿವೃದ್ಧಿಗೆ ಪೂರಕವಾದ ಹೈನುಗಾರಿಕೆಯನ್ನು ಉತ್ತೇಜಿಸುವುದು ಸರ್ಕಾರಗಳ ಆದ್ಯತೆ ಆಗಿರುವುದರಿಂದ ಕೃಷಿ ಹಾಗೂ ಹೈನುಗಾರಿಕೆ ಕ್ಷೇತ್ರದ ಅಭಿವೃದ್ಧಿಗೆ ಜಾನುವಾರು ಗಣತಿ ಅಗತ್ಯವಾಗಿದೆ.

**ಸಹಕಾರಕ್ಕೆ ಮನವಿ:** ತರಬೇತಿ ಪಡೆದ ಸಿಬ್ಬಂದಿ ಜಾನುವಾರು ಗಣತಿಗೆ ಬಂದಾಗ ಸಾರ್ವಜನಿಕರು ಸಹಕಾರ ನೀಡಬೇಕು. ಯಾವುದೇ ಗೊಂದಲವಾಗಬಾರದು ಎಂಬ ಕಾರಣಕ್ಕೆ ಗಣತಿದಾರರಿಗೆ ಗುರುತಿನ ಚೀಟಿ ನೀಡಲಾಗುತ್ತದೆ. ಗ್ರಾಮಗಳು ಅಥವಾ ಮನೆ ಬಳಿ ಗಣತಿದಾರರು ಬಂದಾಗ ಅಗತ್ಯ ಮಾಹಿತಿ ನೀಡಬೇಕು. ಜಾನುವಾರುಗಳ ಸಂಖ್ಯೆ, ಅವುಗಳ ತಳಿ, ವಯಸ್ಸು ಇನ್ನಿತರ ಮಾಹಿತಿ ಸಂಗ್ರಹಿಸುತ್ತಾರೆ. ಇದೇ ವೇಳೆ ಹೈನುಗಾರಿಕೆ ಹಾಗೂ ಕೋಳಿ ಸಾಕಾಣಿಕೆಯಲ್ಲಿ ಎಷ್ಟು ಮಹಿಳೆಯರು ತೊಡಗಿದ್ದಾರೆ ಎಂಬ ಮಾಹಿತಿಯೂ ಲಭ್ಯವಾಗುತ್ತದೆ ಎಂದು ಪಶು ಸಂಗೋಪನಾ ಇಲಾಖೆ ಉಪ ನಿರ್ದೇಶಕ ಡಾ.ನಾಗರಾಜು ತಿಳಿಸಿದ್ದಾರೆ.

## ಬೋಧನ ಶುಲ್ಕ ಮರುಪಾವತಿಗೆ ಅರ್ಜಿ ಆಹ್ವಾನ

ಮೈಸೂರು,ಆ.29– ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ 2024–25ನೇ ಸಾಲಿನ ಅಲ್ಪಸಂಖ್ಯಾತರ (ಮುಸ್ಲೀಮರು, ಕ್ರೈಸ್ತ, ಜೈನರು, ಸಿಖ್ಖರು, ಬೌದ್ಧರು ಮತ್ತು ಪಾರ್ಸಿಗಳು) ಸಮುದಾಯದ ಮೆಟ್ರಿಕ್ ನಂತರದ PUC, ITI, Diploma, Graduates, Post Graduates, Technical & Professional Courses, ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಬೋಧನ ಶುಲ್ಕ ಮರುಪಾವತಿಗೆ ಅನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ವಿದ್ಯಾರ್ಥಿಗಳು ಅಂತರ್ಜಾಲ ತಾಣ https://ssp.karnataka.gov.in/ ಅಥವಾ https://dom.karnataka.gov.in/ ವೆಬ್‌ಸೈಟ್ ಮೂಲಕ ಅಕ್ಟೋಬರ್ 31 ರೊಳಗೆ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಬೆಂಗಳೂರು–ಮೈಸೂರು ರಸ್ತೆಯಲ್ಲಿರುವ ಶೋಭ ಗಾರ್ಡನ್ ಪಕ್ಕದ ಮೌಲಾನ ಆಜಾದ್ ಭವನದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳ ಕಚೇರಿಯ ದೂ.ಸಂ:0821–2422088 ಸಂಪರ್ಕಿಸಬಹುದು.



**FORM NO. 22.**
**General Notice in Respect of Interlocutory Application**
**IN THE HIGH COURT OF KARNATAKA AT BENGALURU**
**Notice to the R-1 vide order dated:08.08.2024**
**RSA.No.915/2020**

Chinnaswamy and Anr.,. ...Appellants
(By Sri P.Mahesha and Ors - Advs)
-V/s-
Mallikarjunappa and Anr.,. ...Respondents

TO: RESPONDENT NO.1
MALLIKARJUNAPPA, S/O LATE SHIVABASAVADEVARU AGED ABOUT 71 YEARS, R/AT JYOTHIGOWDANAPURA VILLAGE, CHANDAKAVADI HOBLI, CHAMARAJANAGAR TALUK AND DISTRICT 571117

**WHEREAS** the above named appellant has preferred I.A.No. 1/2021 as in the copy annexed hereunto, praying this court to condone the delay of 40 days in filing the above Appeal.

Notice is hereby given to you to appear in this Court in person or through an Advocate duly instructed or through some one authorised by law, to act for you in this case **on 20.09.2024 at 10.30 am** in case you intend to contest the appeal. If you fail so to appear, the appeal will be dealt with, heard and decided in your absence.

Issued under my hand and the seal of this court, this the **08th Day of August 2024.**

**By Order of the Court,**
**Assistant Registrar**

ಕರ್ನಾಟಕ ಸರ್ಕಾರ

**ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಛೇರಿ,**
**ಚಾಮರಾಜನಗರ ಜಿಲ್ಲೆ, ಚಾಮರಾಜನಗರ**

#308, ಮೂರನೇ ಮಹಡಿ, ಜಿಲ್ಲಾಡಳಿತ ಭವನ, ಶ್ರೀ ಡಿ.ರಾಚಯ್ಯ ಜೋಡಿ ರಸ್ತೆ, ಚಾಮರಾಜನಗರ ಜಿಲ್ಲೆ ಚಾಮರಾಜನಗರ : 571313

Email ID:dhochamarajanagar@gmail.com — ಮೊ: 08226-222477

Sl.No: DHS/CHN/NHM/QA/TENDER/01/2024-25 — Dated: 28/08/2024

**ಅಲ್ಪಾವಧಿ ಇ–ಟೆಂಡರ್ ಅಧಿಸೂಚನೆ**
**(E-PROCUREMENT TENDER NOTIFICATION)**

15ನೇ ಹಣಕಾಸು ಆಯೋಗದಡಿಯಲ್ಲಿ **National Quality Assurance Standards (NQAS)** ಕಾರ್ಯಕ್ರಮಕ್ಕೆ ಜಿಲ್ಲೆಯಲ್ಲಿನ ಆಯ್ದ ಪ್ರಾಥಮಿಕ ಹಾಗೂ ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ವೈದ್ಯಕೀಯ ಉಪಕರಣಗಳನ್ನು ಖರೀದಿಸಲು, ಕರ್ನಾಟಕ ಸಾರ್ವಜನಿಕ ಸಂಗ್ರಹಣಗಳಲ್ಲಿ ಪಾರದರ್ಶಕ ಅಧಿನಿಯಮ **(KTPP)** 1999 ನಿಯಮಗಳು 2000 ರ ಪ್ರಕಾರ **e-Procurement** ಟೆಂಡರ್ ಮೂಲಕ ಅಲ್ಪಾವಧಿ ಇ–ಟೆಂಡರ್ ಕರೆಯುವ ಕುರಿತು.

**Tender Number: DHFWS/2024-25/IND0922**

1. ಟೆಂಡರ್ ಫಾರಂ ಅಪ್‌ಲೋಡ್ ಮಾಡಲು ಪ್ರಾರಂಭಿಸುವ ದಿನಾಂಕ : 28/08/2024 ರಿಂದ
2. **Pre-Bid Meeting** ಹಾಗೂ ಸಾಮಗ್ರಿಗಳ ಮಾದರಿ ಪರಿಶೀಲನಾ ದಿನಾಂಕ ಮತ್ತು : ಸಮಯ 11/09/2024
3. ಟೆಂಡರ್ ಫಾರಂ ಅಪ್‌ಲೋಡ್ ಮಾಡಲು ಕೊನೆಯ ದಿನಾಂಕ: 19/09/2024ರ ಸಂಜೆ 4:00 ಗಂಟೆಗೆ
4. ತಾಂತ್ರಿಕ ಲಕೋಟೆ ತೆರೆಯುವ ವೇಳೆ ಮತ್ತು ದಿನಾಂಕ : 20/09/2024 ಸಂಜೆ 04:30 ಗಂಟೆಗೆ
5. ಆರ್ಥಿಕ ಲಕೋಟೆಯನ್ನು ತೆರೆಯುವ ಸ್ಥಳ, ವೇಳೆ ಮತ್ತು ದಿನಾಂಕ : 23/09/2024 ಸಂಜೆ 04:30 ಗಂಟೆಗೆ
6. ಟೆಂಡರ್‌ನ ಒಟ್ಟು ಅಂದಾಜು ಮೊತ್ತ : ರೂ. 10,45,800 /–
7. ಟೆಂಡರ್‌ನೊಂದಿಗೆ ಪಾವತಿಸಬೇಕಾದ ಇ.ಎಂ.ಡಿ ಮೊತ್ತ : ರೂ.26145/–
8. ವ್ಯವಹರಿಸಬೇಕಾದ ಅಧಿಕಾರಿ ಹಾಗೂ ವಿಳಾಸ, ದೂರವಾಣಿ ಸಂಖ್ಯೆ: ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿಗಳು, ಜಿಲ್ಲಾ ಆರೋಗ್ಯ & ಕುಟುಂಬ ಕಲ್ಯಾಣಾಧಿಕಾರಿಗಳ ಕಛೇರಿ ಚಾಮರಾಜನಗರ ದೂರವಾಣಿ ಸಂಖ್ಯೆ: 91–94498 43223
9. ವೆಬ್ ಸೈಟ್ ವಿಳಾಸ: **www.kppp.karnataka.gov.in**

ಸಹಿ/– ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಚಾಮರಾಜನಗರ ಜಿಲ್ಲೆ ಚಾಮರಾಜನಗರ

ಸಂ: ವಾಸಾಸಂಇ:ಚಾನಗರ:210:2024–25

# ಡಾ. ಬಾಲಕೃಷ್ಣೇಗೌಡರಿಗೆ ಏಷಿಯಾನೆಟ್ ಸುವರ್ಣ ಮಲೇಷಿಯಾ ಇಂಡಿಯಾ ಇಂಟರ್‌ನ್ಯಾಷನಲ್ ಐಕಾನಿಕ್ ಪ್ರಶಸ್ತಿ ಪ್ರದಾನ




ಮೈಸೂರು, ಆ.29– ಮೈಸೂರಿನ ಅವಾಂಟ್ ಬಿಕೆಜಿ ಆಸ್ಪತ್ರೆಯ ವ್ಯವಸ್ಥಾಪಕ ನಿರ್ದೇಶಕ ಹಾಗೂ ಹಿರಿಯ ಆರ್ಥೋಪೆಡಿಕ್ ಮತ್ತು ರೊಬೊಟಿಕ್ ಮೊಣ ಕಾಲು ಬದಲಿ ಶಸ್ತ್ರಚಿಕಿತ್ಸಕರಾದ ಡಾ. ಟಿ.ಎನ್. ಬಾಲಕೃಷ್ಣೇಗೌಡರಿಗೆ ಕಳೆದ ವಾರ ಮಲೇಷ್ಯಾದ ಕೌಲಾಲಂಪುರದಲ್ಲಿ ನಡೆದ ಸಮಾರಂಭದಲ್ಲಿ ಪ್ರತಿಷ್ಠಿತ 'ಏಷಿಯಾನೆಟ್ ಸುವರ್ಣ ಮಲೇಷ್ಯಾ ಇಂಡಿಯಾ ಇಂಟರ್‌ನ್ಯಾಷನಲ್ ಐಕಾನಿಕ್ ಪ್ರಶಸ್ತಿ' ನೀಡಿ ಗೌರವಿಸಲಾಯಿತು.

ಸಮಾರಂಭದಲ್ಲಿ, ರವಿ ಹೆಗಡೆ, ಮುಖ್ಯ ಸಂಪಾದಕ ಕನ್ನಡ ಪ್ರಭ ಏಷ್ಯಾನೆಟ್ ಸುವರ್ಣ ನ್ಯೂಸ್, ಅಜಿತ್ ಹನುಮಕ್ಕನವರ್, ಸಂಪಾದಕ, ಏಷ್ಯಾನೆಟ್ ಸುವರ್ಣ ನ್ಯೂಸ್, ಮಾಧ್ಯಮದವರು, ಉದ್ಯಮಿಗಳು ಮತ್ತು ಮಲೇಷ್ಯಾದ ವಿವಿಧ ಕ್ಷೇತ್ರಗಳ ಗಣ್ಯರು ಉಪಸ್ಥಿತರಿದ್ದರು.

ಡಾ.ಟಿ.ಎನ್. ಬಾಲಕೃಷ್ಣೇಗೌಡ ಅವರು ಆರ್ಥೋಪೆಡಿಕ್ಸ್ ಕ್ಷೇತ್ರಕ್ಕೆ ನೀಡಿದ ಅಸಾಧಾರಣ ಕೊಡುಗೆಗಾಗಿ ಮತ್ತು ಈ ವರ್ಷದ ಆರಂಭದಲ್ಲಿ ಬೆಳ್ಳೂರಿನ ಆದಿಚುಂಚನ ಗಿರಿ ಆಸ್ಪತ್ರೆಯಲ್ಲಿ ಒಂದೇ ದಿನದಲ್ಲಿ ಒಟ್ಟು 31 ಮೊಣಕಾಲು ಬದಲಿ ಶಸ್ತ್ರಚಿಕಿತ್ಸೆಯನ್ನು (ಟಿಕೆಆರ್) ಮಾಡುವ ಅವರ ಅದ್ಭುತ ಸಾಧನೆಗಾಗಿ ನೀಡಲಾಗಿದೆ ಹಾಗೂ ಆರ್ಥೋಪೆಡಿಕ್ಸ್ ಕ್ಷೇತ್ರದಲ್ಲಿ ಇದು ಹೊಸ ವಿಶ್ವ ದಾಖಲೆ ಸಾಧನೆಯಾಗಿದೆ.

ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಾತನಾಡಿದ ಡಾ.ಬಾಲಕೃಷ್ಣೇಗೌಡ ಅವರು, ನನ್ನ ಇಡೀ ವೈದ್ಯಕೀಯ ತಂಡದ ಅವಿರತ ಶ್ರಮ ಹಾಗೂ ರೋಗಿಗಳು ನನ್ನ ಮೇಲೆ ಇಟ್ಟಿರುವ ನಂಬಿಕೆಗೆ ಈ ಪ್ರಶಸ್ತಿ ಸಾಕ್ಷಿಯಾಗಿದೆ ಹಾಗೂ ಮೂಳೆ ಶಸ್ತ್ರಚಿಕಿತ್ಸೆಯಲ್ಲಿರುವ ಪರಿಣತಿಯನ್ನು ಶಕ್ತಿಮೀರಿ ಮುಂದುವರಿಸಲು ಇದು ನನ್ನನ್ನು ಪ್ರೇರೇಪಿಸುತ್ತದೆ ಎಂದರು

ಡಾ. ಬಿಕೆಜಿ ಅವರು ಒಂದೇ ದಿನದಲ್ಲಿ 31 ಟಿಕೆಆರ್ ಶಸ್ತ್ರಚಿಕಿತ್ಸೆಗಳ ದಾಖಲೆ–ಮುರಿಯುವ ಸಾಧನೆಯು ಅವರ ಪರಿಣತಿ, ನಿಖರತೆ ಮತ್ತು ಮೊಣಕಾಲು ಸಂಬಂಧಿತ ತೊಂದರೆಗಳಿಂದ ಬಳಲುತ್ತಿರುವವರ ಜೀವನವನ್ನು ಸುಧಾರಿಸುವ ಅಚಲ ಬದ್ಧತೆಗೆ ಸಾಕ್ಷಿಯಾಗಿದೆ. ಈ ಮೈಲಿಗಲ್ಲು ಅವರ ಅಸಾಧಾರಣ ಕೌಶಲಗಳನ್ನು ಎತ್ತಿ ತೋರಿಸುವುದಲ್ಲದೆ ಮೂಳೆಚಿಕಿತ್ಸೆಯ ನಾವೀನ್ಯತೆ ಮತ್ತು ಪ್ರಗತಿಯಲ್ಲಿ ನಾವೀನ್ಯತೆ ಮತ್ತು ದಕ್ಷತೆಯ ಪ್ರಾಮುಖ್ಯತೆಯನ್ನು ಬಲಪಡಿಸುತ್ತದೆ. ಮೈಸೂರು ನಗರದಲ್ಲಿ ಮೊಟ್ಟ ಮೊದಲ ಬಾರಿಗೆ ರೊಬೊಟಿಕ್ ಮೊಣಕಾಲು ಬದಲಿ ಶಸ್ತ್ರಚಿಕಿತ್ಸೆಯನ್ನು ಪರಿಚಯಿಸಿದ ಹೆಗ್ಗಳಿಕೆಯೂ ಡಾ.ಬಿ.ಕೆ.ಜಿ ಅವರದ್ದು.

ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಾಧ್ಯಮದ ಪ್ರಮುಖರು, ಉದ್ಯಮ ನಾಯಕರು ಹಾಗೂ ವಿವಿಧ ಕ್ಷೇತ್ರಗಳ ಗಣ್ಯರು ಭಾಗವಹಿಸಿದ್ದರು.

**ಡಾ. ಟಿ.ಎನ್.ಬಾಲಕೃಷ್ಣೇಗೌಡರ ಕುರಿತು**

ಡಾ. ಟಿ.ಎನ್.ಬಾಲಕೃಷ್ಣೇಗೌಡ ಅವರು ಮೊಣಕಾಲು ಬದಲಿ ಶಸ್ತ್ರಚಿಕಿತ್ಸೆಯಲ್ಲಿ ಪರಿಣತಿಗೆ ಹೆಸರುವಾಸಿಯಾದ ಖ್ಯಾತ ಮೂಳೆ ಶಸ್ತ್ರಚಿಕಿತ್ಸಕರಾಗಿದ್ದಾರೆ. 27 ವರ್ಷಗಳ ಅನುಭವ ಮತ್ತು ಉತ್ಕೃಷ್ಟತೆ ಬದ್ಧತೆಯೊಂದಿಗೆ, ಅವರು ಮೂಳೆಚಿಕಿತ್ಸೆಯ ಆರೈಕೆಗೆ ಅವರ ನವೀನ ವಿಧಾನದ ಮೂಲಕ ಅಸಂಖ್ಯಾತ ರೋಗಿಗಳ ಜೀವನವನ್ನು ಪರಿವರ್ತಿಸಿದ್ದಾರೆ. 2024ರಲ್ಲಿ ಅವರು ಮೈಸೂರಿನಲ್ಲಿ ಅವಾಂಟ್ ಬಿಕೆಜಿ ಆಸ್ಪತ್ರೆಯನ್ನು ಸ್ಥಾಪಿಸಿದರು, ಇದು ರೋಗಿಗಳ ಆರೈಕೆಯಲ್ಲಿ ಹೊಸ ಮಾನದಂಡಗಳನ್ನು ಹೊಂದಿಸುತ್ತಿದೆ ಮತ್ತು ಮೈಸೂರು ಮತ್ತು ಸುತ್ತಮುತ್ತಲಿನ ಪ್ರದೇಶದ ಜನರ ಆರೋಗ್ಯ ಅಗತ್ಯಗಳನ್ನು ಪೂರೈಸುತ್ತಿದೆ.

**ಸಾರ್ವಜನಿಕ ತಿಳುವಳಿಕೆ**

ಈ ಮೂಲಕ ಸಾರ್ವಜನಿಕರಲ್ಲಿ ತಿಳಿಯಪಡಿಸುವುದೇನೆಂದರೆ, ಬೆಂಗಳೂರು ನಗರ, ಭುವನೇಶ್ವರಿ ನಗರ, ಗೌತಮ್ ಕಾಲೇಜು ಹತ್ತಿರ, 5ನೇ ಬಿ ಕ್ರಾಸ್, 3ನೇ ಮುಖ್ಯರಸ್ತೆ, ಮನೆ ನಂಬರ್ 9ರಲ್ಲಿ ವಾಸವಾಗಿರುವ ಲೇಟ್ ಮೊಹಮದ್ ಯೂಸುಫ್ ರವರ ಮಕ್ಕಳಾದ 1ನೇ ಶ್ರೀ ಮೊಹಮದ್ ಅಮಾನುಲ್ಲಾ ಹಾಗೂ 2ನೇ ಶ್ರೀ ಮೊಹಮದ್ ಅಹಮದ್ ಉಲ್ಲಾರವರಿಗೆ ಸೇರಿದ ಷೆಡ್ಯೂಲ್ ಸ್ವತ್ತಾದ ಮೈಸೂರು ಜಿಲ್ಲೆ, ಮೈಸೂರು ತಾಲ್ಲೂಕು, ಕಸಬಾ ಹೋಬಳಿ, ಯರಗನಹಳ್ಳಿ ಗ್ರಾಮದ ಸರ್ವೆ ನಂಬರ್‌ಗಳಲ್ಲಿ "ಉರ್ದು ಟೀಚರ್ಸ್ ಹೌಸ್ ಬಿಲ್ಡಿಂಗ್ ಕೋ ಆಪರೇಟಿವ್ ಸೊಸೈಟಿ ಲಿ. ಮೈಸೂರು ರವರು ಅಭಿವೃದ್ಧಿಪಡಿಸಿ ನಿರ್ಮಿಸಿರುವ "ಮೌಲಿವ್ ನಗರ" ಬಡಾವಣೆಯಲ್ಲಿನ ನಿವೇಶನ ಸಂಖ್ಯೆ36 ರಲ್ಲಿರುವ ವಿಸ್ತೀರ್ಣ ಪೂರ್ವ ಪಶ್ಚಿಮ 9.00 ಮೀಟರ್ ಹಾಗೂ ಉತ್ತರ ದಕ್ಷಿಣ 12.00 ಮೀಟರ್, ಒಟ್ಟು 108.00 ಚದರ ಮೀಟರ್‌ಗಳುಳ್ಳ ಖಾಲಿ ನಿವೇಶನವನ್ನು ನನ್ನ ಕಕ್ಷಿದಾರರಾದ ಮಂಡ್ಯ ಜಿಲ್ಲೆ, ಮಂಡ್ಯ ತಾಲ್ಲೂಕು, ದುದ್ದ ಹೋಬಳಿ, ಗಾಣದಾಳು ಗ್ರಾಮದಲ್ಲಿ ವಾಸವಾಗಿರುವ ಶ್ರೀ ಬಸವರಾಜು ಜಿ.ಬಿ ರವರ ಮಗನಾದ ಸುಮಾರು 33 ವರ್ಷ ವಯಸ್ಸಿನ ಶ್ರೀ ಅರ್ಜುನ ಜಿ.ಬಿ ರವರು ಕ್ರಯಕ್ಕೆ ಪಡೆಯಲು ಇಚ್ಚಿಸಿರುತ್ತಾರೆ. ಆದಾಗಿ, ಸದರಿ ಷೆಡ್ಯೂಲ್ ಸ್ವತ್ತುಗಳಿಗೆ ಸಂಬಂಧಿಸಿದಂತೆ ಯಾರಿಗಾದರೂ ಹಕ್ಕು ಭಾದ್ಯತೆಗಳು, ಹಿತಾಸಕ್ತಿ ಅಥವಾ ಆಕ್ಷೇಪಣೆ ಇದ್ದಂತಹ ಪಕ್ಷದಲ್ಲಿ ಈ ಸಾರ್ವಜನಿಕ ತಿಳುವಳಿಕೆಯು ಪತ್ರಿಕೆಯಲ್ಲಿ ಪ್ರಕಟವಾದ ದಿನದಿಂದ 7 (ಏಳು) ದಿನಗಳ ಒಳಗಾಗಿ ತಮ್ಮ ಆಕ್ಷೇಪಣೆಯನ್ನು ಲಿಖಿತವಾಗಿ ದಾಖಲೆ ಸಹಿತ ನಮಗೆ ಅಥವಾ ನನ್ನ ಕಕ್ಷಿದಾರರಿಗೆ ತಿಳಿಸತಕ್ಕದ್ದು, ಒಂದು ವೇಳೆ ಸದರಿ ಅವಧಿಯೊಳಗೆ ಯಾರಿಂದಲೂ ಯಾವುದೇ ವಿಧವಾದ ಆಕ್ಷೇಪಣೆ ಬಾರದಿದ್ದಂತಹ ಪಕ್ಷದಲ್ಲಿ ಸದರಿ ಷೆಡ್ಯೂಲ್ ಸ್ವತ್ತಿನಲ್ಲಿ ಬೇರೆ ಯಾರಿಗೂ ಯಾವುದೇ ಹಕ್ಕು ಭಾದ್ಯತೆ ಗಳು, ಹಿತಾಸಕ್ತಿ ಅಥವಾ ಆಕ್ಷೇಪಣೆ ಇಲ್ಲವೆಂದು ಭಾವಿಸಿ ನನ್ನ ಕಕ್ಷಿದಾರರು ಷೆಡ್ಯೂಲ್ ಸ್ವತ್ತನ್ನು ಕ್ರಯಪತ್ರ ಮಾಡಿ ಬರೆಸಿಕೊಳ್ಳುತ್ತಾರೆ. ನಂತರ ಬಂದಂತಹ ಆಕ್ಷೇಪಣೆಗಳು ನನ್ನ ಕಕ್ಷಿದಾರರನ್ನು ಬಧ್ದಪಡಿಸುವುದಿಲ್ಲ ವೆಂದು ಹಾಗೂ ಅದರಿಂದ ಉಂಟಾಗುವ ನಷ್ಟಗಳಿಗೆ ನೀವುಗಳೇ ಜವಾಬ್ದಾರರಾಗಿರುತ್ತೀರಿ ಎಂದು ಈ ಮೂಲಕ ತಿಳಿಯಪಡಿಸಲಾಗಿದೆ.

**ಷೆಡ್ಯೂಲ್ ಸ್ವತ್ತಿನ ವಿವರ:** ಮೈಸೂರು ಜಿಲ್ಲೆ, ಮೈಸೂರು ತಾಲ್ಲೂಕು, ಕಸಬಾ ಹೋಬಳಿ, ಯರಗನಹಳ್ಳಿ ಗ್ರಾಮದ ಸರ್ವೆ ನಂಬರ್‌ಗಳಲ್ಲಿ "ಉರ್ದು ಟೀಚರ್ಸ್ ಹೌಸ್ ಬಿಲ್ಡಿಂಗ್ ಕೋ ಆಪರೇಟಿವ್ ಸೊಸೈಟಿ ಲಿ. ಮೈಸೂರು ರವರು ಅಭಿವೃದ್ಧಿಪಡಿಸಿ ನಿರ್ಮಿಸಿರುವ "ಮೌಲಿವ್ ನಗರ" ಬಡಾವಣೆಯಲ್ಲಿನ ನಿವೇಶನ ಸಂಖ್ಯೆ36ರಲ್ಲಿರುವ ವಿಸ್ತೀರ್ಣ ಪೂರ್ವ ಪಶ್ಚಿಮ 9.00 ಮೀಟರ್ ಹಾಗೂ ಉತ್ತರ ದಕ್ಷಿಣ 12.00 ಮೀಟರ್, ಒಟ್ಟು 108.00 ಚದರ ಮೀಟರ್‌ಗಳುಳ್ಳ ಖಾಲಿ ನಿವೇಶನಕ್ಕೆ ಚಕ್ಕುಬಂದಿ:– ಪೂರ್ವಕ್ಕೆ ನಿವೇಶನ ಸಂಖ್ಯೆ 35, ಪಶ್ಚಿಮಕ್ಕೆ ನಿವೇಶನ ಸಂಖ್ಯೆ 37, ಉತ್ತರಕ್ಕೆ ನಿವೇಶನ ಸಂಖ್ಯೆ 39, ದಕ್ಷಿಣಕ್ಕೆ ರಸ್ತೆ,

ಸಹಿ/– **ಮಹದೇವಸ್ವಾಮಿ ಪಿ.,** ಬಿ.ಎ.ಎಲ್.ಎಲ್.ಬಿ., ವಕೀಲರು, KAR No.2909/06
# 58, 1ನೇ ಮಹಡಿ, 6ನೇ ಕ್ರಾಸ್, 17ನೇ ಮೇನ್, ಸರಸ್ವತಿಪುರಂ, ಮೈಸೂರು–570009
ದಿ: 28–08–2024
ಸ್ಥಳ: ಮೈಸೂರು
ಮೊ: 9739254292



ಕರ್ನಾಟಕ ಸರ್ಕಾರ

**ಕಾರ್ಯಪಾಲಕ ಇಂಜಿನಿಯರ್‌ರವರ ಕಛೇರಿ**
**ಪಂ.ರಾ.ಇಂ. ವಿಭಾಗ–ಮಡಿಕೇರಿ**

ಸಂ:ಕಾ.ಇಂ/ಪಂ.ರಾ.ಇಂ.ವಿ/ಎಇ/ಟೆಂಡರ್ ಸಂಖ್ಯೆ:/04/639/2024–25 ದಿನಾಂಕ: 28–08–2024

**ಟೆಂಡರ್ ಪ್ರಕಟಣೆ**
**(ಕೆ.ಪಿ.ಪಿ.ಪಿ. ಮುಖಾಂತರ ಮಾತ್ರ)**

ಕರ್ನಾಟಕ ಸರ್ಕಾರದ ಮಾನ್ಯ ರಾಜ್ಯಪಾಲರ ಪರವಾಗಿ ಈ ಕೆಳಗಿನ ಕಾಮಗಾರಿಗಳಿಗೆ ಕೆ.ಪಿ.ಪಿ.ಪಿ ವೇದಿಕೆ ಪದ್ಧತಿಯಲ್ಲಿ ಕೆ.ಡಬ್ಲ್ಯೂ ನಿಬಂಧನೆಗೊಳಪಟ್ಟು ಟೆಂಡರ್ ಕರೆಯಲಾಗಿದೆ. ಅರ್ಹ ಗುತ್ತಿಗೆದಾರರು ಟೆಂಡರಿನಲ್ಲಿ ಭಾಗವಹಿಸಲು ಕೋರಿದೆ.

| ಕ್ರಸಂ | ಕಾಮಗಾರಿಯ ಹೆಸರು | ಅಂದಾಜು ಮೊತ್ತ (ರೂ ಲಕ್ಷಗಳಲ್ಲಿ) |
|---|---|---|
| 1 | ಸೋಮವಾರಪೇಟೆ ತಾ: ಕಲ್ಕಂದೂರು ಗ್ರಾಮದ ಮೀನುಗಾರಿಕೆ ಇಲಾಖೆಯ ಮೀನುಮರಿ ಪಾಲನ ಕೇಂದ್ರದ ಹಳೆಯ ಕಚೇರಿ ಕಟ್ಟಡ ದುರಸ್ತಿ ಇಂಡೆಂಟ್ ನಂ 8164 | 5.10 |
| 2 | ಹಾರಂಗಿ ಮೀನುಮರಿ ಪಾಲನ ಹಾಗೂ ಉತ್ಪಾದನಾ ಕೇಂದ್ರದ ವಸತಿ ಗೃಹಗಳ ದುರಸ್ಥಿ ಮತ್ತು ವಿದ್ಯುತೀಕರಣ ಇಂಡೆಂಟ್ ನಂ 8160 | 9.40 |
| 3 | ಸಮುದಾಯ ಆರೋಗ್ಯ ಕೇಂದ್ರ ಕುಶಾಲನಗರ ಆಸ್ಪತ್ರೆಯ ಹಿಂಭಾಗದಲ್ಲಿ ಕ್ಯಾಟಲ್ ಟ್ರಾಪ್ ಮತ್ತು ವಾಹನಗಳ ನಿಲುಗಡೆಗೆ ಶೆಡ್ ನಿರ್ಮಾಣ ಹಾಗು ಇತರೇ ಅಭಿವೃದ್ಧಿ ಕಾಮಗಾರಿ. | 7.00 |
| 4 | ಸಮುದಾಯ ಆರೋಗ್ಯ ಕೇಂದ್ರ ಶನಿವಾರಸಂತೆ ಹೊಸದಾಗಿ ಬೋರ್‌ವೆಲ್ ಅಳವಡಿಕೆ, ಪ್ರಯೋಗಾಲಯಕ್ಕೆ ಪ್ರತ್ಯೇಕ ಶೌಚಾಲಯ ನಿರ್ಮಾಣ ಹಾಗೂ ಇತರೇ ಅಭಿವೃದ್ಧಿ ಕಾಮಗಾರಿ. | 7.00 |
| 5 | ಕುಶಾಲನಗರ ಸರ್ಕಾರಿ ಆಯುರ್ವೇದ & ಹೋಮಿಯೋಪತಿ ಆಸ್ಪತ್ರೆಯಲ್ಲಿ ಪಂಚಕರ್ಮ ಥಿಯೇಟರ್ ನಿರ್ಮಾಣ ಇಂಡೆಂಟ್ ನಂ. 8274 | 30.00 |
| 6 | ಕುಶಾಲನಗರ ವೃತ್ತಿಪರ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯದ ಕಟ್ಟಡ ಮೇಲ್ಛಾವಣಿ ದುರಸ್ಥಿ ಇಂಡೆಂಟ್ ನಂ 8228 | 6.00 |
| 7 | ಕುಶಾಲನಗರ ಇಂಜಿನಿಯರ್ ಮೆಟ್ರಿಕ್ ನಂತರದ ಮಹಿಳಾ ವಿದ್ಯಾರ್ಥಿನಿಲಯದ ಕಟ್ಟಡ ಮೇಲ್ಛಾವಣಿ ದುರಸ್ಥಿ ಇಂಡೆಂಟ್ ನಂ 8229 | 6.00 |
| 8 | ಸೋಮವಾರಪೇಟೆ ಉಪಮಾರುಕಟ್ಟೆ ಪ್ರಾಂಗಣದಲ್ಲಿ ಆರ್.ಒ ಘಟಕ ಇಂಡೆಂಟ್ ನಂ. 8177 | 8.50 |
| 9 | ಕುಶಾಲನಗರ ಮುಖ್ಯ ಮಾರುಕಟ್ಟೆ ಪ್ರಾಂಗಣದಲ್ಲಿ ಆರ್.ಒ ಘಟಕ ಇಂಡೆಂಟ್ ನಂ 8219 | 8.50 |
| 10 | ಕುಶಾಲನಗರ ಸ.ಮಾ.ಪ್ರಾ.ಶಾಲೆಯ 5 ಕೊಠಡಿಗಳ ದುರಸ್ಥಿ, | 15.00 |
| 11 | ಮಡಿಕೇರಿ ಜಿಲ್ಲಾ ಸರ್ವೇಕ್ಷಣಾಧಿಕಾರಿಗಳ ಕಛೇರಿಯ ಮೇಲ್ಭಾಗದಲ್ಲಿ ಸಭಾಂಗಣದ ಕಟ್ಟಡ ನಿರ್ಮಾಣ | 26.00 |
| 12 | ಪ್ರಾ.ಆ.ಕೇಂದ್ರ ಗಾಳಿಬೀಡು 2ನೇ ಹಂತದ ಕಾಮಗಾರಿಗಾಗಿ | 19.50 |
| 13 | ಜಿಲ್ಲಾ ಆಯುಷ್ ಕಛೇರಿ, ಮಡಿಕೇರಿ ಇದರ ನೂತನ ಕಟ್ಟಡ ಮೇಲಂತಸ್ತಿನಲ್ಲಿ ಸಿಬ್ಬಂದಿಗಳ ಕ್ಯಾಬಿನ್ ಹಾಗೂ ಇತರೇ ಅಭಿವೃದ್ಧಿ ಕಾಮಗಾರಿ | 11.00 |
| 14 | ಜಿಲ್ಲಾ ಸರ್ಕಾರಿ ಆಯುರ್ವೇದ ಆಸ್ಪತ್ರೆ ಮಡಿಕೇರಿ ಇದರ ಆವರಣದಲ್ಲಿ ವೈದ್ಯಾಧಿಕಾರಿಗಳಿಗೆ ವಸತಿ ಗೃಹ ನಿರ್ಮಾಣ | 35.00 |
| 15 | ಮಡಿಕೇರಿ ಜಿಲ್ಲಾ ಸರ್ಕಾರಿ ಆಯುರ್ವೇದ ಆಸ್ಪತ್ರೆ ಕಟ್ಟಡಕ್ಕೆ ಇತರೇ ಅಭಿವೃದ್ಧಿ ಕಾಮಗಾರಿ | 20.00 |
| 16 | ಸಂಪಾಜೆ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯದ ಕಟ್ಟಡ ಮೇಲ್ಛಾವಣಿ ದುರಸ್ಥಿ | 6.00 |
| 17 | ಮಡಿಕೇರಿ ಹೊಸದಾಗಿ ತೋಟಗಾರಿಕೆ ಉಪನಿರ್ದೇಶಕರ ಕಛೇರಿ ಕಟ್ಟಡ ನಿರ್ಮಾಣ ಹಾಗೂ ಇತರೆ ಕಾಮಗಾರಿ | 16.00 |
| 18 | ಮಡಿಕೇರಿ ಕರ್ಣಂಗೇರಿ ಗ್ರಾಮದಲ್ಲಿ ಉಪನಿರ್ದೇಶಕರು(ಆಡಳಿತ)ಕಚೇರಿಯ ಕಟ್ಟಡ ನಿರ್ಮಾಣ | 44.00 |
| 19 | ವಿರಾಜಪೇಟೆ ಸರ್ಕಾರಿ ಆಯುರ್ವೇದ ಆಸ್ಪತ್ರೆ ಆಸ್ಪತ್ರೆಯ ಮೇಲಂತಸ್ತಿನ ಯೋಗ ಹಾಲ್‌ನಲ್ಲಿ ಇತರೇ ಅಭಿವೃದ್ಧಿ ಇಂಡೆಂಟ್ ನಂ 8360 | 10.00 |
| 20 | ಶ್ರೀಮಂಗಲ ಸರ್ಕಾರಿ ಆಯುರ್ವೇದ ಚಿಕಿತ್ಸಾಲಯ ಯೋಗ ಹಾಲ್‌ನಲ್ಲಿ, ಇತರೇ ಅಭಿವೃದ್ಧಿ ಇಂಡೆಂಟ್ ನಂ 8365 | 7.00 |
| 21 | ವಿರಾಜಪೇಟೆ ಸಾಮಾಜಿಕ ಅರಣ್ಯ ವಲಯದ ವಲಯ ಅರಣ್ಯಾಧಿಕಾರಿಗಳ ಕಛೇರಿ ದುರಸ್ಥಿ | 11.00 |
| 22 | ವಿರಾಜಪೇಟೆ ಸಾಮಾಜಿಕ ಅರಣ್ಯ ವಲಯದಲ್ಲಿ ಹೊಸ ಉಪವಲಯ ಅರಣ್ಯಾಧಿಕಾರಿಗಳ ವಸತಿ ಗೃಹಗಳ ದುರಸ್ಥಿ | 12.00 |

ಭರ್ತಿಮಾಡಿದ ಟೆಂಡರ್‌ಗಳನ್ನು ಸಲ್ಲಿಸುವ ಕೊನೆಯ ದಿನಾಂಕ: 17–09–2024 ಸಂಜೆ 5.00 ಗಂಟೆಯವರೆಗೆ, ಬಿಡ್ ತೆರೆಯುವ ದಿನಾಂಕ: 18–09–2024 ಗಳಾಗಿದ್ದು ಹೆಚ್ಚಿನ ವಿವರಗಳನ್ನು ವೆಬ್‌ಸೈಟ್ **www.kppp.karnataka.gov.in** ನಲ್ಲಿ ಪಡೆಯಬಹುದು.

ಸಹಿ/– ಕಾರ್ಯಪಾಲಕ ಇಂಜಿನಿಯರ್ ಕಛೇರಿ
ಪಂಚಾಯತ್ ರಾಜ್ ಇಂಜಿನಿಯರ್ ವಿಭಾಗ, ಮಡಿಕೇರಿ, ಕೊಡಗು

## ನಕ್ಕರೆ ಅದೇ ಸ್ವರ್ಗ

ಟೀಚರ್ : 15 ಹಣ್ಣುಗಳ ಹೆಸರು ಹೇಳಿ?
ಗುಂಡ : ಮೂಸಂಬಿ, ಕಲ್ಲಂಗಡಿ, ಆಪಲ್ ಮತ್ತು ಒಂದು ಡಜನ್ ಬಾಳೆಹಣ್ಣು

**ಮೈಸೂರು ಮಿತ್ರ**

ಶುಕ್ರವಾರ, 30 ಆಗಸ್ಟ್ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

**ಅಮೃತವಾಹಿನಿ.........**

ಒಬ್ಬರು ಮತ್ತೊಬ್ಬರನ್ನು ತಿಂದು ಬದುಕಬಾರದು. ತಿಳಿದು ಬದುಕಬೇಕು.
– ದ.ರಾ. ಬೇಂದ್ರೆ

**ವೇದ ಸುಳ್ಳಾದರೂ ಗಾದೆ ಸುಳ್ಳಾಗದು** { ಭಿಕಾರಿಯಾದವ ಕಾಶಿಗೆ ಹೋದರೂ, ಭಿಕ್ಷಾನ್ನವಲ್ಲದೆ ಪಕ್ವಾನ್ನ ಉಂಡಾನೇ?

## ನಿಮ್ಮ ಪತ್ರಗಳು

### ■ ವರ್ಷವಾದರೂ ಮುಗಿಯದ ಕಾಮಗಾರಿ

ಮಾನ್ಯರೆ,



ಮೈಸೂರಿನ ವಿವೇಕಾನಂದ ಸರ್ಕಲ್‌ನಲ್ಲಿ ವಿವೇಕಾನಂದರ ಪ್ರತಿಮೆ ನಿರ್ಮಾಣ ಕಾಮಗಾರಿ ಕಳೆದ ಒಂದೂವರೆ ವರ್ಷದಿಂದಲೂ ಆಮೆ ವೇಗದಲ್ಲಿ ನಡೆಯುತ್ತಿದೆ. ಆದರೆ ಇದು ಮುಗಿಯುವುದು ಯಾವಾಗ? ಸುಮಾರು ಒಂದೂವರೆ ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗುತ್ತಿರುವ ವಿವೇಕಾನಂದರ ವೃತ್ತದ ಕೆಲಸ ಅರ್ಧಕ್ಕೇ ನಿಲ್ಲಿಸಿರುವ ಕಾರಣ ಏನು? ಇದು ನಿರ್ಮಾಣವಾಗುತ್ತಿರುವುದು ಮುಖ್ಯಮಂತ್ರಿಗಳ ಹಣಕಾಸು ನಿಧಿಯಿಂದ. ಆದರೂ ಆಮೆ ವೇಗದಲ್ಲಿ ಸಾಗುತ್ತಿರುವುದಕ್ಕೆ ಕಾರಣವೇನು? ಮುಂದಿನ ವರ್ಷದ ಜನವರಿಯಲ್ಲಿ ನಡೆಯುವ ವಿವೇಕಾನಂದರ ಜಯಂತ್ಯುತ್ಸವ ವೇಳೆಗಾದರೂ, ಈ ವೃತ್ತದಲ್ಲಿ ವಿವೇಕಾನಂದರ ಪ್ರತಿಮೆ ಅನಾವರಣವಾಗಿ, ನಗರದ ಸೌಂದರ್ಯವನ್ನು ಹೆಚ್ಚಿಸುವಂತಾಗಲಿ.

**–ಬೂಕನಕೆರೆ ವಿಜೇಂದ್ರ, ಕುವೆಂಪುನಗರ, ಮೈಸೂರು**

### ■ ಒಳಚರಂಡಿ ಸರಿಪಡಿಸಲು ಮನವಿ

ಮಾನ್ಯರೆ,

ಮೈಸೂರಿನ ವಿ.ವಿ. ಮೊಹಲ್ಲಾ 8ನೇ ಅಡ್ಡ ರಸ್ತೆ, ನಳಪಾಕ್ ಹೋಟೆಲ್ ಕೆಳಗೆ ಜೈ ಹಿಂದ್ ಹಿಟ್ಟಿನ ಗಿರಣಿ ಪಕ್ಕದ ಗಲ್ಲಿಯಲ್ಲಿರುವ ಮ್ಯಾನ್‌ಹೋಲ್‌ಗಳಿಂದ ಇತ್ತೀಚೆಗೆ ಸುರಿದ ಮಹಾ ಮಳೆಯಿಂದಾಗಿ ಮನೆಗಳಿಗೆ ಕಲುಷಿತ ನೀರು ನುಗ್ಗುತ್ತಿದೆ. ದುರ್ವಾಸನೆಯಿಂದ ನಿವಾಸಿಗಳು ವಾಸಿಸಲು ದುಸ್ತರವಾಗಿದೆ. ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ಇತ್ತ ಗಮನಹರಿಸಿ ಒಳಚರಂಡಿ ಸರಿಪಡಿಸಲು ಮನವಿ.

**–ನೊಂದ ನಾಗರಿಕರು, ವಿ.ವಿ.ಪುರಂ, ಮೈಸೂರು.**

### ■ ಲಿಂಗಾಂಬುದಿ ಕೆರೆಯಲ್ಲಿ ಯುಜಿಡಿ ಸಮಸ್ಯೆ

ಮಾನ್ಯರೆ,



ಮೈಸೂರಿನ ರಾಮಕೃಷ್ಣನಗರ ಹೆಚ್–ಬ್ಲಾಕ್ 7 ಮತ್ತು 8ನೇ ಮೇನ್‌ಗೆ ಹೊಂದಿಕೊಂಡಂತೆ ಲಿಂಗಾಂಬುದಿ ಪಾರ್ಕ್ ಇರುವುದು ಸರಿಯಷ್ಟೇ. ಪಾರ್ಕ್ ಒಳಗೆ 7 ಮತ್ತು 8ನೇ ಮೇನ್‌ಗೆ ಹೊಂದಿಕೊಂಡಂತೆ ಯುಜಿಡಿ ಅಳವಡಿಸಿದ್ದು, ಇದು ಸುಮಾರು 2 ತಿಂಗಳಿನಿಂದ ತುಂಬಿ ಹರಿಯುತ್ತಿದೆ. ಇದರಿಂದಾಗಿ ಅಕ್ಕಪಕ್ಕದ ನಿವಾಸಿಗಳು ಮತ್ತು ಪಾರ್ಕ್‌ನ ವಾಯುವಿಹಾರಿಗಳು ಮೂಗು ಮುಚ್ಚಿಕೊಂಡು ದುರ್ವಾಸನೆಯಿಂದ ನರಕಯಾತನೆ ಅನುಭವಿಸುತ್ತಿದ್ದೇವೆ. ಯುಜಿಡಿ ತುಂಬಿ ಹರಿದು ನಿಂತು ಸೊಳ್ಳೆಯ ಆಶ್ರಯ ತಾಣವಾಗಿದೆ. ಈ ವಿಚಾರವನ್ನು ಫೋನ್, ವಾಟ್ಸ್‌ಆಪ್ ಮೆಸೇಜ್, ವೀಡಿಯೋ ಮುಖಾಂತರ ಕೆಳ ಹಂತದ ಅಧಿಕಾರಿಗಳಿಗೆ ತಿಳಿಸಿ–ತಿಳಿಸಿ ಹೈರಾಣಾಗಿದ್ದೇವೆ. ಅವರು ಸೂಕ್ತ ಕ್ರಮ ಕೈಗೊಳ್ಳದೇ ಇಂದು, ನಾಳೆ ಎಂದು ಮುಂದೂಡುತ್ತಿದ್ದಾರೆ. ಸಮಸ್ಯೆ ಪರಿಹಾರವಾಗಿಲ್ಲ. ಪ್ರತೀ ಬಾರಿ ಫೋನ್ ಮಾಡಿದಾಗಲೂ ಮರದ ಬೇರಿನಿಂದ ತೊಂದರೆಯಾಗಿದೆ. ಪೈಪ್‌ಲೈನ್ ಬದಲಿಸಬೇಕು ಎಂದು ಹೇಳುತ್ತಿದ್ದಾರೆ. ಸಂಬಂಧಪಟ್ಟ ಅಧಿಕಾರಿಗಳು ಶೀಘ್ರವಾಗಿ ಯುಜಿಡಿ ಸರಿಪಡಿಸಿ ಸುತ್ತಮುತ್ತ ವಾಸಿಸುವ ನಿವಾಸಿಗಳ ಮತ್ತು ವಾಯುವಿಹಾರಿಗಳಿಗೆ ಆಗುತ್ತಿರುವ ತೊಂದರೆಯನ್ನು ಶೀಘ್ರವಾಗಿ ನಿವಾರಿಸಬೇಕೆಂದು ತಮ್ಮಲ್ಲಿ ಕಳಕಳಿಯಿಂದ ಪ್ರಾರ್ಥಿಸಿಕೊಳ್ಳುತ್ತೇವೆ. **– ನೊಂದ ನಿವಾಸಿಗಳು, ವಾಯುವಿಹಾರಿಗಳು, ರಾಮಕೃಷ್ಣನಗರ 'ಹೆಚ್' ಬ್ಲಾಕ್, ಮೈಸೂರು**

### ■ ಪ್ರಚೋದನಕಾರಿ ಹೇಳಿಕೆ, ಪ್ರತಿಭಟನೆ, ಕಾನೂನು ಕ್ರಮಕ್ಕೆ ಅರ್ಹ

ಮಾನ್ಯರೆ,

ಮುಡಾ ಹಗರಣ ಸಂಬಂಧ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ ಬೆನ್ನಲ್ಲೇ ಕಾಂಗ್ರೆಸ್ ಪಕ್ಷದ ಬೆಂಬಲಿಗರು, ಮುಖಂಡರು, ಶಾಸಕರು, ಮಂತ್ರಿಗಳು, ಪಕ್ಷದ ವರಿಷ್ಠರು, ರಾಜ್ಯಪಾಲರ ವಿರುದ್ಧ ಮುಗಿಬಿದ್ದಿದ್ದಾರೆ. ರಾಜ್ಯಪಾಲರು ಎನ್ನುವ ಗೌರವವೂ ಇಲ್ಲದೆ ಸಂಪುಟ ಸದಸ್ಯರೇ ರಾಜ್ಯಪಾಲರನ್ನು ಮಾನ ಮರ್ಯಾದೆ ಇಲ್ಲದವರು ಎಂದು ನಿಂದಿಸಿದ್ದಾರೆ. ಪ್ರತಿಕೃತಿಗೆ ಬೆಂಕಿ ಹಚ್ಚುವುದು, ನಿಂದಿಸುವುದು ವ್ಯಾಪಕವಾಗಿ ನಡೆದಿದೆ. ಐವಾನ್ ಡಿಸೋಜಾ, ರಕ್ಷಿತ್ ಶಿವರಾಮ್ ಮುಂತಾದವರು, ಬಾಂಗ್ಲಾ ಪ್ರಧಾನಿಗೆ ಆದ ಗತಿಯೇ ನಿಮಗೂ ಆಗುತ್ತದೆ. ನೀವು ರಾಜ್ಯ ಬಿಟ್ಟು ಪಲಾಯನ ಮಾಡಬೇಕಾಗುತ್ತದೆ ಎಂದು ಪ್ರತಿಭಟನೆ ವೇಳೆ ಎಚ್ಚರಿಸಿದ್ದಾರೆ.

ಇದಕ್ಕೂ ಮೊದಲು ಬಾಂಗ್ಲಾದಲ್ಲಿ ನಡೆದ ಗಲಭೆಯನ್ನು ಉಲ್ಲೇಖಿಸಿ, ಕಾಂಗ್ರೆಸ್ ಮುಖಂಡರಾದ, ಸಲ್ಮಾನ್ ಕುರ್ಶಿದ್, ಮಣಿಶಂಕರ್ ಅಯ್ಯರ್ ಅವರು ಬಾಂಗ್ಲಾದಲ್ಲಿ ಆದ ಸ್ಥಿತಿ ಭಾರತದಲ್ಲೂ ಬರಲಿದೆ ಎಂದು ಪ್ರಚೋದನಾತ್ಮಕ ದೇಶದ್ರೋಹಿ ಹೇಳಿಕೆ ನೀಡಿದ್ದರು. ದೇಶದಲ್ಲಿ ಸ್ವಾತಂತ್ರ್ಯ ನಂತರದ ಕಾಂಗ್ರೆಸ್ ಆಳ್ವಿಕೆಯ ಕಾಲದಲ್ಲಿ ದೇಶದಲ್ಲಿ ಎಷ್ಟು ಬಾರಿ ರಾಷ್ಟ್ರಪತಿ ಆಳ್ವಿಕೆ ಜಾರಿ ಮಾಡಿ ಎಷ್ಟು ಸರ್ಕಾರಗಳನ್ನು ಉರುಳಿಸಲಾಗಿದೆ. ಯಾವ ಕಾರಣಕ್ಕೆ ಎಂಬ ಬಗ್ಗೆ ತಿಳಿದುಕೊಳ್ಳಲಿ, ಕರ್ನಾಟಕದಲ್ಲಿ ಎಸ್.ಆರ್.ಬೊಮ್ಮಾಯಿ ಸರ್ಕಾರವನ್ನು ವಜಾ ಮಾಡಿದ್ದನ್ನು ನೆನಪಿಸಿಕೊಳ್ಳಲಿ. ಆಗ ಯಾರೂ ಈ ರೀತಿ ರಾಜ್ಯಪಾಲರನ್ನು ದೂಷಿಸಲಿಲ್ಲ. ರಾಜ್ಯಪಾಲರನ್ನು ಪಾಕಿಸ್ತಾನಕ್ಕೆ ಹೋಗಿ ಎಂದು ಹೇಳಲಿಲ್ಲ. ಆದರೆ ಇಂದು ಕಾಂಗ್ರೆಸ್ ನಾಯಕರು, ಅದರಲ್ಲೂ ಸರ್ಕಾರದ ಮಂತ್ರಿಗಳೇ ತಾವು ಸಂವಿಧಾನದ ಪ್ರಕಾರ ಪ್ರಮಾಣ ವಚನ ಸ್ವೀಕರಿಸಿದ್ದರೂ ಬಾಯಿಗೆ ಬಂದಂತೆ ಮಾತನಾಡುತ್ತಿದ್ದಾರೆ. ಜನರನ್ನು ಪ್ರಚೋದಿಸಿ, ಗಲಭೆ, ಅರಾಜಕತೆ ಸೃಷ್ಟಿಸಲು ತಮ್ಮ ಪಕ್ಷದ ಜನರಿಗೆ ಕರೆ ಕೊಡುತ್ತಿದ್ದಾರೆ. ಜನ ದಂಗೆ ಏಳುತ್ತಾರೆ. ಸರ್ಕಾರ ವಜಾ ಮಾಡಿದರೆ ರಕ್ತ ಕ್ರಾಂತಿ ಆಗುತ್ತದೆ ಎಂದು ಸಂವಿಧಾನದ ಕೆಳಗೆ ನಿಂತಿರುವವರೆ ಪ್ರಚೋದಿಸುತ್ತಿದ್ದಾರೆ. ಇವರ ನಡೆ ಖಂಡನೀಯ ಹಾಗೂ ಕಾನೂನು ಕ್ರಮಕ್ಕೆ ಅರ್ಹವಾಗಿದೆ. ಪೊಲೀಸ್ ವ್ಯವಸ್ಥೆ ಏನು ಮಾಡುತ್ತಿದೆ?

ಇವರು ಏನೇ ಹೇಳಿದರೂ ಬಾಂಗ್ಲಾ, ಪಾಕಿಸ್ತಾನ, ಶ್ರೀಲಂಕಾದಂತೆ ಭಾರತದಲ್ಲಿ ನಡೆಯುವುದು ಸಾಧ್ಯವಿಲ್ಲ. ಇಂತಹ ಗಲಭೆ, ಪ್ರಚೋದನೆಗಳನ್ನು ಮಟ್ಟ ಹಾಕಲು ಭಾರತದ ಮಿಲಿಟರಿ ಸಮರ್ಥವಿದೆ. ಬೇರೆ ದೇಶಗಳ ಸೇನೆಯಂತೆ ಭಾರತದ ಸೇನೆಗೆ ಅಧಿಕಾರದ ಅಮಲು ಇಲ್ಲಾ ಎನ್ನುವುದನ್ನು ಈ ಮಹನೀಯರು ತಿಳಿಯಬೇಕು. ಒಂದು ವೇಳೆ ಈ ರೀತಿಯ ಜನರಿಂದ ಪ್ರಚೋದನೆ ಇದ್ದಲ್ಲಿ ಅಂತಹವರಿಗೆ ಸೇನೆ ತಕ್ಕ ಪಾಠ ಕಲಿಸಲಿದೆ.

ಒಂದೊಮ್ಮೆ ಕೇಂದ್ರದಲ್ಲಿ ಈಗ ಕಾಂಗ್ರೆಸ್ ಸರ್ಕಾರವೇ ಇದ್ದಿದ್ದರೆ ಕಾನೂನು ಸುವ್ಯವಸ್ಥೆ ಹಾಳಾಗಿದೆ ಎಂದು ರಾಷ್ಟ್ರಪತಿ ಆಡಳಿತ ಜಾರಿಯಾಗುತ್ತಿತ್ತು. ಮೊದಲು ಇವರೆಲ್ಲಾ ತಮ್ಮ ಪಕ್ಷದ ಅಧಿಕಾರದ ಅವಧಿಯ ಹಿನ್ನೆಲೆ ನೆನಪಿಸಿಕೊಳ್ಳಲಿ. ಅಯಾ ರಾಮ್, ಗಯಾ ರಾಮ್, ಭಜನ್ ಲಾಲ್, ಬನ್ಸಿ ಲಾಲ್ ಬಗ್ಗೆ ತಿಳಿದುಕೊಳ್ಳಲಿ. ಕಾನೂನು ಹೋರಾಟ, ಶಾಂತಿಯುತ ಪ್ರತಿಭಟನೆ ಪ್ರಜಾಪ್ರಭುತ್ವದ ಶಕ್ತಿ. ಎನ್ನುವುದನ್ನು ಮರೆಯದಿರಲಿ.

**–ಮುಳ್ಳೂರು ಪ್ರಕಾಶ್, ಮೈಸೂರು.**

---



ರಾಘವೇಂದ್ರ ಸಿ.ಎಸ್.
ಉಪನ್ಯಾಸಕರು
ರಾಮಕೃಷ್ಣ ವಿದ್ಯಾಶಾಲಾ, ಮೈಸೂರು
ಮೊ: 9036389640

**ಈ ಜೀವನ**

# ಪ್ರತಿಭೆಗೆ ತಕ್ಕ ಪುರಸ್ಕಾರವಿರಲಿ...



> "ಕಾಣದೆ ಅಡಗಿರುವ ಪ್ರತಿಭೆಯನ್ನು ಕಸಿದುಕೊಳ್ಳುವುದಕ್ಕೆ ಯಾರಿಂದಲೂ ಸಾಧ್ಯವಾಗದು. ಅದು ಪ್ರತಿಭೆಗೆ ಇರುವ ಶಕ್ತಿ. ಯಾರನ್ನು ಕಡೆಗಣಿಸಿ, ಅವಹೇಳನ ಮಾಡುವ ಕೆಲಸವನ್ನು ಮಾಡಬಾರದು. ಅವರಲ್ಲಿ ಇದುವರೆಗೂ ಯಾರು ಗುರುತಿಸದಿದ್ದ ವಿಶೇಷವಾದ ಕಾರ್ಯಕ್ಷಮತೆಯನ್ನು ಕಂಡುಕೊಳ್ಳುವ, ಅಂತರಾಳದಲ್ಲಿ ಸುಪ್ತವಾಗಿ ಅಡಗಿರುವ ಪ್ರತಿಭೆಯನ್ನು ಗುರುತಿಸಿ, ಸಾಧ್ಯವಾದರೆ ಅದಕ್ಕೆ ಪ್ರೋತ್ಸಾಹವನ್ನು ನೀಡುವ ಗುಣವನ್ನು ಬೆಳೆಸಿಕೊಳ್ಳಬೇಕು. ದೀಪ ತಾನೆ ಉರಿದರು ಬೆಳಕು ನೀಡುವಂತೆ ಪ್ರತಿಭೆಗೆ ಮನ್ನಣೆ ನೀಡುವ ದೊಡ್ಡ ಗುಣವನ್ನು ಬೆಳೆಸಿಕೊಳ್ಳಬೇಕು."

ಎಲ್ಲೋ ಹುಡುಕಿದೆ ಇಲ್ಲದ ಕೆಲಸವ ನಿರುದ್ಯೋಗಿಗಳ ಅಮಲೊಳಗೆ, ಇಲ್ಲೇ ಇರುವ ಪ್ರತಿಭೆಯ ಗುರುತಿಸದಾದರು ನನ್ನೊಳಗೆ, ಕೆಲಸ ಹುಡುಕಿ, ಹುಡುಕಿ ಸಾಕಾಗಿದೆ ಸರ್ ......! ನೀವೇನೊ ಓದಿ, ಸಾಮಾನ್ಯ ಜ್ಞಾನ ಬೆಳೆಸಿಕೊಳ್ಳಿ, ನಿಮ್ಮ ನಿಮ್ಮ ಪ್ರತಿಭೆಗೆ ಮನ್ನಣೆ ಸಿಗುತ್ತದೆ ಅಂತ ತರಗತಿಯಲ್ಲಿ ಹೇಳ್ತಾ ಇದ್ರಿ! ಆದರೆ ನೋಡಿ ಎಲ್ಲ ಕಡೆ ಶಿಫಾರಸ್ಸು, ಇವ ನಮ್ಮವನು ಎಂಬ ಹೆಚ್ಚುಗಾರಿಕೆನೇ ಮುಖ್ಯವಾಗಿ ಪ್ರತಿಭೆಗೆ ಆದ್ಯತೆ ಕೊಡುವವರೇ ಇಲ್ಲದಂತಾಗಿದೆ..........! ಪದವಿ ಪಡೆದ ವಿದ್ಯಾರ್ಥಿಯು ತನಗೆ ತಕ್ಕ ಉದ್ಯೋಗ ಸಿಗದೆ ನಿರಾಶೆಯಿಂದಾಡಿದ ಮಾತುಗಳಿವು.

ಅವನಿದ್ದ ಪರಿಸ್ಥಿತಿಯಲ್ಲಿ ನಾನು ಏನೇ ಹೇಳಿದರೂ ಅದನ್ನು ಕೇಳಿಸಿಕೊಳ್ಳುವ ತಾಳ್ಮೆಯಾಗಲಿ–ಸಂಯಮವಾಗಲಿ ಅವನಿಗಿರಲಿಲ್ಲ. ಕೊನೆಗೆ ನಾನು ಅವನಿಗೆ ಕೇಳಿದ ಪ್ರಶ್ನೆ 'ಒಂದು ವೇಳೆ ನೀನೇ ಉದ್ಯೋಗವನ್ನು ಕೊಡುವಂತಾದರೆ ಅಂತಹ ಸನ್ನಿವೇಶದಲ್ಲಿ ನಿನಗೆ ಬೇಕಿರುವುದು ಒಬ್ಬ ಅಭ್ಯರ್ಥಿ ಎಂದು ಭಾವಿಸು. ಆ ಹುದ್ದೆಯ ಸಂದರ್ಶನದಲ್ಲಿ ಕನಿಷ್ಠ ಇಪ್ಪತ್ತು ಜನರು ಬಂದಿದ್ದಾರೆಂದು ಕಲ್ಪನೆ ಮಾಡಿಕೊ. ಆಗ ನೀನು ಆ ಇಪ್ಪತ್ತು ಜನರಲ್ಲಿ ಯಾರನ್ನು ಆರಿಸಿಕೊಳ್ಳುವೆ?' ತಕ್ಷಣವೇ ಆತ 'ಖಂಡಿತವಾಗಿಯು ಎಲ್ಲರಿಗಿಂತ ಉತ್ತಮವಾದ ಅಭ್ಯರ್ಥಿಯನ್ನು ಆರಿಸಿಕೊಳ್ಳುವೆ' ಎಂದುತ್ತರ ನೀಡಿದ.

ಆಗ ನಾನು ಹೇಳಿದೆ; 'ನೋಡು ಇದೇ ತರಹ ಯಾವಾಗಲೂ ಹುದ್ದೆ ಖಾಲಿ ಇರುವ ಕಡೆಗಳಲ್ಲಿ ಉತ್ತಮರನ್ನು ಆಯ್ಕೆ ಮಾಡಿಕೊಳ್ಳುವ ಆಲೋಚನೆಯನ್ನು ಮಾಡುತ್ತಾರೆ. ನಿನಗೆ ಉದ್ಯೋಗ ಸಿಗಲಿಲ್ಲ ಎಂದ ಮಾತ್ರಕ್ಕೆ ನೀನು ಚೆನ್ನಾಗಿ ಸಂದರ್ಶನ ಮಾಡಿಲ್ಲ ಎಂದರ್ಥವಲ್ಲ, ನಿನಗಿಂತಲೂ ಉತ್ತಮವಾಗಿ ಸಂದರ್ಶನ ಎದುರಿಸಿದ, ನಿನಗಿಂತಲೂ ಪ್ರತಿಭೆ ಇರುವವನಿಗೆ ಉದ್ಯೋಗ ಸಿಕ್ಕಿದೆ ಎಂದರ್ಥ. ಧೈರ್ಯಗೆಡಬೇಡ ಮತ್ತೆ ಪ್ರಯತ್ನಿಸು, ನಿನ್ನ ಪ್ರತಿಭೆಗೆ ಮನ್ನಣೆ ಸಿಕ್ಕೇ ಸಿಗುತ್ತದೆ' ಎಂದು ಸಮಾಧಾನಪಡಿಸಿ ಕಳುಹಿಸಿದೆ.

ಮೊದಲೆಲ್ಲ ಪದವಿ ಪಡೆದವರ ಸಂಖ್ಯೆ ತುಂಬಾ ಕಡಿಮೆ ಮಟ್ಟದಲ್ಲಿತ್ತು.ಆದರೆ ಇತ್ತೀಚೆಗೆ ಪದವಿ ಪಡೆಯುತ್ತಲಿರುವವರು ಹೆಚ್ಚಾಗುತ್ತಿದ್ದು ದಿನೇ ದಿನೇ ಕೆಲಕ್ಕಾಗಿ ಅರ್ಜಿ ಸಲ್ಲಿಸುವವರ ಸಂಖ್ಯೆಯು ಹೆಚ್ಚಾಗುತ್ತಿದೆ. ಕನಿಷ್ಠ ಒಂದು ಹುದ್ದೆಗೆ ಇಪ್ಪತ್ತು ಜನರು ಬಂದರೆ ಇರುವವರಲ್ಲೇ ಅತ್ಯುತ್ತಮವಾದವರನ್ನು ಆಯ್ಕೆ ಮಾಡಿಕೊಳ್ಳಬೇಕಾದ ಅನಿವಾರ್ಯತೆ ಉದ್ಯೋಗವನ್ನು ನೀಡುವವರಿಗೆ ಇದ್ದೇ ಇರುತ್ತದೆ. ಎಲ್ಲೋ ಒಂದೆರಡು ಕಡೆ ಅಥವಾ ಅದಕ್ಕಿಂತ ಹೆಚ್ಚು ಕಡೆ ಶಿಫಾರಸ್ಸು, ಜಾತಿ, ಧರ್ಮ ಎಂಬಿತ್ಯಾದಿ ಅಂಶಗಳೇ ಪ್ರಮುಖ ಎನಿಸುವಂತಿದ್ದರೂ ಬಹುತೇಕ ಪ್ರತಿಭೆಗೆ ಪ್ರಾಶಸ್ತ್ಯ ಕೊಡುವುದನ್ನು ಗಮನಿಸಬಹುದು.

ಪ್ರತಿಭೆಯೆಂಬುದು, ಕಾರ್ಯಕ್ಷಮತೆಯೆಂಬುದು ಪ್ರತಿಯೊಬ್ಬರಲ್ಲೂ ಇದ್ದೇ ಇರುತ್ತದೆ. ಒಂದಲ್ಲ ಒಂದು ಕ್ಷೇತ್ರದಲ್ಲಿ ಅವರ ಪ್ರತಿಭೆ ಹಾಸುಹೊಕ್ಕಾಗಿರುತ್ತದೆ. ಪ್ರತಿಭೆ ಎಂಬುದು ಪ್ರತಿಯೊಬ್ಬರಲ್ಲೂ ಅಡಕವಾಗಿರುತ್ತದೆ ಎಂಬ ವಿಚಾರ ಖಾತರಿಯಾದ ಮೇಲೆ ಅದರ ಒಳ ಆವರಣದಿಂದ ತನ್ನತನವನ್ನು ಸಾದರಪಡಿಸಿ ಸ್ಥಿರವಾದ ಹೆಜ್ಜೆ ಗುರುತುಗಳನ್ನು ಮೂಡಿಸುವುದು ಜೀವನ ಗಣ್ಯ ಕಾರ್ಯವಾಗಿದೆ. ಅಂತೆಯೇ ಅದನ್ನು ಗುರುತಿಸಿಕೊಳ್ಳುವ–ಗುರುತಿಸಿ ಅದನ್ನು ಬೆಳೆಸುವ, ಪ್ರೋತ್ಸಾಹಿಸುವ ಕೆಲಸವನ್ನು ಮಾಡಬೇಕಷ್ಟೆ. ಪ್ರತಿಯೊಬ್ಬ ವಿದ್ವಾಂಸರು ತಮಗೆ ತಿಳಿದ ಧಾಟಿಯಲ್ಲಿ ಪ್ರತಿಭೆಯ ವ್ಯಾಖ್ಯಾನವನ್ನು ಮಾಡಿದ್ದಾರೆ. ಅವುಗಳಲ್ಲಿ ಮುಖ್ಯವಾಗಿ **ಪ್ರಜ್ಞಾ 'ನವನವೋಲ್ಲೇಖ ಶಾಲಿನೀ' ಪ್ರತಿಭಾ ಮಾತಾ (ಹೊಸ ಹೊಸ ಭಾವಗಳನ್ನು ಕಾಣುವ ಪ್ರಜ್ಞೆ) ಎಂದು ಪ್ರತಿಭೆಯನ್ನು ಭಟ್ಟತೌತ ಲಕ್ಷಣೀಕರಿಸಿದ್ದಾನೆ. ನವನವೋಲ್ಲೇಖ ಶಾಲಿನೀ' ಎಂಬುದಕ್ಕೆ 'ನವನವೋನ್ಮೇಷ ಶಾಲಿನೀ'**

ಎಂಬ ಪಾಠಾಂತರವುಂಟು. ಉನ್ಮೇಷ ಎಂದರೆ ಹೊಳಹು; ಉಲ್ಲೇಖ ಎಂದರೆ ವರ್ಣನೆ. ಪ್ರತಿಭೆ ಎರಡೂ ಹೌದು. – (ಭಾರತೀಯ ಕಾವ್ಯ ಮೀಮಾಂಸೆ. ತೀ.ನಂ.ಶ್ರೀ )

ಇಲ್ಲಿ ಪ್ರತಿಭೆ ಎಂದರೆ ಏನು ಎಂಬುದಕ್ಕೆ ಭಟ್ಟತೌತ ನೀಡಿರುವ ವ್ಯಾಖ್ಯಾನವನ್ನು ಗಮನಿಸಬಹುದು. ಹೊಸ ಹೊಸ ಭಾವಗಳನ್ನು, ಆಲೋಚನೆಗಳನ್ನು ಕಾಣುವ ಪ್ರಜ್ಞೆಗೆ ಪ್ರತಿಭೆ ಎನ್ನಬಹುದು. ಅಂದರೆ ಎಲ್ಲರೂ ನೋಡುವ ದೃಷ್ಟಿಗಿಂತ ವಿಶೇಷವಾದ ಹಾಗೂ ವಿಭಿನ್ನವಾದ ದೃಷ್ಟಿಯಿಂದ ಆಲೋಚನೆ ಮಾಡಿದರೆ ಅದು ಪ್ರತಿಭೆ ಎನಿಸಿಕೊಳ್ಳುತ್ತದೆ.

ಪ್ರತಿಭೆ ಎಂಬುದು ಪ್ರತಿಯೊಬ್ಬರಲ್ಲೂ ಅಡಕವಾಗಿರುತ್ತದೆ. ನನಗೆ ತಿಳಿದ ಮಟ್ಟಿಗೆ ಈ ಭೂಮಿಯಲ್ಲಿ ಪ್ರತಿಭೆ ಇಲ್ಲದವರು ಯಾರು ಇಲ್ಲ. ಮರಕ್ಕಿಂತ ಮರ ದೊಡ್ಡದು ಎಂಬ ನಾಣ್ಣುಡಿಯಂತೆ ಪ್ರತಿಯೊಬ್ಬರಲ್ಲೂ ಅವರದೇ ಆದ ಪ್ರತಿಭೆ ಇರುತ್ತದೆ. ಅದನ್ನು ಸೂಕ್ಷ್ಮವಾಗಿ ಗ್ರಹಿಸುವ ಅಥವಾ ಪ್ರೋತ್ಸಾಹಿಸುವ ಕೆಲಸವನ್ನು ಮುಕ್ತ ಮನಸ್ಸಿನಿಂದ ಮಾಡಬೇಕು. ನನಗೆ ಇದನ್ನು ಹೇಳುವಾಗ ಹಿಂದೊಮ್ಮೆ ಓದಿದ ಘಟನೆಯೊಂದು ನೆನಪಿಗೆ ಬರುತ್ತದೆ. ಬಹುಶಃ ಈ ಘಟನೆ ಡಾ.ಗುರುರಾಜ್ ಕರ್ಜಗಿ ಅವರು ಬರೆದಿರುವ **ಕರುಣಾಳು ಬಾ ಬೆಳಕೆ** ಅಥವಾ ಎಸ್.ಷಡಕ್ಷರಿ ಅವರು ಬರೆದಿರುವ **ಕ್ಷಣ ಹೊತ್ತು ಆಣಿ ಮುತ್ತು** ಪುಸ್ತಕಗಳಲ್ಲಿ ದಾಖಲಾಗಿರಬಹುದು.

**ಘಟನೆ:** ರವಿ ಮತ್ತು ರಮೇಶ ಆತ್ಮೀಯ ಗೆಳೆಯರು. ಒಮ್ಮೆ ರವಿಯ ಮನೆಗೆ ರಮೇಶ ಬಂದಿರುತ್ತಾನೆ. ರವಿಯ ಮಡದಿ ಮನೆಯಲ್ಲಿ ಇರದ ಕಾರಣ ಸ್ವತಃ ತನ್ನ ಗೆಳೆಯನಿಗೆ ರವಿ ಅಡುಗೆ ಮನೆಗೆ ಚಹಾವನ್ನು ತಯಾರು ಮಾಡಲು ಹೋಗಿರುತ್ತಾನೆ. ಆಗ ಮನೆಯಲ್ಲಿದ್ದ ರವಿಯ ಮಗನನ್ನು ರಮೇಶ ಮಾತನಾಡಿಸುತ್ತಾನೆ.

ಸಾಮಾನ್ಯವಾಗಿ ಈ ಗೆಳೆಯರು ಅಥವಾ ಸಂಬಂಧಿಕರು ಮತ್ತೊಬ್ಬರ ಮನೆಗೆ ಹೋದರೆ ಅಲ್ಲಿರುವ ಮಕ್ಕಳನ್ನು ಪ್ರಶ್ನೆ ಮಾಡಿ ಅವರನ್ನು ಅಣಕಿಸಿ ಅವರಿಗಿಂತ ತಮ್ಮ ಮಕ್ಕಳು ಶ್ರೇಷ್ಠ ಎಂಬುದನ್ನು ತೋರಿಸಿಕೊಳ್ಳಲು ಅಪೇಕ್ಷಿಸುತ್ತಾರೆ. ಎಲ್ಲರೂ ಹೀಗೆ ಮಾಡುತ್ತಾರೆ ಎಂದೇನಿಲ್ಲ, ಕೆಲವರು ಮಾತ್ರ ಹೀಗೆ ಮಾಡುತ್ತಾರೆ!

ಹಾಗೆಯೇ ಇಲ್ಲಿ ರಮೇಶ ರವಿಯ ಮಗನ ಮುಂದೆ ಒಂದು ರೂ. ನಾಣ್ಯ ಮತ್ತು ಐದು ರೂಪಾಯಿಯ ನಾಣ್ಯವನ್ನು ತೋರಿಸುತ್ತಾ ಇವೆರಡರಲ್ಲಿ ಯಾವ ನಾಣ್ಯ ದೊಡ್ಡದು ಎಂದು ಪ್ರಶ್ನಿಸುತ್ತಾನೆ. ರವಿಯ ಮಗ ಒಂದು ರೂ. ದೊಡ್ಡದು ಎಂದು ಹೇಳುತ್ತಾನೆ. ಆ ಒಂದು ರೂ. ನಾಣ್ಯವನ್ನು ಆ ಹುಡುಗನಿಗೆ ನೀಡುತ್ತಾನೆ. ಮತ್ತೆ ಮತ್ತೆ ಇದನ್ನೇ ಮುಂದುವರಿಸಿದಾಗಲೂ ಬಾಲಕ ಎಷ್ಟೇ ಬಾರಿ ಪುನರಾವರ್ತನೆ ಮಾಡಿದರೂ ಅದೇ ಉತ್ತರವನ್ನು ನೀಡುತ್ತಾನೆ. ಪ್ರತಿ ಬಾರಿ ರಮೇಶ ಪ್ರಶ್ನಿಸಿದಾಗ ಆ ಬಾಲಕ ಒಂದು ರೂ. ನಾಣ್ಯವೇ ದೊಡ್ಡದು ಎಂದು ಉತ್ತರಿಸುತ್ತಾನೆ. ರಮೇಶ ಅವನಿಗೆ ಒಂದು ರೂಪಾಯಿಯನ್ನು ಕೊಡುತ್ತಲೇ ಹೋಗುತ್ತಾನೆ. ಇತ್ತ ಚಹಾವನ್ನು ತಯಾರಿಸಲು ಹೋಗಿದ್ದ ರವಿ ತನ್ನ ಸ್ನೇಹಿತನಿಗೆ ವಿಶೇಷವಾಗಿ ಚಹವನ್ನು ನೀಡಬೇಕು ಎಂಬ ಕಾರಣದಿಂದ ಸ್ವಲ್ಪ ತಡವಾಗಿ ಚಹಾ ತೆಗೆದುಕೊಂಡು ಬಂದಾಗ ಆತನ ಎದುರಲ್ಲೇ ರಮೇಶ ಮತ್ತದೇ ಪ್ರಶ್ನೆಯನ್ನು ಕೇಳಿ ರವಿಯ ಮಗನ ದಡ್ಡತನವನ್ನು ರವಿಗೆ ತೋರಿಸುತ್ತಾನೆ. ಸಾಮಾನ್ಯವಾಗಿ ಯಾವುದೇ ತಂದೆ ತಾಯಂದಿರಿಗೆ ತಮ್ಮ ಮಗ ದಡ್ಡನಿದ್ದರೂ ಅದನ್ನು ಇತರರೊಂದಿಗೆ ತೋರಿಸುವಂತದಾಗ ಇರಿಸು ಮುರಿಸು ಉಂಟಾಗುವುದು ಸಹಜ. ಅದೇ ರೀತಿಯಲ್ಲಿ ರವಿಗೂ ಇರಿಸುಮುರಿಸು ಉಂಟಾಗುತ್ತದೆ. ತನ್ನ ಮಗ ಇಷ್ಟು ದಡ್ಡ ಎಂದು ಒಪ್ಪಿಕೊಳ್ಳಲು ತಯಾರಿಲ್ಲದ ಆತನು ತನ್ನ ಮಗನಿಗೆ ಬೈಯ್ಯುವ ಕೆಲಸವನ್ನು ಮಾಡುತ್ತಾನೆ. ನಿನಗೆ ಅಷ್ಟು ತಿಳಿದಿಲ್ಲವಾ. ಒಂದು ರೂಪಾಯಿಯ ನಾಣ್ಯ ಹಾಗೂ ಐದು ರೂಪಾಯಿಯ ನಾಣ್ಯದಲ್ಲಿ ಐದು ರೂಪಾಯಿಯ ನಾಣ್ಯ ದೊಡ್ಡದು ಎಂದು ತಿಳಿದಿಲ್ಲವೇ ಎಂದು ಕೋಪದಿಂದ ಪ್ರಶ್ನಿಸುತ್ತಾನೆ. ಆಗ ರವಿಯ ಮಗ ಸಮಾಧಾನವಾಗಿ ನೀವು ಬರುವುದು ಇನ್ನೂ ಸ್ವಲ್ಪ ಹೊತ್ತು ತಡವಾಗಿದ್ದರೆ ಚೆನ್ನಾಗಿರುತ್ತಿತ್ತು ಎಂದು ಉತ್ತರಿಸುತ್ತಾನೆ. ಕೋಪಗೊಂಡಿದ್ದ ರವಿ, ಯಾಕೆ ನನ್ನ ಮಾನ–ಮರ್ಯಾದೆ ಇನ್ನು ತೆಗೆಯಬೇಕಾಗಿತ್ತಾ ಎಂದು ಕೇಳಿದಾಗ ಮಗ ಶಾಂತವಾಗಿ ಉತ್ತರವನ್ನು ನೀಡುತ್ತಾನೆ. ಅಪ್ಪ ಒಂದು ರೂಪಾಯಿ ನಾಣ್ಯಕ್ಕಿಂತ ಐದು ರೂಪಾಯಿ ನಾಣ್ಯ ಹೆಚ್ಚು ಎಂದು ನನಗೂ ಗೊತ್ತು ಆದರೆ, ನಾನು ಮೊದಲೇ ಐದು ರೂಪಾಯಿ ನಾಣ್ಯ ಅಂತ ಹೇಳಿದ್ದರೆ ಅವರು ಆಟವನ್ನು ಅಲ್ಲಿಗೆ ನಿಲ್ಲಿಸುತ್ತಿದ್ದರು. ನನ್ನ ಬಳಿ ಕೇವಲ ಐದು ರೂಪಾಯಿ ಮಾತ್ರ ಉಳಿಯುತ್ತಿತ್ತು. ಆದರೆ ನಾನು ಒಂದು ರೂಪಾಯಿ ದೊಡ್ಡದು ಎಂದು ಹೇಳುತ್ತಾ ಹೋದೆ, ಅವರು ಆಟವನ್ನು ಮುಂದುವರಿಸುತ್ತಾ ಹೋದರು. ನೋಡು ಈಗ ನನ್ನ ಕೈಯ್ಯಲ್ಲಿ ಐವತ್ತು ನಾಣ್ಯಗಳಿವೆ ಎಂದು ಉತ್ತರಿಸುತ್ತಾನೆ. ರವಿಯ ಮಗನ ಮಾತನ್ನು ಕೇಳಿದಂತಹ ರಮೇಶನಿಗೆ ಆಶ್ಚರ್ಯ. ಅಲ್ಲಿವರೆಗೂ ರಮೇಶ ತಾನೇ ಬುದ್ಧಿವಂತನೆಂದು ಭಾವಿಸಿಕೊಂಡು ಪ್ರಶ್ನೆಗಳನ್ನು ಕೇಳುತ್ತಾ ನಾಣ್ಯಗಳನ್ನು ನೀಡುತ್ತಾ ಇರುತ್ತಾನೆ. ಆದರೆ ಆ ಬಾಲಕ ಅವರಿಗಿಂತ ಬುದ್ಧಿವಂತ ಎನಿಸಿಕೊಂಡು ಹಣವನ್ನು ಸಂಪಾದಿಸುತ್ತಾನೆ.

ಘಟನೆ ಅಥವಾ ಕಥೆಯ ಸತ್ಯ ಅಸತ್ಯತೆಗಳು ಏನೇ ಇದ್ದರೂ ಗಮನಿಸಬೇಕಾದ ವಿಚಾರವೊಂದಿದೆ. ಪ್ರತಿಭೆ, ಸೃಜನಶೀಲತೆ ಎಂಬುದು ಪ್ರತಿಯೊಬ್ಬರಲ್ಲೂ ಇರುತ್ತದೆ. ಅದನ್ನು ಗುರುತಿಸಿ, ಪ್ರೋತ್ಸಾಹಿಸುವ, ಮಾರ್ಗದರ್ಶನ ನೀಡುವವರು ಬೇಕಾಗುತ್ತದೆ. ದುರಂತ ಎಂದರೆ ಈ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸುವವರಿಗಿಂತ ನಿರುತ್ಸಾಹವನ್ನು ತುಂಬುವವರೇ ಹೆಚ್ಚಾಗಿದ್ದಾರೆ.

ಕೆಲವರಿಗೆ ಈ ಪ್ರತಿಭೆ ಎಂಬುದು ಜನ್ಮದತ್ತವಾಗಿ ಬಂದಿದ್ದರೆ ಮತ್ತೆ ಕೆಲವರಿಗೆ ಸನ್ನಿವೇಶ, ಸಂದರ್ಭ, ಪರಿಸ್ಥಿತಿಗಳು ಪ್ರತಿಭೆ ಅನಾವರಣಗೊಳ್ಳಲು ಸಹಾಯ ಮಾಡುತ್ತವೆ.

**ಉದಾಹರಣೆಗೆ:** ಬೇಡನೊಬ್ಬನು ಬಂದು ಬಾಣ ಹೂಡಿ ಸಂತೋಷದಿಂದ ವಿಹರಿಸುತ್ತಿದ್ದ ಗಂಡು ಹಕ್ಕಿಯನ್ನು ಕೊಂದು ಬಿಡುತ್ತಾನೆ. ಅದರ ಸಂಗಾತಿ ಹೆಣ್ಣು ಹಕ್ಕಿಯು ಸಂಕಟದಿಂದ ಕೂಗಲಾರಂಭಿಸುತ್ತದೆ. ಈ ಹೃದಯ ವಿದ್ರಾವಕ ಸನ್ನಿವೇಶವನ್ನು ನೋಡಿ, ಕರುಣೆ, ದುಃಖ, ಕೋಪದಿಂದ ವಾಲ್ಮೀಕಿ ಮಹರ್ಷಿಗಳು ಬೇಡನನ್ನು ಶಪಿಸುವಾಗ **ಮಾ ನಿಷಾದ ಪ್ರತಿಷ್ಠಾಂ ತ್ವಮಗಮಃ ಶಾಶ್ವತೀಃ ಸಮಾಃ ಯತ್ಕ್ರೌಂಚಮಿಥುನಾದೇಕಮವಧೀಃ ಕಾಮ ಮೋಹಿತಮ್**

ಎಂಬ ಶ್ಲೋಕ ಅವರ ಬಾಯಿಂದ ಹೊರಬಂದದ್ದು ರಾಮಾಯಣ ರಚಿಸಲು ಪ್ರೇರಣೆ ನೀಡಿತು. ಹೀಗೆ ಒಂದೊಂದು ಸನ್ನಿವೇಶವು ಕೂಡ ಸೂಕ್ತವಾಗಿರುವ ಪ್ರತಿಭೆಯನ್ನು ಹೊರ ಬರುವಂತೆ ಮಾಡಬಲ್ಲದು.

ಪ್ರತಿಭೆಯನ್ನು ಹೊರಬರದಂತೆ ಮಾಡಿದರು ಕೂಡ ಒಂದಲ್ಲ ಒಂದು ದಿನ ಅದು ಜಗತ್ತಿಗೆ ಪರಿಚಯವಾಗುತ್ತದೆ. ಹೂವಿನ ಪರಿಮಳ ಎಲ್ಲೆಡೆ ಪಸರಿಸುವಂತೆ ಪ್ರತಿಭೆಯ ಅನಾವರಣ ಆಗುತ್ತದೆ. ಮತ್ತೊಬ್ಬರನ್ನು ನೋಡಿ ಹೊಟ್ಟೆಕಿಚ್ಚು–ಅಸೂಯೆ ಪಡುವವರು, ಪ್ರತಿಭೆ ತಕ್ಕ ಮನ್ನಣೆ ನೀಡದವರು, ಬೆಳೆಯಲು ಪ್ರೋತ್ಸಾಹ ನೀಡದವರು ಯಾರು ಏನೇ ಮಾಡಿದರು ಪ್ರತಿಭೆ ಒಳ್ಳೆಯ ಸ್ಥಾನವನ್ನು ತಂದು ಕೊಟ್ಟೇ ಕೊಡುತ್ತದೆ. ಹಣ್ಣಿರುವ ಮರಕ್ಕೆ ಹೆಚ್ಚು ಪೆಟ್ಟು ಬೀಳುವಂತೆ ಪ್ರತಿಭೆವುಳ್ಳವರಿಗೆ, ಒಳ್ಳೆಯವರಿಗೆ ಹೆಚ್ಚು ಕಷ್ಟಗಳು–ಸಂಕಷ್ಟಗಳು ಬರಬಹುದು ಆದರೆ ಖಂಡಿತವಾಗಿಯೂ ಅವೆಲ್ಲ ಒಂದಲ್ಲ ಒಂದು ದಿನ ಸೂಕ್ತ ಸಮಯದಲ್ಲಿ ಕಣ್ಮರೆಯಾಗಿ ಪ್ರತಿಭೆ ಪ್ರಖರವಾಗಿ ಪ್ರಜ್ವಲಿಸುವಂತೆ ಮಾಡಬಲ್ಲದು. ಮತ್ತೊಬ್ಬರನ್ನು ಬೆಳೆಯಲು ಬಿಡದವರು, ಮತ್ತೊಬ್ಬರ ಪ್ರತಿಭೆಯನ್ನು ಟೀಕಿಸುವವರು, ಪ್ರತಿಭೆ ಉಳ್ಳವರಿಗೆ ಸಿಗಬೇಕಾದ ಅವಕಾಶವನ್ನು ಕಸಿಯುವವರು ಹೆಚ್ಚೆಂದರೆ ದ್ವೇಷ ಮಾಡಬಹುದು. ಇನ್ನು ಮುಂದುವರೆದು ಅವರಿಗೆ ಸಲ್ಲಬೇಕಾದ ಹಣವನ್ನು ಕಸಿದುಕೊಳ್ಳಬಹುದು, ಆಸ್ತಿಯನ್ನು ಲಪಟಾಯಿಸಬಹುದು, ವ್ಯಕ್ತಿಯ ಬಗ್ಗೆ ಇಲ್ಲಸಲ್ಲದ ಹಾಗೂ ಕೈಲಾಗದವನ ಕೊನೆಯ ಅಸ್ತ್ರವಾಗಿ ಅಪಪ್ರಚಾರ ಮಾಡಬಹುದು. ಆದರೆ ವ್ಯಕ್ತಿಯಲ್ಲಿ ಅಂತರ್ಗತದಿ ಇಳಿತವಾಗಿರುವ, ಕಾಣದೆ ಅಡಗಿರುವ ಪ್ರತಿಭೆಯನ್ನು ಕಸಿದುಕೊಳ್ಳುವುದಕ್ಕೆ ಯಾರಿಂದಲೂ ಸಾಧ್ಯವಾಗದು. ಅದು ಪ್ರತಿಭೆಗೆ ಇರುವ ಶಕ್ತಿ. ಯಾರನ್ನು ಕಡೆಗಣಿಸಿ, ಅವಹೇಳನ ಮಾಡುವ ಕೆಲಸವನ್ನು ಮಾಡಬಾರದು. ಅವರಲ್ಲಿ ಇದುವರೆಗೂ ಯಾರು ಗುರುತಿಸದಿದ್ದ ವಿಶೇಷವಾದ ಕಾರ್ಯಕ್ಷಮತೆಯನ್ನು ಕಂಡುಕೊಳ್ಳುವ, ಅಂತರಾಳದಲ್ಲಿ ಸುಪ್ತವಾಗಿ ಅಡಗಿರುವ ಪ್ರತಿಭೆಯನ್ನು ಗುರುತಿಸಿ, ಸಾಧ್ಯವಾದರೆ ಅದಕ್ಕೆ ಪ್ರೋತ್ಸಾಹವನ್ನು ನೀಡುವ ಗುಣವನ್ನು ಬೆಳೆಸಿಕೊಳ್ಳಬೇಕು. ದೀಪ ತಾನೆ ಉರಿದರು ಬೆಳಕು ನೀಡುವಂತೆ ಪ್ರತಿಭೆಗೆ ಮನ್ನಣೆ ನೀಡುವ ದೊಡ್ಡ ಗುಣವನ್ನು ಬೆಳೆಸಿಕೊಳ್ಳಬೇಕು.

ಪ್ರತಿಭೆಯು ತಾಯಿ ಗರ್ಭದಿ ಬೆಚ್ಚನೆ ಅಡಗಿರುವ ಕಂದಮ್ಮನಂತೆ ಒಂಬತ್ತು ತಿಂಗಳ ಅನಂತರ ಹೊರ ಬರುವ ಜೀವಧಾತುವಿನಂತೆ ಹೊರ ಚಿಮ್ಮಿ ಪ್ರಕಟಗೊಂಡಾಗ ನಮ್ಮೊಳಗಿನ ಅದ್ವಿತೀಯ ಶಕ್ತಿಯನ್ನು ಸಾಕಾರಗೊಳಿಸಿಕೊಂಡಂತೇ ಸರಿ. ಪ್ರತಿಭೆ ಇದ್ದು ಪ್ರಕಟವಾಗಲಿಲ್ಲವೆಂದರೆ ನಮ್ಮನ್ನು ನಾವೇ ಕೊಂದು ಕೊಂಡಂತೆಯೇ ಸರಿ. ಪ್ರತಿಯೊಬ್ಬರಲ್ಲೂ ಕಾಣದ ಕೈಯ್ಯಂತೆ ಅಮೂರ್ತವಾಗಿರುವ ಪ್ರತಿಭೆಯನ್ನು ಮೂರ್ತರೂಪಗೊಳಿಸಿ ಈ ಜಗತ್ತಿನಲ್ಲಿ ತಮ್ಮ ಇರುವಂತಿಕೆಯನ್ನು ಸಾಲಂಕೃತಗೊಳಿಸಿದಾಗ ಬದುಕು ಸಾರ್ಥಕವಾಗುವುದರಲ್ಲಿ ಎರಡು ಮಾತಿಲ್ಲ.

---

# ಶೀಘ್ರದಲ್ಲೇ ಜನರ ಕೈ ಸೇರಲಿದೆ 'ಫುಡ್ಸ್ ಟೆಸ್ಟಿಂಗ್ ಕಿಟ್ಸ್'

## ಆಹಾರ ಪದಾರ್ಥಗಳ ಗುಣಮಟ್ಟ ಪರಿಶೀಲಿಸುವುದು ಇನ್ನು ಸುಲಭ..!

**ಬೆಂಗಳೂರು:** ಅಸುರಕ್ಷಿತ ಆಹಾರಗಳ ಮೇಲೆ ಸಮರ ಸಾರಿರುವ ಆಹಾರ ಮತ್ತು ಗುಣಮಟ್ಟ ಸುರಕ್ಷತಾ ಇಲಾಖೆ, ಜನರಿಗೆ ತಾವು ತಿನ್ನುವ ಆಹಾರವನ್ನು ತಾವೇ ಪರೀಕ್ಷಿಸುವ ಅವಕಾಶವನ್ನು ನೀಡಲು ಸಜ್ಜಾಗಿದೆ. ಆಹಾರದ ಗುಣಮಟ್ಟವನ್ನು ಪರೀಕ್ಷಿಸಲು ಫುಡ್ ಕೋರ್ಟ್ ಮತ್ತು ಮಾಲ್‌ಗಳ ಬಳಿ ಸಾರ್ವಜನಿಕ ಸ್ಥಳಗಳಲ್ಲಿ ಆಹಾರ ಪರೀಕ್ಷಾ ಕಿಟ್‌ಗಳು ಲಭ್ಯವಿರಲಿದ್ದು, ಜನರೇ ತಾವು ತಿನ್ನುವ ಆಹಾರದ ಗುಣಮಟ್ಟವನ್ನು ಪರಿಶೀಲನೆ ನಡೆಸಬಹುದು ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜನರು ತಾವು ಸೇವಿಸುವ ಆಹಾರದ ಗುಣಮಟ್ಟವನ್ನು ತಾವೇ ಪರೀಕ್ಷಿಸಿಕೊಳ್ಳುವುದಕ್ಕಾಗಿ ಹೋಟೆಲ್ ರೆಸ್ಟೋರೆಂಟ್, ಫುಡ್‌ಪಾರ್ಕ್‌ನಂತಹ ಸಾರ್ವಜನಿಕ ಸ್ಥಳಗಳಲ್ಲಿ 3400 ಪರೀಕ್ಷಾ ಕಿಟ್‌ಗಳನ್ನು ಅಳವಡಿಸಲು ನಿರ್ಧರಿಸಲಾಗಿದೆ. ಈಗಾಗಲೇ ಒಂದು ಸಾವಿರ ಕಿಟ್‌ಗಳು ಬಂದಿದ್ದು, ಶೀಘ್ರದಲ್ಲಿಯೇ ಸಾರ್ವಜನಿಕರ ಉಪಯೋಗಕ್ಕೆ ಲಭ್ಯವಾಗಲಿವೆ ಎಂದು ತಿಳಿಸಿದರು.





ಭಾರತೀಯ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರ (ಎಫ್‌ಎಸ್‌ಎಸ್‌ಎಐ) ಪ್ರತಿ ತಿಂಗಳು ವಿವಿಧ ಮಾರಾಟ ಕೇಂದ್ರಗಳಿಂದ ನಿರ್ದಿಷ್ಟ ಆಹಾರ ಪದಾರ್ಥಗಳನ್ನು ಪರೀಕ್ಷೆಗೆ ಆಯ್ಕೆ ಮಾಡುತ್ತದೆ. ಇದರಂತೆ ಆಗಸ್ಟ್‌ನಲ್ಲಿ ಬೇಕರಿ ತಿನಿಸುಗಳನ್ನು ವಿಶ್ಲೇಷಿಸಲು 211 ಪನ್ನೀರ್, 246 ಕೇಕ್, 67 ಕೋವಾದ ಮಾದರಿಗಳನ್ನು ಸಂಗ್ರಹಿಸಿ ವಿಶ್ಲೇಷಣೆಗೆ ಒಳಪಡಿಸಲಾಗಿದೆ. ವರದಿ ಬಂದ ನಂತರ ಮುಂದಿನ ಕ್ರಮ ಜರುಗಿಸಲಾಗುವುದು. ಆಹಾರ ಸುರಕ್ಷತಾ ಇಲಾಖೆಯಿಂದ ಜನರಲ್ಲಿ ಜಾಗೃತಿ ಮೂಡಿಸಲಾಗುತ್ತದೆ.

ಇದೇ ಶುಕ್ರವಾರ ಮತ್ತು ಶನಿವಾರ ರಾಜ್ಯಾದ್ಯಂತ ಜಿಲ್ಲೆ ಮತ್ತು ತಾಲೂಕು ಕೇಂದ್ರಗಳಲ್ಲಿರುವ ಹೋಟೆಲ್, ರೆಸ್ಟೋರೆಂಟ್‌ಗಳನ್ನು ಆಂದೋಲನದ ರೂಪದಲ್ಲಿ ತಪಾಸಣೆ ನಡೆಸಲಾಗುವುದು. ಮಾಂಸ, ಮೀನು, ಮೊಟ್ಟೆಗಳ ಮಾದರಿಗಳನ್ನು ಸಂಗ್ರಹಿಸಿ ತಪಾಸಣೆ ನಡೆಸಲಾಗುವುದು. ಏಪ್ರಿಲ್‌ನಿಂದ ಜುಲೈವರೆಗೆ 8,418 ಸರ್ವೆ ಆಹಾರ ಮಾದರಿಗಳು ಮತ್ತು 2593 ಕಾನೂನಾತ್ಮಕ ಆಹಾರ ಮಾದರಿಗಳನ್ನು ವಿಶ್ಲೇಷಣೆಗೆ ಒಳಪಡಿಸಲಾಗಿದೆ. ಜುಲೈ ತಿಂಗಳೊಂದರಲ್ಲೇ 2,753 ಸರ್ವೆ ಆಹಾರ ಮಾದರಿಗಳು ಮತ್ತು 711 ಕಾನೂನಾತ್ಮಕ ಆಹಾರ ಮಾದರಿಗಳನ್ನು ಸಂಗ್ರಹಿಸಿ ವಿಶ್ಲೇಷಣೆಗೆ ಕಳಿಸಲಾಗಿದೆ. ಇದೇ ತಿಂಗಳಲ್ಲಿ 96 ಪ್ರಕರಣಗಳನ್ನು ನ್ಯಾಯಾಲಯದಲ್ಲಿ ದಾಖಲಿಸಲಾಗಿದೆ. ನೈರ್ಮಲ್ಯ ಕೊರತೆ ಕಂಡು ಬಂದ 132 ಆಹಾರ ಉದ್ದಿಮೆಗಳಿಗೆ ರೂ.4.93 ಲಕ್ಷ ದಂಡ ವಿಧಿಸಲಾಗಿದೆ ಎಂದು ಮಾಹಿತಿ ನೀಡಿದರು.

ಬಿಬಿಎಂಪಿ ವ್ಯಾಪ್ತಿ, ಚಿತ್ರದುರ್ಗ, ದಾವಣಗೆರೆ ಸೇರಿದಂತೆ ರಾಜ್ಯದ 13 ಜಿಲ್ಲೆಗಳಿಂದ ಹಣ್ಣು ಮತ್ತು ತರಕಾರಿಗಳ 385 ಮಾದರಿಗಳನ್ನು ಸಂಗ್ರಹಿಸಿ ವಿಶ್ಲೇಷಣೆಗೆ ಒಳಪಡಿಸಿದ್ದು, 27 ಮಾದರಿಗಳಲ್ಲಿ ನಿಗದಿತ ಮಿತಿಗಿಂತ ಹೆಚ್ಚು ಪ್ರಮಾಣದ ಕ್ರಿಮಿನಾಶಕಗಳು ಮತ್ತು ಶಿಲೀಂಧ್ರ ಪತ್ತೆಯಾಗಿದೆ. ಅಸುರಕ್ಷಿತ ಆಹಾರಕ್ಕೆ ಸಂಬಂಧಿಸಿದಂತೆ ರಾಜ್ಯದಾದ್ಯಂತ 106 ಪ್ರಕರಣಗಳು ನ್ಯಾಯಾಲಯದಲ್ಲಿ ಇತ್ಯರ್ಥಗೊಂಡಿವೆ. 34 ಪ್ರಕರಣಗಳಲ್ಲಿ ಶಿಕ್ಷೆಯಾಗಿದೆ. 18 ಪ್ರಕರಣಗಳಲ್ಲಿ ನ್ಯಾಯಾಲಯ ದಂಡವನ್ನು ವಿಧಿಸಿದೆ. ದೇವನಹಳ್ಳಿಯ ಕೆಎಫ್‌ಸಿ, ಬಿಬಿಎಂಪಿ ದಕ್ಷಿಣದಲ್ಲಿರುವ ನುಪ ಟೆಕ್ನಾಲಜೀಸ್, ಮಮತಾ ಏಜೆನ್ಸಿ ಮತ್ತು ಮೈಸೂರಿನ ವಿಶಾಲ್ ಬಾರ್ ಅಂಡ್ ರೆಸ್ಟೋರೆಂಟ್‌ಗಳ ಪರವಾನಗಿಯನ್ನು ಅಮಾನತುಗೊಳಿಸಲಾಗಿದೆ. ಎಲ್ಲ ವರ್ಗದ ಆಹಾರ ತಯಾರಕರು ಕಡ್ಡಾಯವಾಗಿ ಪರವಾನಗಿ ಪಡೆಯಬೇಕು. ಪರವಾನಗಿ ಪರಿಶೀಲನೆಗೆ ವಿಶೇಷ ಆಂದೋಲನ ಹಮ್ಮಿಕೊಳ್ಳಲಾಗುವುದು. ನೋಂದಣಿ, ಪರವಾನಗಿ ಪಡೆಯದಿದ್ದರೆ ಕಾನೂನು ಕ್ರಮ ಜರುಗಿಸಲಾಗುವುದು ಎಂದರು.

*Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com*

ಮೈಸೂರು ಮಿತ್ರ



# ತಾವು ಪ್ರಧಾನಿಯಾಗಿ ಉದ್ಘಾಟಿಸಿದ್ದ ಉರಿ ಜಲ ವಿದ್ಯುತ್ ಘಟಕಕ್ಕೆ ಹೆಚ್.ಡಿ.ದೇವೇಗೌಡರ ಭೇಟಿ



ಶ್ರೀನಗರ, ಆ.29– ತಾವು ಪ್ರಧಾನಿಯಾಗಿ 28 ವರ್ಷಗಳ ನಂತರ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು ಕಣಿವೆ ರಾಜ್ಯ ಕಾಶ್ಮೀರಕ್ಕೆ ಭೇಟಿ ನೀಡಿ, ದೇಶದ ಕೊನೆಯ ಭಾಗದಲ್ಲಿರುವ ಉರಿ ಜಲ ವಿದ್ಯುತ್ ಘಟಕವನ್ನು ಖುದ್ದು ವೀಕ್ಷಿಸಿದರು.

ಬುಧವಾರವೇ ಶ್ರೀನಗರಕ್ಕೆ ಆಗಮಿಸಿದ್ದ ದೇವೇಗೌಡರು, 28 ವರ್ಷಗಳ ನಂತರ ಇದೇ ಮೊದಲ ಬಾರಿಗೆ ಕಣಿವೆ ರಾಜ್ಯಕ್ಕೆ ಭೇಟಿ ನೀಡಿದ್ದಾರೆ. ಗುರುವಾರ ಬೆಳಗ್ಗೆ ಶ್ರೀನಗರದಿಂದ ಬಾರಮುಲ್ಲಾಕ್ಕೆ ರೈಲಿನಲ್ಲಿ ಪ್ರಯಾಣ ಮಾಡಿ, ತಾವು ಪ್ರಧಾನಿಗಳಾಗಿದ್ದ ಸಂದರ್ಭದಲ್ಲಿ ಈ ರೇಲ್ವೆ ಮಾರ್ಗಕ್ಕೆ ಮಂಜೂರಾತಿ ನೀಡಿದ್ದನ್ನು ನೆನಪು ಮಾಡಿಕೊಂಡರು.

ಬಾರಾಮುಲ್ಲಾದಿಂದ ಉರಿಗೆ ತೆರಳಿದ ಅವರು, ಅಲ್ಲಿನ ರಾಷ್ಟ್ರೀಯ ಜಲವಿದ್ಯುತ್ ಉತ್ಪಾದನಾ ಘಟಕಕ್ಕೆ ಭೇಟಿ ಕೊಟ್ಟರು. 480 ಮೆಗಾವ್ಯಾಟ್ ಸಾಮರ್ಥ್ಯದ ಈ ವಿದ್ಯುತ್ ಘಟಕವೂ ದೇವೇಗೌಡರು ಪ್ರಧಾನಿಯಾಗಿದ್ದಾಗಲೇ ಉದ್ಘಾಟನೆ ಆಗಿತ್ತು. ಈ ವಿದ್ಯುತ್ ಉತ್ಪಾದನಾ ಘಟಕವೂ ಉರಿಯ ಝಿಲಂ ನದಿ ದಂಡೆಯಲ್ಲಿ, ಭಾರತ – ಪಾಕಿಸ್ತಾನದ ನಡುವಿನ ನಿಯಂತ್ರಣ ರೇಖೆಗೆ ಅತೀ ಸಮೀಪದಲ್ಲಿದೆ. ವಿದ್ಯುತ್ ಸ್ಥಾವರದ ಉದ್ಘಾಟನೆಯ ತೆರಳಿದ ಮಾಜಿ ಪ್ರಧಾನಿಗಳು, ತಾವು ಘಟಕಕ್ಕೆ ಭೇಟಿ ನೀಡಿದ್ದ ಸಂದರ್ಭವನ್ನು ಸ್ಮರಣೆ ಮಾಡಿಕೊಂಡರಲ್ಲದೆ, ಅಲ್ಲಿನ ಸಿಬ್ಬಂದಿ, ಅಧಿಕಾರಿಗಳ ಜತೆ ಅಂದಿನ ಸಂದರ್ಭವನ್ನು, ಸೇನೆಯ ಎಚ್ಚರಿಕೆಯನ್ನು ಲೆಕ್ಕಿಸದೆ ಘಟಕದ ಸುರಂಗಕ್ಕೆ ಭೇಟಿ ಕೊಟ್ಟಿದ್ದನ್ನು ನೆನಪು ಮಾಡಿಕೊಂಡರು.

## ಒಂದನೇ ಪುಟದಿಂದ

### ನಾಳೆಗೆ ವಿಚಾರಣೆ

ಆದೇಶ ನೀಡುವ ಮೊದಲು ರಾಜಭವನಕ್ಕೆ ಬಂದ ದೂರುಗಳ ಬಗ್ಗೆ ಯಾಕೆ ಪರಿಶೀಲಿಸಿಲ್ಲ ಎಂದು ಪ್ರಶ್ನಿಸಿದರು.

ಆಡಳಿತದ ಅತೀ ಉನ್ನತ ಹುದ್ದೆಯಲ್ಲಿ ಇರುವವರ ಬಗ್ಗೆ ಅನುಮತಿ ನೀಡುವಾಗ ಸಾರ್ವಜನಿಕ ನ್ಯಾಯ ಪಾಲನೆ ಮಾಡಬೇಕಿತ್ತು. ಅದನ್ನು ರಾಜ್ಯಪಾಲರು ಮಾಡಿಲ್ಲ ಎಂದು ದೂರಿದರು.

ಮುಖ್ಯಮಂತ್ರಿ ಅವರ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡುವಾಗ ಒಂದು ಅಂಶವನ್ನು ಮತ್ತು ಕಾನೂನಿನ ಸೂಕ್ಷ್ಮತೆಯನ್ನು ಅರಿತಿಲ್ಲ. ಕರ್ನಾಟಕ ಸರ್ಕಾರದ ಸಂಪುಟ ಸಭೆ ತೆಗೆದುಕೊಂಡ ನಿರ್ಣಯವನ್ನು ಪಾಲಿಸಿಲ್ಲ ಎಂದರು.

ಯಾವುದೇ ಪ್ರಕರಣದ ಬಗ್ಗೆ ಪ್ರಾಸಿಕ್ಯೂಷನ್‌ಗೆ ಅನುಮತಿ ಕೊಡುವ ಮೊದಲು ಅದರ ಗಂಭೀರತೆಯನ್ನು ಅರಿಯಬೇಕು. ಆದರೆ ಮುಖ್ಯಮಂತ್ರಿ ಅವರ ವಿಷಯದಲ್ಲಿ ರಾಜ್ಯಪಾಲರು ಇತ್ತ ಗಮನ ಹರಿಸಿಲ್ಲ. ಈ ಹಿಂದೆ ರಾಜ್ಯಪಾಲರ ವಿರುದ್ಧ ಸಂವಿಧಾನ ಪೀಠ ಕೊಟ್ಟ ತೀರ್ಪುಗಳನ್ನು ಇದೇ ವೇಳೆ ಸಿಂಘ್ವಿ ಪೀಠದ ಗಮನಕ್ಕೆ ತಂದರು.

### ಈಗ ಹಾವೇರಿ ವಿವಿ ಕುಲಸಚಿವ!

ಮುಖ್ಯಮಂತ್ರಿಗಳ ವಿರುದ್ಧ ಪ್ರಾಸಿಕ್ಯೂಷನ್‌ಗೆ ರಾಜ್ಯಪಾಲರು ಅನುಮತಿ ನೀಡಿದ ನಂತರ ಪ್ರಕರಣ ನ್ಯಾಯಾಲಯದಲ್ಲಿ ವಿಚಾರಣೆಯಲ್ಲಿದೆ. ವಿಧಾನಪರಿಷತ್ ಸದಸ್ಯರಾದ ಎ.ಹೆಚ್.ವಿಶ್ವನಾಥ್ ಸೇರಿದಂತೆ ಹಲವು ರಾಜಕೀಯ ನಾಯಕರು ಮುಡಾ ಕರ್ಮಕಾಂಡದ ಬಗ್ಗೆ ನಿರಂತರವಾಗಿ ಮಾತನಾಡುತ್ತಿದ್ದಾರೆ. ಅಲ್ಲದೆ ಮುಡಾದ ಇಂದಿನ ದುಃಸ್ಥಿತಿಗೆ ಆಯುಕ್ತರಾಗಿದ್ದ ಡಿ.ಬಿ.ನಟೇಶ್ ಹಾಗೂ ಜಿ.ಟಿ.ದಿನೇಶ್ ಕುಮಾರ್ ಕಾರಣ ಎಂದು ಬಹಿರಂಗವಾಗಿ ಆರೋಪಿಸುತ್ತಿದ್ದಾರೆ. ಎರಡು ತಿಂಗಳಿಂದ ಮುಡಾ ಹಗರಣದ ಗಂಟು ಬಿಚ್ಚಿಕೊಳ್ಳುತ್ತಲೇ ಇದೆ. ಆದಾಗ್ಯೂ ಸ್ಥಳ ನಿರೀಕ್ಷಣೆಯಲ್ಲಿದ್ದ ಜಿ.ಟಿ.ದಿನೇಶ್ ಕುಮಾರ್ ಅವರಿಗೆ ಸ್ಥಳ ನಿಯೋಜಿಸಿರುವುದು ಸರ್ಕಾರದ ದ್ವಂದ್ವ ನಿಲುವಿಗೆ ಮತ್ತೊಂದು ಸಾಕ್ಷಿಯಾಗಿದೆ.

### ಯುವಕನಿಗೆ 20 ವರ್ಷ ಸಜೆ

ಗ್ರಾಮದ ಧರ್ಮ ಎಂಬಾತನೇ ಶಿಕ್ಷೆಗೆ ಗುರಿಯಾದವನಾಗಿದ್ದು, ಹಾಡ್ಯ ಗ್ರಾಮದ ಖಾಸಗಿ ಪ್ರೌಢಶಾಲೆಯಲ್ಲಿ ವ್ಯಾಸಂಗ ಮಾಡುತ್ತಿದ್ದ ತನ್ನದೇ ಗ್ರಾಮದ ಅಪ್ರಾಪ್ತ ಬಾಲಕಿಯನ್ನು ಪರಿಚಯಿಸಿಕೊಂಡು ಪ್ರೀತಿಸುವುದಾಗಿಯೂ, ಮದುವೆಯಾಗುವುದಾಗಿಯೂ ನಂಬಿಸಿ 2023ರ ಜ.18ರಂದು ತನ್ನ ಮನೆಯಲ್ಲಿ ಯಾರೂ ಇಲ್ಲದಿದ್ದ ವೇಳೆ ಆಕೆಯನ್ನು ಕರೆದೊಯ್ದು ಬಲವಂತವಾಗಿ ಲೈಂಗಿಕ ಸಂಪರ್ಕ ಹೊಂದಿದ್ದಾರೆ. ಅಲ್ಲದೇ ನಂತರದ ದಿನಗಳಲ್ಲೂ ಆತ ಬಾಲಕಿಯೊಂದಿಗೆ ಲೈಂಗಿಕ ಕ್ರಿಯೆ ನಡೆಸಿದ್ದು, ಇದರ ಪರಿಣಾಮವಾಗಿ 2023ರ ಅ.18ರಂದು ಚೆಲುವಾಂಬ ಆಸ್ಪತ್ರೆಯಲ್ಲಿ ಗಂಡು ಮಗುವಿಗೆ ಜನನ ನೀಡಿದ್ದಳು.

ಈ ಸಂಬಂಧ ಬಾಲಕಿಯ ಹೇಳಿಕೆ ಪಡೆದು ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಿದ ಸಾಲಿಗ್ರಾಮ ಠಾಣೆಯ ಅಂದಿನ ಪೊಲೀಸ್ ಇನ್ಸ್‌ಪೆಕ್ಟರ್ ಕೃಷ್ಣರಾಜು ಅವರು ನ್ಯಾಯಾಲಯಕ್ಕೆ ಧರ್ಮ ವಿರುದ್ಧ ಆರೋಪ ಪಟ್ಟಿ ಸಲ್ಲಿಸಿದ್ದರು. ವಿಚಾರಣೆ ನಡೆಸಿದ ನ್ಯಾಯಾಧೀಶರು ಆತನಿಗೆ ಪೋಕ್ಸೋ ಕಾಯ್ದೆಯಡಿ 20 ವರ್ಷ ಕಠಿಣ ಸಜೆ ಹಾಗೂ 50 ಸಾವಿರ ರೂ. ದಂಡ ವಿಧಿಸಿದ್ದು, ದಂಡದ ಪೂರ್ತಿ ಹಣವನ್ನು ಪರಿಹಾರದ ರೂಪದಲ್ಲಿ ಸಂತ್ರಸ್ತ ಬಾಲಕಿಗೆ ನೀಡಬೇಕೆಂದು ತೀರ್ಪು ನೀಡಿದ್ದಾರೆ. ಸರ್ಕಾರದ ಪರವಾಗಿ ಪೋಕ್ಸೋ ವಿಶೇಷ ನ್ಯಾಯಾಲಯದ ವಿಶೇಷ ಸರ್ಕಾರಿ ಅಭಿಯೋಜಕರಾದ ಕೆ.ಬಿ.ಜಯಂತಿ ವಾದ ಮಂಡಿಸಿದ್ದರು.

### ಬಳ್ಳಾರಿ ಜೈಲಲ್ಲಿ ದರ್ಶನ್

ಸೂಚಿಸಿದ ಮಾನದಂಡಗಳಂತೆ ಕಟ್ಟುನಿಟ್ಟಾಗಿ ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಿದೆ ಎಂದು ಹೇಳಲಾಗಿದೆ.

**ಬಳ್ಳಾರಿ ಜೈಲಿನಲ್ಲಿ ಕಟ್ಟುನಿಟ್ಟಿನ ಕ್ರಮ:** ವಿಚಾರಣಾಧೀನ ಕೈದಿ ದರ್ಶನ್‌ನನ್ನು ಪ್ರತ್ಯೇಕ ಕೊಠಡಿಯಲ್ಲಿ ದಾಖಲಿಸುವುದು, ಚಟುವಟಿಕೆಗಳ ಮೇಲೆ ಸೂಕ್ತ ನಿಗಾ ವಹಿಸಲು 24X7 ಸಿಸಿಟಿವಿ ಕ್ಯಾಮರಾಗಳ ಕಣ್ಗಾವಲಿನಲ್ಲಿರುವಂತೆ ಕ್ರಮ ಕೈಗೊಳ್ಳಬೇಕು. ಸದರಿ ಬಂಧಿಯ ಕಾರ್ಯಚಟುವಟಿಕೆಗಳನ್ನು ಸೆರೆಹಿಡಿದ ಸಿಸಿಟಿವಿ ದೃಶ್ಯಾವಳಿಗಳನ್ನು ಪ್ರತಿನಿತ್ಯ ಮುಂಜಾಗ್ರತಾ ಕ್ರಮವಾಗಿ ಶೇಖರಣೆ ಮಾಡಿ, ಪ್ರತ್ಯೇಕವಾಗಿಟ್ಟುಕೊಳ್ಳುವುದು. ಸದರಿ ಬಂಧಿಯನ್ನು ಇರಿಸಿರುವ ವಿಭಾಗದ ಕರ್ತವ್ಯಕ್ಕೆ ಮುಖ್ಯ ವೀಕ್ಷಕ ಮತ್ತು ಅದಕ್ಕಿಂತ ಮೇಲ್ಪಟ್ಟ ಹಿರಿಯ ಅನುಭವವುಳ್ಳ ಸಿಬ್ಬಂದಿ ವರ್ಗದವರನ್ನು ಪಹರೆ ಕರ್ತವ್ಯಕ್ಕೆ ನಿಯೋಜಿಸುವುದು. ಸದರಿ ಬಂಧಿಯನ್ನು ಇಟ್ಟಿರುವ ವಿಭಾಗಕ್ಕೆ ಜೈಲರ್ ಮತ್ತು ಹಿರಿಯ ಅಧಿಕಾರಿ ವರ್ಗದವರು ಪ್ರತಿನಿತ್ಯ ಭೇಟಿ ನೀಡಿ ಸದರಿ ವಿಭಾಗದ ಭದ್ರತೆ ಹಾಗೂ ಬಂಧಿಯ ಚಲನವಲನಗಳನ್ನು ಗಮನಿಸಿ ಪಹರೆಯ ಕರ್ತವ್ಯದ ಸಿಬ್ಬಂದಿಯವರಿಗೆ ಸೂಕ್ತ ನಿರ್ದೇಶನಗಳನ್ನು ನೀಡುವುದು.

ವಿಶೇಷ ಸೌಲಭ್ಯಗಳನ್ನು ಕಲ್ಪಿಸಿದ್ದರ ಬಗ್ಗೆ ಸುದ್ದಿ ವಾಹಿನಿಗಳಲ್ಲಿ ಪ್ರಸಾರವಾಗಿ ಸರ್ಕಾರದ ಮಟ್ಟದಲ್ಲಿ ಚರ್ಚೆ ಆಗುತ್ತಿರುವುದರಿಂದ ದರ್ಶನ್‌ನನ್ನು ಸಾಮಾನ್ಯ ಬಂಧಿಯಂತೆ ಪರಿಗಣಿಸಿ, ಸಾಮಾನ್ಯ ಬಂಧಿಗೆ ಕಲ್ಪಿಸತಕ್ಕಂತಹ ಸೌಲಭ್ಯಗಳನ್ನು ಮಾತ್ರ ನೀಡತಕ್ಕದ್ದು, ಯಾವುದೇ ವಿಶೇಷ ಆತಿಥ್ಯ ನೀಡುವಂತಿಲ್ಲ. ಉಪಹಾರ ಗೃಹ, ಮನರಂಜನೆ ಸೌಲಭ್ಯಗಳನ್ನು ಕಾರಾಗೃಹದ ನಿಯಮಾವಳಿಗಳಂತೆ ಒದಗಿಸುವುದು. ಯಾವುದೇ ನಿಯಮಗಳ ಉಲ್ಲಂಘನೆಗೆ ಆಸ್ಪದ ನೀಡುವಂತಿಲ್ಲ ಎಂದು ಆದೇಶದಲ್ಲಿ ತಿಳಿಸಲಾಗಿದೆ.

**ಪತ್ನಿ ಹಾಗೂ ರಕ್ತ ಸಂಬಂಧಿಗಳಿಗೆ ಮಾತ್ರ ಭೇಟಿ ಅವಕಾಶ:** ಪರಪ್ಪನ ಅಗ್ರಹಾರ ಸೆಂಟ್ರಲ್ ಜೈಲಿನಲ್ಲಿ ಇದ್ದಾಗ ದರ್ಶನ್‌ನನ್ನು ಕುಟುಂಬದವರೂ ಸೇರಿದಂತೆ, ಆಪ್ತರು, ಸ್ನೇಹಿತರು ಭೇಟಿಯಾಗುತ್ತಿದ್ದರು. ಆದರೆ ಬಳ್ಳಾರಿಗೆ ಶಿಫ್ಟ್ ಆದ ಮೇಲೆ ಸಾಕಷ್ಟು ಬದಲಾವಣೆ ಮಾಡಲಾಗಿದೆ. ತಾತ್ಕಾಲಿಕವಾಗಿ ದರ್ಶನ್‌ನ ಪತ್ನಿ, ರಕ್ತ ಸಂಬಂಧಿಗಳು ಮತ್ತು ಪ್ರಕರಣದ ವಕಾಲತ್ತು ವಹಿಸಿದ ವಕೀಲರಿಗೆ ಮಾತ್ರ ಕಾರಾಗೃಹದ ನಿಯಮಾನುಸಾರ ಸಂದರ್ಶನ ನೀಡಲು ಅವಕಾಶ ಕಲ್ಪಿಸಲಾಗಿದೆ. ದರ್ಶನ್‌ನನ್ನು ಭೇಟಿ ಮಾಡಲು ಕನ್ನಡ ಚಿತ್ರರಂಗದ ಕಲಾವಿದರು, ಅಭಿಮಾನಿ ಬಳಗದವರು ಮತ್ತು ಪ್ರಭಾವಿ/ರಾಜಕೀಯ ವ್ಯಕ್ತಿಗಳು ಆಗಮಿಸುವ ಸಂಭವವಿದ್ದು, ಕಾರಾಗೃಹದ ಆಡಳಿತ ಮತ್ತು ಭದ್ರತೆಯ ಹಿತದೃಷ್ಟಿಯಿಂದ ದರ್ಶನ್ ಭೇಟಿಗೆ ಯಾವುದೇ ಕಾರಣಕ್ಕೂ ಅವಕಾಶ ಕಲ್ಪಿಸಬಾರದು ಎಂದು ಆದೇಶದಲ್ಲಿ ತಿಳಿಸಲಾಗಿದೆ.

**ವಿಚಾರಣಾಧೀನ ಕೈದಿ ನಂಬರ್ ಬದಲು:** ಪರಪ್ಪನ ಅಗ್ರಹಾರ ಜೈಲಿನಲ್ಲಿದ್ದಾಗ ದರ್ಶನ್‌ಗೆ 6106 ಎಂಬ ವಿಚಾರಣಾಧೀನ ಕೈದಿ ನಂಬರ್ ನೀಡಲಾಗಿತ್ತು. ಆದರೆ ಈಗ ಅದು ಬದಲಾಗಿದೆ. ದರ್ಶನ್ ಬಳ್ಳಾರಿ ಜೈಲಿಗೆ ಎಂಟ್ರಿ ನೀಡುತ್ತಿದ್ದಂತೆಯೇ, ಹಳೆಯ ಕೈದಿ ನಂಬರ್ ಅನ್ನು ಬದಲಾಯಿಸಲಾಗಿದ್ದು, ಸದ್ಯ ದರ್ಶನ್‌ಗೆ ವಿಚಾರಣಾಧೀನ ಕೈದಿ ನಂಬರ್ 511 ನೀಡಲಾಗಿದೆ. ಬಳ್ಳಾರಿ ಜೈಲಿನಲ್ಲಿ ಅವರು ವಿಚಾರಣಾಧೀನ ಕೈದಿಯಾಗಿ ಇರುವ ತನಕ ಇದೇ ನಂಬರ್ ಇರಲಿದೆ.

# ರಾಜ್ಯಪಾಲರನ್ನು ವಾಪಸ್ ಕರೆಸಿಕೊಳ್ಳುವಂತೆ ಆಗ್ರಹಿಸಿ ದಲಿತ ಸಂಘರ್ಷ ಸಮಿತಿ ಪ್ರತಿಭಟನೆ



ಮೈಸೂರು ಪುರಭವನ ಮುಂಭಾಗದ ಅಂಬೇಡ್ಕರ್ ಪ್ರತಿಮೆ ಬಳಿ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ವತಿಯಿಂದ ರಾಜ್ಯಪಾಲರನ್ನು ವಾಪಸ್ ಕರೆಸಿಕೊಳ್ಳಬೇಕು ಎಂದು ಒತ್ತಾಯಿಸಿ ಪ್ರತಿಭಟನೆ ನಡೆಸಲಾಯಿತು.

ಮೈಸೂರು, ಆ.29(ಜಿಎ)–ರಾಜ್ಯ ಸರ್ಕಾರವನ್ನು ಅಸ್ಥಿರಗೊಳಿಸಲು ಯತ್ನಿಸುತ್ತಿರುವ ರಾಜ್ಯಪಾಲರನ್ನು ವಾಪಸ್ ಕರೆಸಿಕೊಳ್ಳಬೇಕು ಎಂದು ಒತ್ತಾಯಿಸಿ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ವತಿಯಿಂದ ಪುರಭವನ ಮುಂಭಾಗದ ಅಂಬೇಡ್ಕರ್ ಪ್ರತಿಮೆ ಬಳಿ ಪ್ರತಿಭಟನೆ ನಡೆಸಲಾಯಿತು.

ಬಿಜೆಪಿ, ಜೆಡಿಎಸ್ ಪಕ್ಷಗಳು ಸಿಎಂ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರವನ್ನು ಅಸ್ಥಿರಗೊಳಿಸಲು ಯತ್ನಿಸುತ್ತಿದ್ದು, ಅದಕ್ಕಾಗಿ ರಾಜ್ಯಪಾಲರ ಅಧಿಕಾರವನ್ನು ದುರುಪಯೋಗಪಡಿಸಿಕೊಳ್ಳುತ್ತಿವೆ. ಕೇಂದ್ರ ಸರ್ಕಾರದ ಒತ್ತಡದಿಂದ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಲಾಗಿದೆ. ಕೇಂದ್ರ ಸರ್ಕಾರದ ಕೈಗೊಂಬೆಯಾಗಿ ಕೆಲಸ ಮಾಡುತ್ತಿರುವುದು ಪ್ರಜಾಪ್ರಭುತ್ವಕ್ಕೆ ಅಪಾಯವನ್ನುಂಟು ಮಾಡಲಿದ್ದು, ಒಕ್ಕೂಟ ವ್ಯವಸ್ಥೆಗೆ ಧಕ್ಕೆಯಾಗಲಿದೆ ಎಂದು ಪ್ರತಿಭಟನಾಕಾರರು ಕಿಡಿಕಾರಿದರು.

ಭ್ರಷ್ಟಾಚಾರ ನಿಯಂತ್ರಣ ಕಾಯಿದೆ 17ಎ ಅಡಿ ಅನುಮತಿ ನೀಡುವಾಗ ಪಾಲಿಸಬೇಕಾದ ನಿಯಮ ಪಾಲಿಸಿಲ್ಲ. ರಾಜ್ಯಪಾಲರು ರಾಷ್ಟ್ರಪತಿಗಳ ಪ್ರತಿನಿಧಿಯಾಗಿ ಕೆಲಸ ಮಾಡಬೇಕು. ಆದರೆ, ಕೇಂದ್ರ ಸರ್ಕಾರ ಹಾಗೂ ಬಿಜೆಪಿಯ ಪ್ರತಿನಿಧಿಯಾಗಿ ಕೆಲಸ ಮಾಡುತ್ತಿರುವುದು ಅಕ್ಷಮ್ಯ. ರಾಜ್ಯಪಾಲರ ಈ ನಡೆ ಖಂಡನೀಯ. ರಾಷ್ಟ್ರಪತಿಗಳು ಇದನ್ನೆಲ್ಲಾ ಗಮನಿಸಿ ರಾಜ್ಯಪಾಲರನ್ನು ವಾಪಸ್ ಕರೆಸಿಕೊಳ್ಳಬೇಕು. ಬಹುಮತ ಹೊಂದಿರುವ ರಾಜ್ಯ ಸರ್ಕಾರ ಸುಗಮವಾಗಿ ನಡೆಯಲು ಅನುವು ಮಾಡಿಕೊಡಬೇಕು ಎಂದು ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ಜಿಲ್ಲಾ ಸಂಚಾಲಕ ರಾಜಯ್ಯ ಇಟ್ನ, ಮಲ್ಲೇಶ್ ಚುಂಚನಹಳ್ಳಿ, ಸುರೇಶ್ ಶಂಕರಪುರ, ಗೋವಿಂದರಾಜು ಸೇರಿದಂತೆ ಮತ್ತಿತರರು ಪಾಲ್ಗೊಂಡಿದ್ದರು.

## ಡಿ.ಕೆ.ಶಿವಕುಮಾರ್ ಪ್ರಕರಣದಲ್ಲಿ ಸಿಬಿಐ ಅರ್ಜಿ ವಜಾಗೊಳಿಸಿದ ಹೈಕೋರ್ಟ್



ಬೆಂಗಳೂರು, ಆ.29– ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವಿರುದ್ಧದ ಆದಾಯ ಮೀರಿ ಆಸ್ತಿ ಗಳಿಕೆ ಪ್ರಕರಣದಲ್ಲಿ ಸಿಬಿಐ ತನಿಖೆಗೆ ನೀಡಿದ್ದ ಅನುಮತಿಯನ್ನು ಹಿಂಪಡೆದಿದ್ದ ರಾಜ್ಯ ಸರ್ಕಾರದ ನಿರ್ಧಾರವನ್ನು ಪ್ರಶ್ನಿಸಿ ಸಿಬಿಐ ಹಾಗೂ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಸಲ್ಲಿಸಿದ್ದ ಅರ್ಜಿಯ ವಿಚಾರಣೆಯೂ ಇಂದು ಹೈಕೋರ್ಟ್‌ನಲ್ಲಿ ನಡೆಯಿತು.

ಸಿಬಿಐ, ಯತ್ನಾಳ್ ಸಲ್ಲಿಸಿದ್ದ ಎರಡೂ ಅರ್ಜಿಗಳು ವಿಚಾರಣೆಗೆ ಅರ್ಹವಲ್ಲ ಎಂದು ಹೇಳಿರುವ ಹೈಕೋರ್ಟ್ ರಾಜ್ಯ ಸರ್ಕಾರ– ಸಿಬಿಐ ನಡುವಿನ ವಿವಾದ ಸುಪ್ರೀಂ ಕೋರ್ಟ್‌ನಲ್ಲಿ ಬಗೆಹರಿಯುವುದು ಸೂಕ್ತ ಎಂದು ಹೇಳಿದೆ. ರಾಜ್ಯದ ಕ್ರಮವನ್ನು ಸಮರ್ಥಿಸಿಕೊಂಡ ಅಡ್ವೋಕೇಟ್ ಜನರಲ್ ಕೆ ಶಶಿಕಿರಣ್ ಶೆಟ್ಟಿ ಅವರು ಹೈಕೋರ್ಟ್‌ನಲ್ಲಿ ವಾದ ಮಂಡಿಸಿದ್ದು, ಸುಪ್ರೀಂ ಕೋರ್ಟ್‌ನ ತೀರ್ಪಿನ ಪ್ರಕಾರ ಮೂರನೇ ವ್ಯಕ್ತಿ ಕ್ರಿಮಿನಲ್ ಪ್ರಕ್ರಿಯೆಯಲ್ಲಿ ಮಧ್ಯಪ್ರವೇಶಿಸಲು ಸಾಧ್ಯವಿಲ್ಲ ಎಂದು ಹೈಕೋರ್ಟ್‌ಗೆ ಮನವಿ ಮಾಡಿದರು.

## ಹಿರಿಯ ವೈದ್ಯರಿಗೆ ಸನ್ಮಾನ...



ಮೈಸೂರು ಮೆಡಿಕಲ್ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯ ಮೈಸೂರು ಮೆಡಿಕಲ್ ಕಾಲೇಜು ಅಲ್ಯೂಮ್ನಿ ಅಸೋಸಿಯೇಷನ್‌ನ ಶತಮಾನೋತ್ಸವ ಸಂಭ್ರಮದಲ್ಲಿ ವೈದ್ಯರಾದ ಡಾ.ಕಾಂತ ಜಾದವ್ (ನಿವೃತ್ತ ಉಪಕುಲಪತಿ, ರಾಜೀವ್ ಗಾಂಧಿ ಆರೋಗ್ಯ ವಿಶ್ವವಿದ್ಯಾನಿಲಯ), ಡಾ.ಸಿ.ಡಿ.ಶ್ರೀನಿವಾಸಮೂರ್ತಿ (ಹೃದ್ರೋಗ ತಜ್ಞರು), ಡಾ.ಎಂ.ಎ. ಶೇಖರ್ (ಉಪ ಕುಲಪತಿಗಳು, ಆದಿಚುಂಚನಗಿರಿ ಆರೋಗ್ಯ ವಿಶ್ವವಿದ್ಯಾನಿಲಯ) ಅವರುಗಳನ್ನೂ ಸನ್ಮಾನಿಸಲಾಯಿತು. 1980ನೇ ಸಾಲಿನ ಎಂಬಿಬಿಎಸ್ ಬ್ಯಾಚ್‌ನ ವಿದ್ಯಾರ್ಥಿನಿ ಡಾ.ವೀಣಾ ಭಾರತಿ (ವೈದ್ಯ ದ್ವಿಭಾಷಾ ಲೇಖಕಿ) ಹಾಗೂ ಡಾ.ದಮಯಂತಿ (ಪ್ರಸೂತಿ ತಜ್ಞೆ) ಮಹಿಳಾ ವೈದ್ಯರ ವಿಭಾಗದಲ್ಲಿ ಸನ್ಮಾನಿತರಾದರು.

## ನಟನದಲ್ಲಿ ಸೆ.1ಕ್ಕೆ 'ಹಸಿರೇ ಹೊನ್ನು' ನಾಟಕ



ಮೈಸೂರು,ಆ.29–ಮೈಸೂರಿನ ನಟನ ರಂಗ ಶಾಲೆಯು ಕಳೆದ ಅನೇಕ ವರ್ಷಗಳಿಂದ ಕಲಾಮಾಧ್ಯಮದಲ್ಲಿ ಕ್ರಿಯಾಶೀಲವಾಗಿದ್ದು ರಂಗಭೂಮಿಯಲ್ಲಿ ತನ್ನದೇ ಆದ ವಿಶಿಷ್ಟ ಛಾಪನ್ನು ಮೂಡಿಸಿದೆ.

ರಂಗಭೂಮಿಯ ಅಧ್ಯಯನ, ಪ್ರಾತ್ಯಕ್ಷಿಕೆ, ಪ್ರಯೋಗ ಹಾಗೂ ಪ್ರದರ್ಶನಗಳ ಮೂಲಕ ಶ್ರೇಷ್ಠತೆಯನ್ನು ಸಾಧಿಸುವುದರತ್ತ ನಟನ ಸತತವಾಗಿ ಪ್ರಯತ್ನ ನಡೆಸುತ್ತಾ ಬಂದಿದ್ದು, ಮೈಸೂರಿನಲ್ಲಿ ನೆಲೆಗೊಂಡಿದ್ದರೂ ಭಾರತದಾದ್ಯಂತ ರಂಗಯಾತ್ರೆಗಳನ್ನು, ರಂಗತರಬೇತಿ ಶಿಬಿರಗಳನ್ನು ನಡೆಸುವುದರ ಮೂಲಕ ತನ್ನ ವ್ಯಾಪ್ತಿಯನ್ನು ವಿಸ್ತರಿಸಿಕೊಂಡಿದೆ.

ಮೈಸೂರಿನ ಮತ್ತು ಸುತ್ತಮುತ್ತಲಿನ ಸದಭಿರುಚಿಯ, ಸಹೃದಯ ರಂಗಾಸಕ್ತರಿಗಾಗಿ ನಟನವು ವಾರಾಂತ್ಯ ರಂಗ ಪ್ರದರ್ಶನಗಳನ್ನು ನಡೆಸುತ್ತಿದ್ದು, ತನ್ನ ಚಟುವಟಿಕೆ ಭಾಗವಾಗಿ, ಸೆ.1ರಂದು ಸಂಜೆ 6.30ಕ್ಕೆ ಮೈಸೂರಿನ ರಾಮಕೃಷ್ಣನಗರದಲ್ಲಿರುವ ನಟನರಂಗ ಶಾಲೆಯಲ್ಲಿ ಅರಿವು ರಂಗ ಮೈಸೂರು ಅರ್ಪಿಸುವ ಬಿ.ಜಿ.ಎಲ್.ಸ್ವಾಮಿ ಜೀವನಾಧಾರಿತ ನಾಟಕ 'ಹಸಿರೇ ಹೊನ್ನು' ಪ್ರದರ್ಶನಗೊಳ್ಳಲಿದೆ. ನಾಟಕದ ವಿನ್ಯಾಸ ಮತ್ತು ನಿರ್ದೇಶನ ಬರ್ಟಿಎಫ್ ಒಲಿವೇರಾ. ಮಾಹಿತಿಗೆ ಮೊ.7259537777, 9480468327, 9845595505 ಸಂಪರ್ಕಿಸಿ.

## ಅಕ್ಕ ಸಮ್ಮೇಳನ...



ಅಮೇರಿಕಾದಲ್ಲಿ ನಡೆಯುತ್ತಿರುವ 'ಅಕ್ಕ' ಸಮ್ಮೇಳನದಲ್ಲಿ ಭಾಗವಹಿಸಲು ಮೈಸೂರಿನಿಂದ ತೆರಳುತ್ತಿರುವ ರಾಜ್ಯ ಸರ್ಕಾರಿ ನೌಕರರ ಸಂಘದ ಮಾಜಿ ಅಧ್ಯಕ್ಷ ಹೆಚ್.ಕೆ.ರಾಮು ಅವರನ್ನು ಬೀಳ್ಕೊಡಲಾಯಿತು.

# ದಸರಾ ಮಹೋತ್ಸವ: ಕವಿಗೋಷ್ಠಿಗೆ ಅರ್ಜಿ ಆಹ್ವಾನ

ಮೈಸೂರು,ಆ.29– ವಿಶ್ವವಿಖ್ಯಾತ ನಾಡಹಬ್ಬ ಮೈಸೂರು ದಸರಾ ಮಹೋತ್ಸವದ ಅಂಗವಾಗಿ ಕವಿಗೋಷ್ಠಿ ಉಪ ಸಮಿತಿಯಿಂದ ಅಕ್ಟೋಬರ್ 5 ರಿಂದ 9 ರವರೆಗೆ ಐದು ದಿನಗಳ ವೈವಿಧ್ಯಮಯ ಕವಿಗೋಷ್ಠಿ ಕಾರ್ಯಕ್ರಮಗಳನ್ನು ಜಗನ್ಮೋಹನ ಅರಮನೆ ಸಭಾಂಗಣದಲ್ಲಿ ಆಯೋಜಿಸಲಾಗಿದ್ದು, ಪ್ರಾದೇಶಿಕ ಕವಿಗೋಷ್ಠಿ ಹಾಗೂ ವಿಖ್ಯಾತ ಕವಿಗೋಷ್ಠಿಗೆ ಕವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.


ಪ್ರಾದೇಶಿಕ ಕವಿಗೋಷ್ಠಿಗೆ ಮೈಸೂರು, ಮಂಡ್ಯ, ಹಾಸನ, ಚಾಮರಾಜನಗರ, ಕೊಡಗು ಜಿಲ್ಲೆಗಳ ಕವಿಗಳು ಮಾತ್ರ ಅರ್ಜಿ ಸಲ್ಲಿಸಬಹುದಾಗಿದ್ದು, ಅರ್ಜಿ ಸಲ್ಲಿಸುವವರು ಕನಿಷ್ಠ ಒಂದು ಕವನ ಸಂಕಲನ ಪ್ರಕಟಿಸಿರಬೇಕು ಹಾಗೂ ವಿಖ್ಯಾತ ಕವಿಗೋಷ್ಠಿಗೆ ಕರ್ನಾಟಕದ ಎಲ್ಲಾ ಜಿಲ್ಲೆಗಳಿಂದ ಒಬ್ಬರಂತೆ ಭಾಗವಹಿಸಲು ಅವಕಾಶವಿದೆ. ಅರ್ಜಿ ಸಲ್ಲಿಸುವವರು ಕನಿಷ್ಠ ಎರಡು ಕವನ ಸಂಕಲನಗಳನ್ನು ಪ್ರಕಟಿಸಿರಬೇಕು. ಕವಿತೆಗಳು ಕಡ್ಡಾಯವಾಗಿ ಕನ್ನಡದಲ್ಲಿರಬೇಕು. ಕಳೆದ ಎರಡು ವರ್ಷಗಳಿಂದ ದಸರಾ ಕವಿಗೋಷ್ಠಿಯಲ್ಲಿ ಭಾಗವಹಿಸದವರು ತಮ್ಮ ಸ್ವ ವಿವರ ಮತ್ತು ಕವನ ಸಂಕಲನಗಳೊಂದಿಗೆ ಅರ್ಜಿಗಳನ್ನು ದಸರಾ ಕವಿಗೋಷ್ಠಿ ಉಪ ಸಮಿತಿಯ ಕಾರ್ಯಾಧ್ಯಕ್ಷರು ಹಾಗೂ ಮೈಸೂರು ವಿಶ್ವವಿದ್ಯಾನಿಲಯದ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯ ನಿರ್ದೇಶಕರಿಗೆ ನೇರವಾಗಿ ಅಥವಾ ನೋಂದಾಯಿತ ಅಂಚೆ ಮೂಲಕ ಸೆ.12ರ ಸಂಜೆ 5 ಗಂಟೆಯೊಳಗೆ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 9902242703, 6360351727 ಹಾಗೂ ಕವಿಗಳಿಗೆ ಕಾರ್ಯಕ್ರಮ ಕೊಡಿಸುವುದಾಗಿ ಯಾವುದೇ ಮಧ್ಯವರ್ತಿಗಳು ಸಂಪರ್ಕಿಸಿ ಹಣದ ಬೇಡಿಕೆ ಇಟ್ಟಲ್ಲಿ ತಕ್ಷಣ ಮಾಹಿತಿ ಸಮೇತ ಮೇಲ್ಕಾಣಿಸಿದ ನಿರ್ದೇಶಕರ ಕಚೇರಿಗೆ ದೂರು ಸಲ್ಲಿಸಬಹುದು ಎಂದು ದಸರಾ ಕವಿಗೋಷ್ಠಿ ಉಪ ಸಮಿತಿಯ ಕಾರ್ಯದರ್ಶಿ ಹಾಗೂ ಕಾರ್ಯನಿರ್ವಾಹಕ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೈಸೂರು ದಸರಾ

## ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

ಮೈಸೂರು,ಆ.29–ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವತಿಯಿಂದ 2024–25ನೇ ಸಾಲಿನ ಧನಶ್ರೀ (ಹೆಚ್.ಐ.ವಿ ಸೋಂಕಿತ ಮಹಿಳೆಯರಿಗೆ) ಯೋಜನೆ, ಲಿಂಗತ್ವ ಅಲ್ಪಸಂಖ್ಯಾತರಿಗೆ ಪುನರ್ವಸತಿ ಯೋಜನೆ, ಚೇತನ (ದಮನಿತ ಮಹಿಳೆಯರಿಗೆ) ಯೋಜನೆ ಹಾಗೂ ಉದ್ಯೋಗಿನಿ ಯೋಜನೆಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿದಾರರು ಬಾಪೂಜಿ ಸೇವಾ ಕೇಂದ್ರ, ಗ್ರಾಮ ಒನ್, ಬೆಂಗಳೂರು ಒನ್, ಕರ್ನಾಟಕ ಒನ್ ಕೇಂದ್ರಗಳಲ್ಲಿ ಸೇವಾ ಸಿಂಧು ಪೋರ್ಟಲ್ https://sevasindhu.karnataka.gov.in ಮೂಲಕ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಸೆ.21 ಕೊನೆಯ ದಿನ. ಹೆಚ್ಚಿನ ಮಾಹಿತಿಗಾಗಿ ಮಹಿಳಾ–ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕರು ಹಾಗೂ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಜಿಲ್ಲಾ ಅಭಿವೃದ್ಧಿ ನಿರೀಕ್ಷಕರನ್ನು ಕಚೇರಿ ವೇಳೆಯಲ್ಲಿ ಹಾಗೂ ದೂ.ಸಂ: 0821–2495432 ಅನ್ನು ಸಂಪರ್ಕಿಸಬಹುದು ಎಂದು ಮಹಿಳಾ–ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರು, ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶ್ರೀ ವಿವೇಕ ಬಾಲೋದ್ಯಾನ ಪಬ್ಲಿಕ್ ಶಾಲೆಯಲ್ಲಿ ರಾಷ್ಟ್ರೀಯ ಕ್ರೀಡಾ ದಿನಾಚರಣೆ




ಮೈಸೂರಿನ ಜಯನಗರದಲ್ಲಿರುವ ಶ್ರೀ ವಿವೇಕ ಬಾಲೋದ್ಯಾನ ಪಬ್ಲಿಕ್ ಶಾಲೆಯಲ್ಲಿ ಗುರುವಾರ ರಾಷ್ಟ್ರೀಯ ಕ್ರೀಡಾ ದಿನವನ್ನು ಆಚರಿಸಲಾಯಿತು.

ಮೈಸೂರು,ಆ.29–ಮೈಸೂರಿನ ಜಯನಗರದಲ್ಲಿರುವ ಶ್ರೀ ವಿವೇಕ ಬಾಲೋದ್ಯಾನ ಪಬ್ಲಿಕ್ ಶಾಲೆಯಲ್ಲಿ ಗುರುವಾರ ರಾಷ್ಟ್ರೀಯ ಕ್ರೀಡಾ ದಿನವನ್ನು ಆಚರಿಸಲಾಯಿತು. ಆಡಳಿತ ಮಂಡಳಿ ಕಾರ್ಯದರ್ಶಿ ಎಂ.ಎಸ್.ನಾಗೇಶ್ ಅಧ್ಯಕ್ಷತೆ ವಹಿಸಿ ಮಾತನಾಡಿ, ಕ್ರೀಡೆಯು ದೇಹ ಮತ್ತು ಮನಸ್ಸಿನ ಬೆಳವಣಿಗೆಗೆ ತುಂಬಾ ಮಹತ್ವವುಳ್ಳದ್ದಾಗಿದೆ. ಈ ಹಿನ್ನೆಲೆಯಲ್ಲಿ ನಮ್ಮ ಶಾಲೆಯಲ್ಲಿ ಎಲ್ಲಾ ಬಗೆಯ ಕ್ರೀಡಾ ಚಟುವಟಿಕೆಗಳಿಗೂ ಪ್ರೋತ್ಸಾಹ ನೀಡುತ್ತಾ ಬಂದಿದ್ದೇವೆ. ಉತ್ತಮ ಕ್ರೀಡಾಪಟುಗಳನ್ನು ತಯಾರು ಮಾಡಬೇಕೆಂಬುದು ನಮ್ಮ ಉದ್ದೇಶವಾಗಿದೆ ಎಂದರು.

ಮುಖ್ಯ ಆಡಳಿತಾಧಿಕಾರಿ ಭವಾನಿ ನಾಗೇಶ್, ಎಲ್ಲರಿಗೂ ರಾಷ್ಟ್ರೀಯ ಕ್ರೀಡಾ ದಿನಾಚರಣೆಯ ಶುಭಾಶಯ ತಿಳಿಸಿದರು. ಪ್ರಾಂಶುಪಾಲ ಡಾ.ಭಾರತೀಶಂಕರ್ ಕಾರ್ಯಕ್ರಮದ ಮಹತ್ವವನ್ನು ಕುರಿತು ಮಾತನಾಡಿದರು. ನೃತ್ಯ ನಿರ್ದೇಶಕ ಅಭಿಲಾಷ್ ಮಾರ್ಗದರ್ಶನದಲ್ಲಿ ಶಾಲೆಯ ಮಕ್ಕಳಿಂದ ಕ್ರೀಡಾ ಚಟುವಟಿಕೆಗಳನ್ನು ಒಳಗೊಂಡಂತಹ ನೃತ್ಯ ಪ್ರದರ್ಶನ ನಡೆಯಿತು. ವಿಜ್ಞಾನ ಶಿಕ್ಷಕಿ ಪುಷ್ಪ ಸ್ವಾಗತಿಸಿದರೆ, ದೈಹಿಕ ಶಿಕ್ಷಕ ಅಶೋಕ ವಂದಿಸಿದರು. ಆಂಗ್ಲ ಭಾಷಾ ಶಿಕ್ಷಕಿ ಸುಮಾ ನಿರೂಪಿಸಿದರು.

## ಯಡಕೊಳ ಗ್ರಾಪಂ ನೂತನ ಉಪಾಧ್ಯಕ್ಷರ ಆಯ್ಕೆ



ಯಡಕೊಳ ಗ್ರಾಮ ಪಂಚಾಯಿತಿ (ಸಿದ್ದರಾಮನಹುಂಡಿ) ನೂತನ ಉಪಾಧ್ಯಕ್ಷರಾಗಿ ಆಯ್ಕೆಯಾದ ಎಚ್.ಉಮೇಶ್ ಅವರನ್ನು ಅಭಿನಂದಿಸಲಾಯಿತು. ಚಿತ್ರದಲ್ಲಿ ಕುಪ್ಪೇಗಾಲ ಗ್ರಾಮದ ಮುಖಂಡರಾದ ವೆಂಕಟೇಶ್, ರಘು, ಸತೀಶ್, ಮಹದೇವ, ತಾಯೂರು ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಸೋಮು ಇನ್ನಿತರರನ್ನು ಕಾಣಬಹುದು.

# ರಾಮಕೃಷ್ಣ ಹೆಗಡೆ ಅತ್ಯಂತ ಮೌಲ್ಯಾಧಾರಿತ ರಾಜಕಾರಣಿ

## ಮಾಜಿ ಮೇಯರ್ ಸಂದೇಶ್ ಸ್ವಾಮಿ ಅಭಿಮತ



ಕೃಷ್ಣರಾಜ ಯುವ ಬಳಗ ಕಚೇರಿಯಲ್ಲಿ ಮಾಜಿ ಮುಖ್ಯಮಂತ್ರಿ ರಾಮಕೃಷ್ಣ ಹೆಗಡೆ ಅವರ ಜನ್ಮದಿನ ಆಚರಿಸಲಾಯಿತು.

ಮೈಸೂರು, ಆ.29– ಮೈಸೂರಿನ ಚಾಮರಾಜಪುರಂನಲ್ಲಿರುವ ಕೃಷ್ಣರಾಜ ಯುವ ಬಳಗ ಕಚೇರಿಯಲ್ಲಿ ಮಾಜಿ ಮುಖ್ಯಮಂತ್ರಿ ರಾಮಕೃಷ್ಣ ಹೆಗಡೆ ಅವರ ಜನ್ಮದಿನವನ್ನು ಆಚರಿಸಲಾಯಿತು.

ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದ ಮಾಜಿ ಮಹಾಪೌರ ಸಂದೇಶ ಸ್ವಾಮಿ, ಅಧಿಕಾರ ವಿಕೇಂದ್ರೀಕರಣದ ವ್ಯವಸ್ಥೆಯ ಮೂಲಕ ನಾಡಿನ ಗ್ರಾಮೀಣ ಭಾಗದ ಜನರ ಹೊಸ ಚರಿತ್ರೆಯನ್ನು ಬರೆದವರು ರಾಮಕೃಷ್ಣ ಹೆಗಡೆಯವರು ಎಂದು ಸ್ಮರಿಸಿದರು. ರಾಜ್ಯದ ಅತ್ಯಂತ ಮೌಲ್ಯಾಧಾರಿತ ರಾಜಕಾರಣಿ ಎಂದೇ ಜನಪ್ರಿಯತೆ ಗಳಿಸಿದ್ದ ರಾಜಕೀಯ ಮುತ್ಸದ್ದಿ, ರಾಮಕೃಷ್ಣ ಹೆಗಡೆ. ರಾಜ್ಯದಲ್ಲಿ ಮೊದಲ ಬಾರಿಗೆ ಕಾಂಗ್ರೆಸ್ಸೇತರ ಸರ್ಕಾರ ರಚನೆ ಮಾಡಿ ಮುಖ್ಯಮಂತ್ರಿ ಆದವರು ಎಂದರು.

ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ನಾರಾಯಣಗೌಡ ಮಾತನಾಡಿ, ಹೆಗಡೆರವರು ತಮ್ಮ ವಿರುದ್ಧ ಸಣ್ಣ ಆಪಾದನೆ ಬಂದ ಕೂಡಲೇ ರಾಜೀನಾಮೆ ನೀಡಿ ತಾವು ಮೌಲ್ಯಾಧಾರಿತ ರಾಜಕಾರಣಿ ಎಂಬುದನ್ನು ದೇಶಕ್ಕೆ ಸಾರಿದ್ದರು. ಈ ತರಹದ ಅಪರೂಪದ ರಾಜಕಾರಣಿಗಳು ನಮ್ಮ ರಾಜ್ಯಕ್ಕೆ ಮುಂದಿನ ದಿನಗಳಲ್ಲಿ ಅವಶ್ಯವಿದೆ ಎಂದು ಆಶಿಸಿದರು.

ಮೈಸೂರು ನಗರ ಮತ್ತು ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ.ಟಿ.ಪ್ರಕಾಶ್ ಮಾತನಾಡಿ, ಕರ್ನಾಟಕ ಕಂಡ ಸಜ್ಜನ ಹಾಗೂ ಮೌಲ್ಯಾಧಾರಿತ ರಾಜಕಾರಣಿ ದಿ.ರಾಮಕೃಷ್ಣ ಹೆಗಡೆಯವರು. ಇವರ ಅವಧಿಯಲ್ಲಿ ಕರ್ನಾಟಕ ಸಾಮಾಜಿಕ ಹಾಗೂ ಸಾಂಸ್ಕೃತಿಕ ಅಭಿವೃದ್ಧಿಯನ್ನು ಕಂಡಿತು. ಅಧಿಕಾರ ವಿಕೇಂದ್ರೀಕರಣ ವ್ಯವಸ್ಥೆಯನ್ನು ಬಲವಾಗಿ ನಂಬಿದ್ದ ಇವರು ರೈತರ, ದೀನ–ದಲಿತರ, ಶೋಷಿತರ ಧ್ವನಿಯಾಗಿದ್ದರು. ತಮ್ಮ ಗಂಭೀರ ನಡೆ–ನುಡಿಯಿಂದಾಗಿ ಇವರು ರಾಜ್ಯದ ಪ್ರತಿಯೊಬ್ಬರ ಕಣ್ಮಣಿಯಾಗಿದ್ದರು. ಆ ಸೂರ್ಯ, ಚಂದ್ರರು ಇರುವವರೆಗೂ ಇವರು ರಾಜ್ಯದ ರಾಜಕಾರಣದಲ್ಲಿ ವಿಶೇಷ ಸ್ಥಾನ ಹೊಂದಿರುತ್ತಾರೆ. ಅವರು ಪ್ರೀತಿಸುವ ಬಡವರಿಗೆ ಅಳಿಲು ಸೇವೆ ಮಾಡುವುದು ನಮಗೆಲ್ಲ ದೊರೆತ ಸೌಭಾಗ್ಯ ಎಂದು ಹೇಳಿದರು.

ಕೆ.ಆರ್.ಬ್ಯಾಂಕ್ ಉಪಾಧ್ಯಕ್ಷ ಬಸವರಾಜ್ ಬಸಪ್ಪ, ಕೆಪಿಸಿಸಿ ಸದಸ್ಯ ನಜರ್‌ಬಾದ್ ನಟರಾಜ್, ಇಂದಿರಾ ಗಾಂಧಿ ಬ್ಲಾಕ್ ಅಧ್ಯಕ್ಷ ಮಂಚೇಗೌಡನ ಕೊಪ್ಪಲು ರವಿ, ಜೆಡಿಎಸ್ ಕಾರ್ಯಾಧ್ಯಕ್ಷ ಪ್ರಕಾಶ್ ಪ್ರಿಯದರ್ಶನ, ಜೀವಧಾರ ರಕ್ತ ನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಜಿ ರಾಘವೇಂದ್ರ, ಅಜಯ್ ಶಾಸ್ತ್ರಿ, ವಿನಯ್ ಕಣಗಾಲ್, ಎಸ್.ಎನ್.ರಾಜೇಶ್, ರವಿಚಂದ್ರ, ಸುಚಿಂದ್ರ ಮತ್ತಿತರರು ಉಪಸ್ಥಿತರಿದ್ದರು.

### ಸಕ್ಕರೆ ನಗರದಲ್ಲಿ ಸಾಹಿತ್ಯ ಸಮ್ಮೇಳನ

## ಸಮ್ಮೇಳನಾಧ್ಯಕ್ಷರ ವರ್ಣರಂಜಿತ ಮೆರವಣಿಗೆ

ಮಂಡ್ಯ,ಆ.29– ಸಕ್ಕರೆ ನಗರ ಮಂಡ್ಯದಲ್ಲಿ ನಡೆಯಲಿರುವ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಸಮ್ಮೇಳನದ ಸರ್ವಾಧ್ಯಕ್ಷರ ಮೆರವಣಿಗೆಗೆ ವರ್ಣರಂಜಿತ ಆರಂಭ ನೀಡಲಾಗುವುದು ಎಂದು ಮೆರವಣಿಗೆ ಸಮಿತಿ ಅಧ್ಯಕ್ಷರೂ ಆದ ವಿಧಾನ ಪರಿಷತ್ ಸದಸ್ಯ ಮಧು ಜಿ.ಮಾದೇಗೌಡ ತಿಳಿಸಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಮೆರವಣಿಗೆ ಸಮಿತಿ ಸಭೆ ನಡೆಸಿ ಮಾತನಾಡಿದ ಅವರು, ಸಮ್ಮೇಳನಾಧ್ಯಕ್ಷರಿಗೆ ಗೌರವ ಸಲ್ಲಿಸುವುದೆಂದರೆ ಕನ್ನಡ ನಾಡು–ನುಡಿ ಸಾಹಿತ್ಯಕ್ಕೆ ಗೌರವ ಸಲ್ಲಿಸಿದಂತೆ. ಹಾಗಾಗಿ, ಮೆರವಣಿಗೆಯನ್ನು ಯಾವುದೇ ಲೋಪವಿಲ್ಲದಂತೆ ಅರ್ಥಪೂರ್ಣ, ಆಕರ್ಷಕ ಮತ್ತು ವೈಭವಯುತವಾಗಿ ಆಯೋಜಿಸಬೇಕು. ಮೆರವಣಿಗೆಯ ಯಶಸ್ಸೆ ಸಮ್ಮೇಳನದ ಯಶಸ್ಸು ಕೂಡ ಆಗಲಿದೆ ಎಂದು ಹೇಳಿದರು.

ನಗರದ ಸರ್ ಎಂ.ವಿಶ್ವೇಶ್ವರಯ್ಯರವರ ಪ್ರತಿಮೆ ಮುಂಭಾಗದಿಂದ ಸಮ್ಮೇಳನಾಧ್ಯಕ್ಷರ ಮೆರವಣಿಗೆ ಆರಂಭಿಸಬೇಕು. ಆರಂಭ ಸ್ಥಳದಿಂದ ಮುಖ್ಯ ವೇದಿಕೆವರೆಗೆ ಸುಮಾರು 6 ಕಿ.ಮೀ ದೂರವಿದ್ದು, ಕ್ರಮಿಸಲು 3 ರಿಂದ 4 ಗಂಟೆ ಸಮಯ ತೆಗೆದುಕೊಳ್ಳಲಿದೆ. ಕನ್ನಡ ಭಾಷೆಯನ್ನು ಮೆರೆಸುವಂತೆ ಮೆರವಣಿಗೆ ಇರಲಿದ್ದು ಸಂಪೂರ್ಣ ಕನ್ನಡಮಯವಾಗಿರಲಿದೆ. ಮೆರವಣಿಗೆ ಸಾಗುವ ದಾರಿಯುದ್ದಕ್ಕೂ ರಸ್ತೆ ಇಕ್ಕೆಲಗಳಲ್ಲಿ ಕನ್ನಡ ಬಾವುಟಗಳಿಂದ ಸಿಂಗಾರ ಮಾಡು


ಮೆರವಣಿಗೆ ಸಮಿತಿ ಸಭೆಯಲ್ಲಿ ಮಾತನಾಡುತ್ತಿರುವ ಮಧು ಜಿ.ಮಾದೇಗೌಡ

ವುದು ಹಾಗೂ ಕುಡಿಯುವ ನೀರು, ಕಬ್ಬಿನ ರಸ, ಮಜ್ಜಿಗೆ ಹಾಗೂ ಪಾನಕ ವ್ಯವಸ್ಥೆ ಮಾಡಲಾಗುವುದು ಎಂದು ತಿಳಿಸಿದರು.

ಕನ್ನಡದ ಅಸ್ಮಿತೆ ಸಾರುವಂತೆ ಸಮ್ಮೇಳನಾಧ್ಯಕ್ಷರ ರಥ ಅಲಂಕರಿಸಲಾಗುವುದು. ಮೆರವಣಿಗೆಯಲ್ಲಿ ಮಂಡ್ಯ ಜಿಲ್ಲೆ, ಹೊರ ಜಿಲ್ಲೆ, ಗಡಿನಾಡು ಜಿಲ್ಲೆ ಹಾಗೂ ಹೊರ ರಾಜ್ಯಗಳ ಕಲಾತಂಡಗಳಿಗೂ ಅವಕಾಶ ಕಲ್ಪಿಸಲಾಗುವುದು. ಕೀಲು ಕುದುರೆ, ಕರಡಿ ಮಜಲು, ಪೂಜಾ ಕುಣಿತ, ಚಂಡೆ ಕುಣಿತ, ತಮಟೆ, ಡೊಳ್ಳು ಕುಣಿತ, ಕೊಂಬು ಕಹಳೆ ಸೇರಿದಂತೆ ವಿವಿಧ ಪ್ರಕಾರಗಳ ಜನಪದ ಕಲಾವಿದರ ದಂಡು ಮೆರವಣಿಗೆಗೆ ಉತ್ಸಾಹ ಮತ್ತು ಶಕ್ತಿ ತುಂಬಲಿದ್ದಾರೆ. ಸಮ್ಮೇಳನದ ಸಮನ್ವಯ ಸಮಿತಿ ಅಧ್ಯಕ್ಷೆ ಮೀರಾ ಶಿವಲಿಂಗಯ್ಯ, ಸಮಿತಿಯ ಸದಸ್ಯ ಕಾರ್ಯದರ್ಶಿ ನಂದೀಶ್ ಹಾಜರಿದ್ದರು.

## ವ್ಯಾಪ್ತಿ ಮೀರಿ ಕಬ್ಬು ಕಟಾವು ಮಾಡಬೇಡಿ

### ಸಕ್ಕರೆ ಕಾರ್ಖಾನೆಗಳಿಗೆ ಡಿಸಿ ಡಾ.ಕುಮಾರ್ ಆದೇಶ

ಮಂಡ್ಯ,ಆ.29– ಜಿಲ್ಲೆಯಲ್ಲಿರುವ ಎಲ್ಲಾ ಸಕ್ಕರೆ ಕಾರ್ಖಾನೆಗಳು ಮ್ಯಾಪಿಂಗ್ ಆಗಿರುವ ಪ್ರದೇಶವನ್ನು ಹೊರತುಪಡಿಸಿ ಬೇರೆ ಪ್ರದೇಶದ ಕಬ್ಬನ್ನು ಕಟಾವು ಮಾಡಬಾರದು. ಈ ಕುರಿತು ಈಗಾಗಲೇ ಎಚ್ಚರಿಕೆ ನೀಡಲಾಗಿದೆ. ಇದನ್ನು ಮೀರಿದರೆ ಗಂಭೀರವಾಗಿ ಪರಿಗಣಿಸಲಾಗುವುದು ಎಂದು ಜಿಲ್ಲಾಧಿಕಾರಿ ಡಾ.ಕುಮಾರ ಎಚ್ಚರಿಸಿದರು.

ಗುರುವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಮಂಡ್ಯ ಜಿಲ್ಲೆಯ 2024ನೇ ಸಾಲಿನ ಸಕ್ಕರೆ ಕಾರ್ಖಾನೆಗಳ ಪ್ರಗತಿ ಪರಿಶೀಲನೆ ಹಾಗೂ ಇತರೆ ವಿಷಯಗಳ ಬಗ್ಗೆ ಸಭೆ ನಡೆಸಿ ಮಾತನಾಡಿದ ಅವರು, 2024–25ನೇ ಸಾಲಿನ ಸಕ್ಕರೆ ಕಾರ್ಖಾನೆಗೆ ಸಂಬಂಧಿಸಿದಂತೆ ಈಗಾಗಲೇ ಜಿಲ್ಲೆಯಲ್ಲಿರುವ 5 ಸಕ್ಕರೆ ಕಾರ್ಖಾನೆಗಳಲ್ಲಿ ಕಬ್ಬು ಅರೆಯುವ ಪ್ರಕ್ರಿಯೆ ನಡೆಯು


ಜಿಲ್ಲಾಧಿಕಾರಿ ಡಾ.ಕುಮಾರ ಸಕ್ಕರೆ ಕಾರ್ಖಾನೆಗಳ ಪ್ರಗತಿ ಪರಿಶೀಲನೆ ನಡೆಸಿದರು.

ತ್ತಿದೆ. ಕಾರ್ಖಾನೆಗಳು ತಮ್ಮ ವ್ಯಾಪ್ತಿ ಮೀರಿ ಕಬ್ಬನ್ನು ಖರೀದಿ ಮಾಡುತ್ತಿರುವ ಬಗ್ಗೆ ಸಾಕಷ್ಟು ದೂರು ಕೇಳಿ ಬರುತ್ತಿವೆ ಎಂದರು.

ಜಿಲ್ಲೆಯ 5 ಸಕ್ಕರೆ ಕಾರ್ಖಾನೆಗಳು ಒಗ್ಗೂಡಿ ಸಾಮರಸ್ಯದಿಂದ ಕಾರ್ಯನಿರ್ವಹಿಸಿ. ಜೊತೆಗೆ ರೈತರಿಗೆ ಸಕಾಲದಲ್ಲಿ ಎಫ್‌ಆರ್‌ಪಿ ಪ್ರಕಾರ 14 ದಿನದೊಳಗಾಗಿ ಕಬ್ಬು ಖರೀದಿ ವೆಚ್ಚವನ್ನು ಪಾವತಿಸಬೇಕು. ಮಂಡ್ಯ ಜಿಲ್ಲೆಗೆ ಹೊರ ಜಿಲ್ಲೆಯಿಂದ ಕಬ್ಬು ಕಟಾವು ಮಾಡಲು ಬರುವ ಕೂಲಿ ಕಾರ್ಮಿಕರಿಗೆ ಮೂಲಭೂತ ಸೌಕರ್ಯವನ್ನು ಕಲ್ಪಿಸುವುದು ಕಾರ್ಖಾನೆಯ ಮಾಲೀಕರ ಕರ್ತವ್ಯವಾಗಿದ್ದು, ಅವರಿಗೆ ಮೂಲಭೂತ ವ್ಯವಸ್ಥೆ ಕಲ್ಪಿಸಿ ಎಂದು ತಿಳಿಸಿದರು.

ಮೈಶುಗರ್ ಎಂಡಿ ಡಾ.ಹೆಚ್.ಎಲ್. ನಾಗರಾಜು ಮಾತನಾಡಿ, ಮೈಶುಗರ್ ಸಕ್ಕರೆ ಕಾರ್ಖಾನೆ ಸರ್ಕಾರಿ ಸ್ವಾಮ್ಯದ ಕಾರ್ಖಾನೆಯಾಗಿದ್ದು, ಸೇವಾವಲಯದಲ್ಲಿ ಕಾರ್ಯನಿರ್ವಹಿಸಲಾಗುತ್ತಿದೆ. ಸೆಪ್ಟೆಂಬರ್ ಅಂತ್ಯದೊಳಗೆ 2.50 ಲಕ್ಷ ಟನ್ ಕಬ್ಬು ಅರೆಯುವ ಗುರಿ ಹೊಂದಲಾಗಿದೆ. ಈ ಕಬ್ಬು ಅರೆದ ನಂತರ ಉಳಿದರೆ ಮೈಶುಗರ್ ವ್ಯಾಪ್ತಿಯ ಕಬ್ಬನ್ನು ಬೇರೆ ಆಸಕ್ತ ಕಬ್ಬು ಕಾರ್ಖಾನೆಗೆ ನೀಡಲಾಗುವುದು ಎಂದರು. ಇದಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿ, ಐಸಿಎಲ್, ಚಾಂಶುಗರ್ ಸೇರಿದಂತೆ ಬೇರೆ ಕಾರ್ಖಾನೆಯ ಕಬ್ಬು ಕಟಾವು ಕಾರ್ಮಿಕರು ಒಟ್ಟು 100 ಬ್ಯಾಚನ್ನು 15 ದಿನಗಳ ಕಾಲ ಮೈಶುಗರ್ ಕಬ್ಬು ಕಟಾವಿಗೆ ನಿಯೋಜಿಸಿಕೊಡುವಂತೆ ತಿಳಿಸಿದರು.

ಸಭೆಯಲ್ಲಿ ಶಾಸಕ ಎ.ಬಿ.ರಮೇಶ್‌ಬಾಬು ಬಂಡಿಸಿದ್ದೇಗೌಡ, ಮೈಶುಗರ್ ಅಧ್ಯಕ್ಷ ಸಿ.ಡಿ.ಗಂಗಾಧರ್, ಜಿ.ಪಂ. ಸಿಇಓ ಶೇಖ್ ತನ್ವೀರ್ ಆಸೀಫ್, ಆಹಾರ ಇಲಾಖೆಯ ಉಪ ನಿರ್ದೇಶಕ ಕೃಷ್ಣಕುಮಾರ್, ಕೃಷಿ ಇಲಾಖೆ ಜಂಟಿ ನಿರ್ದೇಶಕ ಅಶೋಕ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಚಿನಕುರಳಿಯ ಎಸ್‌ಟಿಜಿ ಶಿಕ್ಷಣ ಸಂಸ್ಥೆಗೆ ಅಮೇರಿಕಾ ವಿವಿ ಡೀನ್, ಪ್ರೊಫೆಸರ್‌ಗಳು ಭೇಟಿ

### ವಿದ್ಯಾರ್ಥಿ ವಿನಿಮಯ ಕಾರ್ಯಕ್ರಮ ಸಂಬಂಧ ವಾರಗಳ ಕಾಲ ವಾಸ್ತವ್ಯ, ಪರಿಶೀಲನೆ

ಚಿನಕುರಳಿ,ಆ.29–ಚಿನಕುರಳಿಯ ಎಸ್‌ಟಿಜಿ ಶಿಕ್ಷಣ ಸಂಸ್ಥೆ ಮತ್ತು ಅಮೇರಿಕಾದ ಸಾಗಿನಾವ ವಿಶ್ವವಿದ್ಯಾಲಯದ ವಿದ್ಯಾರ್ಥಿ ವಿನಿಮಯ ಕಾರ್ಯಕ್ರಮದ ಅಂಗವಾಗಿ ಅಮೇರಿಕಾದ ಸಾಗಿನಾವ ವಿಶ್ವವಿದ್ಯಾಲಯದ ಡೀನ್, ಪ್ರೊಫೆಸರ್‌ಗಳು ಎಸ್‌ಟಿಜಿ ಶಿಕ್ಷಣ ಸಂಸ್ಥೆಗೆ ಭೇಟಿ ನೀಡಿ ಶಾಲೆಯಲ್ಲಿ ನಡೆದ ತರಗತಿಗಳು, ಸಾಂಸ್ಕೃತಿಕ ಹಾಗೂ ಪಠ್ಯೇತರ ಚಟುವಟಿಕೆಗಳನ್ನು ವೀಕ್ಷಿಸಿದರು.

ಸಾಗಿನಾವ ವಿಶ್ವವಿದ್ಯಾಲಯದ ಡೀನ್, ಪ್ರೊಫೆಸರ್‌ಗಳು ಒಂದು ವಾರಗಳ ಕಾಲ ಶಾಲೆಗೆ ಭೇಟಿ ನೀಡಿ ಶಾಲೆಯ ಗ್ರಂಥಾಲಯ, ವಿಜ್ಞಾನ, ಗಣಿತ ಮತ್ತು ಕಂಪ್ಯೂಟರ್ ಪ್ರಯೋಗಾಲಯ ವೀಕ್ಷಣೆ ಮಾಡುವುದರ ಜೊತೆಗೆ ಸಹಪಠ್ಯ ಚಟುವಟಿಕೆಗಳಾದ ಈಜು, ಕರಾಟೆ, ಡ್ರಾಮಾ, ಸಂಗೀತ, ನೃತ್ಯ ಮುಂತಾದವುಗಳನ್ನು ವೀಕ್ಷಿಸಿ ಶಾಲೆಯಲ್ಲಿರುವ ಸೌಲಭ್ಯಗಳ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ನಂತರ ತರಗತಿಗಳಿಗೆ ಭೇಟಿ ನೀಡಿ ಶಿಕ್ಷಕರ ಬೋಧನಾ ವಿಧಾನವನ್ನು ವೀಕ್ಷಿಸಿ ಶಿಕ್ಷಕರ ಬಗ್ಗೆ ಪ್ರಶಂಸೆ ವ್ಯಕ್ತಪಡಿಸಿದರು.


ಚಿನಕುರಳಿಯ ಎಸ್‌ಟಿಜಿ ಶಿಕ್ಷಣ ಸಂಸ್ಥೆಗೆ ಅಮೇರಿಕಾದ ಸಾಗಿನಾವ ವಿಶ್ವವಿದ್ಯಾಲಯದ ಡೀನ್, ಪ್ರೊಫೆಸರ್‌ಗಳು ಭೇಟಿಕೊಟ್ಟು ಮಕ್ಕಳೊಂದಿಗೆ ಸಂವಾದ ನಡೆಸಿದರು.

ವಿದ್ಯಾರ್ಥಿಗಳೊಂದಿಗೆ ಕಲಿಕೆಯ ಬಗ್ಗೆ ಸಂವಾದ ನಡೆಸಿದರು. ವಿದ್ಯಾರ್ಥಿಗಳು ಸಹ ಅಮೇರಿಕಾ ಶಿಕ್ಷಣ ಪದ್ಧತಿಯ ಬಗ್ಗೆ ಹಲವಾರು ಪ್ರಶ್ನೆಗಳನ್ನು ಕೇಳುವ ಮೂಲಕ ಅಂತರರಾಷ್ಟ್ರೀಯ ಶಿಕ್ಷಣ ಪದ್ಧತಿಯ ಬಗ್ಗೆ ತಿಳಿದುಕೊಂಡರು. ನಂತರ ಶಿಕ್ಷಕರೊಂದಿಗೆ ಸಂವಾದ ಕಾರ್ಯಕ್ರಮ ನಡೆಸಿದರು, ಬಳಿಕ ಎಸ್‌ಟಿಜಿ ಪ್ರಥಮ ದರ್ಜೆ ಕಾಲೇಜು ಹಾಗೂ ಪದವಿ ಪೂರ್ವ ಕಾಲೇಜಿಗೂ ಭೇಟಿ ನೀಡಿ ತರಗತಿಗಳಿಗೆ ತೆರಳಿ ಮಕ್ಕಳು ಹಾಗೂ ಉಪನ್ಯಾಸಕರೊಂದಿಗೆ ಸಂವಾದ ನಡೆಸಿದರು.

ಎಸ್‌ಟಿಜಿ ಶಾಲೆಯು ಗ್ರಾಮೀಣ ಪ್ರದೇಶದಲ್ಲಿ ಸ್ಥಾಪಿತವಾಗಿ ಕಲಿಕೆಗೆ ಪೂರಕವಾದ ಉತ್ತಮ ಸೌಲಭ್ಯಗಳನ್ನು ಒದಗಿಸಿ ಗುಣಮಟ್ಟದ ಶಿಕ್ಷಣ ನೀಡುತ್ತಿರುವ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು. ಅಲ್ಲದೆ ಸಹಪಠ್ಯ ಚಟುವಟಿಕೆಗಳಿಗೂ ಆದ್ಯತೆ ನೀಡುವ ವಿದ್ಯಾರ್ಥಿಗಳ ಪ್ರತಿಭೆಯನ್ನು ಹೊರಹೊಮ್ಮಿಸಲು ಶ್ರಮಿಸುತ್ತಿರುವುದು ನಿಜಕ್ಕೂ ಶ್ಲಾಘನೀಯ ಎಂದರು.

ಗ್ರಾಮೀಣ ಪ್ರದೇಶದಲ್ಲಿ ಇಂತಹ ಒಂದು ಉತ್ತಮ ವಿದ್ಯಾಸಂಸ್ಥೆಯನ್ನು ಪ್ರಾರಂಭಿಸಿ ವಿದ್ಯಾರ್ಥಿಗಳು ಅಂತರರಾಷ್ಟ್ರೀಯ ಮಟ್ಟದ ಶಿಕ್ಷಣ ಪಡೆದುಕೊಳ್ಳುವ ಜತೆಗೆ ತಮ್ಮ ಉಜ್ವಲ ಭವಿಷ್ಯ ರೂಪಿಸಿಕೊಳ್ಳಲು ಸಹಕಾರಿಯಾಗಿರುವ ಸಂಸ್ಥೆಯ ಅಧ್ಯಕ್ಷರು, ಮಾಜಿ ಸಚಿವರಾದ ಸಿ.ಎಸ್. ಪುಟ್ಟರಾಜು ಹಾಗೂ ಸಿಇಓ ಸಿ.ಪಿ.ಶಿವರಾಜು ಅವರ ಕಾರ್ಯದ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದ ಅವರು, ಎಸ್‌ಟಿಜಿ ಶಿಕ್ಷಣ ಸಂಸ್ಥೆಯೊಂದಿಗೆ ನಮ್ಮ ಯೂನಿವರ್ಸಿಟಿ 'ವಿದ್ಯಾರ್ಥಿ ವಿನಿಮಯ ಕಾರ್ಯಕ್ರಮ' ಅಡಿಯಲ್ಲಿ ಒಪ್ಪಂದಕ್ಕೆ ಸಹಿ ಹಾಕಿರುವುದು ಸಂತಸ ತಂದಿದೆ ಎಂದರು.

ಈ ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ್ಷರು, ಮಾಜಿ ಸಚಿವರಾದ ಸಿ.ಎಸ್.ಪುಟ್ಟರಾಜು, ಸಿಇಓ ಸಿ.ಪಿ.ಶಿವರಾಜು, ತನುಶ್ರೀ ಶಿವರಾಜು, ಆಡಳಿತಾಧಿಕಾರಿ ನಿವೇದಿತಾ ನಾಗೇಶ್, ಪ್ರಾಂಶುಪಾಲರಾದ ಮಾಚಮ್ಮ, ಮಾರುತಿ.ಟಿ, ನಿಶಾಂತ್.ಎ.ನಾಯ್ಡು, ಉಪನ್ಯಾಸಕರು, ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಇದ್ದರು.

## ಶಾರ್ಟ್ ಕೋರ್ಸ್ ಈಜು ಸ್ಪರ್ಧೆಗಳ ಚಾಂಪಿಯನ್‌ಶಿಪ್

**ಮಂಡ್ಯ:** ಜನತಾ ಶಿಕ್ಷಣ ಟ್ರಸ್ಟ್ ಮತ್ತು ಕರ್ನಾಟಕ ಈಜು ಸಂಸ್ಥೆ (ಬೆಂಗಳೂರು) ಆಶ್ರಯದಲ್ಲಿ ದಕ್ಷಿಣ ರಾಜ್ಯಗಳ ಶಾರ್ಟ್ ಕೋರ್ಸ್ ಈಜು ಸ್ಪರ್ಧೆಗಳ ಚಾಂಪಿಯನ್‌ಶಿಪ್–2024 ಆ.30ರಿಂದ ಸೆ. 1ರವರೆಗೆ ಮಂಡ್ಯದ ಪಿಇಟಿ ಈಜು ಕೇಂದ್ರದಲ್ಲಿ ನಡೆಯಲಿದೆ ಎಂದು ಪಿಇಟಿ ಸಂಸ್ಥೆಯ ನಿರ್ದೇಶಕ ಡಾ.ರಾಮಲಿಂಗಯ್ಯ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆ.30ರಂದು ಬೆಳಿಗ್ಗೆ 11 ಗಂಟೆಗೆ ಜನತಾ ಶಿಕ್ಷಣ ಟ್ರಸ್ಟ್ ಅಧ್ಯಕ್ಷ ಕೆ.ಎಸ್. ವಿಜಯ್ ಆನಂದ್ ಅವರ ಅಧ್ಯಕ್ಷತೆಯಲ್ಲಿ ಅಂತರರಾಷ್ಟ್ರೀಯ ಪ್ಯಾರಾ ಈಜುಪಟು ಕೆಎಸ್ ವಿಶ್ವಾಸ್ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ಈ ಸಂದರ್ಭದಲ್ಲಿ ಜನತಾ ಶಿಕ್ಷಣ ಟ್ರಸ್ಟ್ ಉಪಾಧ್ಯಕ್ಷ ಬಸವಯ್ಯ, ಕಾರ್ಯದರ್ಶಿ ಶಿವಪ್ರಸಾದ್, ಖಜಾಂಚಿ ರವಿಶಂಕರ್ ಉಪಸ್ಥಿತರಿರುವರು ಎಂದರು.

ಸೆ1ರಂದು ಸಂಜೆ 4 ಗಂಟೆಗೆ ಜನತಾ ಶಿಕ್ಷಣ ಟ್ರಸ್ಟ್ ಕಾರ್ಯದರ್ಶಿ ಶಿವಪ್ರಸಾದ್ ಅವರ ಅಧ್ಯಕ್ಷತೆಯಲ್ಲಿ ನಡೆಯಲಿರುವ ಸಮಾರೋಪ ಸಮಾರಂಭದಲ್ಲಿ ವಿಜೇತ ಸ್ಪರ್ಧಾಳುಗಳಿಗೆ ಸಂಸ್ಥೆಯ ಉಪಾಧ್ಯಕ್ಷ ಟಿಡಿ ವಿಜಯ ರಾಘವನ್ ಬಹುಮಾನ ವಿತರಿಸಲಿದ್ದಾರೆ. ಈ ಸಂದರ್ಭದಲ್ಲಿ ಜನತಾ ಶಿಕ್ಷಣ ಟ್ರಸ್ಟ್ ಉಪಾಧ್ಯಕ್ಷ ಶ್ರೀಧರ್, ಕರ್ನಾಟಕ ಈಜು ಸಂಸ್ಥೆ ಗೌರವ ಕಾರ್ಯದರ್ಶಿ ಸತೀಶ್ ಕುಮಾರ್ ಉಪಸ್ಥಿತರಿರಲಿದ್ದಾರೆ ಎಂದರು.

## ರಾಷ್ಟ್ರೀಯ ಬಾಚಿ ವಿಶೇಷ ಕ್ರೀಡಾಕೂಟಕ್ಕೆ ಆಯ್ಕೆ

ಕೆ.ಆರ್.ಪೇಟೆ,ಆ.29–ದಾವಣಗೆರೆಯ ನೇತಾಜಿ ಸುಭಾಷ್ ಚಂದ್ರ ಬೋಸ್ ಒಳಾಂಗಣ ಕ್ರೀಡಾಂಗಣದಲ್ಲಿ ಸ್ಪೆಷಲ್ ಒಲಂಪಿಕ್ಸ್ ಭಾರತ್–ಕರ್ನಾಟಕ ಸಂಸ್ಥೆಯು ಆಯೋಜಿಸಿದ್ದ ರಾಜ್ಯ ಮಟ್ಟದ ಕಡಿಮೆ ಸಾಮರ್ಥ್ಯವುಳ್ಳ ವಿಶೇಷಚೇತನ ಮಕ್ಕಳ ವಿಶೇಷ ಕ್ರೀಡಾಕೂಟದಲ್ಲಿ ಕೆ.ಆರ್.ಪೇಟೆ ತಾಲೂಕಿನ ಗಂಜಿಗೆರೆಯ ಶ್ರೀ ಲಕ್ಷ್ಮೀ ಭೂವರಹನಾಥಸ್ವಾಮಿ ಬುದ್ಧಿ ಮಾಂದ್ಯ ಮಕ್ಕಳ ಶಾಲೆಯ ವಿದ್ಯಾರ್ಥಿನಿ ಮಂಜುಳಾ ಪ್ರಥಮ ಸ್ಥಾನ ಪಡೆದು ಸೆ.5 ರಿಂದ ಮಧ್ಯಪ್ರದೇಶದ ಗ್ವಾಲಿಯರ್ ನಲ್ಲಿ ನಡೆಯುವ ರಾಷ್ಟ್ರೀಯ ಬಾಚಿ ವಿಶೇಷ



ಕ್ರೀಡಾಕೂಟಕ್ಕೆ ಆಯ್ಕೆಯಾಗಿದ್ದಾರೆ.

ಜೊತೆಗೆ ಈಕೆಗೆ ತರಬೇತಿ ಕೋಚ್ ಆಗಿ ಶಿಕ್ಷಕಿ ಪ್ರೀತಿ ಆಯ್ಕೆಯಾಗಿದ್ದಾರೆ ಎಂದು ಗಂಜಿಗೆರೆಯ ಶ್ರೀಮಹಾಲಿಂಗೇಶ್ವರ ವಿದ್ಯಾ ಸಂಸ್ಥೆಯ ವತಿಯಿಂದ ನಡೆಯುತ್ತಿರುವ ಶ್ರೀ ಲಕ್ಷ್ಮೀ ಭೂವರಹನಾಥಸ್ವಾಮಿ ಬುದ್ಧಿ ಮಾಂದ್ಯ ಮಕ್ಕಳ ಶಾಲೆಯ ಪ್ರಕಟಣೆ ತಿಳಿಸಿದೆ.

### ಗೌರಮ್ಮ ನಿಧನ

ಕೆ.ಆರ್.ಪೇಟೆ,ಆ.29–ತಾಲೂಕಿನ ಅಗ್ರಹಾರ ಬಾಚಹಳ್ಳಿ ಗ್ರಾಮದ ಲೇಟ್ ದೇವೇಗೌಡರ ಧರ್ಮಪತ್ನಿ ಗೌರಮ್ಮ(80) ಗುರುವಾರ ನಿಧನರಾದರು. ಮೃತರು ಇಬ್ಬರು ಪುತ್ರರು, ಇಬ್ಬರು ಪುತ್ರಿಯರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ

ಮೃತರ ಅಂತ್ಯಕ್ರಿಯೆಯು ನಾಳೆ (ಶುಕ್ರವಾರ) ಮಧ್ಯಾಹ್ನ 12ಗಂಟೆಗೆ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ



### ತಮ್ಮಣ್ಣಗೌಡ

ಭಾರತೀನಗರ, ಆ.29– ಭಾರತೀನಗರದ ಪತ್ರಕರ್ತ ರವಿ ಸಾವಂದಿಪುರ ಹಾಗೂ ಪತ್ರಕರ್ತ ಕೃಷ್ಣ ಸಾವಂದಿಪುರ ಅವರ ತಂದೆ ತಮ್ಮಣ್ಣಗೌಡ (70) ಗುರುವಾರ ಮಧ್ಯಾಹ್ನ ಅನಾರೋಗ್ಯದಿಂದ ನಿಧನರಾಗಿದ್ದಾರೆ.



ಮೃತರ ಅಂತ್ಯಕ್ರಿಯೆ ನಾಳೆ (ಶುಕ್ರವಾರ) ಮಧ್ಯಾಹ್ನ 12.30 ಗಂಟೆಗೆ ಮಳವಳ್ಳಿ ತಾಲೂಕು ಸಾವಂದಿಪುರ ಗ್ರಾಮದಲ್ಲಿ ನಡೆಯಲಿದೆ

ಮೃತರು ಪತ್ನಿ, ಇಬ್ಬರು ಪುತ್ರರು ಹಾಗೂ ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧುಮಿತ್ರರನ್ನು ಅಗಲಿದ್ದಾರೆ.

## ಸಂಸ್ಕೃತ ಪದ ಪರಿಚಯಿಸುವ ವಿನೂತನ ಕಾರ್ಯಕ್ರಮ

### ಗಣಕ ಯಂತ್ರಕ್ಕೆ ಆಂಗ್ಲ ಭಾಷೆಗಿಂತಲೂ ಹೆಚ್ಚು ಹೊಂದುವ ಭಾಷೆ ಸಂಸ್ಕೃತ; ಶ್ರೀ ವ್ಯಾಸತೀರ್ಥ ವಿದ್ಯಾಪೀಠದ ಪ್ರಾಚಾರ್ಯ ಡಾ.ಶ್ರೀನಿಧಿ ಪ್ಯಾಟಿ

ಮೈಸೂರು, ಆ.29(ಪಿಎಂ)– ಸಂಸ್ಕೃತ ಮಾಸಾಚರಣೆ ನಿಮಿತ್ತ ನಗರದ ಶ್ರೀವ್ಯಾಸ ತೀರ್ಥ ವಿದ್ಯಾಪೀಠದ ವತಿಯಿಂದ ಮೈಸೂರಿನ ಜೆಪಿ ನಗರದಲ್ಲಿರುವ ವಿಠಲ ಧಾಮದಲ್ಲಿ 'ಸಂಸ್ಕೃತ ಆಪಣ ಪ್ರದರ್ಶಿನಿ' ವಿನೂತನ ಕಾರ್ಯಕ್ರಮ ನಡೆಯಿತು.

ಸಂಸ್ಕೃತ ಪದಗಳನ್ನು ಪರಿಚಯಿಸುವ ನಿಟ್ಟಿನಲ್ಲಿ ಹಮ್ಮಿಕೊಂಡಿದ್ದ ಈ ಕಾರ್ಯಕ್ರಮದಲ್ಲಿ ಮಾತನಾಡಿದ ಶ್ರೀ ವ್ಯಾಸ ತೀರ್ಥ ವಿದ್ಯಾಪೀಠದ ಪ್ರಾಚಾರ್ಯ ಡಾ. ಶ್ರೀನಿಧಿ ಪ್ಯಾಟಿ, ಆಪಣ ಎಂದರೆ ಸಂಸ್ಕೃತದಲ್ಲಿ ವ್ಯಾಪಾರ ಮಳಿಗೆ ಎಂದು ಅರ್ಥ ಎಂದರು. ವ್ಯಾಸತೀರ್ಥ ವಿದ್ಯಾಪೀಠದ ವಿದ್ಯಾರ್ಥಿಗಳು ದಿನನಿತ್ಯ ಬಳಸುವ ಹಣ್ಣು, ತರಕಾರಿ, ದಿನಸಿ ಪದಾರ್ಥಗಳ ಸಂಸ್ಕೃತ ಹೆಸರನ್ನು ಪರಿಚಯಿಸುವ ದೃಷ್ಟಿಯಿಂದ ವ್ಯಾಪಾರ ಮಳಿಗೆಯನ್ನು ನಿರ್ಮಿಸಿ ಅಲ್ಲಿ ಪ್ರತಿಯೊಂದು ಪದಾರ್ಥಗಳಿಗೆ ಸಂಸ್ಕೃತ ಹೆಸರನ್ನು ಫಲಕಗಳಲ್ಲಿ ಬರೆದು ಪ್ರದರ್ಶನ ಮಾಡಿ ಜನರಿಗೆ ಅರಿವು ಮೂಡಿಸಿರುವುದು


ಮೈಸೂರಿನ ಜೆಪಿ ನಗರದ ವಿಠಲಧಾಮದಲ್ಲಿ 'ಸಂಸ್ಕೃತ ಆಪಣ ಪ್ರದರ್ಶಿನಿ' ಎಂಬ ವಿನೂತನ ಕಾರ್ಯಕ್ರಮ ನಡೆಯಿತು.

ಮಾದರಿ ಕಾರ್ಯ ಎಂದು ಹೇಳಿದರು.

ಸಂಸ್ಕೃತ ನಮ್ಮ ಅಖಂಡ ಭಾರತ ನೆಲದ ಮೂಲ ಭಾಷೆ. ಸಂಸ್ಕೃತ ವಿಶ್ವದ ಬಹುತೇಕ ಭಾಷೆಗಳ ಜನನಿ. ಗಣಕ ಯಂತ್ರಕ್ಕೆ ಆಂಗ್ಲಭಾಷೆಗಿಂತಲೂ ಅತಿ ಹೆಚ್ಚಿನ ರೀತಿಯಲ್ಲಿ ಹೊಂದುವ ಮಹತ್ವ ಪಡೆದ ಭಾಷೆ. ಇದನ್ನು ಸಾಮಾನ್ಯ ಜನರಿಗೂ ಪರಿಚಯಿಸುವುದು ಇಂದಿನ ಅಗತ್ಯ ಹಾಗೂ ನಮ್ಮ ಕರ್ತವ್ಯವಾಗಿದೆ ಎಂದು ತಿಳಿಸಿದರು.

**ಬಹುಮಾನ:** ವಿದ್ಯಾಪೀಠದ 15ಕ್ಕೂ ಹೆಚ್ಚು ವಿದ್ಯಾರ್ಥಿಗಳು ವಿವಿಧ ಮಳಿಗೆಗಳಲ್ಲಿ ಕಾರ್ಯನಿರ್ವಹಿಸಿ ಗಮನ ಸೆಳೆದರು. ಪ್ರದರ್ಶಿನಿಯನ್ನು ನೋಡಿ ಐದು ಪದಾರ್ಥದ ಸಂಸ್ಕೃತದ ಹೆಸರನ್ನು ಹೇಳಿದ ಸಾರ್ವಜನಿಕರಿಗೆ ವಿಶೇಷ ಬಹುಮಾನವನ್ನು ಕೊಡಲಾಯಿತು. ಅನೇಕ ಜನರು ಉತ್ಸಾಹದಿಂದ ಭಾಗವಹಿಸಿ ಸಂಸ್ಕೃತದ ಹೆಸರುಗಳನ್ನು ಕೇಳಿ, ಉಚ್ಚಾರಣೆ ಮಾಡಿ, ಅರ್ಥ ತಿಳಿದು ಸಂಭ್ರಮಿಸಿದರು.

### ಅಭಿನಂದನೆ


ಮೈಸೂರು ನಗರದ ಅವಾಂತ ಬಿಕೆಜಿ ಆಸ್ಪತ್ರೆಯ ವ್ಯವಸ್ಥಾಪಕ ನಿರ್ದೇಶಕ ಮತ್ತು ಹಿರಿಯ ಆರ್ಥೋಪೆಡಿಕ್ಸ್, ರೋಬೋಟಿಕ್ ಮೊಣಕಾಲು ಬದಲಿ ಶಸ್ತ್ರ ಚಿಕಿತ್ಸಕ ಡಾ. ಟಿ.ಎನ್.ಬಾಲಕೃಷ್ಣೇಗೌಡ ಅವರಿಗೆ ಏಷ್ಯಾ ನೆಟ್ ಸುವರ್ಣ ಮಲೇಷ್ಯಾ ಇಂಡಿಯಾ ಇಂಟರ್‌ನ್ಯಾಷನಲ್ ಐಕಾನಿಕ್ ಪ್ರಶಸ್ತಿ ಲಭಿಸಿದ ಹಿನ್ನೆಲೆಯಲ್ಲಿ ಅವರನ್ನು ಎಸ್‌ಬಿಎಂ ಮಂಜು ಸ್ನೇಹ ಬಳಗದ ವತಿಯಿಂದ ಅಭಿನಂದಿಸಲಾಯಿತು. ಮೈಸೂರು ಮಹಾನಗರ ಪಾಲಿಕೆ ಮಾಜಿ ಸದಸ್ಯ ಎಸ್‌ಬಿಎಂ ಮಂಜು, ಬಳಗದ ಅಧ್ಯಕ್ಷ ಮಹಾದೇವ್, ರಾಮಕೃಷ್ಣ, ಸತೀಶ್ ಇನ್ನಿತರರು ಈ ವೇಳೆ ಉಪಸ್ಥಿತರಿದ್ದರು.

## ರಾಜಕೀಯ ಅಸ್ತಿತ್ವ ಉಳಿಸಿಕೊಳ್ಳಲು ಛಲವಾದಿ ನಾರಾಯಣ ಸ್ವಾಮಿ ಹೇಳಿಕೆ

ಮೈಸೂರು, ಆ.29(ಜಿಎ)–ಛಲವಾದಿ ನಾರಾಯಣಸ್ವಾಮಿ ಅವರು ತಮ್ಮ ರಾಜಕೀಯ ಅಸ್ತಿತ್ವ ಉಳಿಸಿಕೊಳ್ಳಲು ಬಿ.ಜೆ.ಪಿ. ನಾಯಕರ ಮನವೊಲಿಸಿಕೊಳ್ಳಲು ದಲಿತ ನಾಯಕ ನಿಷ್ಠಾವಂತ ಕಾಂಗ್ರೆಸ್ಸಿಗ ಮಲ್ಲಿಕಾರ್ಜುನ ಖರ್ಗೆಯವರ ಕುಟುಂಬದ ವಿರುದ್ಧ ಆರೋಪ ಮಾಡುತ್ತಿರುವುದು ರಾಜಕೀಯ ಷಡ್ಯಂತ್ರ ಎಂದು ಕಾಂಗ್ರೆಸ್ ವಕ್ತಾರ ಎಸ್.ರಾಜೇಶ್ ಆರೋಪಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿದ್ಧಾರ್ಥ ವಿಹಾರ ಟ್ರಸ್ಟ್‌ಗೆ ಕೆಐಎಡಿಬಿ ವತಿಯಿಂದ ಸಿಎ ನಿವೇಶನ ನೀಡಿರುವುದು ಕಾನೂನುಬದ್ಧವಾಗಿರುತ್ತದೆ. ಈ ನಿವೇಶನವನ್ನು ಪಡೆಯಲು ಸಿದ್ಧಾರ್ಥ ವಿಹಾರ ಟ್ರಸ್ಟ್ ಅರ್ಹ ಸಂಸ್ಥೆಯಾಗಿದ್ದು, ಧಾರ್ಮಿಕ ಹಾಗೂ ಸಾಮಾಜಿಕ, ಶಿಕ್ಷಣ ಕಾರ್ಯ ಚಟುವಟಿಕೆಗಳನ್ನು ಕೈಗೊಳ್ಳುವ ಸಂಸ್ಥೆಯಾಗಿದೆ ಎಂದರು. ಸುದ್ದಿಗೋಷ್ಠಿಯಲ್ಲಿ ಶ್ರೀನಿವಾಸ್, ಎಸ್.ಎ. ರಹೀಂ, ನುಜುಂಡಸ್ವಾಮಿ, ಸಯ್ಯದ್ ಫಾರುಕ್, ಕುರುಬಾರಹಳ್ಳಿ ಪ್ರಕಾಶ ಉಪಸ್ಥಿತರಿದ್ದರು.

### ಭೂ ಪರಿಹಾರ ನೀಡದ ಸಂಬಂಧ ಕೋರ್ಟ್ ಆದೇಶದ ಮೇರೆಗೆ

## ಕೆಐಎಡಿಬಿ ವಿಶೇಷ ಭೂ ಸ್ವಾಧೀನಾಧಿಕಾರಿ ಕಚೇರಿ ಸಾಮಗ್ರಿ ಜಪ್ತಿ

ಮೈಸೂರು,ಆ.29(ಪಿಎಂ)– ಭೂ ಪರಿಹಾರ ನೀಡದ ಸಂಬಂಧ ಕೋರ್ಟ್ ಆದೇಶದ ಮೇರೆಗೆ ಮೈಸೂರಿನ ಮೇಟಗಳ್ಳಿಯ ಕೆಆರ್‌ಎಸ್ ರಸ್ತೆಯಲ್ಲಿರುವ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ (ಕೆಐಎಡಿಬಿ) ಮೈಸೂರು ವಲಯ ಕಚೇರಿಯ ವಿಶೇಷ ಭೂ ಸ್ವಾಧೀನಾಧಿಕಾರಿಯವರ ಕಚೇರಿಯ ಸಾಮಗ್ರಿಗಳನ್ನು ಗುರುವಾರ ಜಪ್ತಿ ಮಾಡಲಾಯಿತು.

ಮೈಸೂರಿನ ಎರಡನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಲಯದ ಆದೇಶದ ಮೇರೆಗೆ ಸದರಿ ಕಚೇರಿಯ ಜೆರಾಕ್ಸ್ ಯಂತ್ರ, ಕಂಪ್ಯೂಟರ್, ಚೇರ್, ಟೇಬಲ್‌ಗಳು ಸೇರಿದಂತೆ ಇನ್ನಿತರ ಪೀಠೋಪಕರಣಗಳನ್ನು ಜಪ್ತಿ ಮಾಡಲಾಯಿತು.

ಮೈಸೂರು ತಾಲೂಕು ಮರಶೆ ಗ್ರಾಮದ ಸರ್ವೆ ನಂ.111, 112 ಮತ್ತು 118ರಲ್ಲಿ 15.33 ಎಕರೆಯ ಜಮೀನಿನಲ್ಲಿ ರಚಿತವಾಗಿದ್ದ ಮೈಸೂರು ನಿವಾಸಿ ಕೆ.ರಾಮಸ್ವಾಮಿ ಅವರ ಬಾಬ್ತು ಖಾಸಗಿ ಬಡಾವಣೆ ಹಾಗೂ ಅದರದಲ್ಲಿ ಕಟ್ಟಿದ್ದ ಮನೆಗಳು ಹಾಗೂ ಅಶ್ವಿನಿ ರೆಸಾರ್ಟ್ಸ್ ಕಟ್ಟಡಗಳ ಸಮೇತ ಕೆಐಎಡಿಬಿ ಭೂ ಸ್ವಾಧೀನಪಡಿಸಿಕೊಂಡು 2007ರ ಫೆ.20ರಲ್ಲಿ ಮೈಸೂರು ವಿಮಾನ ನಿಲ್ದಾಣಕ್ಕೆ ಹಸ್ತಾಂತರ ಮಾಡಿತ್ತು. ಈ ಸಂಬಂಧ ಸೂಕ್ತ ಪರಿಹಾರಕ್ಕಾಗಿ ಭೂ



ಕೆಐಎಡಿಬಿ ವಿಶೇಷ ಭೂ ಸ್ವಾಧೀನಾಧಿಕಾರಿ ಕಚೇರಿಯ ಸಾಮಗ್ರಿಗಳನ್ನು ಗುರುವಾರ ಜಪ್ತಿ ಮಾಡಲಾಯಿತು.

ಮಾಲೀಕ ಕೆ.ರಾಮಸ್ವಾಮಿ ಕೋರ್ಟ್ ಮೊರೆ ಹೋಗಿದ್ದಾರೆ.

ಪ್ರಕರಣ ಸಂಬಂಧ 'ಮೈಸೂರು ಮಿತ್ರ'ನಿಗೆ ಮಾಹಿತಿ ನೀಡಿದ ಕೆ.ರಾಮಸ್ವಾಮಿ ಪರ ವಕೀಲ ಜೆರಾಲ್ಡ್ ಕ್ಯಾಸ್ಟೆಲಿನೊ, ಸೂಕ್ತ ಪರಿಹಾರಕ್ಕಾಗಿ ಕೆ.ರಾಮಸ್ವಾಮಿ ಅವರು ಮೈಸೂರಿನ ಕೋರ್ಟ್ ಮೆಟ್ಟಿಲೇರಿದ್ದರು. 2015ರಲ್ಲಿ ಈ ಪ್ರಕರಣ ಸಂಬಂಧ ಸುಮಾರು 39 ಕೋಟಿ ರೂ. ಪರಿಹಾರ ಕೊಡಬೇಕೆಂದು ತೀರ್ಪು ಬಂದಿತ್ತು ಆದರೂ ಪರಿಹಾರ ನೀಡದ ಹಿನ್ನೆಲೆಯಲ್ಲಿ ರಾಮಸ್ವಾಮಿ ಮತ್ತೆ ಕೋರ್ಟ್‌ಗೆ ಜಾರಿ ಅರ್ಜಿ ಸಲ್ಲಿಸಿದ್ದರು. 39 ಕೋಟಿ ರೂ. ಪರಿಹಾರ ಕೊಡಲು ಬರುವುದಿಲ್ಲವೆಂದು ಕೆಐಎಡಿಬಿಯವರು ಹೈಕೋರ್ಟ್ ಮೆಟ್ಟಿಲೇರಿದ್ದರು. ಈ ಹಿನ್ನೆಲೆ ಹೈಕೋರ್ಟ್ ಪರಿಹಾರ ಮೊತ್ತದ ಶೇ.50 ರಷ್ಟನ್ನು ನಾಲ್ಕು ವಾರಗಳಲ್ಲಿ ಕೋರ್ಟ್‌ಗೆ ಡೆಪಾಸಿಟ್ ಮಾಡಬೇಕೆಂದು ಆದೇಶ ಮಾಡಿತ್ತು ಎಂದರು.

ಆದಾಗ್ಯೂ ನಾಲ್ಕು ವಾರಗಳಲ್ಲಿ ಕೆಐಎಡಿಬಿಯವರು ಡೆಪಾಸಿಟ್ ಮಾಡಲಿಲ್ಲ. ಆಗ ರಾಮಸ್ವಾಮಿಯವರು ಮತ್ತೆ ಹೈಕೋರ್ಟ್‌ನಲ್ಲಿ ಸೂಕ್ತ ಕ್ರಮಕ್ಕೆ ಮನವಿ ಮಾಡಿದರು. ಹೈಕೋರ್ಟ್ ಕೆಐಎಡಿಬಿಯವರಿಗೆ ಛೀಮಾರಿ ಹಾಕಿತು. ಕೆಐಎಡಿಬಿ ಪರ ವಕೀಲರ ಮನವಿ ಮೇರೆಗೆ ಮತ್ತೆ 2 ವಾರಗಳ ಕಾಲ ಸಮಯಾವಕಾಶ ನೀಡಲಾಯಿತು. ಈ ಅವಧಿಯೊಳಗೆ ಶೇ.50ರಷ್ಟು ಪರಿಹಾರ ಧನವನ್ನು ಡೆಪಾಸಿಟ್ ಮಾಡಬೇಕು. ಇಲ್ಲದಿದ್ದಲ್ಲಿ ಪೂರ್ಣ ಪರಿಹಾರ ಧನ ಡೆಪಾಸಿಟ್ ಮಾಡಬೇಕೆಂದು ಕೋರ್ಟ್ ಹೇಳಿತ್ತು. ಆದರೆ ಕೆಐಎಡಿಬಿ ಆಗಲೂ ಯಾವುದೇ ಪರಿಹಾರ ಡೆಪಾಸಿಟ್ ಮಾಡಲಿಲ್ಲ ಎಂದು ವಿವರಿಸಿದರು.

ಹೈಕೋರ್ಟ್ ನಿಗದಿಗೊಳಿಸಿದ್ದ ಸಮಯ ಮೀರಿದ ಮೇಲೆ ಶೇ.50ರಷ್ಟು ಪರಿಹಾರ ಧನವನ್ನು ಕೆಐಎಡಿಬಿ ಹೈಕೋರ್ಟ್‌ಗೆ ಡೆಪಾಸಿಟ್ ಮಾಡಿತು. ಆದರೆ ಅದಕ್ಕೆ ನಾವು ಒಪ್ಪಲಿಲ್ಲ. ಆಗ ಹೈಕೋರ್ಟ್ ಪೂರ್ಣ ಪರಿಹಾರ ಧನ ಕಟ್ಟಬೇಕು ಎಂದು ಆದೇಶಿಸಿತು. ಇಲ್ಲವಾದರೆ ರಾಮಸ್ವಾಮಿಯವರು ಕೆಳಗಿನ ಕೋರ್ಟ್‌ಗೆ ಹೋಗಿ ಕೊರೆನ್ ಸಿವ್ ಆಕ್ಷನ್‌ಗೆ (ಬಲವಂತದ ಕಾನೂನು ಕ್ರಮ) ಅವಕಾಶ ಪಡೆಯಬಹುದೆಂದು ಆದೇಶ ಮಾಡಿತು. ಅದರಂತೆ ಕೆಳಗಿನ ಕೋರ್ಟ್ ಮೊರೆ ಹೋದ ಹಿನ್ನೆಲೆಯಲ್ಲಿ ಜಪ್ತಿ ವಾರಂಟ್ ದೊರಕಿತು. ಈ ಹಿನ್ನೆಲೆಯಲ್ಲಿ ಇಂದು ಸದರಿ ಕಚೇರಿಯ ಸಾಮಗ್ರಿ ಜಪ್ತಿ ಮಾಡಲಾಗಿದೆ. ಈ ಸಾಮಗ್ರಿಗಳು ನನ್ನ ಕಕ್ಷಿದಾರರ ಪರಿಹಾರ ಧನಕ್ಕೆ ಸಮವಲ್ಲ. ಇದು ಸಾಂಕೇತಿಕ ಕ್ರಮ. ಮತ್ತೆ ಕೋರ್ಟ್ ಮೊರೆ ಹೋಗಲಿದ್ದೇವೆ ಎಂದು ವಿವರಿಸಿದರು.

### ಕೈಗಾರಿಕಾ ಪ್ರದೇಶಾಭಿವೃದ್ಧಿಗೆ ಭೂಮಿ ನೀಡಿದ ರೈತ ಕುಟುಂಬಗಳಿಗೆ

## ಉದ್ಯೋಗ ನೀಡಲು ಒತ್ತಾಯಿಸಿ ಪ್ರತಿಭಟನೆ

ಮೈಸೂರು,ಆ.29(ಪಿಎಂ)– ಕೈಗಾರಿಕೆಗಳಿಗೆ ಭೂಮಿ ನೀಡಿದ ರೈತರು ಹಾಗೂ ಅವರ ಮಕ್ಕಳಿಗೆ ಕೈಗಾರಿಕೆಗಳಲ್ಲಿ ಕಾನೂನಿನಂತೆ ಖಾಯಂ ಉದ್ಯೋಗ ನೀಡಬೇಕೆಂದು ಒತ್ತಾಯಿಸಿ ಕೆಐಎಡಿಬಿಗೆ ಭೂಮಿ ನೀಡಿದ ರೈತರ ಹಕ್ಕುಗಳ ಹೋರಾಟ ವೇದಿಕೆ ವತಿಯಿಂದ ಗುರುವಾರ ಪ್ರತಿಭಟನೆ ನಡೆಸಲಾಯಿತು.

ಮೈಸೂರಿನ ಮೇಟಗಳ್ಳಿಯ ಕೆಆರ್‌ಎಸ್ ರಸ್ತೆಯಲ್ಲಿರುವ ಕೆಐಎಡಿಬಿ ಕಚೇರಿ ಎದುರು ಜಮಾಯಿಸಿದ ಪ್ರತಿಭಟನಾಕಾರರು, ಭೂಮಿ ಕಳೆದುಕೊಂಡ ರೈತರಿಗೆ, ಜಿಲ್ಲಾ ಮಟ್ಟದ ಸಮಿತಿಯ ಶಿಫಾರಸ್ಸಿನಂತೆ ಉದ್ಯೋಗವನ್ನು ನೀಡಬೇಕು. ಕಳೆದ 10ರಿಂದ 15 ವರ್ಷಗಳ ಹಿಂದೆಯೇ ತಮ್ಮ ಭೂಮಿಯನ್ನು ಕೆಐಎಡಿಬಿಗೆ ನೀಡಿರುವ ರೈತರು, ಉದ್ಯೋಗಕ್ಕಾಗಿ ಹಲವಾರು ವರ್ಷಗಳಿಂದ ಅಲೆಯುತ್ತಿದ್ದು, ಹಲವು ಹೋರಾಟಗಳಾದ ಬಳಿಕ ಕೆಲವು ರೈತರಿಗೆ ಕೆಲಸ ಸಿಕ್ಕಿದೆ. ಇನ್ನೂ ಹಲವರು ಕೆಲಸ ಸಿಗದೆ ಅಲೆಯುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ನಂಜನಗೂಡು ಕೈಗಾರಿಕಾ ವಲಯದಲ್ಲಿ ಸ್ಥಾಪನೆಯಾಗಿರುವ ಕೈಗಾರಿಕೆಗಳು



ಮೈಸೂರಿನ ಮೇಟಗಳ್ಳಿಯ ಕೆಆರ್‌ಎಸ್ ರಸ್ತೆಯಲ್ಲಿರುವ ಕೆಐಎಡಿಬಿ ಕಚೇರಿ ಎದುರು ಗುರುವಾರ ರೈತರು ಪ್ರತಿಭಟನೆ ನಡೆಸಿದರು.

ಸಾವಿರಾರು ಉದ್ಯೋಗ ನೀಡಬೇಕಿತ್ತು. ಆದರೆ ಕೇವಲ ಬೆರಳೆಣಿಕೆಯಷ್ಟು ಖಾಯಂ ಉದ್ಯೋಗವನ್ನಷ್ಟೇ ನೀಡಿವೆ. ಕೈಗಾರಿಕಾ ಪ್ರದೇಶದಲ್ಲಿ ರಸ್ತೆ, ಕೆಇಬಿ ಸಬ್‌ಸ್ಟೇಷನ್, ಪಾರ್ಕ್‌ಗಳಿಗೆ ಭೂಮಿ ನೀಡಿರುವ ರೈತರಿಗೆ ಈ ಕಾರ್ಖಾನೆಗಳು ಉದ್ಯೋಗಗಳನ್ನು ನೀಡಿಲ್ಲ. ಭೂಮಿ ನೀಡಿದ ರೈತರಿಗೆ ಉದ್ಯೋಗವನ್ನು ನೀಡಬೇಕೆಂದು ಕೈಗಾರಿಕೆಗಳಿಗೆ ಸೂಚಿಸುವ ಇಚ್ಛಾಶಕ್ತಿಯನ್ನು ಅಧಿಕಾರಿಗಳು ತೋರುತ್ತಿಲ್ಲ. ಬದಲಿಗೆ ಕಾರ್ಖಾನೆಯವರು ನಮ್ಮ ಮಾತನ್ನು ಕೇಳುವುದಿಲ್ಲವೆಂದು ರೈತರ ಎದುರು ಅಸಹಾಯಕತೆ ವ್ಯಕ್ತಪಡಿಸುತ್ತಾರೆ ಎಂದು ಕಿಡಿಕಾರಿದರು.

ಉದ್ಯೋಗಗಳನ್ನು ಸೃಷ್ಟಿಸುತ್ತೇವೆ ಎಂಬ ಹೆಸರಿನಲ್ಲಿ ಸರ್ಕಾರದಿಂದ ಕೋಟ್ಯಾಂತರ ಮೌಲ್ಯದ ಭೂಮಿ, ವಿದ್ಯುತ್, ನೀರು, ಮುಂತಾದ ಮೂಲಸೌಕರ್ಯಗಳನ್ನು ರಿಯಾಯಿತಿ ದರದಲ್ಲಿ ಹಾಗೂ ಕೋಟ್ಯಾಂತರ ರೂ. ತೆರಿಗೆಯನ್ನು ವಿನಾಯಿತಿ ರೂಪದಲ್ಲಿ ಕಾರ್ಖಾನೆಗಳು ಪಡೆಯುತ್ತವೆ. ಆದರೆ ಉದ್ಯೋಗವನ್ನು ನೀಡುವ ವಿಷಯ ಬಂದಾಗ, ಸ್ಥಳೀಯರಿಗೆ ಇರಲೀ, ಕನಿಷ್ಠ ಪಕ್ಷ ಭೂಮಿ ಕಳೆದುಕೊಂಡ ರೈತರಿಗೂ ಕೆಲಸವನ್ನು ನೀಡುವುದಿಲ್ಲ ಎಂದು ದೂರಿದರು.

'ಮೈಸೂರು ಮಿತ್ರ'ನೊಂದಿಗೆ ಮಾತನಾಡಿದ ಎಐಕೆಕೆಎಂಎಸ್‌ನ ಜಿಲ್ಲಾ ಸಂಚಾಲಕ ಹೆಚ್.ಎಂ.ಬಸವರಾಜು, ನಂಜನಗೂಡು ಕೈಗಾರಿಕಾ ಪ್ರದೇಶದಲ್ಲಿ ವಿವಿಧ ಪಾರ್ಕ್, ರಸ್ತೆ, ಕೆಇಬಿ ಸಬ್‌ಸ್ಟೇಷನ್, ಪಾರ್ಕ್, ಗೋದಾಮು ಮುಂತಾದವುಗಳನ್ನು ಸ್ಥಾಪಿಸಲು ಭೂಮಿ ನೀಡಿರುವ 25 ರೈತ ಕುಟುಂಬಗಳಿಗೆ ಉದ್ಯೋಗ ನೀಡಬೇಕಿದೆ. ಈ ಹಿನ್ನೆಲೆಯಲ್ಲಿ ಇಂದು ಸಂಜೆವರೆಗೂ ಪ್ರತಿಭಟನೆ ನಡೆಸಿ, ಅಹೋರಾತ್ರಿ ಹೋರಾಟಕ್ಕೂ ಸಜ್ಜಾಗಿದ್ದೆವು. ಆದರೆ ಅಧಿಕಾರಿಗಳು ಶೀಘ್ರವೇ ರೈತರು ಹಾಗೂ ಕೈಗಾರಿಕೆಗಳ ಸಭೆ ಕರೆದು ಸಮಸ್ಯೆ ಬಗೆಹರಿಸುವ ಭರವಸೆ ನೀಡಿದ ಹಿನ್ನೆಲೆಯಲ್ಲಿ ಸಂಜೆ ವೇಳೆಗೆ ಪ್ರತಿಭಟನೆ ಕೈಬಿಡಲಾಗಿದೆ ಎಂದು ತಿಳಿಸಿದರು.

ಕರ್ನಾಟಕ ರಾಜ್ಯ ರೈತ ಸಂಘದ ಜಿಲ್ಲಾ ಉಪಾಧ್ಯಕ್ಷ ಬೊಕ್ಕಹಳ್ಳಿ ನಂಜುಂಡಸ್ವಾಮಿ, ಕೆಂಪಿಸಿದ್ದನಹುಂಡಿ ರೈತರಾದ ಕೆ.ಎನ್. ರವಿ, ಕೆ.ಕೆ.ರವಿಕುಮಾರ್, ಮಂಜು, ಚಂದ್ರ, ಜವರೇಗೌಡ, ಶ್ರೀಕಂಠ, ರೈತ ಮಹಿಳೆಯರಾದ ಸೌಭಾಗ್ಯ, ಶಿವಮ್ಮ, ವಸಂತ, ಹೂವಮ್ಮ, ನಾಗಮ್ಮ, ಜಯಲಕ್ಷ್ಮೀ ಸೇರಿದಂತೆ ಮತ್ತಿತರರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

### ಸೆ.1, ಅಂತರರಾಷ್ಟ್ರೀಯ ನಿರಂತರ ಕಲೆಮನೆ ಉತ್ಸವ

ಮೈಸೂರು, ಆ. 29–ಕೃಷ್ಣ ಜನ್ಮಾಷ್ಟಮಿ ಪ್ರಯುಕ್ತ ಕುಮಾರ್ ಪ್ರದರ್ಶಕ ಕಲೆಗಳ ಕೇಂದ್ರವು 43ನೇ ಅಂತರರಾಷ್ಟ್ರೀಯ ನಿರಂತರ ಕಲೆಮನೆ ಉತ್ಸವವನ್ನು ಸೆ.1 ರಂದು ಮಧ್ಯಾಹ್ನ 2.30ಕ್ಕೆ ಕಲೆಮನೆ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ.

ಮುಖ್ಯ ಅತಿಥಿಗಳಾಗಿ ವನಿತಾ ಸದನದ ಅಧ್ಯಕ್ಷೆ ಎನ್.ಭಾರತಿ, ವನಿತಾ ಸದನದ ಟ್ರಸ್ಟಿಗಳಾದ ರವಿಕುಮಾರ್, ಶ್ಯಾಮಲಾ ಭಾಗವಹಿಸಲಿದ್ದಾರೆ. ಸಂಜೆ ವಿದ್ವಾನ್ ಡಾ.ಶ್ರೀನಿವಾಸ ಮೂರ್ತಿ ಮತ್ತು ತಂಡದಿಂದ ಕರ್ನಾಟಕ ಶಾಸ್ತ್ರೀಯ ಗಾಯನ; ಶ್ರೀಕೃಪಾ ಕಲಾ ಕೇಂದ್ರ, ಮೈಸೂರು ಅವರಿಂದ ಭಕ್ತಿ ಕೃತಿಗಳು, ಫ್ಯೂಷನ್ 'ಮೈರಾಗ್' ಸಂಗೀತ ಬ್ಯಾಂಡ್, ಮೈಸೂರು; ಶ್ರೀಮತಿ ಲಾವಣ್ಯ ಎಂ.ಎಸ್ ಮತ್ತು ತಂಡ 'ಇಂಚರ ಮ್ಯೂಸಿಕ್ ಅಕಾಡೆಮಿ', ಕೈವಾರದಿಂದ ಕರ್ನಾಟಕ ಶಾಸ್ತ್ರೀಯ ಗಾಯನ; ವಿದ್ವಾನ್ ರಾಘವ. ಜಿ, ಶ್ರೀರಂಗಪಟ್ಟಣ ಅವರಿಂದ ಸ್ಯಾಕ್ಸೋಫೋನ್ ಕಛೇರಿ ನಡೆಯಲಿದೆ.

## ವಿನಯವೇ ಗುರುವಿನ ಹಿರಿಮೆಗೆ ಸಾಕ್ಷಿ

ಸುತ್ತೂರು,ಆ.29–ಶಿಷ್ಯನ ಮೂಲಕವೇ ಜಗತ್ತು ಗುರುವಿನ ಶ್ರೇಷ್ಠತೆಯನ್ನು ಅರ್ಥ ಮಾಡಿಕೊಳ್ಳುತ್ತದೆ. ಶಿಷ್ಯನ ಪ್ರತಿಯೊಂದು ಮಾತು, ನಡೆ–ನುಡಿ, ವಿವೇಚನೆ ಮತ್ತು ವಿನಯಗಳು ಗುರುವಿನ ಹಿರಿಮೆಗೆ ಸಾಕ್ಷಿಯಾಗಿರುತ್ತದೆ ಎಂದು ಪ್ರಾಧ್ಯಾಪಕ ಹೆಚ್.ಬಿ.ದೇವಣ್ಣ ಹೇಳಿದರು.



ಹೆಚ್.ಬಿ.ದೇವಣ್ಣ

ಸುತ್ತೂರು ಶ್ರೀಕ್ಷೇತ್ರದಲ್ಲಿ ಶ್ರಾವಣ ಮಾಸದ 25ನೇ ದಿನದ ಪ್ರವಚನ ನೀಡುತ್ತಾ, ಗುರುವಿನ ಉಪಸ್ಥಿತಿಯು ಪರಮ ಸತ್ಯ ಮತ್ತು ಪರಮ ಸಂತೋಷದ ಪೂರ್ಣತೆಯಾಗಿದೆ. ಶಿಷ್ಯನು ನಮ್ರತೆ ಮತ್ತು ಶರಣಾಗತಿಯನ್ನು ಹೊಂದಿರಬೇಕು.

ಶಿಷ್ಯನ ನಂಬಿಕೆ ಮತ್ತು ಭಕ್ತಿಯು ಸಂಪೂರ್ಣವಾಗಿ ಗುರುವಿನ ಕಡೆಗೆ ಇರಬೇಕು. ನಿಸ್ವಾರ್ಥಪ್ರೀತಿ, ಸಹಾನುಭೂತಿ, ದಯೆ, ತಾಳ್ಮೆ ಮತ್ತು ತ್ಯಾಗ ಇವುಗಳು ಗುರುವಿನಲ್ಲಿರುವ ಪರಮ ಗುಣಗಳಾಗಿವೆ. ಸತ್ಯವನ್ನು ಅರ್ಥಮಾಡಿಕೊಂಡು ಮನಸ್ಸನ್ನು ಗುರುಗಳಲ್ಲಿ ಕೇಂದ್ರೀಕರಿಸಿದಾಗ ಶಿಷ್ಯನು ಗುರುವಿನ ಅನುಗ್ರಹ ಪಡೆಯಲು ಯೋಗ್ಯನಾಗುತ್ತಾನೆ. ಶಿಷ್ಯನು ಶಿಷ್ಯನಾಗಿಯೇ ಉಳಿಯುವುದನ್ನು ಗುರು ಎಂದಿಗೂ ಬಯಸುವುದಿಲ್ಲ. ಶಿಷ್ಯನು ಬೆಳೆದು ಆತ ಸತ್ಯವಂತನಾಗಬೇಕೆಂದು ಬಯಸುತ್ತಾನೆ. ಅಲ್ಲಿ ಗುರು–ಶಿಷ್ಯ ಎಂಬ ಭೇದವೇ ಇರುವುದಿಲ್ಲ. ಅದರಲ್ಲಿ ಗುರುವಿಗೆ ಸಂತೃಪ್ತಿ, ನೆಮ್ಮದಿ ಸಿಗುತ್ತದೆ. ಗುರುವಿಗೆ ಶರಣಾಗುವ ಮನೋಭಾವ ಒಂದಿದ್ದರೆ ಸಾಕು. ಗುರುವಿನ ಅನುಗ್ರಹ ವನ್ನು ಗುರಿಯನ್ನಾಗಿ ಕೊಂಡೊಯ್ಯುವುದು ಖಚಿತ. ಶರಣಾಗತಿ ಎಂದರೆ ಇಷ್ಟ–ಅನಿಷ್ಟಗಳನ್ನು ಬಿಟ್ಟುಬಿಡುವುದು. ಗುರು ಶಿಷ್ಯರ ಆಧ್ಯಾತ್ಮಿಕ ಪರಂಪರೆಯೇ ಭಾರತವನ್ನು ವಿಶ್ವದ ಆಧ್ಯಾತ್ಮಿಕ ಕೇಂದ್ರವನ್ನಾಗಿ ಮಾಡಿದೆ. ಗುರುವಿಲ್ಲದೆ ಶಿಷ್ಯನ ದೇವರನ್ನು ಅರಿತುಕೊಳ್ಳಲು ಸಾಧ್ಯವಿಲ್ಲ. ಮಾನಸಿಕವಾಗಿ ಶಾಂತಿ ಮತ್ತು ಆನಂದವನ್ನು ಹಾಗೂ ಆಧ್ಯಾತ್ಮಿಕ ಜ್ಞಾನವನ್ನು ನೀಡುವವನು ಗುರು. ಗುರುವಿನ ಸಂಬಂಧದಲ್ಲಿರುವ ಶಿಷ್ಯ ಜ್ಯೋತಿಯೊಳಗಣ ಕರ್ಪೂರದಂತೆ ಎಂದು ತಿಳಿಸಿದರು.

ಡಿ.ಎಂ.ಸಿದ್ದಲಿಂಗಸ್ವಾಮಿ ಕಾವ್ಯ ವಾಚಿಸಿದರು. ಭಕ್ತಾದಿಗಳು, ಆಧ್ಯಾತ್ಮಿಕ ಜಿಜ್ಞಾಸುಗಳು ಪಾಲ್ಗೊಂಡಿದ್ದರು.

## ಅನುದಾನ ಹಂಚಿಕೆ ವ್ಯತ್ಯಾಸ ಸರಿಪಡಿಸುವಂತೆ 16ನೇ ಹಣಕಾಸು ಆಯೋಗಕ್ಕೆ ರಾಜ್ಯದ ಮನವಿ

● ಆಯೋಗ ಸಕಾರಾತ್ಮಕ ಸ್ಪಂದನೆ: ಸಿದ್ದರಾಮಯ್ಯ ಮಾಹಿತಿ ● ಪಶ್ಚಿಮಘಟ್ಟ ವಿಪತ್ತು ನಿರ್ವಹಣೆಗೆ ನೆರವು ಕೋರಿಕೆ



ಮುಖ್ಯಮಂತ್ರಿ ಸಿದ್ದರಾಮಯ್ಯ ಸುದ್ದಿಗಾರರೊಂದಿಗೆ ಮಾತನಾಡಿದರು. ಸಚಿವ ಹೆಚ್.ಕೆ.ಪಾಟೀಲ್ ಚಿತ್ರದಲ್ಲಿದ್ದಾರೆ.

ಬೆಂಗಳೂರು ಆ.29(ಕೆಂಪಿ)– ರಾಜ್ಯಕ್ಕೆ ಕಳೆದ ಐದು ವರ್ಷಗಳಿಂದ ವಿಶೇಷ ಅನುದಾನ ಹಾಗೂ ತೆರಿಗೆ ಹಂಚಿಕೆಯಲ್ಲಿ 80,000 ಕೋಟಿ ರೂ. ಅನುದಾನ ಕಡಿಮೆಯಾಗಿದೆ. ಇದನ್ನು ಸರಿಪಡಿಸಬೇಕೆಂದು 16ನೇ ಹಣಕಾಸು ಆಯೋಗವನ್ನು ಕೋರಲಾಗಿದ್ದು, ಮನವಿಗೆ ಆಯೋಗವು ಸಕಾರಾತ್ಮಕವಾಗಿ ಸ್ಪಂದಿಸಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಡಿವಿಸಿಬಲ್ ಪೂಲ್‌ಗೆ ಸೆಸ್ ಮತ್ತು ಸರ್ಚಾರ್ಜ್ ಅನ್ನು ಸೇರಿಸಬೇಕೆಂದು ಹಾಗೂ ಭಾರತ ಸರ್ಕಾರಕ್ಕೆ ಬರುವ ತೆರಿಗೆಯೇತರ ಆದಾಯವನ್ನೂ ಡಿವಿಸಿಬಲ್ ಪೂಲ್‌ಗೆ ಸೇರಿಸಬೇಕೆಂದು ಕೋರಲಾಗಿದೆ ಎಂದು ಹೇಳಿದರು.

ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ರಾಜ್ಯ ಸರ್ಕಾರ ಪ್ರತಿ ವರ್ಷ 5000 ಕೋಟಿಯಂತೆ ಐದು ವರ್ಷಕ್ಕೆ 25,000 ಕೋಟಿ ರೂ. ಖರ್ಚು ಮಾಡಲಾಗುತ್ತಿದ್ದು, ಕೇಂದ್ರ ಸರ್ಕಾರವೂ ಇದಕ್ಕೆ ಅನುರೂಪದ ಅನುದಾನ ನೀಡಬೇಕೆಂದು ಕೋರಲಾಗಿದೆ. ಬೆಂಗಳೂರು ಅಭಿವೃದ್ಧಿಗೆ ಸುಮಾರು 55,000 ಕೋಟಿ ರೂ. ಬೇಕಾಗಲಿದ್ದು, ಈ ಮೊತ್ತದ ಅರ್ಧದಷ್ಟಾದರೂ ಅನುದಾನ ನೀಡಬೇಕೆಂದು ಕೋರಲಾಗಿದೆ.

**ಪಶ್ಚಿಮಘಟ್ಟ ನಿರ್ವಹಣೆಗೆ ಅನುದಾನ:** ಪಶ್ಚಿಮಘಟ್ಟ ವಿಪತ್ತು ನಿರ್ವಹಣೆಗೆ ಹೆಚ್ಚಿನ ಅನುದಾನ ನೀಡಲು ಕೋರಲಾಯಿತು. ಉತ್ತಮವಾದ ಕಾರ್ಯನಿರ್ವಹಿಸುತ್ತಿರುವ ರಾಜ್ಯಗಳಿಗೆ ದಂಡ ವಿಧಿಸಬಾರದು. ದೇಶದ ಜಿಡಿಪಿಗೆ ನಮ್ಮ ರಾಜ್ಯದಿಂದ ಶೇ.9ರಷ್ಟು ಕೊಡುಗೆ ನೀಡುತ್ತಿದ್ದು, ಆದರಲ್ಲಿ ಕೇವಲ ಶೇ.1.5ರಷ್ಟು ಮಾತ್ರ ನಮ್ಮ ರಾಜ್ಯದ ಪಾಲಿಗೆ ಬರುತ್ತಿದೆ. ಇದನ್ನು ಸರಿಪಡಿಸಲು ಕೋರಲಾಗಿದೆ. 14ನೇ ಹಣಕಾಸು ಆಯೋಗದಲ್ಲಿ ರಾಜ್ಯಕ್ಕೆ ಶೇ.4.713 ಪ್ರಮಾಣದ ತೆರಿಗೆ ಹಂಚಿಕೆಯಾಗುತ್ತಿತ್ತು. ಆದರೆ 15ನೇ ಹಣಕಾಸು ಆಯೋಗದಲ್ಲಿ ಈ ಪ್ರಮಾಣ ಶೇ.3.647ಕ್ಕೆ ಇಳಿದಿದ್ದು, ಈ ಪ್ರಮಾಣವನ್ನು ಸರಿಪಡಿಸಬೇಕೆಂದು ಕೋರಲಾಗಿದೆ. ತೆರಿಗೆ ಪ್ರಮಾಣದಲ್ಲಿ ಶೇ.1.66 ಕಡಿಮೆಯಾಗಿರುವ ಬಗ್ಗೆ ಆಯೋಗಕ್ಕೆ ವಿವರಣೆ ನೀಡಲಾಗಿದೆ ಎಂದರು.

ಗುಜರಾತಿನ ಮುಖ್ಯಮಂತ್ರಿಯಾಗಿದ್ದಾಗ ಮೋದಿಯವರು ತೆರಿಗೆ ಹಂಚಿಕೆಯಲ್ಲಿ ಶೇ.50ರಷ್ಟು ಪಾಲಿಗೆ ಬೇಡಿಕೆಯಿಟ್ಟಿದ್ದರು. ಅನೇಕ ರಾಜ್ಯಗಳು ಈ ರೀತಿ ಬೇಡಿಕೆ ಸಲ್ಲಿಸಿರುವುದರಿಂದ ಕರ್ನಾಟಕದ ಬೇಡಿಕೆಯನ್ನು ಈಡೇರಿಸಬಹುದು ಎಂಬ ವಿಶ್ವಾಸವಿದೆ ಎಂದರು.

## ವಕ್ಫ್ ಕಾಯ್ದೆಗೆ ತಿದ್ದುಪಡಿ ಪ್ರಸ್ತಾಪ; ರಾಜ್ಯ ವಕ್ಫ್ ಬೋರ್ಡ್ ವಿರೋಧ

### ಕೇಂದ್ರಕ್ಕೆ ಪತ್ರ ಬರೆಯಲು ಸಿಎಂಗೆ ಮನವಿ



ಅಲ್ಪಸಂಖ್ಯಾತರ ಕಲ್ಯಾಣ ಸಚಿವ ಜಮೀರ್ ಅಹಮದ್ ಖಾನ್, ರಾಜ್ಯ ವಕ್ಫ್ ಬೋರ್ಡ್ ಅಧ್ಯಕ್ಷ ಅನ್ವರ್ ಬಾಷ ನೇತೃತ್ವದಲ್ಲಿ ವಕ್ಫ್ ಬೋರ್ಡ್ ಆಡಳಿತ ಮಂಡಳಿ ಸಭೆ ನಡೆಯಿತು.

ಬೆಂಗಳೂರು ಆ.29(ಕೆಂಪಿ)– ಕೇಂದ್ರದ ಉದ್ದೇಶಿತ ವಕ್ಫ್ ಕಾಯ್ದೆ ತಿದ್ದುಪಡಿ ಪ್ರಸ್ತಾಪಕ್ಕೆ ರಾಜ್ಯ ವಕ್ಫ್ ಬೋರ್ಡ್ ವಿರೋಧ ವ್ಯಕ್ತಪಡಿಸಿದೆ.

ಅಲ್ಪಸಂಖ್ಯಾತರ ಕಲ್ಯಾಣ ಸಚಿವ ಜಮೀರ್ ಅಹಮದ್ ಖಾನ್, ರಾಜ್ಯ ವಕ್ಫ್ ಬೋರ್ಡ್ ಅಧ್ಯಕ್ಷ ಅನ್ವರ್ ಬಾಷ ನೇತೃತ್ವದಲ್ಲಿ ನಡೆದ ವಕ್ಫ್ ಬೋರ್ಡ್ ಆಡಳಿತ ಮಂಡಳಿ ಸಭೆಯಲ್ಲಿ ತಿದ್ದುಪಡಿ ಕಾಯ್ದೆಗೆ ವಿರೋಧ ಪಡಿಸಿ ನಿರ್ಣಯ ಕೈಗೊಳ್ಳಲಾಯಿತು. ನಂತರ ಸಚಿವ ಜಮೀರ್ ಅಹಮದ್ ಖಾನ್ ಹಾಗೂ ಮುಖ್ಯಮಂತ್ರಿಯವರ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್ ನೇತೃತ್ವದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಈ ಕುರಿತು ನಿರ್ಣಯದ ಪ್ರತಿ ನೀಡಿ ಕೇಂದ್ರಕ್ಕೆ ತಿದ್ದುಪಡಿ ಕಾಯ್ದೆ ವಿರೋಧಿಸಿ ಪತ್ರ ಬರೆಯಲು ಮನವಿ ಮಾಡಿತು.

ಕೇಂದ್ರ ಸರ್ಕಾರ ರಚನೆ ಮಾಡಿರುವ ಜಂಟಿ ಸಲಹಾ ಸಮಿತಿಗೂ ಯಾವುದೇ ರೀತಿಯ ಮಾಹಿತಿ ಕೊಡುವುದಿಲ್ಲ. ನಮ್ಮದು ಸ್ವಾಯತ್ತ ಸಂಸ್ಥೆಯಾಗಿದ್ದು, ಉದ್ದೇಶಿತ ತಿದ್ದುಪಡಿ ಕಾಯ್ದೆ ಸಮುದಾಯದ ಹಿತಾಸಕ್ತಿಗೆ ವಿರುದ್ಧವಾಗಿದೆ. ಇದರ ಹಿಂದಿನ ಉದ್ದೇಶ ಬೇರೆ ಇದೆ ಎಂದು ವಕ್ಫ್ ಬೋರ್ಡ್ ಆಡಳಿತ ಮಂಡಳಿ ಸಭೆ ಅಭಿಪ್ರಾಯಪಟ್ಟಿದ್ದನ್ನು ಮುಖ್ಯಮಂತ್ರಿಯವರ ಗಮನಕ್ಕೆ ತರಲಾಯಿತು.

ಮುಂದಿನ ಅಧಿವೇಶನದಲ್ಲಿ ರಾಜ್ಯ ಸರ್ಕಾರ ಖಂಡನಾ ನಿರ್ಣಯ ಕೈಗೊಂಡು ಕೇಂದ್ರ ಸರ್ಕಾರಕ್ಕೆ ಕಳುಹಿಸಲು ಕೋರಲಾಯಿತು.

## ಸಿದ್ದರಾಮಯ್ಯ ಆರೋಪಮುಕ್ತರಾಗಲೆಂದು ವಿಶೇಷ ಪೂಜೆ



ಮುಖ್ಯಮಂತ್ರಿ ಸಿದ್ದರಾಮಯ್ಯ ಆರೋಪ ಮುಕ್ತರಾಗಲಿ ಎಂದು ಮೈಸೂರಿನ ನಾರಾಯಣ ಶಾಸ್ತ್ರಿ ರಸ್ತೆಯ ಶ್ರೀ ಕೊಲ್ಲಾಪುರದಮ್ಮ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಲಾಯಿತು. ದೇವಸ್ಥಾನದ ಅಧ್ಯಕ್ಷ ಎಂ.ನಾಗರಾಜ್, ಜಗದೀಶ್, ಜವರಪ್ಪ, ರಾಮೇಗೌಡ, ಅಖಿಲ ಕರ್ನಾಟಕ ರಾಕೇಶ್ ಸಿದ್ದರಾಮಯ್ಯ ಅಭಿಮಾನಿ ಬಳಗದ ಅಧ್ಯಕ್ಷ ವಿಶ್ವನಾಥ್, ವಾರ್ಡ್ ನಂ.47ರ ಉಪಾಧ್ಯಕ್ಷ ರಮೇಶ್ ರಾಮಪ್ಪ, ಡೈರಿ ವೆಂಕಟೇಶ್, ಶಾಂತಮ್ಮ, ಮಂಜ, ಸುಬ್ರಮಣ್ಯ ಮತ್ತಿತರರು ಉಪಸ್ಥಿತರಿದ್ದರು.

## ಮೈಸೂರು ಜಿಲ್ಲಾ ಬ್ರಾಹ್ಮಣ ಸಂಘದಿಂದ ಶ್ರೀ ದತ್ತ ವಿಜಯಾನಂದ ತೀರ್ಥ ಸ್ವಾಮೀಜಿಯವರಿಗೆ ಅಭಿನಂದನೆ



ಮೈಸೂರು ಜಿಲ್ಲಾ ಬ್ರಾಹ್ಮಣ ಸಂಘದಿಂದ ಶ್ರೀ ದತ್ತ ವಿಜಯಾನಂದ ತೀರ್ಥ ಸ್ವಾಮೀಜಿ ಅವರನ್ನು ಅಭಿನಂದಿಸಲಾಯಿತು.

ಮೈಸೂರು,ಆ.29–ಮೈಸೂರಿನ ಊಟಿ ರಸ್ತೆಯಲ್ಲಿರುವ ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮದಲ್ಲಿ ಶ್ರೀ ಶ್ರೀ ದತ್ತ ವಿಜಯಾನಂದ ತೀರ್ಥ ಸ್ವಾಮೀಜಿ ಅವರ 21ನೇ ಚಾತುರ್ಮಾಸ್ಯ ಪ್ರಯುಕ್ತ ನಡೆದ ಶತ ಚಂಡಿಯಾಗ ಮತ್ತು ಸಂಪೂರ್ಣ ಶ್ರೀಮದ್ರಾಮಾಯಣ ಮಹಾಯಾಗ ಅಭೂತಪೂರ್ವವಾಗಿ ಸಂಪನ್ನಗೊಂಡಿದ್ದು, ಶ್ರೀ ಶ್ರೀ ದತ್ತ ವಿಜಯಾನಂದ ತೀರ್ಥ ಸ್ವಾಮೀಜಿಯವರಿಗೆ ಮೈಸೂರು ಜಿಲ್ಲಾ ಬ್ರಾಹ್ಮಣ ಸಂಘದಿಂದ ಅಭಿನಂದನೆ ಸಲ್ಲಿಸಲಾಯಿತು.

ಈ ವೇಳೆ ಮೈಸೂರು ನಗರ ಮತ್ತು ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ.ಟಿ. ಪ್ರಕಾಶ್ ಮಾತನಾಡಿ, ಶ್ರೀ ದತ್ತ ವಿಜಯಾನಂದ ತೀರ್ಥರ ಅದ್ಭುತವಾದ ಜ್ಞಾನ ಸಂಪತ್ತನ್ನು ಕೊಂಡಾಡಿದರು. ಲೋಕ ಕಲ್ಯಾಣಕ್ಕಾಗಿ ಶ್ರೀಗಳು ಕೈಗೊಂಡಿರುವ ಧಾರ್ಮಿಕ ಕಾರ್ಯಗಳನ್ನು ಭಕ್ತಿ ಪೂರ್ವಕವಾಗಿ ಸ್ವಾಗತಿಸಿದರು. ದತ್ತ ಪೀಠಾಧಿಪತಿಗಳಾದ ಶ್ರೀ ಗಣಪತಿ ಸಚಿದಾನಂದ ಸ್ವಾಮಿಗಳ ಆಶೀರ್ವಾದ ಮತ್ತು ಮಾರ್ಗದರ್ಶನದಲ್ಲಿ ಶ್ರೀ ಮಠವೂ ಹೀಗೆ ನೂರು ಕಾಲ ಮೈಸೂರಿಗರಿಗೆ ಮತ್ತು ಇಡೀ ವಿಶ್ವಕ್ಕೆ ಸಕಲ ಸನ್ಮಂಗಳವನ್ನು ನೀಡಲಿ ಎಂದು ಪ್ರಾರ್ಥಿಸಿದರು. ಗಣಪತಿ ಸಚ್ಚಿದಾನಂದ ಆಶ್ರಮ ಆಧ್ಯಾತ್ಮಿಕ ಧಾರ್ಮಿಕ ಕೇಂದ್ರದೊಂದಿಗೆ ಪರಿಸರ ಪೋಷಣೆ ಮನಃಶಾಂತಿ ಸಿಗುವ ತಾಣವಾಗಿದೆ. ದೇಶ ವಿದೇಶದಿಂದ ಭಕ್ತ ವೃಂದವನ್ನು ಆಕರ್ಷಿಸುತ್ತದೆ. ಯಾವುದೇ ಜಾತಿ–ಭೇದವಿಲ್ಲದೆ ಜನಮುಖಿ ಕೇಂದ್ರವಾಗಿದೆ. ಕಳೆದ ಕೋವಿಡ್ ಸಂದರ್ಭದಲ್ಲಿ ಲಕ್ಷಾಂತರ ಮಂದಿಗೆ ಪ್ರತಿನಿತ್ಯ ಅನ್ನದಾನ ಮತ್ತು ವೈದ್ಯಕೀಯ ನೆರವು ನೀಡಿ ಮಾನವೀಯತೆ ಕೆಲಸ ಮಾಡಿದ್ದಾರೆ.

ಹೊಯ್ಸಳ ಕರ್ನಾಟಕ ಸಂಘದ ಅಧ್ಯಕ್ಷ ಕೆ.ಆರ್.ಸತ್ಯನಾರಾಯಣ್, ಗ್ರಾಮಾಂತರ ಅಧ್ಯಕ್ಷ ಗೋಪಾಲ್‌ರಾವ್, ಹರೀಶ್, ಮುಳ್ಳೂರು ಸುರೇಶ್, ಕಡಕೊಳ ಜಗದೀಶ್, ಪ್ರಶಾಂತ್, ರಂಗನಾಥ್, ಮಿರ್ಲೆ ಪನೀಶ್, ಜ್ಯೋತಿ, ಲತಾ ಬಾಲಕೃಷ್ಣ, ನಾಗಶ್ರೀ, ಸುಚೆಂದ್ರ, ಶ್ರೀರಾಮ ಸೇನೆಯ ಸಂಜಯ್, ಸಂತೋಷ್(ಶಂಭು), ಶ್ರೀಕಾಂತ್, ಹೇಮಂತ್, ಮನು ಅಪ್ಪಿ, ಸಾಗರ್ ಚಕ್ರವರ್ತಿ, ಪುನೀತ್, ಹಾಗೂ ಇನ್ನಿತರರು ಈ ವೇಳೆ ಹಾಜರಿದ್ದರು.

## ಜಮ್ಮು–ಕಾಶ್ಮೀರದ ಕುಪ್ವಾರದಲ್ಲಿ 3 ಉಗ್ರರ ಸದೆಬಡಿದ ಸೇನಾಪಡೆ

**ಕುಪ್ವಾರ (ಜಮ್ಮು–ಕಾಶ್ಮೀರ):** ಜಮ್ಮು ಮತ್ತು ಕಾಶ್ಮೀರದ ಕುಪ್ವಾರ ಜಿಲ್ಲೆಯಲ್ಲಿ ಭಾರತೀಯ ಸೇನಾಪಡೆ ಎನ್‌ಕೌಂಟರ್ ನಡೆಸಿದ್ದು, ಮೂವರು ಉಗ್ರರನ್ನು ಸದೆಬಡಿದಿದೆ ಎಂದು ತಿಳಿದುಬಂದಿದೆ. ಕುಪ್ವಾರ ಜಿಲ್ಲೆ ತಂಗ್ಧಾರ್‌ನಲ್ಲಿ ಕೆಲ ಉಗ್ರರು ಗಡಿ ನುಸುಳಲು ಯತ್ನ ನಡೆಸುತ್ತಿದ್ದಾರೆಂಬ ಖಚಿತ ಮಾಹಿತಿ ಹಿನ್ನೆಲೆಯಲ್ಲಿ ಜಮ್ಮು ಮತ್ತು ಕಾಶ್ಮೀರ ಪೊಲೀಸರು ಹಾಗೂ ಭಾರತೀಯ ಸೇನಾಪಡೆ ಜಂಟಿಯಾಗಿ ಕಾರ್ಯಾಚರಣೆ ಆರಂಭಿಸಿತ್ತು. ಇದರಂತೆ ಇದೀಗ ಮೂವರು ಉಗ್ರರನ್ನು ಹತ್ಯೆ ಮಾಡಿದ್ದು, ಕಾರ್ಯಾಚರಣೆ ಮುಂದುವರೆಸಿದೆ. ಈ ನಡುವೆ ರಜೌರಿಯಲ್ಲಿಯೂ ಉಗ್ರರು ಹಾಗೂ ಸೇನಾಪಡೆ ನಡುವೆ ಗುಂಡಿನ ಕಾಳಗ ಮುಂದುವರೆದಿದ್ದು, ಸೇನಾಪಡೆ ಎನ್‌ಕೌಂಟರ್ ಆರಂಭಿಸಿದೆ. ಖೇರಿ ಮೊಹ್ರಾ ಲಾಠಿ ಮತ್ತು ದಂತಲ್ ಪ್ರದೇಶದಲ್ಲಿ ನಿನ್ನೆ ರಾತ್ರಿ 9.30ರ ಸುಮಾರಿಗೆ ಅನುಮಾನಾಸ್ಪದ ಓಡಾಟಗಳು ಕಂಡು ಬಂದ ಹಿನ್ನೆಲೆಯಲ್ಲಿ ಸೇನಾಪಡೆ ಶೋಧ ಕಾರ್ಯಾಚರಣೆಯನ್ನು ಪ್ರಾರಂಭಿಸಿತ್ತು. ಶೋಧನಾ ಕಾರ್ಯಾಚರಣೆ ವೇಳೆ ರಾತ್ರಿ 11.45ರ ಸುಮಾರಿಗೆ ಉಗ್ರರು ಸೇನಾಪಡೆ ಮೇಲೆ ಗುಂಡಿನ ದಾಳಿ ನಡೆಸಲು ಆರಂಭಿಸಿದರು. ಈ ವೇಳೆ ಸೇನಾಪಡೆ ಕೂಡ ದಿಟ್ಟ ಉತ್ತರ ನೀಡಿದ್ದು, ಸ್ಥಳದಲ್ಲಿ ಗುಂಡಿನ ಚಕಮಕಿ ಮುಂದುವರೆದಿದೆ ಎಂದು ಜಮ್ಮು ಮತ್ತು ಕಾಶ್ಮೀರ ಪೊಲೀಸರು ತಿಳಿಸಿದ್ದಾರೆ.

## ಕೆಬಿಎಲ್ ಸಿದ್ಧಿ ವಿನಾಯಕ ಟ್ರಸ್ಟ್‌ನಿಂದ ಗೌರಿ–ಗಣೇಶ ಹಬ್ಬದ ಪ್ರಯುಕ್ತ ಪ್ರತಿಭಾ ಪುರಸ್ಕಾರ

ಮೈಸೂರು, ಆ. 29– ಮೈಸೂರಿನ ಕೆ.ಆರ್.ಎಸ್ ಮುಖ್ಯ ರಸ್ತೆಯಲ್ಲಿರುವ ಕೆ.ಬಿ.ಎಲ್ ಸಿದ್ಧಿ ವಿನಾಯಕ ಟ್ರಸ್ಟ್ ವತಿಯಿಂದ ಗೌರಿ–ಗಣೇಶ ಹಬ್ಬದ ಪ್ರಯುಕ್ತ ಎಸ್‌ಎಸ್‌ಎಲ್‌ಸಿ, ಪಿಯುಸಿಯಲ್ಲಿ ಅತೀ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳು ಮತ್ತು ವಿವಿಧ ಕ್ಷೇತ್ರದಲ್ಲಿ ವಿಶೇಷ ಸಾಧನೆ ಮಾಡಿದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸೆ.7ರಂದು ವಿನಾಯಕ ದೇವಸ್ಥಾನದ ಆವರಣದಲ್ಲಿ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಈ ಸಂಬಂಧ ಅರ್ಹ ವಿದ್ಯಾರ್ಥಿಗಳು ತಮ್ಮ ವಿವರವನ್ನೂ ಸೆ.4ರೊಳಗಾಗಿ ನಿತೀನ್ ಅವರಿಗೆ Whats App ಮುಖಾಂತರ ಅಥವಾ ಖುದ್ದಾಗಿ ಮೊ.: 99029 69424ಗೆ ತಲುಪಿಸುವಂತೆ ಕೆ.ಬಿ.ಎಲ್ ಸಿದ್ಧಿ ವಿನಾಯಕ ಟ್ರಸ್ಟ್‌ನ ಪ್ರಧಾನ ಕಾರ್ಯದರ್ಶಿ ಡಾ.ಈ.ಸಿ.ನಿಂಗರಾಜ್ ಗೌಡ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



## ರೈತರಿಗೆ ಮೂರು ದಿನಗಳ ತರಬೇತಿ

ಮೈಸೂರು,ಆ.29–ನಾಗನಹಳ್ಳಿಯ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಸೆ.10ರಿಂದ 12ರವರೆಗೆ ರಾಗಿ ಮತ್ತು ಮುಸುಕಿನ ಜೋಳ ಬೆಳೆಗಳಲ್ಲಿ ಆಧುನಿಕ ಕೃಷಿ ಪದ್ಧತಿಗಳು, ಸೂಕ್ಷ್ಮ ನೀರಾವರಿ ಅಳವಡಿಕೆ, ರೋಗ ಕೀಟ ನಿರ್ವಹಣೆ ಹಾಗೂ ಮೌಲ್ಯ ವರ್ಧನೆ ಎಂಬ ವಿಷಯದ ಬಗ್ಗೆ ರೈತ, ರೈತ ಮಹಿಳೆಯರಿಗೆ ಮೂರು ದಿನಗಳ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ತರಬೇತಿಯಲ್ಲಿ ಭಾಗವಹಿಸುವ ರೈತ, ರೈತಮಹಿಳೆಯರಿಗೆ ಊಟ ಮತ್ತು ವಸತಿ ವ್ಯವಸ್ಥೆ ಒದಗಿಸಲಾಗುವುದು. ಆಸಕ್ತ ರೈತ, ರೈತ ಮಹಿಳೆಯರು ತಮ್ಮ ಹೆಸರನ್ನು ತರಬೇತಿ ಕೇಂದ್ರದ ಕೃಷಿ ಅಧಿಕಾರಿ ದೂ.ಸಂ: 8277933116ಗೆ ಕರೆ ಮಾಡಿ ಹೆಸರು ನೋಂದಾಯಿಸಿಕೊಳ್ಳಬಹುದು. ರೈತರು ತರಬೇತಿಗೆ ಬರುವಾಗ FID ನಂಬರ್, ರೇಷನ್‌ಕಾರ್ಡ್, ಆಧಾರ್ ಮತ್ತು ಬ್ಯಾಂಕ್ ಪಾಸ್ ಪುಸ್ತಕ ಜೆರಾಕ್ಸ್ ಪ್ರತಿಗಳನ್ನು ತಪ್ಪದೇ ತರುವುದು. ಮೈಸೂರು ಜಿಲ್ಲೆಯ 45 ರೈತ, ರೈತಮಹಿಳೆಯರಿಗೆ ಅವಕಾಶವಿದ್ದು, ಮೊದಲು ನೋಂದಣಿ ಮಾಡಿದವರಿಗೆ ಆದ್ಯತೆ ನೀಡಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಬಡ್ಡಿಯಲ್ಲಿ ಪ್ರಥಮ ಸ್ಥಾನ...



ವರುಣದಲ್ಲಿ ನಡೆದ ಹೋಬಳಿ ಮಟ್ಟದ ಬಾಲಕರ ವಿಭಾಗದ ಕಬಡ್ಡಿ ಪಂದ್ಯದಲ್ಲಿ ರೋಟರಿ ಮೈಸೂರು ಉತ್ತರ ಹಿರಿಯ ಪ್ರಾಥಮಿಕ ಶಾಲೆ, ವಾಜಮಂಗಲದ ವಿದ್ಯಾರ್ಥಿಗಳು ಭಾಗವಹಿಸಿ ಪ್ರಥಮ ಸ್ಥಾನ ಪಡೆದಿದ್ದಾರೆ. ಚಿತ್ರದಲ್ಲಿ ಮೂರ್ತಿ ನಾಯಕ್ (ದೈಹಿಕ ಶಿಕ್ಷಣ ಪರಿವೀಕ್ಷಕ), ರೋಟರಿ ಶಾಲೆಯ ಮುಖ್ಯ ಶಿಕ್ಷಕ ಎಂ.ಎಸ್. ಸತೀಶ್, ದೈಹಿಕ ಶಿಕ್ಷಕರಾದ ಶಿವಮಲ್ಲು, ಸಹ ಶಿಕ್ಷಕರಾದ ಎ.ಎಸ್. ಮಂಗಳ ಹಾಗೂ ರೋಟರಿ ಶಾಲೆಯ ವಿದ್ಯಾರ್ಥಿಗಳನ್ನು ಕಾಣಬಹುದು.

## ವಿಶ್ವಕರ್ಮ ಪ್ರಶಸ್ತಿ ಪ್ರದಾನ...



ದಿ ಕ್ರಾಫ್ಟ್ ಕೌನ್ಸಿಲ್ ಆಫ್ ಕರ್ನಾಟಕ ವತಿಯಿಂದ ಬೆಂಗಳೂರಿನ ಕರ್ನಾಟಕ ಚಿತ್ರಕಲಾ ಪರಿಷತ್‌ನಲ್ಲಿ ನಡೆದ ಸಮಾರಂಭದಲ್ಲಿ ಮೈಸೂರಿನ ಮಜೀದ್ ಫೈನ್ ಆರ್ಟ್ಸ್‌ನ ಲುಕ್‌ಮಾನ್ ಖಾನ್ ಅವರ ರೋಸ್‌ವುಡ್ ಇನ್ಲೇ ಕೆತ್ತನೆ ಕೆಲಸಕ್ಕೆ ದಿ ಕಮಲಾದೇವಿ ಚಟ್ಟೋಪಾಧ್ಯಾಯ ವಿಶ್ವಕರ್ಮ ಪ್ರಶಸ್ತಿ ಪ್ರದಾನ ಮಾಡಲಾಯಿತು. ಕರ್ನಾಟಕ ಸರ್ಕಾರದ ನಿವೃತ್ತ ಅಪರ ಮುಖ್ಯ ಕಾರ್ಯದರ್ಶಿ ಚಿರಂಜೀವಿ ಸಿಂಗ್ ಇತರರಿದ್ದರು.

## ಚಾರಿತ್ರಿಕ ದಾಖಲೆಗಳು ಇತಿಹಾಸ, ಸಂಸ್ಕೃತಿ ಬಿಂಬಿಸುವ ಕೈಗನ್ನಡಿ

### ವಿಶೇಷ ಉಪನ್ಯಾಸ, ಸಂವಾದದಲ್ಲಿ ರಾಜ್ಯ ವಿಭಾಗೀಯ ಪತ್ರಾಗಾರ ಹಿರಿಯ ಸಹಾಯಕ ನಿರ್ದೇಶಕ ಎಚ್.ಎಲ್.ಮಂಜುನಾಥ ಅಭಿಮತ

ಮೈಸೂರು, ಆ. 29– ಮೈಸೂರಿನ ಮಹಾಜನ ಪ್ರಥಮ ದರ್ಜೆ ಕಾಲೇಜಿನ (ಸ್ವಾಯತ್ತ) ಇತಿಹಾಸ ವಿಭಾಗ, ಪಾರಂಪರಿಕ ಕೂಟ ಹಾಗೂ ಕರ್ನಾಟಕ ರಾಜ್ಯ ವಿಭಾಗೀಯ ಪತ್ರಾಗಾರ ಕಚೇರಿ ಸಹಯೋಗದೊಂದಿಗೆ 'ಚಾರಿತ್ರಿಕ ದಾಖಲೆಗಳ ಮಹತ್ವ ಮತ್ತು ಉಪಯೋಗ' ಕುರಿತು ವಿಶೇಷ ಉಪನ್ಯಾಸ ಮತ್ತು ಸಂವಾದ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು.





ಚಾರಿತ್ರಿಕ ದಾಖಲೆಗಳ ಮಹತ್ವ ಮತ್ತು ಉಪಯೋಗ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಮಂಜುನಾಥ್ ಮಾತನಾಡಿದರು.

ಮೈಸೂರು ವಿಭಾಗೀಯ ಪತ್ರಾಗಾರ ಕಚೇರಿಯ ಹಿರಿಯ ಸಹಾಯಕ ನಿರ್ದೇಶಕ ಮಂಜುನಾಥ್ ಮಾತನಾಡುತ್ತಾ, ಮೂಲಾಧಾರಗಳಿಲ್ಲದೆ ಇತಿಹಾಸವಿಲ್ಲ ಎಂಬ ವಿಷಯವನ್ನು ವಿದ್ಯಾರ್ಥಿಗಳಿಗೆ ಮನದಟ್ಟು ಮಾಡಿಕೊಟ್ಟು, ತಮ್ಮ ಇಲಾಖೆಯಲ್ಲಿ ಇದುವರೆವಿಗೂ ಸಂಗ್ರಹಿಸಿರುವ ಸಾವಿರಾರು ಸಂಖ್ಯೆಯ ಪ್ರಾಥಮಿಕ ಹಾಗೂ ದ್ವಿತೀಯ ಚಾರಿತ್ರಿಕ ಮೂಲಾಧಾರಗಳ ಬಗ್ಗೆ ಮಾಹಿತಿ ನೀಡಿದರು.

ಐತಿಹಾಸಿಕ ದಾಖಲೆಗಳು ಈ ನಾಡಿನ ಇತಿಹಾಸ ಮತ್ತು ಸಂಸ್ಕೃತಿಯನ್ನು ಪ್ರತಿಬಿಂಬಿಸುವ ಕೈಗನ್ನಡಿಯಾಗಿದ್ದು, ಪ್ರಕಟಿತ ಹಾಗೂ ಅಪ್ರಕಟಿತ ದಾಖಲೆಗಳಾದ ಮೈಸೂರು ಆಡಳಿತ ವರದಿಗಳು, ಗೆಜೆಟಿಯರ್‌ಗಳು, ಪ್ರೊಸಿಡಿಂಗ್ಸ್‌ಗಳು, ವಾರ್ಷಿಕ ವರದಿಗಳು, ಆದೇಶಗಳು, ಸೆನ್ಸಸ್ ವರದಿಗಳು, ಕಡತಗಳು, ಖಾಸಗಿ ದಾಖಲೆಗಳು, ಪತ್ರಿಕೆಗಳು ಹಾಗೂ ಚಾರಿತ್ರಿಕ ಬರವಣಿಗೆಯ ಸಂಪೂರ್ಣ ದಾಖಲೆಗಳನ್ನು ನಮ್ಮ ವಿಭಾಗೀಯ ಪತ್ರಾಗಾರ ಕಚೇರಿಯಲ್ಲಿ ಸಂರಕ್ಷಿಸಿ ಇಡಲಾಗಿದೆ. ಸಾವಿರಾರು ಹಳೆಯ ಐತಿಹಾಸಿಕ ದಾಖಲೆಗಳನ್ನು ಹಾಗೂ ವರದಿಗಳನ್ನು ಇತ್ತೀಚೆಗೆ ಡಿಜಿಟಲೀಕರಣ ಮಾಡಲಾಗಿದೆ. ಈ ದಾಖಲೆಗಳು ಆಸಕ್ತ ವಿದ್ಯಾರ್ಥಿಗಳಿಗೆ, ಸಂಶೋಧಕರಿಗೆ ಹಾಗೂ ಇತಿಹಾಸಕ್ತರಿಗೆ ಅತ್ಯಮೂಲ್ಯವಾದ ಪ್ರಾಥಮಿಕ ಅಧ್ಯಯನ ಸಾಮಗ್ರಿಗಳಾಗಿದ್ದು, ಇದುವರೆಗೂ ಪ್ರಕಟವಾಗದಿರುವ ಹಲವು ವಿಷಯಗಳು ಹಾಗೂ ಮಾಹಿತಿಗಳು ಈ ದಾಖಲೆಗಳಿಂದ ಸಿಗುತ್ತವೆ. ವಿದ್ಯಾರ್ಥಿಗಳು ಹಾಗೂ ಸಂಶೋಧಕರು ಈ ದಾಖಲೆಗಳನ್ನು ಸಮರ್ಥವಾಗಿ ಹಾಗೂ ಸಮರ್ಪಕವಾಗಿ ಬಳಸಿಕೊಳ್ಳುವ ಆಸಕ್ತಿ ಮತ್ತು ಮನಸ್ಸನ್ನು ಬೆಳೆಸಿಕೊಳ್ಳಬೇಕು ಎಂದರು.

ಸರ್ಕಾರದ ವಿವಿಧ ಇಲಾಖೆಗಳು ಇಂದಿಗೂ ತಮಗೆ ಅತ್ಯಗತ್ಯವಾದ ಅಪರೂಪದ ದಾಖಲೆಗಳನ್ನು ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ ಹಾಗೂ ವಿಭಾಗೀಯ ಪತ್ರಾಗಾರ ಕಚೇರಿಗಳಿಂದ ಪಡೆಯುತ್ತಾರೆ. ನೂರಾರು ವರ್ಷಗಳ ಭೂದಾಖಲೆಗಳು, ಆಡಳಿತ ವರದಿಗಳು, ಆದೇಶಗಳು, ಜ್ಞಾಪನಾ ಪತ್ರಗಳು, ಸುತ್ತೋಲೆಗಳು, ರಾಜಾದೇಶಗಳು, ಸಾಮಾನ್ಯ ಪತ್ರಗಳು ಸೇರಿದಂತೆ ನೂರಾರು ವರ್ಷಗಳ ಅತ್ಯಮೂಲ್ಯವಾದ ಅಪ್ರಕಟಿತ ಮಾಹಿತಿಗಳು ಸದರಿ ಇಲಾಖೆಯಲ್ಲಿ ಲಭ್ಯವಿರುತ್ತವೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಶಾಂತಿ ಮತ್ತು ತಿಳುವಳಿಕೆ ವೇದಿಕೆ ಸಹಯೋಗದಲ್ಲಿ ಹಿರೋಶಿಮಾ ಮತ್ತು ನಾಗಾಸಾಕಿ ದುರಂತದ ಭೀಕರತೆಯನ್ನು ಸಾರುವ ಅಪರೂಪದ ಛಾಯಾಚಿತ್ರ ಪ್ರದರ್ಶನವನ್ನು ಏರ್ಪಡಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಂಶುಪಾಲರಾದ ಡಾ. ಬಿ.ಆರ್.ಜಯಕುಮಾರಿ, ಶೈಕ್ಷಣಿಕ ಡೀನ್ ಮತ್ತು ಇತಿಹಾಸ ವಿಭಾಗದ ಮುಖ್ಯಸ್ಥ ಡಾ.ಶ್ರೀಧರ, ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ಎಸ್.ಆರ್.ರಮೇಶ್, ಪ್ರಾಧ್ಯಾಪಕ ನಂದೀಶ, ಡಾ.ಕ್ಯಾಪ್ಟನ್ ಇಂದ್ರಾಣಿ ಮತ್ತು ಅಧ್ಯಾಪಕರು, ಅಧ್ಯಾಪಕೇತರರು ಹಾಗೂ ಇತಿಹಾಸ ವಿಷಯದ ವಿದ್ಯಾರ್ಥಿಗಳು ಹಾಜರಿದ್ದರು.

# ದೇಶ – ವಿದೇಶ

## ಸೆಕ್ಸ್‌ಗಾಗಿ ಯುವತಿಯರಿಗೆ ಬ್ಲಾಕ್‌ಮೇಲ್; ಯು ಟ್ಯೂಬರ್‌ಗೆ 17 ವರ್ಷ ಶಿಕ್ಷೆ



**ಸಿಡ್ನಿ:** ಆಸ್ಟ್ರೇಲಿಯಾದ ನ್ಯಾಯಾಲಯವೊಂದು ಮೊಹ್ಮದ್ ಜೈನ್ ಉಲ್ ಅಬಿದಿನ್ ರಶೀದ್ ಎಂಬಾತನಿಗೆ 17 ವರ್ಷ ಜೈಲು ಶಿಕ್ಷೆ ಪ್ರಕಟಿಸಿದೆ. ತಾನೋರ್ವ ಫೇಮಸ್ ಯು ಟ್ಯೂಬರ್ ಎಂದು ಹೇಳಿಕೊಳ್ಳುತ್ತಿದ್ದ ಅಬಿದಿನ್ ರಶೀದ್, 286ಕ್ಕೂ ಅಧಿಕ ಯುವತಿಯರಿಗೆ ಸೆಕ್ಸ್‌ಗಾಗಿ ಬ್ಲಾಕ್‌ಮೇಲ್ ಮಾಡಿದ್ದ. ಸೋಶಿಯಲ್ ಮೀಡಿಯಾ ಮೂಲಕ ಅಮೆರಿಕಾ, ಇಂಗ್ಲೆಂಡ್ ಮತ್ತು ಫ್ರಾನ್ಸ್ ಸೇರಿದಂತೆ ಹಲವು ದೇಶದ ಯುವತಿಯರ ಜೊತೆ ಸಂಪರ್ಕ ಹೊಂದಿದ್ದ ರಶೀದ್, ಯುವತಿಯರಿಗೆ ಹತ್ತಿರವಾಗುತ್ತಿದ್ದಂತೆ ಲೈಂಗಿಕ ವಿಷಯಗಳ ಕುರಿತು ಚರ್ಚಿಸಲು ಪ್ರೇರೇಪಿಸಿ, ನಂತರ ಯುವತಿಯರ ಜೊತೆಗೆ ಮಾತನಾಡಿದ ಆಡಿಯೋ ಮತ್ತು ವಿಡಿಯೋ ಸಂಗ್ರಹಿಸಿ ಅವರನ್ನು ಬ್ಲಾಕ್‌ಮೇಲ್ ಮಾಡುತ್ತಿದ್ದ. ತಾನು ಹೇಳಿದಂತೆ ಕೇಳದಿದ್ದರೆ ಖಾಸಗಿ ಮಾತುಗಳ ಆಡಿಯೋ ಮತ್ತು ನನ್ನೊಂದಿಗೆ ಹಂಚಿಕೊಂಡಿರುವ ಖಾಸಗಿ ಫೋಟೋ, ವಿಡಿಯೋಗಳನ್ನು ನಿಮ್ಮ ಕುಟುಂಬದವರಿಗೆ ಕಳುಹಿಸುವುದಾಗಿ ಬೆದರಿಕೆ ಹಾಕುತ್ತಿದ್ದ. ಅವರ ಅಸಹಾಯಕತೆ ದುರುಪಯೋಗಪಡಿಸಿಕೊಂಡು ತನ್ನೊಂದಿಗೆ ಲೈಂಗಿಕ ಸಂಬಂಧ ಹೊಂದಲು ಒತ್ತಾಯಿಸುತ್ತಿದ್ದನು.

## ಅತ್ಯಂತ ಸಡಗರದಿಂದ ಗಂಡನಿಗೆ 2ನೇ ಮದುವೆ ಮಾಡಿಸಿದ ಪತ್ನಿ!



**ಹೈದರಾಬಾದ್:** ಪತ್ನಿಯೇ ಮುಂದೆ ನಿಂತು ತನ್ನ ಗಂಡನಿಗೆ ಎರಡನೇ ಮದುವೆ ಮಾಡಿಸಿದ್ದಾರೆ. ತೆಲಂಗಾಣದ ಗುಡೂರು ನಿವಾಸಿ ಸರಿತಾ, 10 ವರ್ಷಗಳ ಹಿಂದೆ ಸುರೇಶ್ ಎಂಬುವರ ಜೊತೆ ಮದುವೆ ಮಾಡಿಕೊಂಡಿದ್ದರು. ದಂಪತಿಯ 10 ವರ್ಷದ ದಾಂಪತ್ಯಕ್ಕೆ ಒಂದು ಹೆಣ್ಣು, ಒಂದು ಗಂಡು ಮಗು ಸಾಕ್ಷಿಯಾಗಿದೆ. ಸುರೇಶ್–ಸರಿತಾ ಸಂಸಾರದಲ್ಲಿ ಎಲ್ಲವೂ ಚೆನ್ನಾಗಿತ್ತು. ಖುಷಿ ಖುಷಿಯಿಂದಲೇ ಸುರೇಶ್ ಜೊತೆ ಸರಿತಾ ಸಂಸಾರ ನಡೆಸುತ್ತಿದ್ದರು. ಈ ಮಧ್ಯೆ ತನ್ನ ಪತಿಯನ್ನು ಸಂಧ್ಯಾ ಎಂಬ ಯುವತಿ ಪ್ರೀತಿಸುತ್ತಿರುವ ವಿಷಯ ಸರಿತಾಗೆ ಗೊತ್ತಾಗಿದೆ. ಸಂಧ್ಯಾ ಮೆಹಬೂಬಾಬಾದ್ ಜಿಲ್ಲೆಯ ನಿವಾಸಿಯಾಗಿದ್ದು, ಮಾನಸಿಕ ರೋಗದಿಂದ ಬಳಲುತ್ತಿರುವ ಮಹಿಳೆಯಾಗಿದ್ದರು. ಸಂಧ್ಯಾ ತನ್ನ ಗಂಡನನ್ನು ಪ್ರೀತಿ ಮಾಡುತ್ತಿರುವ ವಿಷಯ ತಿಳಿದು ಕೊಂಚವೂ ಯೋಚನೆ ಮಾಡದೇ ಮದುವೆಗೆ ಸಿದ್ಧತೆ ಮಾಡಿಕೊಳ್ಳಲಾರಂಭಿಸಿದ್ದರು. ಇವರ ಮದುವೆ ವಿಷಯ ಸ್ಥಳೀಯ ಮಟ್ಟದಲ್ಲಿ ದೊಡ್ಡ ಚರ್ಚೆಯಾಗಿತ್ತು. ಆದರೆ ಟೀಕೆಗಳಿಗೆ ಯಾವುದೇ ಬೆಲೆ ಕೊಡದೇ ಸರಿತಾ ಮುಂದೆ ನಿಂತು ಶಾಸ್ತ್ರೋಕ್ತವಾಗಿ ಗಂಡನ ಜೊತೆ ಸಂಧ್ಯಾ ಮದುವೆ ಮಾಡಿಸಿದ್ದಾರೆ.

## ಕೋಟ್ಯಾಂತರ ರೂ. ಫ್ರಾಡ್: ಎಸ್‌ಬಿಐ ಮ್ಯಾನೇಜರ್ ಬಂಧನ





**ಹೈದರಾಬಾದ್:** ನಕಲಿ ಖಾತೆ ಬಳಸಿ 175 ಕೋಟಿ ರೂ ಅವ್ಯವಹಾರ ನಡೆಸಿದ ಆರೋಪದ ಮೇಲೆ ಹೈದರಾಬಾದ್‌ನ ಎಸ್‌ಬಿಐ ಮ್ಯಾನೇಜರ್ ಹಾಗೂ ಸಿಬ್ಬಂದಿಯನ್ನು ಪೊಲೀಸರು ಬಂಧಿಸಿದ್ದಾರೆ.

ಶಂಶೀರ್ ಗುಂಜ್ ಪ್ರದೇಶದಲ್ಲಿರುವ ಎಸ್‌ಬಿಐ ಶಾಖೆ ಮ್ಯಾನೇಜರ್ ಹಾಗೂ ಸಿಬ್ಬಂದಿ ಕೆಲ ಕಳ್ಳ ವ್ಯವಹಾರಗಳ ಜೊತೆ ಸೇರಿ ಅಕ್ರಮ ವ್ಯವಹಾರ ನಡೆಸುವವರಿಗೆ ನಕಲಿ ಕರೆಂಟ್ ಖಾತೆಗಳನ್ನು ಮಾಡಿಕೊಟ್ಟು ಅವರು ಹಣ ವಿತ್‌ಡ್ರಾ ಮಾಡಿಕೊಳ್ಳಲು ನೆರವಾಗಿದ್ದಾರೆ. ಅಲ್ಲದೇ ಹಣವನ್ನು ಬೇರೆಡೆಗೆ ತಿರುಗಿಸುವ ಯೋಜನೆಗೆ ನೆರವಾಗಿದ್ದಾರೆ. ಇದೆಲ್ಲ ಅವ್ಯವಹಾರವನ್ನು ಬ್ಯಾಂಕ್ ಮ್ಯಾನೇಜರ್ ಕಮೀಷನ್ ಆಸೆಗಾಗಿ ಮಾಡಿದ್ದಾರೆ ಎಂದು ಹೈದರಾಬಾದ್‌ನ ಎಸ್‌ಬಿಐ ಮುಖ್ಯ ಕಚೇರಿಯ ಸೈಬರ್ ಸೆಕ್ಯೂರಿಟಿ ಬ್ಯುರೋದ ಅಧಿಕಾರಿಗಳು ಮಾಧ್ಯಮಗಳಿಗೆ ಮಾಹಿತಿ ನೀಡಿದ್ದಾರೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಬ್ಯಾಂಕ್ ಮ್ಯಾನೇಜರ್ 49 ವರ್ಷದ ಮಧು ಬಾಬು ಗಲಿ, ಜಿಮ್ ಟ್ರೈನರ್ 34 ವರ್ಷದ ಉಪಾಧ್ಯಾಯ ಸಂದೀಪ್ ಶರ್ಮಾ ಎಂಬಾತನನ್ನು ಬಂಧಿಸಲಾಗಿದ್ದು, ಇಬ್ಬರ ವಿರುದ್ಧವೂ ಪ್ರಕರಣ ದಾಖಲಿಸಲಾಗಿದೆ.

## ಸಂಗೀತ ಕಾರ್ಯಕ್ರಮದಲ್ಲಿ ಜನರ ಹತ್ಯೆಗೆ ಸಂಚು: ಐಸಿಸ್ ಉಗ್ರರ ಬಂಧಿಸಿದ ಸಿಐಎ



**ವಾಷಿಂಗ್ಟನ್:** ಆಗಸ್ಟ್ ಮೊದಲ ವಾರದಲ್ಲಿ ಆಸ್ಟ್ರಿಯಾ ದೇಶದ ವಿಯೆನ್ನಾದಲ್ಲಿ ನಡೆಯಬೇಕಿದ್ದ ಟೇಲರ್ ಸ್ವಿಫ್ಟ್ ಅವರ ಎಲ್ಲಾ ಮೂರು ಸಂಗೀತ ಸಂಜೆ ಕಾರ್ಯಕ್ರಮಗಳನ್ನೂ ಭದ್ರತಾ ಪಡೆಗಳು ರದ್ದು ಮಾಡಿದ್ದವು. ಕಾರ್ಯಕ್ರಮದಲ್ಲಿ ಸೇರುವ ಸಾವಿರಾರು ಮಂದಿ ಅಭಿಮಾನಿಗಳ ಮೇಲೆ ಉಗ್ರರು ದಾಳಿ ನಡೆಸುವ ಸಂಚು ರೂಪಿಸಿದ್ದರು ಎಂಬ ಆಘಾತಕಾರಿ ಮಾಹಿತಿ ಬಹಿರಂಗವಾಗಿದೆ. ಅಮೆರಿಕ ರಾಜಧಾನಿ ವಾಷಿಂಗ್ಟನ್ ಡಿಸಿಯಲ್ಲಿ ನಡೆದ ಬೇಹುಗಾರಿಕಾ ಪಡೆಗಳ ವಾರ್ಷಿಕ ಶೃಂಗಸಭೆಯಲ್ಲಿ ಈ ಕುರಿತು ಸಮಗ್ರ ಮಾಹಿತಿ ನೀಡಿರುವ ಸಿಐಎ ಸಹಾಯಕ ನಿರ್ದೇಶಕ ಡೇವಿಡ್ ಎಸ್. ಕೋಹೆನ್, ಐಸಿಸ್ ಭಯೋತ್ಪಾದಕರು ಟೇಲರ್ ಸ್ವಿಫ್ಟ್ ಅವರ ಕಾರ್ಯಕ್ರಮಕ್ಕೆ ಸೇರುವ ಸಾವಿರಾರು ಮಂದಿಯನ್ನು ಗುರಿಯಾಗಿಸಿ ದಾಳಿ ನಡೆಸಲು ಸಂಚು ರೂಪಿಸಿದ್ದರು ಎಂದು ಹೇಳಿದ್ದಾರೆ. ಈ ಪ್ರಕರಣ ಸಂಬಂಧ ಆಸ್ಟ್ರಿಯಾ ದೇಶದ ಪೊಲೀಸರು ಹಾಗೂ ಭದ್ರತಾ ಪಡೆಗಳು ಮೂವರು ಆರೋಪಿಗಳನ್ನು ಬಂಧಿಸಿದ್ದರು. ಈ ಪೈಕಿ 19 ಹಾಗೂ 17 ವರ್ಷದ ಇಬ್ಬರು ಆಸ್ಟ್ರಿಯಾ ಪ್ರಜೆಗಳು ಇದ್ದಾರೆ. ಮತ್ತೊಬ್ಬ 18 ವರ್ಷದ ಇರಾಕಿ ಪ್ರಜೆ ಎಂದು ತಿಳಿದು ಬಂದಿದೆ. ಹದಿಯರೆಯದ ಈ ಮೂವರೂ ಯುವಕರು ಐಸಿಸ್‌ನಿಂದ ಪ್ರೇರಿತವಾಗಿ ಈ ಕೃತ್ಯಕ್ಕೆ ಕೈ ಹಾಕಿದ್ದರು.

## ವಿದ್ಯಾರ್ಥಿನಿಯರಿಗೆ ಅಶ್ಲೀಲ ವಿಡಿಯೋ ತೋರಿಸಿದ ಶಿಕ್ಷಕನ ಬಂಧನ



**ಥಾಣೆ:** ಮಹಾರಾಷ್ಟ್ರದ ಥಾಣೆ ಜಿಲ್ಲೆಯ ಭಿವಂಡಿಯಲ್ಲಿರುವ ಮಹಾನಗರಪಾಲಿಕೆ ಶಾಲೆಯೊಂದರಲ್ಲಿ ಬಾಲಕಿಯರಿಗೆ ಅಶ್ಲೀಲ ವಿಡಿಯೋಗಳನ್ನು ತೋರಿಸಿದ ಆರೋಪದ ಮೇಲೆ ಶಿಕ್ಷಕನನ್ನು ಬಂಧಿಸಲಾಗಿದೆ. ಆರೋಪಿಯನ್ನು ಮುರ್ಖುಮ್ಮಿಲ್ ಎಂದು ಗುರುತಿಸಲಾಗಿದ್ದು, ಬಂಧಿಸಲಾಗಿದೆ ಎಂದು ಹೇಳಿದ್ದಾರೆ. ಶಿಕ್ಷಕ ತನ್ನ ಮೊಬೈಲ್ ಫೋನ್‌ನಲ್ಲಿ ವಿದ್ಯಾರ್ಥಿನಿಯರಿಗೆ ಅಶ್ಲೀಲ ವಿಡಿಯೋ ತೋರಿಸಿದ್ದು, ಈ ವಿಚಾರವನ್ನು ಬಾಲಕಿಯೊಬ್ಬಳು ತನ್ನ ಪೋಷಕರಿಗೆ ತಿಳಿಸಿದ್ದರಿಂದ ಆತನ ಕೃತ್ಯ ಬೆಳಕಿಗೆ ಬಂದಿದೆ ಎಂದು ಪೊಲೀಸರು ತಿಳಿಸಿದ್ದಾರೆ. 7ನೇ ತರಗತಿಯ ಬಾಲಕಿ ತನ್ನ ಶಾಲೆಗೆ ನಿತ್ಯ ತಡವಾಗಿ ಹೋಗುತ್ತಿದ್ದಳು. ಬಾಲಕಿ ಏಕೆ ತಡವಾಗಿ ಬರುತ್ತಿದ್ದಾಳೆ ಎಂದು ತಿಳಿಯಲು ಶಾಲೆಯ ಮುಖ್ಯೋಪಾಧ್ಯಾಯರು ಆಕೆಯ ಪೋಷಕರಿಗೆ ಕರೆ ಮಾಡಿದ್ದಾರೆ. ನಂತರ ಪೋಷಕರು ಬಾಲಕಿ ಮನೆಗೆ ಬಂದ ನಂತರ ವಿಚಾರಿಸಿದಾಗ, ಶಿಕ್ಷಕನೊಬ್ಬ ತನ್ನ ಮೊಬೈಲ್ ಫೋನ್‌ನಲ್ಲಿ ಅಶ್ಲೀಲ ವಿಡಿಯೋಗಳನ್ನು ತೋರಿಸಿ ತನ್ನೊಂದಿಗೆ ಅನುಚಿತವಾಗಿ ವರ್ತಿಸಿದಾಗಿನಿಂದ ಶಾಲೆಗೆ ಹೋಗಲು ಮನಸ್ಸಿಲ್ಲ ಎಂದು ಹೇಳಿದ್ದಾಳೆ. ಇತರ ವಿದ್ಯಾರ್ಥಿಗಳು ದೂರಿದ್ದಾರೆ ಎಂದು ಶಾಂತಿನಗರ ಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್ ವಿನಾಯಕ ಗಾಯಕವಾಡ್ ತಿಳಿಸಿದ್ದಾರೆ.

# ಬಂಡವಾಳಶಾಹಿಗಳಿಂದ ಕೊಡವ ಲ್ಯಾಂಡ್ ನಾಶ

**● ಸಿಎನ್‌ಸಿ ಅಧ್ಯಕ್ಷ ಎನ್.ಯು.ನಾಚಪ್ಪ ಆರೋಪ ● ಮೂರ್ನಾಡಿನಲ್ಲಿ ಭೂ ಪರಿವರ್ತನೆ ವಿರುದ್ಧ ಜನಜಾಗೃತಿ**



ಮೂರ್ನಾಡಿನಲ್ಲಿ ಬೃಹತ್ ಭೂ ಪರಿವರ್ತನೆ ಸ್ಥಗಿತಗೊಳಿಸುವಂತೆ ಒತ್ತಾಯಿಸಿ ಸಿಎನ್‌ಸಿ ಅಧ್ಯಕ್ಷ ಎನ್.ಯು.ನಾಚಪ್ಪ ನೇತೃತ್ವದಲ್ಲಿ ಮಾನವ ಸರಪಳಿ ನಡೆಸಲಾಯಿತು.

ಮಡಿಕೇರಿ, ಆ.29–ಹಸಿರು ಪರಿಸರ ಹಾಗೂ ಜಲ ಪ್ರದೇಶಗಳ ಸಂರಕ್ಷಣೆಗಾಗಿ ಸರ್ಕಾರ ಸೂಕ್ಷ್ಮ ಪರಿಸರ ವಲಯದ ಕಾನೂನನ್ನು ಜಾರಿಗೆ ತಂದಿದೆ. ಆದರೆ, ಕೊಡಗಿನಲ್ಲಿ ಈ ಕಾನೂನು ಬಂಡವಾಳ ಶಾಹಿಗಳಿಗೆ ಅನ್ವಯವಾಗುತ್ತಿಲ್ಲ, ಬದಲಿಗೆ ಕೊಡವ ಬುಡಕಟ್ಟು ಜನಾಂಗದ ಮೇಲೆ ಹೇರಲಾಗುತ್ತಿದೆ ಎಂದು ಕೊಡವ ನ್ಯಾಷನಲ್ ಕೌನ್ಸಿಲ್ ಸಂಘಟನೆ ಅಧ್ಯಕ್ಷ ಎನ್.ಯು.ನಾಚಪ್ಪ ಆರೋಪಿಸಿದರು.

ಕೊಡಗು ಜಿಲ್ಲೆಯ ವಿವಿಧೆಡೆ ನಡೆಯುತ್ತಿರುವ ಬೃಹತ್ ಭೂ ಪರಿವರ್ತನೆ ಮತ್ತು ಭೂ ವಿಲೇವಾರಿ ಸ್ಥಗಿತಗೊಳಿಸಬೇಕೆಂದು ಒತ್ತಾಯಿಸಿ ಸಿಎನ್‌ಸಿ ವತಿಯಿಂದ ಮೂರ್ನಾಡಿನಲ್ಲಿ ನಡೆದ ಜನಜಾಗೃತಿ ಕಾರ್ಯಕ್ರಮದ ನೇತೃತ್ವ ವಹಿಸಿ ಮಾತನಾಡಿದ ಅವರು, ಕೊಡವ ಬುಡಕಟ್ಟು ಜನರು ಇಲ್ಲಿವರೆಗೆ ಹಸಿರಿನ ಕೊಡವ ಭೂಮಿಯನ್ನು ಉಳಿಸಿ ಬೆಳೆಸಿಕೊಂಡು ಬಂದಿದ್ದಾರೆ. ಆದರೆ, ಇಂದು ಭೂ, ರೆಸಾರ್ಟ್ ಮಾಫಿಯಾ, ವಿಲ್ಲಾ, ಟೌನ್‌ಶಿಪ್, ಬೃಹತ್ ಭೂ ಪರಿವರ್ತನೆ ಮತ್ತು ವಿಲೇವಾರಿ ಮಾಫಿಯಾಗಳು ಹಾಗೂ ಕಪ್ಪು ಹಣದ ಬಂಡವಾಳಶಾಹಿಗಳು ಕೊಡವ ಲ್ಯಾಂಡ್ ಅನ್ನು ನಾಶ ಮಾಡುತ್ತಿದ್ದಾರೆ. ಈ ಎಲ್ಲಾ ಮಾಫಿಯಾಗಳಿಗೆ ಆಡಳಿತ ವ್ಯವಸ್ಥೆಯ ಕೃಪಾ ಕಟಾಕ್ಷವಿದೆ. ಕೊಡವರಿಗೆ ಮಾತ್ರ ಭೂಮಿಯಲ್ಲಿ ನೆಲೆ ಇಲ್ಲದಂತೆ ಮಾಡುವ ಹುನ್ನಾರ ನಡೆದಿದೆ. ಇದಕ್ಕೆ ಕೊಡವ ವಿರೋಧಿಗಳ ಬೆಂಬಲವಿದೆ ಎಂದು ದೂರಿದರು.

ರಾಷ್ಟ್ರೀಯ ಹೆದ್ದಾರಿ ಕುಟ್ಟ ಸಮೀಪದ ಪೂಜೆಕಲ್ಲು ಗ್ರಾಮದಲ್ಲಿ ಜಲ ಮತ್ತು ಭೂಗರ್ಭ ಸ್ಫೋಟಕ್ಕೆ ಇಲ್ಲಿರುವ ಹೊರಗಿನ ಕಾರ್ಪೊರೇಟ್ ವಲಯಗಳ ಎರಡು ಎಸ್ಟೇಟ್‌ಗಳು ನೇರ ಕಾರಣವಾಗಿವೆ. ಬ್ರಹ್ಮಗಿರಿ ಪರ್ವತದ ಮೇಲೆ ಕೊಡಗು ವಯನಾಡ್ ಗಡಿ ರೇಖೆಯಲ್ಲಿ ನಿಂತಿರುವ ಎಸ್ಟೇಟ್‌ಗಳಲ್ಲಿ ಬೃಹತ್ ಸರೋವರಗಳನ್ನು ನಿರ್ಮಿಸಲಾಗಿದೆ. ಮುಂದೆ ಈ ಬೃಹತ್ ಸರೋವರಗಳು ಸ್ಫೋಟಗೊಂಡು ನಾಣಚ್ಚಿ ಗ್ರಾಮ ಜಲ ಪ್ರಳಯಕ್ಕೆ ತುತ್ತಾಗಬಹುದು. ಇಲ್ಲಿ ಸಂಭವಿಸಿರುವ ಅನಾಹುತ ಲಕ್ಷ್ಮಣ ತೀರ್ಥ ವ್ಯಾಪ್ತಿಗೂ ವ್ಯಾಪಿಸಿ ಕ್ರಮೇಣ ಇಡೀ ಕೊಡಗಿಗೆ ಅನಾಹುತ ಎದುರಾಗಬಹುದು ಎಂದು ಆತಂಕ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಪ್ರಮುಖರಾದ ಬೊಳ್ಳಚೆಟ್ಟಿರ ಜಯಂತಿ, ಬಿದ್ದಂಡ ಉಷಾ, ಪೆಮ್ಮುಡಿಯಂಡ ವೇಣು, ನಂದೇಟಿರ ರವಿ, ಬಡುವಂಡ ವಿಜಯ, ಪುದಿಯೊಕ್ಕಡ ಕಾಶಿ, ಪ್ರೊ.ಚೌರೀರ ಜಗತ್, ನೆರವಂಡ ಅನೂಪ್, ಪೆಮ್ಮಂಡ ಪವಿತ್ರ, ಚೊಕ್ಕಂಡ ಕಟ್ಟಿ, ಅಚ್ಚಕಾಳೆರ ಸಂತು, ಚಂಗಣಮಕ್ಕಡ ವಿನು, ಅವರೆಮಾದಂಡ ಚಂಗಪ್ಪ, ವಾಂಚಿರ ರಘು ಮತ್ತಿತರರು ಪಾಲ್ಗೊಂಡು ಬೃಹತ್ ಭೂ ಪರಿವರ್ತನೆ ಮತ್ತು ಭೂ ವಿಲೇವಾರಿ ವಿರುದ್ಧ ನಿರ್ಣಯ ಕೈಗೊಂಡರು.

## ಕೆರೆಯಲ್ಲಿ ಮುಳುಗಿ ಕಾಡಾನೆ ಸಾವು



ಕೆರೆಯಿಂದ ಆನೆ ಕಳೇಬರವನ್ನು ಅರಣ್ಯ ಸಿಬ್ಬಂದಿ ಜೆಸಿಬಿ ಮೂಲಕ ಹೊರ ತೆಗೆದರು.

ಸಿದ್ದಾಪುರ, ಆ.29–ಕೆರೆಯಲ್ಲಿ ನೀರು ಕುಡಿಯಲು ಹೋದ ಕಾಡಾನೆ ಆಕಸ್ಮಿಕವಾಗಿ ನೀರಿನಲ್ಲಿ ಮುಳುಗಿ ಮೃತಪಟ್ಟ ಘಟನೆ ವಿರಾಜಪೇಟೆ ತಾಲೂಕಿನ ಅಮ್ಮತಿ ಸಮೀಪದ ಕನ್ನಡ ಮಠ ಕಾಫಿ ತೋಟದಲ್ಲಿ ಗುರುವಾರ ನಡೆದಿದೆ.

ಕೆರೆಯಲ್ಲಿ ತೇಲುತ್ತಿದ್ದ ಸುಮಾರು 10 ವರ್ಷದ ಗಂಡಾನೆ ಕಳೇಬರ ಬೆಳಗ್ಗೆ ತೋಟದ ಕೆಲಸಕ್ಕೆ ತೆರಳಿದ ಕಾರ್ಮಿಕರಿಗೆ ಪತ್ತೆಯಾಗಿದೆ. ನಂತರ ಅರಣ್ಯ ಇಲಾಖೆ ಅಧಿಕಾರಿಗಳಿಗೆ ಮಾಹಿತಿ ನೀಡಿದರು. ಬಳಿಕ ಅರಣ್ಯಾಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲಿಸಿ ಕೆರೆಯಿಂದ ಆನೆ ಕಳೇಬರವನ್ನು ಜೆಸಿಬಿ ಹಾಗೂ ಹಗ್ಗದ ಸಹಾಯದಿಂದ ಹೊರ ತೆಗೆದು ಮರಣೋತ್ತರ ಪರೀಕ್ಷೆ ನಡೆಸಿದರು. ಬಳಿಕ ಸ್ಥಳದಲ್ಲೇ ಗುಂಡಿ ತೋಡಿ ಅಂತ್ಯಕ್ರಿಯೆ ನೆರವೇರಿಸಲಾಯಿತು. ಇದೇ ವೇಳೆ 2 ಕೆಜಿ ತೂಕದ 2 ದಂತಗಳನ್ನು ಅರಣ್ಯ ಇಲಾಖಾಧಿಕಾರಿಗಳು ವಶಪಡಿಸಿಕೊಂಡರು. ಎರಡು ದಿನಗಳ ಹಿಂದೆ ಆನೆ ಮೃತಪಟ್ಟಿದೆ. ಕೆಲ ದಿನಗಳಿಂದ ಕಾಡಾನೆಗಳ ಹಿಂಡು ಸುತ್ತಮುತ್ತಲ ಕಾಫಿ ತೋಟಗಳಲ್ಲಿ ಕಾಣಿಸಿಕೊಂಡಿವೆ. ಈ ಆನೆ ಕಾಫಿ ತೋಟದ ಕೆರೆಯಲ್ಲಿ ನೀರು ಕುಡಿಯಲು ಹೋಗಿ ಆಕಸ್ಮಿಕವಾಗಿ ಬಿದ್ದು ಮೇಲೆ ಬರಲು ಸಾಧ್ಯವಾಗದೇ ಮೃತಪಟ್ಟಿದೆ ಎಂದು ಅರಣ್ಯಾಧಿಕಾರಿಗಳು ತಿಳಿಸಿದರು.

ಡಿಎಫ್‌ಓ ಜಗನ್ನಾಥ್, ಎಸಿಎಫ್ ಗೋಪಾಲ್, ಆರ್‌ಎಫ್‌ಓ ಶಿವರಾಂ, ವನ್ಯಜೀವಿ ವೈದ್ಯಾಧಿಕಾರಿ ಡಾ.ಚೆಟ್ಟಿಯಪ್ಪ, ಉಪವಲಯ ಅರಣ್ಯಾಧಿಕಾರಿಗಳಾದ ಸಂಜಿತ್ ಸೋಮಯ್ಯ, ಕನ್ನಂಡ ರಂಜನ್, ಅರಣ್ಯ ರಕ್ಷಕ ಅರುಣ, ಆರ್‌ಆರ್‌ಟಿ ಹಾಗೂ ಇಪಿಟಿ ಸಿಬ್ಬಂದಿ ವಿನೋದ್, ಅಚ್ಚಯ್ಯ, ವಿನೋದ, ಸಚಿನ್, ಪ್ರವೀಣ್, ಗಣೇಶ್, ಅಖಿಲೇಶ್, ಮುರುಗನ್, ಆದರ್ಶ, ಸತೀಶ ಮತ್ತಿತರರು ಹಾಜರಿದ್ದರು.

## ಬಿಜೆಪಿ ವಿರುದ್ಧ ಸಿಪಿಐ ಕಾರ್ಯಕರ್ತರ ಪ್ರತಿಭಟನೆ



ರಾಜ್ಯ ಸರ್ಕಾರ ಅಸ್ಥಿರಗೊಳಿಸಲು ಪ್ರಯತ್ನಿಸಲಾಗುತ್ತಿದೆ ಎಂದು ಆರೋಪಿಸಿ ಮಡಿಕೇರಿಯಲ್ಲಿ ಸಿಪಿಐ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

**ಮಡಿಕೇರಿ:** ಜನರಿಂದ ಬಹುಮತ ಪಡೆದು ಆಯ್ಕೆಯಾದ ರಾಜ್ಯ ಸರ್ಕಾರವನ್ನು ಅಸ್ಥಿರಗೊಳಿಸಲು ಕೇಂದ್ರದಲ್ಲಿ ಆಡಳಿತ ನಡೆಸುತ್ತಿರುವ ಬಿಜೆಪಿ ರಾಜ್ಯಪಾಲರ ಮೂಲಕ ಪ್ರಯತ್ನಿಸುತ್ತಿದೆ ಎಂದು ಆರೋಪಿಸಿ ಭಾರತ್ ಕಮ್ಯೂನಿಸ್ಟ್ ಪಕ್ಷದ ಕಾರ್ಯಕರ್ತರು ನಗರದಲ್ಲಿ ಗುರುವಾರ ಪ್ರತಿಭಟನೆ ನಡೆಸಿದರು.

ನಗರದ ಜನರಲ್ ತಿಮ್ಮಯ್ಯ ವೃತ್ತದಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಿದ ಸಿಪಿಐ ಕಾರ್ಯಕರ್ತರು, ರಾಜ್ಯಪಾಲರ ಹುದ್ದೆ ದೇಶದ ಒಕ್ಕೂಟ ವ್ಯವಸ್ಥೆಯನ್ನು ಅಸ್ಥಿರಗೊಳಿಸಲು ರಾಜಕೀಯವಾಗಿ ದುರ್ಬಳಕೆಯಾಗುತ್ತಿದೆ. ರಾಜ್ಯದ ಹಿಂದಿನ ಹಲವು ಭ್ರಷ್ಟಾಚಾರ ಪ್ರಕರಣಗಳ ಬಗ್ಗೆ ರಾಜ್ಯಪಾಲರಿಗೆ ದೂರು ಸಲ್ಲಿಸಿ ತನಿಖೆಗೆ ಅನುಮತಿ ನೀಡುವಂತೆ ಕೋರಿದರೂ ಯಾವುದೇ ಕ್ರಮ ಕೈಗೊಂಡಿಲ್ಲ. ಆದರೆ, ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಒಬ್ಬ ವ್ಯಕ್ತಿ ನೀಡಿದ ದೂರನ್ನಾಧರಿಸಿ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದನ್ನು ಗಮನಿಸಿದರೆ ರಾಜ್ಯಪಾಲರ ನಿರ್ಧಾರ ರಾಜಕೀಯ ಪ್ರೇರಿತವಾಗಿದೆ ಎನ್ನುವುದು ಸ್ಪಷ್ಟವಾಗುತ್ತದೆ ಎಂದು ಆರೋಪಿಸಿದರು.

ಸಿಪಿಐ ಉಪ ಕಾರ್ಯದರ್ಶಿ ಹೆಚ್.ಎಂ. ಸೋಮಪ್ಪ ಮಾತನಾಡಿ, ಮುಡಾ ನಿವೇಶನ ಹಂಚಿಕೆ ಪ್ರಕರಣ ಮತ್ತು ವಾಲ್ಮೀಕಿ ಅಭಿವೃದ್ಧಿ ನಿಗಮದ ಭ್ರಷ್ಟಾಚಾರ ಪ್ರಕರಣ ಕುರಿತು ನ್ಯಾಯಾಂಗದ ಚೌಕಟ್ಟಿನಲ್ಲಿ ನಿಷ್ಪಕ್ಷಪಾತ ತನಿಖೆ ನಡೆಸಬೇಕು ಎಂದು ಒತ್ತಾಯಿಸಿದರು.

**ನಿವೇಶನ ನೀಡಲು ಒತ್ತಾಯ:** ಇದೇ ಸಂದರ್ಭ ಪ್ರತಿಭಟನಾಕಾರರು, ಹಲವು ವರ್ಷಗಳಿಂದ ಕಾಫಿ ತೋಟದ ಲೈನ್‌ಮನೆ ಮತ್ತು ಬಾಡಿಗೆ ಮನೆಗಳಲ್ಲಿ ವಾಸಿಸುತ್ತಿರುವ ಕೂಲಿ ಕಾರ್ಮಿಕರಿಗೆ ನಿವೇಶನ ಹಾಗೂ ವಸತಿ ಸೌಲಭ್ಯ ಕಲ್ಪಿಸಿಕೊಡುವಂತೆ ಒತ್ತಾಯಿಸಿ ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿದರು.

ಪ್ರತಿಭಟನೆಯಲ್ಲಿ ಸಿಪಿಐ ಸೋಮವಾರಪೇಟೆ ತಾಲೂಕು ಕಾರ್ಯದರ್ಶಿ ಶಬಾನ, ಕಟ್ಟಡ ಕಾರ್ಮಿಕರ ಸಂಘದ ಕಾರ್ಯದರ್ಶಿ ಕೃಷ್ಣ, ಎಐಟಿಯುಸಿ ಸಂಚಾಲಕ ಶೇಷಪ್ಪ, ಸದಸ್ಯರಾದ ಪರಮೇಶ್ವರ್, ರಮೇಶ್, ಅಣ್ಣು ಮತ್ತಿತರರು ಪಾಲ್ಗೊಂಡಿದ್ದರು.

## ಶೇಕಡಾ 99.25ರಷ್ಟು ಸಾಲ ವಸೂಲಿ

**ಕೊಡವ ಸೌಹಾರ್ದ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ ಅಧ್ಯಕ್ಷ ಮಾಹಿತಿ**



ವಿರಾಜಪೇಟೆ ಕೊಡವ ಸೌಹಾರ್ದ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ ಮಹಾಸಭೆಯಲ್ಲಿ ಅಧ್ಯಕ್ಷ ನೆಲ್ಲಮಕ್ಕಡ ಉಮೇಶ್ ಮುತ್ತಣ್ಣ ಮಾತನಾಡಿದರು.

ವಿರಾಜಪೇಟೆ, ಆ.29–ಸದಸ್ಯರು, ಸಹಕಾರಿಗಳು ಮತ್ತು ಸಾರ್ವಜನಿಕರ ಉತ್ತಮ ಸ್ಪಂದನೆಯಿಂದ ವಿರಾಜಪೇಟೆ ಕೊಡವ ಸೌಹಾರ್ದ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ ಪ್ರಗತಿಯಲ್ಲಿ ಸಾಗಿಸುತ್ತಿದೆ ಎಂದು ಸೊಸೈಟಿ ಅಧ್ಯಕ್ಷ ನೆಲ್ಲಮಕ್ಕಡ ಉಮೇಶ್ ಮುತ್ತಣ್ಣ ಹೇಳಿದರು.

ಪಟ್ಟಣ ಸಹಕಾರ ಬ್ಯಾಂಕ್‌ನ ಸಭಾಂಗಣದಲ್ಲಿ ನಡೆದ ಕೊಡವ ಸೌಹಾರ್ದ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ ಮಹಾಸಭೆಯಲ್ಲಿ ಮಾತನಾಡಿದ ಅವರು, ಸೊಸೈಟಿಯಲ್ಲಿ 1310 ಸದಸ್ಯರು ಇದ್ದಾರೆ. 80.10 ಲಕ್ಷ ರೂ. ಪಾಲು ಬಂಡವಾಳವಿದ್ದು, ವಿವಿಧ ಠೇವಣಿಗಳಿಂದ 607.31 ಲಕ್ಷ ರೂ. ಸಂಗ್ರಹಣೆ ಆಗಿದೆ. 464.66 ಲಕ್ಷ ರೂ. ಅನ್ನು ವಿವಿಧ ಸಾಲ ಸೌಲಭ್ಯಗಳಾಗಿ ನೀಡಿದ್ದು, ಇದರಲ್ಲಿ ಶೇ.99.25ರಷ್ಟು ಸಾಲ ವಸೂಲಿ ಮಾಡಲಾಗಿದೆ ಎಂದು ಮಾಹಿತಿ ನೀಡಿದರು.

ಇತರೆ ಬ್ಯಾಂಕ್‌ನಲ್ಲಿ ಠೇವಣಿಯಾಗಿ 240 ಲಕ್ಷ ರೂ. ಹೂಡಿಕೆ ಮಾಡಲಾಗಿದ್ದು, 2023–24ನೇ ಸಾಲಿನಲ್ಲಿ 17,83,764 ಲಕ್ಷ ರೂ. ಲಾಭ ಗಳಿಸಿದೆ. ಲಾಭಾಂಶದಲ್ಲಿ ಸದಸ್ಯರಿಗೆ ಶೇ.10ರಷ್ಟು ಡಿವಿಡೆಂಟ್ ಹಂಚಲು ಕ್ರಮ ವಹಿಸಲಾಗಿದೆ. ಈ ಸಾಲಿನಿಂದ ಎಲ್ಲಾ ರೀತಿಯ ಸಾಲಗಳಿಗೆ ವಿಮಾ ಕಂಪನಿಯಿಂದ ಭದ್ರತೆ ಒದಗಿಸಲಾಗುವುದು ಎಂದರು.

ಸೊಸೈಟಿಯ ಮುಲ್ಲಂಗಡ ಶಂಕರಿ ಪೊನ್ನಪ್ಪ ಮಾತನಾಡಿ, ಕಳೆದ ಐದು ವರ್ಷಗಳಲ್ಲಿ ಸಂಘದ ಕಾರ್ಯ ಚಟುವಟಿಕೆ ಉತ್ತಮವಾಗಿದೆ. ಮುಂದಿನ ತಿಂಗಳು ಸಂಘದ ಚುನಾವಣೆ ಇರುವುದರಿಂದ ದುಂದು ವೆಚ್ಚ ಮಾಡದೆ, ಅವಿರೋಧ ಆಯ್ಕೆಗೆ ಸಲಹೆ ನೀಡಿದರು. ಇವರ ಸಲಹೆಗೆ ಕೋಲತಂಡ ಸುಬ್ರಮಣಿ ಹಾಗೂ ಪಟ್ಟಡ ಪೂವಣ್ಣ ಧ್ವನಿಗೂಡಿಸಿದರು.

ಸೌಹಾರ್ದ ಡೆವಲಪ್‌ಮೆಂಟ್ ಜಿಲ್ಲಾಧಿಕಾರಿ ಸುರೇಶ್ ಮಾತನಾಡಿ, ರಾಜ್ಯಾದ್ಯಂತ ಸೌಹಾರ್ದ ಸಹಕಾರ ಸಂಸ್ಥೆಗಳು ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿವೆ. ಅದರಲ್ಲೂ ವಿರಾಜಪೇಟೆ ಸೌಹಾರ್ದ ಕೋ–ಆಪರೇಟಿವ್ ಸೊಸೈಟಿ ಸಹಕಾರಿ ವ್ಯವಹಾರಗಳಲ್ಲಿ ಯಾವುದೇ ಕಪ್ಪುಚುಕ್ಕೆ ಬಾರದ ರೀತಿ ಕಾರ್ಯ ನಿರ್ವಹಿಸುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಇದೇ ವೇಳೆ ಎಸ್‌ಎಸ್‌ಎಲ್‌ಸಿ, ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಪಡೆದ ಸಂಘದ ಸದಸ್ಯರ ಮಕ್ಕಳು ಹಾಗೂ ಪಿಗ್ಮಿ ಏಜೆಂಟರಿಗೆ ಪುರಸ್ಕಾರ ನೀಡಲಾಯಿತು. ಸಭೆಯಲ್ಲಿ ಉಪಾಧ್ಯಕ್ಷ ಚೇಂದಂಡ ವಸಂತ್ ಕುಮಾರ್, ನಿರ್ದೇಶಕರಾದ ಕಾಂಡಂಡ ಎಂ.ಚರ್ಮಣ, ನೆಲ್ಲಚಂಡ. ಎಂ.ಭೀಮಯ್ಯ, ವಾಂಚಿರ ಟಿ.ನಾಣಯ್ಯ, ಚೇಂದ್ರಿಮಡ ಕೆ.ನಂಜಪ್ಪ, ಕೇಳಪಂಡ ಎನ್.ವಿಶ್ವನಾಥ್, ಕೊಂಗಂಡ ಎ.ನಾಣಯ್ಯ, ಕಾಳೇಂಗಡ ಬಿ.ತಿಮ್ಮಯ್ಯ, ಮೇಕೇರಿರ ಪಾಲಿ ಸುಬ್ರಮಣಿ, ಪಟ್ಟಡ ವಿ.ದಿವ್ಯ, ನೆಲ್ಲಮಕ್ಕಡ ಸಿ.ಬೆಳ್ಯಪ್ಪ, ಬೊಳ್ಳೆಪಂಡ ಎಂ.ಸುರೇಶ್, ಐನಂಡ ಪಿ.ಗಣಪತಿ, ಪ್ರಭಾರ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಪಟ್ಟಡ ಸಿ.ಟೀನಾ ಉಪಸ್ಥಿತರಿದ್ದರು.

## ವ್ಯವಸ್ಥಿತ ವಾಹನ ಪಾರ್ಕಿಂಗ್‌ಗೆ ಸರ್ವೇ



ಮಡಿಕೇರಿಯಲ್ಲಿ ವಾಹನ ಪಾರ್ಕಿಂಗ್‌ಗೆ ಪೊಲೀಸರಿಂದ ರಸ್ತೆ ಸರ್ವೇ ಕಾರ್ಯ.

**ಮಡಿಕೇರಿ:** ನಗರದಲ್ಲಿ ವ್ಯವಸ್ಥಿತ ವಾಹನ ಪಾರ್ಕಿಂಗ್ ಸಮಸ್ಯೆಯಾಗಿ ಕಾಡುತ್ತಿದ್ದು, ಇದಕ್ಕೆ ಕಡಿವಾಣ ಹಾಕಲು ಸಂಚಾರ ಠಾಣೆ ಪೊಲೀಸರು ಮುಂದಾಗಿದ್ದಾರೆ.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ. ರಾಮರಾಜನ್ ಸೂಚನೆ ಮೇರೆಗೆ ಎರಡು ದಿನಗಳ ಹಿಂದೆ ನಗರದ ಖಾಸಗಿ ಸಭಾಂಗಣದಲ್ಲಿ ನಗರಸಭೆ, ಪೊಲೀಸ್ ಇಲಾಖೆ ಸಹಿತ ಇಕ್ಕಟ್ಟಾದ ರಸ್ತೆಗಳ ಪ್ರದೇಶಗಳಲ್ಲಿ ವ್ಯಾಪಾರ ವಹಿವಾಟು ನಡೆಸುತ್ತಿರುವ ವರ್ತಕರು, ಅಂಗಡಿಗಳ ಮಾಲೀಕರು, ಆಟೋ, ಲಾರಿ, ಬಸ್ ಸೇರಿದಂತೆ ವಿವಿಧ ಸಂಘ–ಸಂಸ್ಥೆಗಳ ಜನಸಂಪರ್ಕ ಸಭೆ ನಡೆಸಿದ್ದ ಪೊಲೀಸರು ಸಾರ್ವಜನಿಕರ ಅಹವಾಲು ಆಲಿಸಿದ್ದರು.

ಈ ವೇಳೆ ಪಾರ್ಕಿಂಗ್ ಸಮಸ್ಯೆ, ಏಕಮುಖ ಹಾಗೂ ದ್ವಿಮುಖ ಸಂಚಾರ ಸೇರಿದಂತೆ ಹಲವು ವಿಚಾರಗಳ ಕುರಿತು ಸಾರ್ವಜನಿಕರು ಪೊಲೀಸರಿಗೆ ಸಲಹೆ ನೀಡಿದ್ದರು. ಅದರಂತೆ ಮೊದಲಿಗೆ ಪಾರ್ಕಿಂಗ್ ಸುಗಮಗೊಳಿಸಿ, ವಾಹನ ದಟ್ಟಣೆ ಮತ್ತು ಸುಗಮ ಸಂಚಾರ ವ್ಯವಸ್ಥೆ ಕಲ್ಪಿಸಲು ಪೊಲೀಸರು ಮುಂದಾಗಿದ್ದಾರೆ.

**ರಸ್ತೆಗಳ ಸರ್ವೇ:** ಮೈಸೂರು ಮೂಲದ ಖಾಸಗಿ ಸಂಸ್ಥೆ ಜೊತೆ ಒಪ್ಪಂದ ಮಾಡಿಕೊಂಡು ರಸ್ತೆಗಳಲ್ಲಿ ವಾಹನ ಪಾರ್ಕಿಂಗ್ ಸ್ಥಳಗಳನ್ನು ಗುರುತು ಮಾಡಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ನಗರದ ಹಲವು ಕಡೆಗಳಲ್ಲಿ ರಸ್ತೆಗಳ ಸರ್ವೇ ನಡೆಸಲಾಗುತ್ತಿದೆ.

ಚೌಕಿ ವೃತ್ತ, ಎಸ್‌ಬಿಐ ಜಂಕ್ಷನ್, ಪತ್ರಿಕಾ ಭವನ ರಸ್ತೆ, ಇಂಡಸ್ಟ್ರೀಯಲ್ ಏರಿಯಾ, ಹಳೇ ಖಾಸಗಿ ಬಸ್ ನಿಲ್ದಾಣ, ಮಾರುಕಟ್ಟೆ ಆವರಣ ಮತ್ತಿತರ ಕಡೆಗಳಲ್ಲಿ ರಸ್ತೆ ಸರ್ವೇ ಕಾರ್ಯ ನಡೆಸಲಾಗುತ್ತಿದೆ. ಮುಂದಿನ ದಿನಗಳಲ್ಲಿ ಉದ್ದೇಶಿತ ಸ್ಥಳಗಳಲ್ಲಿ ಮಾರ್ಕಿಂಗ್ ಕಾರ್ಯ ನಡೆಸಲಾಗುತ್ತದೆ. ಸಭೆಯಲ್ಲಿ ಸಾರ್ವಜನಿಕರು ನೀಡಿದ ಸಲಹೆಗಳನ್ನು ಹಂತ ಹಂತವಾಗಿ ಅನುಷ್ಠಾನ ಮಾಡಲಾಗುತ್ತದೆ ಎಂದು ಪೊಲೀಸ್ ಅಧಿಕಾರಿಗಳು ಮಾಹಿತಿ ನೀಡಿದರು. ಈ ಸಂದರ್ಭ ನಗರ ಸಂಚಾರ ಠಾಣಾಧಿಕಾರಿ ಶ್ರೀಧರ್, ಎಎಸ್‌ಐ ಪಿ.ಐ.ನಂದ ಮತ್ತು ಸಿಬ್ಬಂದಿ ಹಾಜರಿದ್ದರು.

## ಚಾ.ನಗರದಲ್ಲಿ ಜಿಲ್ಲಾ ಮಟ್ಟದ ಮ್ಯಾರಥಾನ್



ಚಾಮರಾಜನಗರದಲ್ಲಿ ನಡೆದ ಮ್ಯಾರಾಥಾನ್‌ನಲ್ಲಿ ಶಾಲಾ–ಕಾಲೇಜು ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಚಾಮರಾಜನಗರ, ಆ.29–ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ರಾಷ್ಟ್ರೀಯ ಕ್ರೀಡಾ ದಿನಾಚರಣೆ ಹಾಗೂ ಮೇಜರ್ ಧ್ಯಾನ್‌ಚಂದ್ ಜನ್ಮದಿನದ ಅಂಗವಾಗಿ ಗುರುವಾರ ನಗರದಲ್ಲಿ ಜಿಲ್ಲಾ ಮಟ್ಟದ ಮ್ಯಾರಥಾನ್ ಏರ್ಪಡಿಸಲಾಗಿತ್ತು.

ಮ್ಯಾರಥಾನ್‌ನಲ್ಲಿ ಪಾಲ್ಗೊಳ್ಳುವ ಸಲುವಾಗಿ ಚಾಮರಾಜೇಶ್ವರ ದೇವಾಲಯ ಆವರಣದಲ್ಲಿ ಸಮಾವೇಶಗೊಂಡಿದ್ದ ಜಿಲ್ಲೆಯ ವಿವಿಧ ಶಾಲಾ–ಕಾಲೇಜು ವಿದ್ಯಾರ್ಥಿಗಳು, ಆಕರ್ಷಕ ಸಮವಸ್ತ್ರ ಧರಿಸಿ ಗಮನ ಸೆಳೆದರು. ಚಾಮರಾಜೇಶ್ವರ ದೇವಸ್ಥಾನದಿಂದ ಆರಂಭವಾದ ಮ್ಯಾರಥಾನ್ ಜೋಡಿ ರಸ್ತೆ ಸೇರಿದಂತೆ ಪ್ರಮುಖ ರಸ್ತೆಗಳಲ್ಲಿ ಸಾಗಿ ಪ್ರವಾಸಿ ಮಂದಿರದಲ್ಲಿ ಮುಕ್ತಾಯಗೊಂಡಿತು.

ಮ್ಯಾರಥಾನ್‌ಗೆ ಜಿಲ್ಲಾ ಪಂಚಾಯಿತಿ ಸಿಇಓ ಮೋನಾ ರೋತ್ ಚಾಲನೆ ನೀಡಿದರು. ಅಪರ ಜಿಲ್ಲಾಧಿಕಾರಿ ಗೀತಾ ಹುಡೇದ, ಜಿಪಂ ಉಪಕಾರ್ಯದರ್ಶಿ ಪಿ.ಲಕ್ಷ್ಮೀ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಶಿವಸ್ವಾಮಿ, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಮಂಜುನಾಥ ಪ್ರಸನ್ನ, ಜಿಲ್ಲಾ ಕ್ರೀಡಾಂಗಣ ಅಭಿವೃದ್ಧಿ ಸಮಿತಿ ಸದಸ್ಯ ಶ್ರೀನಿವಾಸಪ್ರಸಾದ್ ಇತರರು ಇದ್ದರು.

## ಸಾಮಾಜಿಕ ಪಿಡುಗು ತಡೆಗೆ ಹೆಚ್ಚಿನ ಜಾಗೃತಿ ಮೂಡಿಸಿ

**ಕಾನೂನು ಅರಿವು ಕಾರ್ಯಾಗಾರದಲ್ಲಿ ಜಿಲ್ಲಾ ನ್ಯಾಯಾಧೀಶೆ ಬಿ.ಎಸ್.ಭಾರತಿ ಸಲಹೆ**



ಚಾ.ನಗರದಲ್ಲಿ ನಡೆದ ಕಾನೂನು ಅರಿವು ಕಾರ್ಯಾಗಾರದಲ್ಲಿ ನ್ಯಾಯಾಧೀಶೆ ಬಿ.ಎಸ್.ಭಾರತಿ ಮಾತನಾಡಿದರು.

ಚಾಮರಾಜನಗರ, ಆ.29–ಸಾಮಾಜಿಕ ಪಿಡುಗುಗಳಾದ ಬಾಲ್ಯವಿವಾಹ, ಲೈಂಗಿಕ ದೌರ್ಜನ್ಯ ಹಾಗೂ ಬಹಿಷ್ಕಾರ ತಡೆಗಾಗಿ ಹೆಚ್ಚಿನ ಜಾಗೃತಿ ಕಾರ್ಯಕ್ರಮ ಆಯೋಜಿಸಿ, ಜನಸಾಮಾನ್ಯರಲ್ಲಿ ಅರಿವು ಮೂಡಿಸಬೇಕು ಎಂದು ಜಿಲ್ಲಾ ಪ್ರಧಾನ ಮತ್ತು ಸೆಷನ್ಸ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಧ್ಯಕ್ಷೆ ಬಿ.ಎಸ್.ಭಾರತಿ ತಿಳಿಸಿದರು.

ನಗರದ ಜೆ.ಎಚ್.ಪಟೇಲ್ ಸಭಾಂಗಣದಲ್ಲಿ ಗುರುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಆಯೋಜಿಸಿದ್ದ ಬಾಲ್ಯವಿವಾಹ ನಿಷೇಧ, ಪೋಕ್ಸೋ ಕಾಯ್ದೆ ಹಾಗೂ ಸಾಮಾಜಿಕ ಬಹಿಷ್ಕಾರ ಕುರಿತ ಕಾನೂನು ಅರಿವು ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಬಾಲ್ಯವಿವಾಹ, ಲೈಂಗಿಕ ದೌರ್ಜನ್ಯ ಹಾಗೂ ಬಹಿಷ್ಕಾರ ಪ್ರಕರಣಗಳು ಹೆಚ್ಚಾಗುತ್ತಿವೆ. ಇಂತಹ ಸಾಮಾಜಿಕ ಪಿಡುಗುಗಳನ್ನು ತಡೆಯಲು ಪರಿಣಾಮಕಾರಿ (ರೂಟ್ ಪ್ಲಾನ್) ಯೋಜನೆಗಳನ್ನು ರೂಪಿಸಬೇಕು. ನ್ಯಾಯಾಲಯದಲ್ಲಿ ಸಾಮಾಜಿಕ ಬಹಿಷ್ಕಾರದ 63 ದೂರುಗಳು ದಾಖಲಾಗಿವೆ. ಅದರಲ್ಲೂ ಸ್ವಜಾತಿ ಬಹಿಷ್ಕಾರ ಖಂಡನೀಯವಾಗಿದೆ. ಇದರಿಂದ ಜನರಿಗೆ ರಕ್ಷಣೆ ನೀಡಬೇಕಾಗಿದೆ. ಈ ನಿಟ್ಟಿನಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ನಿರಂತರವಾಗಿ ಏರ್ಪಡಿಸಿ ಕಾಯ್ದೆಗಳ ಅರಿವು ಮೂಡಿಸಬೇಕಾದ ಗುರುತರ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದು ತಿಳಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಬಿ.ಟಿ. ಕವಿತಾ ಮಾತನಾಡಿ, ಈ ಕಾರ್ಯಾಗಾರ ಅತ್ಯಂತ ಮಹತ್ವ ಪೂರ್ಣವಾಗಿದೆ. ಮಹಿಳೆಯರ ಮತ್ತು ಮಕ್ಕಳ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುವವರು ಈ ಬಗ್ಗೆ ಸಾಕಷ್ಟು ಕಾಳಜಿ ವಹಿಸಬೇಕು. ರಾಜ್ಯದ ಇತರೆ ಜಿಲ್ಲೆಗಳು ಆರ್ಥಿಕವಾಗಿ ಹಿಂದುಳಿದಿರಬಹುದು, ಆದರೆ ನಮ್ಮ ಜಿಲ್ಲೆಯಲ್ಲಿರುವಷ್ಟು ಸಾಮಾಜಿಕ ಸಮಸ್ಯೆಗಳಿಲ್ಲ. ಬಾಲ್ಯವಿವಾಹ, ಲೈಂಗಿಕ ದೌರ್ಜನ್ಯ ಹಾಗೂ ಬಹಿಷ್ಕಾರ ಪ್ರಕರಣಗಳನ್ನು ಬೇರುಸಮೇತ ಕೀಳಲು ಆಶಾ, ಅಂಗನವಾಡಿ ಹಾಗೂ ಆರೋಗ್ಯ ಕಾರ್ಯಕರ್ತರು ತಳಮಟ್ಟದಿಂದ ಕೆಲಸ ಮಾಡಬೇಕು ಎಂದು ಸಲಹೆ ನೀಡಿದರು.

ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಪಿ.ಲಕ್ಷ್ಮೀ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ನಂಜಯ್ಯ, ಜಿಲ್ಲಾ ಬಾಲಕಾರ್ಮಿಕ ಸೊಸೈಟಿ ಯೋಜನಾ ನಿರ್ದೇಶಕ ಮಹೇಶ್ ಹಾಗೂ ಜಿಲ್ಲಾ ಬಾಲನ್ಯಾಯ ಮಂಡಳಿ ಸದಸ್ಯ ಟಿ.ಜೆ.ಸುರೇಶ್ ಮಾತನಾಡಿದರು. ಅಪರ ಜಿಲ್ಲಾಧಿಕಾರಿ ಗೀತಾ ಹುಡೇದ, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಎಸ್. ಚಿದಂಬರ, ಸಮಾಜ ಕಲ್ಯಾಣ ಉಪನಿರ್ದೇಶಕ ಮುನಿರಾಜು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಮಂಜುನಾಥ್, ಜಿಲ್ಲಾ ವಕೀಲರ ಸಂಘದ ಪ್ರಧಾನ ಕಾರ್ಯದರ್ಶಿ ರಂಗಸ್ವಾಮಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಮೇಘಶ್ರೀ, ಸಿದ್ದಶೆಟ್ಟಿ ಇತರರು ಕಾರ್ಯಾಗಾರದಲ್ಲಿ ಉಪಸ್ಥಿತರಿದ್ದರು.

> **"** ಕಾನೂನನ್ನು ಎಲ್ಲರೂ ಗೌರವಿಸಿ, ಕಡ್ಡಾಯವಾಗಿ ಪಾಲಿಸಬೇಕು. ಸಂವಿಧಾನದಲ್ಲಿ ಜನರಿಗೆ ಮೂಲಭೂತ ಹಕ್ಕುಗಳನ್ನು ನೀಡಿದ್ದು, ಹಾಗೆಯೇ ಕರ್ತವ್ಯಗಳನ್ನು ತಿಳಿಸಲಾಗಿದೆ. ಅನಿಷ್ಟ ಪದ್ಧತಿಗಳು ಸಾಮಾಜಿಕ ಸವಾಲುಗಳಾಗಿ ಪರಿವರ್ತನೆಯಾಗುತ್ತಿವೆ. ಮಕ್ಕಳು ದೇಶದ ಸಂಪತ್ತು ಆಗಿದ್ದು, ಮಕ್ಕಳ ಬಗ್ಗೆ ಪೋಷಕರು ಹೆಚ್ಚಿನ ಗಮನ ಹರಿಸಬೇಕು.
>
> –ಈಶ್ವರ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ

## ರಾಜ್ಯಪಾಲರ ವಿರುದ್ಧ ಡಿಎಸ್‌ಎಸ್ ಪ್ರತಿಭಟನೆ



ಚಾ.ನಗರದಲ್ಲಿ ರಾಜ್ಯಪಾಲರ ವಿರುದ್ಧ ದಸಂಸ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಚಾಮರಾಜನಗರ, ಆ.29–ರಾಜ್ಯ ಸರ್ಕಾರವನ್ನು ಅಸ್ಥಿರಗೊಳಿಸಲು ರಾಜ್ಯಪಾಲರು ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ್ದಾರೆ ಎಂದು ಆರೋಪಿಸಿ ರಾಜ್ಯ ದಲಿತ ಸಂಘರ್ಷ ಸಮಿತಿ (ಡಿ.ಜಿ.ಸಾಗರ್ ಬಣ) ಕಾರ್ಯಕರ್ತರು ಗುರುವಾರ ನಗರದಲ್ಲಿ ಪ್ರತಿಭಟನೆ ನಡೆಸಿದರು.

ಜಿಲ್ಲಾಡಳಿತ ಭವನ ಎದುರು ಸಮಿತಿ ಜಿಲ್ಲಾ ಸಂಚಾಲಕ ಸಿ.ಎಂ.ಶಿವಣ್ಣ ನೇತೃತ್ವದಲ್ಲಿ ಪ್ರತಿಭಟನೆ ನಡೆಸಿ, ರಾಜ್ಯಪಾಲರ ವಿರುದ್ಧ ಘೋಷಣೆ ಕೂಗಿದರು. ನಂತರ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿದರು.

ಸಿ.ಎಂ.ಶಿವಣ್ಣ ಮಾತನಾಡಿ, 135 ಶಾಸಕರೊಂದಿಗೆ ರಾಜ್ಯದಲ್ಲಿ ಕಾಂಗ್ರೆಸ್ ಸುಭದ್ರವಾಗಿ ಸರ್ಕಾರ ನಡೆಸುತ್ತಿದೆ. ದಲಿತರು, ಹಿಂದುಳಿದ ವರ್ಗಗಳ ಪರ ಅನೇಕ ಯೋಜನೆಗಳನ್ನು ರೂಪಿಸಿ ರಾಜ್ಯವನ್ನು ಅಭಿವೃದ್ಧಿಯತ್ತ ಕೊಂಡೊಯ್ಯುತ್ತಿರುವುದನ್ನು ಸಹಿಸದೆ, ವಾಮಮಾರ್ಗದಲ್ಲಿ ಬಿಜೆಪಿ ಹಾಗೂ ಜೆಡಿಎಸ್ ರಾಜ್ಯಪಾಲರ ಮೂಲಕ ಸಿದ್ದರಾಮಯ್ಯ ವಿರುದ್ಧ ಪಿತೂರಿ ಮಾಡುತ್ತಿವೆ ಎಂದು ಆರೋಪಿಸಿದರು.

ಪ್ರತಿಭಟನೆಯಲ್ಲಿ ಡಿಎಸ್‌ಎಸ್ ಜಿಲ್ಲಾ ಸಂಯೋಜಕರಾದ ಕೆ.ಎಂ.ನಾಗರಾಜು, ಬೆಳ್ಳಿಯಪ್ಪ, ಆಟೋ ಉಮೇಶ್, ಕೊತ್ತಲವಾಡಿ ಶಿವು, ಮುಖಂಡರಾದ ಮಹದೇವಯ್ಯ, ಮರಿಯಯ್ಯ, ಕಲಾವಿದ ವೆಂಕಟರಮಣ, ರಂಗಸ್ವಾಮಿ, ಚಿನ್ನಸ್ವಾಮಿ, ಚಿಕ್ಕ, ಗೌರಮ್ಮ, ರಾಜಮ್ಮ, ಪುಟ್ಟಬಸಮ್ಮ, ಮಹದೇವಮ್ಮ, ರಾಜಮ್ಮ ಇತರರು ಭಾಗವಹಿಸಿದ್ದರು.

## ಕರ್ನಾಟಕ ಸಂಭ್ರಮ ರಥಯಾತ್ರೆಗೆ ಬೀಳ್ಕೊಡುಗೆ



ಚಾ.ನಗರದಲ್ಲಿ ಕರ್ನಾಟಕ ಸಂಭ್ರಮ ರಥಯಾತ್ರೆಗೆ ಶಾಸಕ ಸಿ.ಪುಟ್ಟರಂಗಶೆಟ್ಟಿ ಬೀಳ್ಕೊಟ್ಟರು.

ಚಾಮರಾಜನಗರ, ಆ.29–ಹೆಸರಾಯಿತು ಕರ್ನಾಟಕ ಉಸಿರಾಗಲಿ ಕನ್ನಡ ಶೀರ್ಷಿಕೆಯಡಿ 'ಕರ್ನಾಟಕ ಸಂಭ್ರಮ–50' ಜ್ಯೋತಿ ರಥಯಾತ್ರೆಗೆ ಶಾಸಕ ಸಿ.ಪುಟ್ಟರಂಗಶೆಟ್ಟಿ ನಗರದ ಪ್ರವಾಸಿ ಮಂದಿರದಲ್ಲಿ ಗುರುವಾರ ಬೀಳ್ಕೊಟ್ಟರು.

ಕನ್ನಡ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ರಾಜ್ಯಾದ್ಯಂತ ಸಂಚರಿಸುತ್ತಿರುವ ಕರ್ನಾಟಕ ಸಂಭ್ರಮ ರಥಯಾತ್ರೆ ಜಿಲ್ಲೆಯಲ್ಲಿ 4 ದಿನ ಸಂಚರಿಸುತ್ತಿದ್ದು, ಗುರುವಾರ ಚಾಮರಾಜನಗರ ತಾಲೂಕಿನಿಂದ ಗುಂಡ್ಲುಪೇಟೆಗೆ ತೆರಳಿತು.

ಇದೇ ವೇಳೆ ಶಾಸಕ ಸಿ.ಪುಟ್ಟರಂಗಶೆಟ್ಟಿ ಮಾತನಾಡಿ, ಮೈಸೂರು ರಾಜ್ಯಕ್ಕೆ ಕರ್ನಾಟಕವೆಂದು ಮಾಜಿ ಮುಖ್ಯಮಂತ್ರಿ ದಿವಂಗತ ಡಿ.ದೇವರಾಜ ಅರಸು ಅವರಿಂದ ಮರುನಾಮಕರಣವಾಗಿ 50 ವರ್ಷ ತುಂಬಿದ ಹಿನ್ನೆಲೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ರಾಜ್ಯಾದ್ಯಂತ ಕರ್ನಾಟಕ ಸಂಭ್ರಮ ರಥಯಾತ್ರೆ ಆರಂಭಿಸಿದೆ. ನಾವೆಲ್ಲಾ ಕನ್ನಡ ಭಾಷೆ, ನೆಲ, ಜಲ ಉಳಿಸಿ, ಅಭಿವೃದ್ಧಿ ಪಡಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದರು.

ಅಪರ ಜಿಲ್ಲಾಧಿಕಾರಿ ಗೀತಾ ಹುಡೇದ, ತಹಸೀಲ್ದಾರ್ ಗಿರಿಜಾ, ತಾಪಂ ಇಓ ಪೂರ್ಣಿಮಾ, ತಾಲೂಕು ಕಸಾಪ ಅಧ್ಯಕ್ಷ ಸುರೇಶ್ ಋಗ್ವೇದಿ, ಕಂದಾಯ ಇಲಾಖೆಯ ಮಹೇಶ್, ರಾಜೇಶ್, ಕನ್ನಡಪರ ಸಂಘಟನೆಗಳ ಮುಖಂಡರು ಇದ್ದರು.

## ತೆರಕಣಾಂಬಿಹುಂಡಿ–1ರ ಹಾಲು ಉತ್ಪಾದಕರ ಸಂಘದ ಸಭೆ

ಗುಂಡ್ಲುಪೇಟೆ, ಆ.29–ತಾಲೂಕಿನ ತೆರಕಣಾಂಬಿಹುಂಡಿ–1ರ ಹಾಲು ಉತ್ಪಾದಕರ ಸಹಕಾರ ಸಂಘದ ಸರ್ವಸದಸ್ಯರ ವಾರ್ಷಿಕ ಸಭೆ ಸಂಘದ ಕಚೇರಿ ಆವರಣದಲ್ಲಿ ನಡೆಯಿತು.

ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದ ಅಧ್ಯಕ್ಷ ನಾಗಪ್ಪ, ಹೈನುಗಾರಿಕೆ ರೈತರ ಬಾಳಿನ ಜೀವಾಳವಾಗಿದೆ. ಗುಣಮಟ್ಟದ ಹಾಲನ್ನು ಡೇರಿಗೆ ಹಾಕುವುದರೊಂದಿಗೆ ಹೆಚ್ಚು ಲಾಭವನ್ನು ಉತ್ಪಾದಕರು ಪಡೆಯಬಹುದು ಹಾಗೂ ಸಂಘವು ಅಭಿವೃದ್ಧಿ ಹೊಂದಲಿದೆ ಎಂದರು.

ಚಾಮುಲ್ ವಿಸ್ತರಣಾಧಿಕಾರಿ ಹೆಚ್.ಪ್ರಕಾಶ್, ಮಾರ್ಗ ವಿಸ್ತರಣಾಧಿಕಾರಿ ಮಂಜೇಶ್‌ಕುಮಾರ್, ಉಪಾಧ್ಯಕ್ಷ ಶಂಕರಪ್ಪ, ನಿರ್ದೇಶಕರಾದ ನಾಗಮಲ್ಲಪ್ಪ, ನಂಜಪ್ಪ, ಮಹೇಶ್, ನಾಗರಾಜು, ಗುರುಸ್ವಾಮಪ್ಪ, ಪುಟ್ಟದಾಸಯ್ಯ, ಸುರೇಶ್, ಬಿ.ಮಹದೇವಮ್ಮ, ಮಹದೇವಮ್ಮ ಮತ್ತು ಸಂಘದ ಮುಖ್ಯ ಕಾರ್ಯನಿರ್ವಾಹಕ ಜಿ.ಸುಂದರೇಶ್, ಹಾಲು ಪರೀಕ್ಷಕ ಎಂ.ಮಾದಪ್ಪ, ಗುಮಾಸ್ತ ಬಿ.ಮಹೇಂದ್ರ, ಸಹಾಯಕ ಬಿ.ನವೀನ್ ಮತ್ತು ಹಾಲು ಉತ್ಪಾದಕರು ಹಾಜರಿದ್ದರು.

## ಕೋರಂ ಇಲ್ಲದೆ ಟಿಎಪಿಸಿಎಂಎಸ್ ಸಭೆ ಮುಂದೂಡಿಕೆ



ಯಳಂದೂರು ಟಿಎಪಿಸಿಎಂಎಸ್ ಕಚೇರಿ.

ಯಳಂದೂರು, 29–ಪಟ್ಟಣದ ತಾಲೂಕು ವ್ಯವಸಾಯೋತ್ಪನ್ನ ಮಾರಾಟಗಾರರ ಸಹಕಾರ ಸಂಘದ ಕಾರ್ಯಕಾರಿ ಸಮಿತಿ ತುರ್ತು ಸಭೆಯನ್ನು ಕೋರಂ ಕೊರತೆಯಿಂದ ಮುಂದೂಡಲಾಯಿತು.

ಮಾಜಿ ಶಾಸಕ ಎಸ್.ಬಾಲರಾಜು ಅಧ್ಯಕ್ಷರಾಗಿರುವ ಈ ಸಂಘದಲ್ಲಿ ಉಪಾಧ್ಯಕ್ಷರಾಗಿ ಶಾಸಕ ಸಿ.ಪುಟ್ಟರಂಗಶೆಟ್ಟಿ ಅವರ ಪುತ್ರ ಕುಸುಮ ರಾಜು ಸೇರಿದಂತೆ 12 ಮಂದಿ ಚುನಾಯಿತ ಜನಪ್ರತಿನಿಧಿಗಳು, ಒಬ್ಬರು ನಾಮನಿರ್ದೇಶಿತ ಸದಸ್ಯರು ಹಾಗೂ ಒಬ್ಬರು ಸಿಂಡಿಕೇಟ್ ಸದಸ್ಯರು ಸೇರಿದಂತೆ ಒಟ್ಟು 14 ಸದಸ್ಯರು ಇದ್ದಾರೆ.

ಆದರೆ, ಕಳೆದ ಜನವರಿಯಲ್ಲಿ ಸಂಘದ ಕಾರ್ಯಕಾರಿ ಸಮಿತಿ ಸಭೆ ಕರೆಯಲಾಗಿತ್ತು. ಆಗಲೂ ಕೋರಂ ಇಲ್ಲದೆ ಸಭೆ ಮುಂದೂಡಲಾಗಿತ್ತು. ಸಭೆ ನಡೆಯಬೇಕಾದರೆ ಕನಿಷ್ಠ 8 ಸದಸ್ಯರು ಹಾಜರಿರಬೇಕು ಎಂಬ ನಿಯಮವಿದೆ. ಆದರೆ, ಬುಧವಾರ ನಡೆದ ಸಭೆಯಲ್ಲಿ ಅಧ್ಯಕ್ಷ ಎಸ್.ಬಾಲರಾಜು, ನಿರ್ದೇಶಕರಾದ ವೈ.ಎಸ್.ನಂಜಶೆಟ್ಟಿ, ರಾಜಮ್ಮ, ಅಂಬಿಕಾ, ಬಿ.ಎಸ್.ನಾಗರಾಜು, ಮಹೇಶ್ ಕುಮಾರ್ ಹಾಜರಿದ್ದರು. ಅಗತ್ಯ ಕೋರಂ ಇಲ್ಲದ ಕಾರಣ ಸಭೆ ಮುಂದೂಡಲಾಯಿತು ಎಂದು ಸಂಘದ ಕಾರ್ಯದರ್ಶಿ ಎನ್.ರಮೇಶ್ ಮಾಹಿತಿ ನೀಡಿದರು.

## ಮೇಘಾಲಯ ರಾಜ್ಯಪಾಲರಿಗೆ ಸನ್ಮಾನ...



ಮೈಸೂರಿನಲ್ಲಿ ಮೇಘಾಲಯ ರಾಜ್ಯಪಾಲ ಸಿ.ಹೆಚ್.ವಿಜಯಶಂಕರ್ ಅವರನ್ನು ಕೇಂದ್ರ ಪರಿಹಾರ ಸಮಿತಿ ಮಾಜಿ ಅಧ್ಯಕ್ಷ ಎಂ.ರಾಮಚಂದ್ರ ಸನ್ಮಾನಿಸಿದರು. ಬಿಜೆಪಿ ಮುಖಂಡರಾದ ಕಪನಿ ನಾಯಕ, ಮಹೇಶ್ ಪಾಟೀಲ್, ರಾಮಸಮುದ್ರದ ವೇಣು ಗೋಪಾಲ್ ಇದ್ದರು.

■ ಸತ್ಯಮೂರ್ತಿ ತೋಳಹುಣಸೆ



‘ಕಾಲಾಪತ್ಥರ್’ ಚಿತ್ರದಲ್ಲಿ ವಿಕ್ಕಿ ವರುಣ್, ಧನ್ಯ ರಾಮಕುಮಾರ್

## ‘ಕಾಲಾಪತ್ಥರ್’ ಕಪ್ಪುಕಲ್ಲಿನ ಕಥೆ –ಸೈನ್ಸ್ ಫಿಕ್ಷನ್ ಡ್ರಾಮಾ

ಕೆಂಡಸಂಪಿಗೆ ಖ್ಯಾತಿಯ ನಟ ವಿಕ್ಕಿ ವರುಣ್ ನಾಯಕ, ನಿರ್ದೇಶಕನಾಗಿಯೂ ಕೆಲಸ ಮಾಡಿರುವ ಚಿತ್ರ ಕಾಲಾಪತ್ಥರ್. ಈ ಚಿತ್ರದ ಬಿಡುಗಡೆಯ ದಿನಾಂಕ ಇದೀಗ ಘೋಷಣೆಯಾಗಿದ್ದು, ಸೆ.13 ರಂದು ರಿಲೀಸಾಗಲಿದೆ.

ಈ ಸಂದರ್ಭದಲ್ಲಿ ಮಾತನಾಡಿದ ನಿರ್ಮಾಪಕ ಭುವನ್ ಸುರೇಶ್ ಹಾಗೂ ನಾಗರಾಜ್ ಬಿಲ್ಲನಕೋಟೆ, ಆರಂಭದಿಂದಲೂ ಮಾಧ್ಯಮದವರು ನಮ್ಮ ಚಿತ್ರಕ್ಕೆ ನೀಡುತ್ತಿರುವ ಪ್ರೋತ್ಸಾಹಕ್ಕೆ ನಾವು ಆಭಾರಿಯಾಗಿದ್ದೇವೆ, ಇವತ್ತು ಚಿತ್ರದ ಬಿಡುಗಡೆಯ ದಿನಾಂಕವನ್ನು ಘೋಷಣೆ ಮಾಡಿದ್ದೇವೆ ಎಂದು ಹೇಳಿದರು. ನಂತರ ನಾಯಕಿ ಧನ್ಯ ರಾಮಕುಮಾರ್ ಮಾತನಾಡಿ, ವಿಕ್ಕಿ ತುಂಬಾ ಚೆನ್ನಾಗಿ ಈ ಚಿತ್ರವನ್ನು ಕಟ್ಟಿಕೊಟ್ಟಿದ್ದಾರೆ. ಬಿಜಾಪುರದ ಉರಿ ಬಿಸಿಲಲ್ಲಿ ಶೂಟ್ ಮಾಡಿದ್ದೇವೆ, ಈ ಚಿತ್ರದಲ್ಲಿ ಗಂಗಾ ಎಂಬ ಶಿಕ್ಷಕಿಯಾಗಿ ಮೊದಲ ಬಾರಿಗೆ ಗ್ಲಾಮರಸ್ ರೋಲ್ ಮಾಡಿದ್ದೇನೆ. ಇಲ್ಲಿ ನಾನು ಶಿಕ್ಷಕಿಯಾಗಿ ಹೇಳಿಕೊಡುವುದಕ್ಕಿಂತ ಕಲಿತದ್ದೇ ಹೆಚ್ಚು, ನನಗೆ ಈಗಷ್ಟೇ ವಿಕ್ಕಿ ಅವರು ಚಿತ್ರದ ತುಣುಕು ತೋರಿಸಿದರು. ನಾನಂತೂ ಚಿತ್ರ ನೋಡಲು ಕಾತುರದಿಂದ ಕಾಯುತ್ತಿದ್ದೇನೆ ಎಂದರು. ನಿರ್ದೇಶಕ ಹಾಗೂ ನಾಯಕ ವಿಕ್ಕಿ ವರುಣ್ ಮಾತನಾಡಿ, ಒಬ್ಬ ನಿರ್ದೇಶಕನಾಗಬೇಕೆಂದು 2009ರಲ್ಲಿ ಚಿತ್ರರಂಗಕ್ಕೆ ಬಂದೆ. ಸೂರಿ ಅವರು ನನ್ನನ್ನು ಹೀರೋ ಮಾಡಿದರು, ಈ ಸೆಪ್ಟೆಂಬರ್‌ಗೆ ಸೂರಿ ಅವರ ನಿರ್ದೇಶನದಲ್ಲಿ ನಾನು ನಟಿಸಿದ್ದ ಕೆಂಡಸಂಪಿಗೆ ಚಿತ್ರ ತೆರೆಕಂಡು ಒಂಭತ್ತು ವರ್ಷಗಳಾಯಿತು, ಈಗ ನಾನು ನಿರ್ದೇಶಿಸಿದ ಕಾಲಾಪತ್ಥರ್ ಚಿತ್ರ ಕೂಡ ಸೆಪ್ಟೆಂಬರ್‌ನಲ್ಲೇ ಬಿಡುಗಡೆಯಾಗುತ್ತಿರುವುದು ಖುಷಿಯಾಗಿದೆ. ಕಪ್ಪುಕಲ್ಲಿಗೆ ಸಂಬಂಧಿಸಿದ ಕಥೆಯಿದು, ಸೈನ್ಸ್ ಫಿಕ್ಷನ್ ಇಲ್ಲೂಶನ್ ಆಕ್ಷನ್ ಡ್ರಾಮಾ, ಸತ್ಯಪ್ರಕಾಶ್ ಅವರು ಈ ಕಥೆ ಬರೆದಿದ್ದಾರೆ. ವಿಜಾಪುರದ ಬಳಿ ಹೆಚ್ಚಿನ ಭಾಗದ ಚಿತ್ರೀಕರಣ ಮಾಡಿದ್ದೇವೆ. ಆಲಮಟ್ಟಿಯ ಹಿನ್ನೀರಿನ ಜೈನಾಪುರ ಎಂಬ ಊರಲ್ಲಿ ಚಿತ್ರೀಕರಣ ನಡೆಸಲಾಗಿದ್ದು, ನಮ್ಮ ಚಿತ್ರದ ಚಿತ್ರೀಕರಣವಾಗಿ ಕೆಲವೇ ತಿಂಗಳಲ್ಲಿ ಆ ಹಳ್ಳಿ ನೀರಿನಲ್ಲಿ ಮುಳುಗಡೆಯಾಗಿದೆ. ಹೈದರಾಬಾದ್ ನಿಜಾಮರು ಕಟ್ಟಿದ ಊರದು, ಉಳಿದಂತೆ ಕಾಶ್ಮೀರ ಹಾಗೂ ರಾಜಸ್ಥಾನದಲ್ಲೂ ಚಿತ್ರೀಕರಣ ನಡೆಸಿದ್ದೇವೆ, ನಮ್ಮ ಚಿತ್ರವನ್ನು ಮಾರ್ಟಿನ್ ನಿರ್ಮಾಪಕರಾದ ಉದಯ್ ಕೆ. ಮೆಹ್ತಾ ಅವರು ವಿತರಣೆ ಮಾಡುತ್ತಿದ್ದಾರೆ ಎಂದರು. ಚಿತ್ರಕ್ಕೆ ಕ್ಯಾಮೆರಾ ವರ್ಕ್ ಮಾಡಿದ ಛಾಯಾಗ್ರಾಹಕ ಸಂದೀಪ್ ಕೂಡ ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

## ಎರಡು ಉಪಕಥೆ ‘ರುದ್ರಗರುಡ ಪುರಾಣ’ಕ್ಕೆ ಸ್ಫೂರ್ತಿ

ಕವಲುದಾರಿ ಖ್ಯಾತಿಯ ನಟ ರಿಷಿ ಈಗ ರುದ್ರಗರುಡ ಪುರಾಣ ಎಂಬ ಚಿತ್ರದಲ್ಲಿ ನಾಯಕನಾಗಿ ನಟಿಸಿದ್ದಾರೆ. ಪ್ರಿಯಾಂಕಾ ಕುಮಾರ್ ನಾಯಕಿಯಾಗಿರುವ ಈ ಚಿತ್ರಕ್ಕೆ ನಂದೀಶ್ ಆಕ್ಷನ್ ಕಟ್ ಹೇಳಿದ್ದಾರೆ, ಇತ್ತೀಚೆಗೆ ನಟ ಶಿವರಾಜಕುಮಾರ್ ಅವರು ಚಿತ್ರದ ಟೀಸರನ್ನು ಬಿಡುಗಡೆ ಮಾಡಿದರು. ಚಿತ್ರದ ಕುರಿತಂತೆ ಮಾತನಾಡಿದ ನಿರ್ದೇಶಕ ನಂದೀಶ್, 1954ರಲ್ಲಿ ಅಮೇರಿಕಾದಲ್ಲಿ ವಿಮಾನವೊಂದು ಮಾರ್ಗ ಮಧ್ಯೆ ಕಳೆದುಹೋಗಿರುತ್ತದೆ. ಅದು ಎಲ್ಲಿ ಹೋಗಿದೆ ಎಂದು ಯಾರಿಗೂ ಗೊತ್ತಿರುವುದಿಲ್ಲ. ಇದಾದ 30 ವರ್ಷಗಳ ನಂತರ ಆ ವಿಮಾನ ವಾಪಸ್ ಬರುತ್ತದೆ. ರಾಜನೊಬ್ಬ ಇಡೀ ಭೂಮಂಡಲವನ್ನೇ ತನ್ನದಾಗಿಸಿಕೊಳ್ಳಬೇಕೆಂದು ಪಕ್ಕದ ದೇಶದ ಮೇಲೆ ಯುದ್ಧ ಮಾಡಿ ಲಕ್ಷಾಂತರ ಜನರನ್ನು ಕೊಂದು ಜಯಸಾಧಿಸುತ್ತಾನೆ. ಯುದ್ಧದ ನಂತರ ರಣರಂಗದಲ್ಲಿ ಸಾಲುಸಾಲು ಹೆಣದ ರಾಶಿಗಳ ನಡುವೆ ಸತ್ತ ಸೈನಿಕನೊಬ್ಬನ ಮಾಂಸವನ್ನು ಮನುಷ್ಯನೊಬ್ಬ ತಿನ್ನುತ್ತಿರುತ್ತಾನೆ. ಅದೇ ಸಮಯಕ್ಕೆ ಅಲ್ಲಿಗೆ ಬಂದ ರಾಜನನ್ನು ಕಂಡ ಆ ಮನುಷ್ಯ ಕ್ಷಮಿಸು ರಾಜ, ನಾನು ನಿನ್ನ ಆಹಾರವನ್ನು ತಿನ್ನುತ್ತಿದ್ದೇನೆ ಎನ್ನುತ್ತಾನೆ. ಆಗ ರಾಜ, ನಾನು ನಿನ್ನ ಹಾಗೆ ನರಭಕ್ಷಕನಲ್ಲ ಎನ್ನುತ್ತಾನೆ. ಆಗ ಆ ಮನುಷ್ಯ ಹಾಗಾದರೆ ಇಷ್ಟು ಜನರನ್ನು ಏಕೆ ಕೊಂದಿದ್ದೀಯ ಎಂದು ಕೇಳುತ್ತಾನೆ. ಈ ಎರಡು ಉಪಕಥೆಗಳೇ ನಮ್ಮ ಚಿತ್ರಕ್ಕೆ ಸ್ಫೂರ್ತಿ ಎಂದು ಹೇಳಿದರು.

ನಾಯಕ ರಿಷಿ ಮಾತನಾಡುತ್ತ, ನಮ್ಮ ಸುತ್ತಮುತ್ತ ನಡೆಯುತ್ತಿರುವ ಕಳಪೆ ಕಾಮಗಾರಿ, ಭ್ರಷ್ಟಾಚಾರ ಅಥವಾ ಹೆಣ್ಮಕ್ಕಳ ಮೇಲೆ ಆಗುತ್ತಿರುವ ಅತ್ಯಾಚಾರ ಮುಂತಾದ ಹಲವು ಕಹಿ ಘಟನೆಗಳ ವಿರುದ್ಧ ಸಾಮಾನ್ಯ ಪ್ರಜೆಗಳಾದ ನಾವು ಹೇಗೆ ಹೋರಾಡಬೇಕು ಎಂಬ ಚರ್ಚೆ ನಡೆಯುತ್ತಿರುತ್ತದೆ. ಗರುಡ ಪುರಾಣದಲ್ಲಿ ಈ ಥರದ ಘಟನೆಗಳಾದಾಗ, ಏನು ಮಾಡಬೇಕು ಎಂಬುದಕ್ಕೆ ಒಂದಿಷ್ಟು ಸೂಚನೆಗಳಿವೆ. ಈ ವಿಷಯವನ್ನಿಟ್ಟುಕೊಂಡು ರುದ್ರಗರುಡ ಪುರಾಣದ ಕಥೆ ಮಾಡಲಾಗಿದೆ. ನನ್ನ ಪಾತ್ರದ ಹೆಸರು ರುದ್ರ ಆ ಹೆಸರಿಗೆ ಏನು ಫೋರ್ಸ್ ಇದೆಯೋ, ಅದೇ ಫೋರ್ಸ್ ಪಾತ್ರಕ್ಕೂ ಇದೆ ಎಂದರು. ಈ ಚಿತ್ರಕ್ಕೆ ಕೆಪಿ ಸಂಗೀತ ಸಂಯೋಜಿಸಿದ್ದು, ರಘು ನಿಡುವಳ್ಳಿ ಅವರ ಸಂಭಾಷಣೆ ಮತ್ತು ಸಂದೀಪ್ ಕುಮಾರ್ ಅವರ ಛಾಯಾಗ್ರಹಣವಿದೆ. ಅಶ್ವಿನಿ ಲೋಹಿತ್ ಅವರು ಈ ಚಿತ್ರವನ್ನು ನಿರ್ಮಿಸಿದ್ದಾರೆ.



‘ರುದ್ರಗರುಡ ಪುರಾಣ’ ಚಿತ್ರದಲ್ಲಿ ರಿಷಿ, ಪ್ರಿಯಾಂಕಾ ಕುಮಾರ್

## ಅನಿವಾಸಿ ಕನ್ನಡಿಗರ ಹನಿ ಹನಿ ಹಾಡು



ರಾಘವ ರೆಡ್ಡಿ ನಿರ್ದೇಶನದ ಹನಿ ಹನಿ ಎಂಬ ಹಾಡನ್ನು ಅಶ್ವಿನಿ ಪುನೀತ್ ರಾಜಕುಮಾರ್ ಅವರು ಇತ್ತೀಚೆಗೆ ಬಿಡುಗಡೆ ಮಾಡಿದರು. ವಿಶಾಲ್ ನೈದೃವ್ ಅವರ ಸಂಗೀತ ನಿರ್ದೇಶನದ ಈ ಹಾಡಿನಲ್ಲಿ ರಕ್ಕಿ ಸುರೇಶ್ ಅಭಿನಯಿಸಿದ್ದಾರೆ, ಈ ಸಂದರ್ಭದಲ್ಲಿ ಮಾತನಾಡಿದ ಅಶ್ವಿನಿ ಪುನೀತ್ ರಾಜಕುಮಾರ್, ರಕ್ಕಿ ಸುರೇಶ್ ನಮ್ಮ ಕುಟುಂಬಕ್ಕೆ ಆಪ್ತರು. ಈ ಹಾಡಲ್ಲಿ ಅವರು ತುಂಬಾ ಚೆನ್ನಾಗಿ ಅಭಿನಯಿಸಿದ್ದಾರೆ. ಹಾಡು ಕೂಡ ಚೆನ್ನಾಗಿ ಬಂದಿದೆ ಎಂದು ಶುಭ ಹಾರೈಸಿದರು.

ನಟ ರಕ್ಕಿ ಸುರೇಶ್ ಮಾತನಾಡುತ್ತ, ನಾನು ಮೈಸೂರು ಬಳಿಯ ಸಾಲಿಗ್ರಾಮದಲ್ಲಿ ಹುಟ್ಟಿದರೂ, ಬೆಳೆದದ್ದು ಮಾತ್ರ ಜರ್ಮನಿಯಲ್ಲಿ. ಡಾ||ರಾಜ್ ಅವರ ‘ಹೊಸಬೆಳಕು’ ಚಿತ್ರ ನಿರ್ದೇಶಿಸಿದ್ದ ರಾಜಶೇಖರ್ ನನಗೆ ತಾತ ಆಗಬೇಕು. ಜರ್ಮನಿಯಲ್ಲಿ ಮಾಸ್ಟರ್ಸ್ ಮುಗಿಸಿ, ಐಟಿ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದೇನೆ. ನಟನೆ ನನ್ನ ಹವ್ಯಾಸ. ಅದರ ಮೊದಲ ಹೆಜ್ಜೆಯಾಗಿ ಹನಿಹನಿ ಎಂಬ ಈ ಆಲ್ಬಂ ಸಾಂಗ್‌ನಲ್ಲಿ ಅಭಿನಯಿಸಿದ್ದೇನೆ. ಇಡೀ ಹಾಡನ್ನು ಜರ್ಮನಿಯಲ್ಲೇ ಚಿತ್ರೀಕರಿಸಿದ್ದೇವೆ ಎಂದು ಹೇಳಿದರು.


ನಿರ್ದೇಶಕ ರಾಘವ ರೆಡ್ಡಿ ಮಾತನಾಡಿ, ನಾನೂ ಸಹ ಕಳೆದ ಐದು ವರ್ಷಗಳಿಂದ ಜರ್ಮನಿಯಲ್ಲಿ ವಾಸಿಸುತ್ತಿದ್ದೇನೆ. ಒಂದಷ್ಟು ಅನಿವಾಸಿ ಕನ್ನಡಿಗರೇ ಸೇರಿ ಮಾಡಿದ ಹಾಡಿದು. ರಕ್ಕಿ ಸುರೇಶ್, ಅನಾಮಿಕ ಸ್ಟಾರ್ಕ್‌ದತ್ತ ಹಾಗೂ ಅಮೃತ ಮಂಡಲ್ ಈ ಹಾಡಿನಲ್ಲಿ ಅಭಿನಯಿಸಿದ್ದಾರೆ. ವಿಶಾಲ್ ನೈದೃವ್ ಮ್ಯೂಸಿಕ್ ಮಾಡುವ ಜೊತೆಗೆ ತಾವೇ ಹಾಡಿದ್ದಾರೆ. ಎಂದು ಹೇಳಿದರು.

ಸಂಗೀತ ನಿರ್ದೇಶಕ, ಗಾಯಕ ವಿಶಾಲ್ ನೈದೃವ್ ಮಾತನಾಡುತ್ತ, ಕಳೆದ 23 ವರ್ಷಗಳಿಂದ ನಾನು ಕೀಬೋರ್ಡ್ ಪ್ಲೇಯರ್ ಆಗಿ ಕೆಲಸ ಮಾಡುತ್ತಿದ್ದೇನೆ. ಸಾಕಷ್ಟು ಸಂಗೀತ ನಿರ್ದೇಶಕರ ಜೊತೆ ನೂರಕ್ಕೂ ಹೆಚ್ಚು ಸಿನಿಮಾಗಳಿಗೆ ವರ್ಕ್ ಮಾಡಿದ್ದೇನೆ ಎಂದು ಹೇಳಿದರು. ನಿರ್ದೇಶಕ ವೆಂಕಟ್ ಹಾಗೂ ಗಿರೀಶ್ ಕುಮಾರ್ ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

## ಸಿನಿಪದಬಂಧ–540



ಉಮ್ಮತ್ತೂರು ಇಂದುಶೇಖರ್
ಮೊ.9880820462



ಹೆಸರು

ವಿಳಾಸ

ದೂರವಾಣಿ ಸಂಖ್ಯೆ

### ಎಡದಿಂದ ಬಲಕ್ಕೆ

1.ಕನ್ನಡ ಚಿತ್ರರಂಗದಲ್ಲಿ ಮೊದಲ ಮಹಿಳಾ ನಿರ್ಮಾಪಕಿಯ ಚಿತ್ರ 5
3.ತರುಣ್ ಚಂದ್ರ – ರೇಖಾ ಅಭಿನಯದ ಚಿತ್ರಕ್ಕೆ ಕೆ. ಸಂಜಯ್ ನಿರ್ದೇಶಕ 4
6.ಪ್ರೇಮದ ಕುರುಹಿಗಾಗಿ ನಿರ್ಮಿಸಿದ ಸೌಧ 5
7.ಒಳ್ಳೆಯ ಪ್ರಸೂತಿಯಲ್ಲಿ ಜನಿಸಿದ ನಟಿ 3
8.ಘಟಿಸಲಾಗದ ರವಿಚಂದ್ರನ್ ಚಿತ್ರ 4
10.ರಾಜಣ್ಣನಿಗೆ ಹೆಂಡತಿಯ ಬಲವಿದೆ 4
11. ಹರಿಶ್ಚಂದ್ರ ನುಡಿದ ನಿಜ 2
12.ಎವರ್‌ಗ್ರೀನ್ ಯವ್ವನದ ಆಂಟಿಯಾಗಿ ಖುಷ್ಬೂ ಹಾಡಿನಲ್ಲಿ ಎರಡು ಬಂದಿದ್ದಾಳೆ 6
14.ಪ್ರಭಾಕರ್ –ಲಕ್ಷ್ಮಿ ಸಂಸಾರದಲ್ಲಿನ ಒಗ್ಗಟ್ಟಿಗೆ ರಾಜಾಚಂದ್ರ ನಿರ್ದೇಶಕ 9
18.ಟೈಗರ್ ಪ್ರಭಾಕರ್ ಕೇಂದ್ರೀಯ ತನಿಖಾ ದಳದವನು 5
19.ವಿಷ್ಣುವರ್ಧನ್ ಯಜಮಾನಿಕೆಯ ಅವಿಭಕ್ತ ಕುಟುಂಬ 5

### ಮೇಲಿನಿಂದ ಕೆಳಕ್ಕೆ

1." ಓ ಚೆಲುವೆ ನಾಟ್ಯದ ಸಿರಿ ನವಿಲೇ.... ", ಗೀತೆಯ ಚಿತ್ರ 4
2.ಹಣ, ಸಿಹಿ, ಗ್ರಹ ಇರುವ ಚಿತ್ರ 6
3.ವಾತ್ಸಲ್ಯ ತೋರಿದ ಹಾದಿ 2
4." ಮೈ ಲಾರ್ಡ್ ನನ್ನ ವಾದ ಕೇಳಿ ಕೇಳಿ ಕೇಳಿ.... ", ಹಾಡಿನ ಚಿತ್ರವಿದು 8
5.ರಮೇಶ್ ಅರವಿಂದ್ "ಕೊಲೆಗಾರ" 3
9.ಫಲ ನೀಡಿದ ಅನುಮಾನ ಕೊನೆಯಲ್ಲಿ ದೀರ್ಘಗೊಂಡಿದೆ 3
10.ಕೆ. ಎಂ. ಕಲಂದರ್ ಅವರ ಮೆಸೇಜ್ ಆಫ್ ಟ್ರೂತ್ 5
13.ರಘುವೀರ್ ಸದ್ದಿಲ್ಲದೇ ಸಾರಿದ ಯುದ್ಧ 5
15.ಗಂಡ, ಅಳಿಯ, ಕೃಷ್ಣ ಗೊಂದಲಕ್ಕೊಳಗಾಗಿದ್ದಾರೆ 4
16.ಜಾತಿ ಇರಿಸಿಕೊಂಡಿರುವ ಹೆಣ್ಣು 4
17.ರೆಬೆಲ್ ಸ್ಟಾರ್ ನನ್ನು ಪ್ರೀತಿಯಿಂದ ಕರೆಯಿರಿ 2

### ಸಿನಿ ಪದಬಂಧ 539ರ ಉತ್ತರ

| | | | | | | | | | | |
|---|---|---|---|---|---|---|---|---|---|---|
| ಇ | ಳೆ | ಯ | ರಾ | ಜ | | ಕಾ | ದಂ | ಬ | ರಿ | |
| ದು | | | ಜ | | | ಸು | | ದು | | ಕೌ |
| ಸಾ | ವಿ | ರ | ಸು | ಳ್ಳು | | | | ಕು | ಬೇ | ರ |
| ಧ್ಯ | | | ಲೋ | | ಮ | ದ | ಗ | ಜ | | ವ |
| | ಕಾ | ಲ | ಚ | ಕ್ರ | | ನ | | ಟ | | |
| ಪ್ರೇ | ಮ | | ನ | | ಪ್ರೇ | ಮ | ದ | ಕಾ | ಣಿ | ಕೆ |
| | ನ | | | ತುಂ | | | | ಬಂ | | |
| ನಂ | ಬಿ | ದ್ರೆ | ನಂ | ಬಿ | ಬಿ | ಟ್ರೆ | ಬಿ | ಡಿ | | ಕೆ |
| | ಲ್ಲ | | | ದ | | | ಡು | | | ಲ |
| | | ರು | | ಕೊ | | ರಂ | ಗ | ನಾ | ಯ | ಕಿ |
| | ರು | ದ್ರ | ತಾಂ | ಡ | ವ | | ಡೆ | | | ಲ |

ವಿಜೇತರು: ಪಿ.ಸುಮಾ, ನಂ. 1412, ವಿವೇಕಾನಂದನಗರ, ಶ್ರೀರಾಮಪುರ 1ನೇ ಹಂತ, ಮೈಸೂರು-23



ವಿಳಾಸ: ‘ಸಿನಿಬಂಧ’ ವಿಭಾಗ, ‘ಮೈಸೂರು ಮಿತ್ರ’ ದಿನಪತ್ರಿಕೆ, ಬನ್ನಿಮಂಟಪ, ಮೈಸೂರು–570 015

## ‘ಲಿಪ್‌ಲಾಕ್’ ಪರಿಶುದ್ಧ ಪ್ರೇಮಕಥೆ

ಒಂದೇ ಟೇಕ್ ನಲ್ಲಿ ಚಿತ್ರೀಕರಣವಾಗಿದ್ದ "ಯಂಗ್ ಮ್ಯಾನ್" ಚಿತ್ರದ ನಿರ್ದೇಶಕ ಮುತ್ತುರಾಜ್ ಈಗ "ಲಿಪ್ ಲಾಕ್" ಎಂಬ ಇಂಟರೆಸ್ಟಿಂಗ್ ಟೈಟಲ್ ಇಟ್ಟುಕೊಂಡು ಸಿನಿಮಾ ಮಾಡಲು ಹೊರಟಿದ್ದಾರೆ. ಈ ಚಿತ್ರದ ಮುಹೂರ್ತ ಬಂಡೆ ಮಹಾಂಕಾಳಿ ದೇವಸ್ಥಾನದಲ್ಲಿ ನೆರವೇರಿತು. ಮೊದಲ ಸನ್ನಿವೇಶಕ್ಕೆ ನಿರ್ಮಾಪಕರ ಸಹೋದರಿ ಸ್ಫೂರ್ತಿ ಕೃಷ್ಣಮೂರ್ತಿ ಅವರು ಆರಂಭ ಫಲಕ ತೋರಿದರು. ನಿರ್ದೇಶಕರ ಪುತ್ರ ಲಿಖಿತ್‌ಗೌಡ ಕ್ಯಾಮೆರಾ ಚಾಲನೆ ಮಾಡಿದರು.

ನಂತರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ನಿರ್ದೇಶಕ ಮುತ್ತುರಾಜ್, ಎಲ್ಲರೂ ಅಂದುಕೊಂಡಿರುವ "ಲಿಪ್ ಲಾಕ್" ಪದವೇ ಬೇರೆ. ಆದರೆ ನಮ್ಮ "ಲಿಪ್ ಲಾಕ್" ನಿಜವಾದ ಅರ್ಥವೇ ಬೇರೆ ಎಂದು ತಿಳಿಸುತ್ತ, ಇದೊಂದು ಪರಿಶುದ್ಧ ಪ್ರೇಮಕಥೆ. ಯಾವುದೇ ಮುಜುಗರವಿಲ್ಲದೆ ಕುಟುಂಬ ಸಮೇತ ಬಂದು ಎಲ್ಲರೂ ಕುಳಿತು ನೋಡಬಹುದಾದ ಕೌಟುಂಬಿಕ ಕಥೆಯೂ ಹೌದು. ಬೆಂಗಳೂರಿನಲ್ಲೇ ಚಿತ್ರದ ಬಹುತೇಕ ಚಿತ್ರೀಕರಣ ನಡೆಯುತ್ತದೆ. ಕರಣ್ ಆರ್ಯನ್, ತ್ರಿವಿಕ್ರಮ್ ಹಾಗೂ ಚಿತ್ರದ ನಿರ್ಮಾಪಕರೂ ಆಗಿರುವ ಹೇಮಂತ್ ಕುಮಾರ್ ಅವರು ಈ ಚಿತ್ರದ ನಾಯಕರಾಗಿದ್ದು, ಮೂವರು ನಾಯಕಿಯರಾಗಿ ದೀಪಾ ಜಗದೀಶ್, ಸೃಷ್ಟಿ, ನಿಹಾರಿಕಾ ನಟಿಸುತ್ತಿದ್ದಾರೆ. ಜಗಪ್ಪ, ಆನಂದ್, ಕರಿಬಸವ ಮುಂತಾದವರು ಉಳಿದ ತಾರಾಬಳಗದಲ್ಲಿದ್ದಾರೆ. ಲೋಕಿ ತವಸ್ಯ ಅವರ ಸಂಗೀತ ನಿರ್ದೇಶನ, ವೀನಸ್ ನಾಗರಾಜ್‌ಮೂರ್ತಿ ಅವರ ಛಾಯಾಗ್ರಹಣ ಹಾಗೂ ಸತೀಶ್ ಚಂದ್ರಯ್ಯ ಅವರ ಸಂಕಲನ ಈ ಚಿತ್ರಕ್ಕಿದೆ ಎಂದರು.

ನಿರ್ಮಾಪಕನಾಗಿ ಇದು ನನ್ನ ಮೊದಲ ಚಿತ್ರ. ಹೇಮಂತ್ ಸಿನಿಮಾಸ್ ಹಾಗೂ ಪರಿ ಮೂವೀ ಮೇಕರ್ಸ್ ಲಾಂಛನದಲ್ಲಿ ಈ ಚಿತ್ರ ನಿರ್ಮಾಣವಾಗುತ್ತಿದೆ. ನಿರ್ಮಾಣದ ಜೊತೆಗೆ ನಾನು ಈ ಚಿತ್ರದ ಪ್ರಮುಖ ಪಾತ್ರದಲ್ಲೂ ಸಹ ನಟಿಸುತ್ತಿದ್ದೇನೆ ಎಂದರು ಹೇಮಂತ್ ಕೃಷ್ಣಮೂರ್ತಿ. ನಿರ್ದೇಶಕರು ಮಾಡಿಕೊಂಡಿರುವ ಕಥೆ ತುಂಬಾ ಚೆನ್ನಾಗಿದೆ. ನನ್ನದು ಈ ಚಿತ್ರದಲ್ಲಿ ಕೆಳಮಧ್ಯಮ ವರ್ಗದ ಹುಡುಗನ ಪಾತ್ರ ಎಂದು ನಟ ಕರಣ್ ಆರ್ಯನ್ ಹೇಳಿದರು. ನನ್ನ ಪಾತ್ರ ಕೂಡ ವಿಭಿನ್ನವಾಗಿದೆ. "ಬ್ಯಾಡ್ ಮ್ಯಾನರ್ಸ್" ಚಿತ್ರದ ನಂತರ ಈ ಚಿತ್ರದಲ್ಲಿ ನಟಿಸುತ್ತಿದ್ದೇನೆ ಎಂದರು. "ಪದ್ಮಾವತಿ" ಧಾರಾವಾಹಿ ಖ್ಯಾತಿಯ ತ್ರಿವಿಕ್ರಮ್. ನಾಯಕ ನಟಿಯರಾದ ದೀಪಾ ಜಗದೀಶ್, ಸೃಷ್ಟಿ ಹಾಗೂ ನಿಹಾರಿಕಾ ಇವರೆಲ್ಲ ಚಿತ್ರದ ಕುರಿತಂತೆ ಮಾತನಾಡಿದರು.



‘ಲಿಪ್ ಲಾಕ್’ ಚಿತ್ರದಲ್ಲಿ ಹೇಮಂತ್ ಕುಮಾರ್, ದೀಪಾ

# ಕೆ.ಆರ್.ನಗರದಲ್ಲಿ ಡಿ.ದೇವರಾಜ ಅರಸು ಭವನ ಉದ್ಘಾಟನೆ



ಡಿ.ದೇವರಾಜ ಅರಸು ಭವನವನ್ನು ಶಾಸಕ ಡಿ.ರವಿಶಂಕರ್ ಉದ್ಘಾಟಿಸಿದರು.

ಕೆ.ಆರ್.ನಗರ, ಆ.29– ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಅವರು ಸಮಾಜದ ಕಟ್ಟಕಡೆ ವ್ಯಕ್ತಿಗೂ ಸರ್ಕಾರದ ಸವಲತ್ತು ತಲುಪುವಂತೆ ಕಾರ್ಯಕ್ರಮಗಳನ್ನು ರೂಪಿಸಿದ ಮಹಾನ್ ನಾಯಕ ಎಂದು ಶಾಸಕ ಡಿ.ರವಿಶಂಕರ್ ಬಣ್ಣಿಸಿದರು.

ಪಟ್ಟಣದಲ್ಲಿ ನೂತನ ಡಿ.ದೇವರಾಜ ಅರಸು ಭವನ ಉದ್ಘಾಟಿಸಿ ಮಾತನಾಡಿದ ಅವರು, ಅರಸು ಅವರ ಹೆಸರಲ್ಲಿ ರಾಜ್ಯದಲ್ಲಿ ಲಕ್ಷಾಂತರ ಕುಟುಂಬಗಳು ಜೀವನ ನಡೆಸುತ್ತಿದ್ದು, ಉಳುವವನೇ ಭೂಮಿ ಒಡೆಯ ಎಂಬ ಐತಿಹಾಸಿಕ ಕಾನೂನನ್ನು ಜಾರಿಗೆ ತಂದ ಅವರ ರಾಜಕೀಯ ಜೀವನ ದೇಶಕ್ಕೆ ಮಾದರಿ ಎಂದರು.

ಅವರ ಗರಡಿಯಲ್ಲಿ ಪಳಗಿ ರಾಜಕೀಯ ಜೀವನ ಆರಂಭಿಸಿದ ನೂರಾರು ಮಂದಿ ರಾಜ್ಯದ ಅಭಿವೃದ್ಧಿಗೆ ಕಂಕಣ ಬದ್ಧರಾಗಿ ಕೆಲಸ ಮಾಡುತ್ತಿದ್ದು, ಅರಸರು ನಮ್ಮ ಜಿಲ್ಲೆಯಲ್ಲಿ ಜನಿಸಿದ್ದು ನಮ್ಮೆಲ್ಲರ ಪುಣ್ಯ. ಅವರ ಆದರ್ಶಗಳನ್ನು ಪ್ರತಿಯೊಬ್ಬರೂ ಪಾಲಿಸಬೇಕೆಂದರು. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ರಾಘವೇಂದ್ರ ಮಾತನಾಡಿದರು. ಈ ವೇಳೆ ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಕೆ.ಎಸ್.ಮಹೇಶ್, ನಿರ್ದೇಶಕರಾದ ಕೆ.ಎನ್.ಪ್ರಸನ್ನಕುಮಾರ್, ಸರಿತಾ, ತಾಲೂಕು ಕುರುಬರ ಸಂಘದ ಅಧ್ಯಕ್ಷ ಜೆ.ಶಿವಣ್ಣ, ಜಿಪಂ ಮಾಜಿ ಸದಸ್ಯರಾದ ಶಿವರಾಮು, ಜಿ.ಆರ್.ರಾಮೇಗೌಡ, ಪುರಸಭೆ ಸದಸ್ಯರಾದ ಶಿವುನಾಯಕ್, ಶಂಕರ್, ನಟರಾಜು, ಶಂಕರ್ ಸ್ವಾಮಿ, ಮಾಜಿ ಸದಸ್ಯ ಕೆ.ವಿನಯ್, ಟಿಎಪಿಸಿಎಂಎಸ್ ಮಾಜಿ ಅಧ್ಯಕ್ಷ ಎಸ್.ಸಿದ್ದೇಗೌಡ, ಎಪಿಎಂಸಿ ಮಾಜಿ ನಿರ್ದೇಶಕ ಎಲ್.ಪಿ.ರವಿಕುಮಾರ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ.ಎಸ್. ಮಹದೇವ್, ಉದಯಶಂಕರ್, ನಗರಾಧ್ಯಕ್ಷ ಎಂ.ಜೆ.ರಮೇಶ್, ವಕ್ತಾರ ಸೈಯದ್ ಜಾಬೀರ್, ಮುಖಂಡರಾದ ಗರುಡ ಗಂಭಸ್ವಾಮಿ, ಹೆಚ್.ಎಸ್.ವೇಣುಗೋಪಾಲ್, ಲೋಕೇಶ್, ತಹಸೀಲ್ದಾರ್ ಜಿ.ಸುರೇಂದ್ರಮೂರ್ತಿ, ಪುರಸಭೆ ಮುಖ್ಯಾಧಿಕಾರಿ ಬಿ.ವಿ.ವೆಂಕಟೇಶ್, ಚಂದ್ರಕಲಾ, ಬಿಇಓ ಆರ್.ಕೃಷ್ಣಪ್ಪ ಸೇರಿದಂತೆ ಮತ್ತಿತರರಿದ್ದರು.

# ವಿದ್ಯಾರ್ಥಿಗಳು ಪರಿಸರ ಸಂರಕ್ಷಣೆಗೆ ಆದ್ಯತೆ ನೀಡಿ

## ಪರಿಸರ, ಅರಣ್ಯ ಜಾಗೃತಿ ಕಾರ್ಯಕ್ರಮದಲ್ಲಿ ಸಂಸದ ಯದುವೀರ್ ಸಲಹೆ



ಅರಣ್ಯ, ಪರಿಸರ ಜಾಗೃತಿ ಕಾರ್ಯಕ್ರಮವನ್ನು ಸಂಸದ ಯದುವೀರ್ ಉದ್ಘಾಟಿಸಿದರು.

ಹನಗೋಡು, ಆ.29– ನಾಗರಹೊಳೆ, ಬಂಡೀಪುರ ಉದ್ಯಾನವನದಲ್ಲಿ ಸಾಕಷ್ಟು ಜೀವ ವೈವಿಧ್ಯತೆ ಅಡಗಿದ್ದು, ವನ್ಯಜೀವಿಗಳಿಂದ ಮಾತ್ರ ಅರಣ್ಯ ಸಂರಕ್ಷಣೆ ಸಾಧ್ಯ. ವಿದ್ಯಾರ್ಥಿಗಳು ಪರಿಸರ ಸಂರಕ್ಷಣೆಗೆ ಹೆಚ್ಚು ಆದ್ಯತೆ ನೀಡಬೇಕು ಎಂದು ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ತಿಳಿಸಿದರು.

ನಾಗರಹೋಳೆ ರಾಷ್ಟ್ರೀಯ ಉದ್ಯಾನ ವನದಂಚಿನ ಹನಗೋಡು ಗ್ರಾಮದಲ್ಲಿ ಬೆಂಗಳೂರಿನ ಸೊಸೈಟಿ ಫಾರ್ ಪ್ರೊಟೆಕ್ಷನ್ ಆಫ್ ಪ್ಲಾಂಟ್ ಅಂಡ್ ಅನಿಮಲ್ಸ್ (ಎಸ್‌ಪಿಎಎ) ಸ್ವಯಂಸೇವಾ ಸಂಸ್ಥೆ ಅರಣ್ಯ ಇಲಾಖೆ, ವನ್ಯಜೀವಿ ಮಂಡಳಿ, ಸಾಕ್ಷರತಾ ಇಲಾಖೆ ಸಹಯೋಗದಲ್ಲಿ ಶಾಲಾ–ಕಾಲೇಜು ವಿದ್ಯಾರ್ಥಿಗಳಿಗಾಗಿ ಆಯೋಜಿಸಿದ್ದ ಪರಿಸರ ಮತ್ತು ಅರಣ್ಯ ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರಸ್ತುತ ಜನಸಂಖ್ಯೆ, ವನ್ಯಜೀವಿಗಳ ಸಂಖ್ಯೆ ಹೆಚ್ಚಾಗಿರುವುದರಿಂದ ವನ್ಯಜೀವಿ–ಮಾನವ ಸಂಘರ್ಷ ಹೆಚ್ಚಾಗಿದ್ದು, ಇದನ್ನು ತಡೆಯುವುದು ದೊಡ್ಡ ಸವಾಲಾಗಿದೆ. ನಮ್ಮ ಪಶ್ಚಿಮಘಟ್ಟ ಹಸಿರಿನಿಂದ ಕೂಡಿದ್ದು, ನಗರೀಕರಣ, ಕೈಗಾರೀಕರಣದ ಪರಿಣಾಮ ಶೇ.80ರಷ್ಟು ಪರಿಸರ ಹಾಳಾಗಿದೆ. ಪ್ರಾಚೀನ ಕಾಲದಿಂದಲೂ ನಮ್ಮ ಧರ್ಮದ ಮೂಲಕ ಪ್ರಕೃತಿ ಸಂರಕ್ಷಿಸಿಕೊಂಡು ಬಂದಿದ್ದೇವೆ. ಶ್ರೇಷ್ಠ ಭಾರತ ನಿರ್ಮಾಣದಲ್ಲಿ ಪ್ರಕೃತಿ ಸಂರಕ್ಷಣೆಯೂ ಒಂದು ಭಾಗವಾಗಿದ್ದು, ಪರಿಸರ ಸಂರಕ್ಷಣೆ ನಮ್ಮೆಲ್ಲರ ಆದ್ಯತೆಯಾಗಬೇಕು. ಈ ಸಂಸ್ಥೆಯ ಎಲ್ಲಾ ಪರಿಸರ ಕಾರ್ಯಗಳಿಗೆ ಬೆಂಬಲಿಸುವುದಾಗಿ ತಿಳಿಸಿದರು.

ರಾಜ್ಯ ವನ್ಯಜೀವಿ ಮಂಡಳಿ ಸದಸ್ಯ ಹಾಗೂ ಎಸ್‌ಪಿಪಿಎ ಸಂಸ್ಥೆ ಸಂಸ್ಥಾಪಕ ಧ್ರುವ ಪಾಟೀಲ್ ಮಾತನಾಡಿ, ಪ್ರಸ್ತುತ ವಿದ್ಯಾರ್ಥಿಗಳು, ಯುವ ಜನರಲ್ಲಿ ಅರಣ್ಯ, ಪರಿಸರ, ವನ್ಯಜೀವಿ ಸಂರಕ್ಷಣೆ ಬಗೆಗೆ ಜಾಗೃತಿ ಮೂಡಿಸುವ ಅವಶ್ಯವಿದೆ. ಈ ನಿಟ್ಟಿನಲ್ಲಿ ಎಸ್‌ಪಿಪಿಎ ಸಂಸ್ಥೆ ಅರಣ್ಯ, ಪರಿಸರ, ವನ್ಯಜೀವಿ ಸಂರಕ್ಷಣೆಗಾಗಿ ಯುವ ಜನರು ಹಾಗೂ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸುವ ಕಾರ್ಯದಲ್ಲಿ ತೊಡಗಿದೆ. ಜೀವವೈವಿಧ್ಯ ಸಂರಕ್ಷಣೆಯಲ್ಲಿ ತೊಡಗಿಸಿಕೊಂಡಿರುವ ನಮ್ಮ ಎಸ್‌ಪಿಪಿಎ ಸಂಸ್ಥೆ ರಾಜ್ಯದ ವಿವಿಧೆಡೆ ಪರಿಸರ ಉಳಿವಿನ ಜಾಗೃತಿ ಕಾರ್ಯಕ್ರಮ ನಡೆಸುತ್ತಿದೆ. ಅರಣ್ಯದಲ್ಲಿ ಹುಲಿ ಸಂರಕ್ಷಿತವಾಗಿದ್ದರೆ, ಅರಣ್ಯ ಸಮೃದ್ಧಿಯಾಗಿರುತ್ತದೆ. ಜನರು ಪ್ಲಾಸ್ಟಿಕ್ ಬಳಕೆಯಿಂದ ದೂರವಿರಬೇಕು. ವಿದ್ಯಾರ್ಥಿಗಳು ಪರಿಸರ ಉಳಿವಿಗೆ ಆದ್ಯತೆ ನೀಡುವಂತೆ ಮನವಿ ಮಾಡಿದರು.

ನಿರ್ದೇಶಕ ಎಸ್.ಎಸ್.ಕಿಶನ್ ಮಾತನಾಡಿ, ಭೂಮಿಗೆ ಸುರಕ್ಷತೆ ನೀಡುತ್ತಿರುವ ಓಜೋನ್ ಪದರ ಸಂರಕ್ಷಿಸುವ ಅವಶ್ಯವಿದೆ. ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಪರಿಸರ ಉಳಿವಿಗೆ ಆದ್ಯತೆ ನೀಡಬೇಕೆಂದರು.

ಸಂಸ್ಥೆ ಸಂಚಾಲಕ ಡಾ.ಮುರುಗೇಶ್ ಪಟ್ಟಣಶೆಟ್ಟಿ ಸಂಸ್ಥೆ ಕಾರ್ಯ ಚಟುವಟಿಕೆಗಳ ಬಗ್ಗೆ ತಿಳಿಸಿಕೊಟ್ಟರು. ಪರಿಸರ ಸಂರಕ್ಷಣೆ, ಜಾಗತಿಕ ತಾಪಮಾನದಿಂದ ಆಗುತ್ತಿರುವ ಅನಾಹುತಗಳ ಬಗೆಗಿನ ಸಾಕ್ಷ್ಯಚಿತ್ರ ಪ್ರದರ್ಶಿಸಲಾಯಿತು. ಕಾರ್ಯಕ್ರಮದಲ್ಲಿ ಬಿಇಓ ಮಹದೇವ್, ಬಿಆರ್‌ಸಿ ಹೇಮಾವತಿ, ಸಂಸ್ಥೆ ಉಪಾಧ್ಯಕ್ಷ ಮಹಮ್ಮದ್ ಷಿಹಾಬ್, ಸುನೀಲ್ ಕುಮಾರ್, ಆರ್‌ಎಫ್‌ಓ ಗಳಾದ ಸುಬ್ರಹ್ಮಣ್ಯ, ಅಭಿಷೇಕ್, ಮುಖಂಡರಾದ ಡಾ.ಕಾರ್ತಿಕ್, ವೆಂಕುಪ್ಪ ಶಿವಣ್ಣ ಸಂತೋಷ್ ಸೇರಿ 1200ಕ್ಕೂ ಹೆಚ್ಚು ವಿದ್ಯಾರ್ಥಿಗಳು ಹಾಗೂ ಗ್ರಾಮಸ್ಥರು ಭಾಗವಹಿಸಿದ್ದರು.

# ಸೀಹಳ್ಳಿಯಲ್ಲಿ 10 ಬೆಳ್ಳಕ್ಕಿಗಳ ಸಾವು



ಬೆಳ್ಳಕ್ಕಿಗಳು ಸಾವನ್ನಪ್ಪಿದ ಹಿನ್ನೆಲೆಯಲ್ಲಿ ಅರಣ್ಯಾಧಿಕಾರಿಗಳು ಪರಿಶೀಲನೆ ನಡೆಸಿದರು.

ತಿ.ನರಸೀಪುರ, ಆ.29– ದುಷ್ಕರ್ಮಿಗಳು ಮರದ ಕೊಂಬೆಗಳನ್ನು ಕಡಿದ ಪರಿಣಾಮ 10 ಬೆಳ್ಳಕ್ಕಿಗಳು ಸಾವನ್ನಪ್ಪಿರುವ ಘಟನೆ ತಾಲೂಕಿನ ಬಿ.ಸೀಹಳ್ಳಿ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಮುಂಭಾಗ ರಸ್ತೆ ಬದಿಯಲ್ಲಿ ಬೆಳೆದಿದ್ದ ಅರಳಿ ಮರದಲ್ಲಿ ಸಾಕಷ್ಟು ಬೆಳ್ಳಕ್ಕಿಗಳು ವಾಸಿಸುತ್ತಿದ್ದವು. ಆದರೆ ಮರದ ಕೊಂಬೆಗಳನ್ನು ದುಷ್ಕರ್ಮಿಗಳು ಕಡಿದ ಪರಿಣಾಮ 10 ಬೆಳ್ಳಕ್ಕಿಗಳು ಕೆಳಕ್ಕೆ ಬಿದ್ದು ಸಾವನ್ನಪ್ಪಿವೆ ಎನ್ನಲಾಗಿದೆ. ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಅರಣ್ಯಾಧಿಕಾರಿಗಳು ಪರಿಶೀಲನೆ ನಡೆಸಿದರು.

ನಂತರ ವಲಯ ಅರಣ್ಯಾಧಿಕಾರಿ ಸೈಯದ್ ನದೀಮ್, ಉಪ ವಲಯ ಅರಣ್ಯಾಧಿಕಾರಿ ಯಮುನ ಮಾತನಾಡಿ, ಮರದ ಕೊಂಬೆ ಕಡಿದು ಪಕ್ಷಿಗಳ ಸಾವಿಗೆ ಕಾರಣರಾದವರನ್ನು ಪತ್ತೆ ಹಚ್ಚುವ ಕಾರ್ಯದಲ್ಲಿ ಅರಣ್ಯ ಇಲಾಖೆ ಅಧಿಕಾರಿಗಳು ನಿರತರಾಗಿದ್ದು, ಜೀವಂತ ಪಕ್ಷಿಗಳನ್ನು ಇಲಾಖೆ ಮೇಲಧಿಕಾರಿಗಳು ಹಾಗೂ ನ್ಯಾಯಾಧೀಶರ ಆದೇಶದೊಂದಿಗೆ ಮಂಡ್ಯ ಜಿಲ್ಲೆ ಮದ್ದೂರು ತಾಲೂಕಿನ ಕೊಕ್ಕರೆ ಬೆಳ್ಳೂರು ಪಕ್ಷಿಧಾಮಕ್ಕೆ ಬಿಡಲಾಗಿದೆ. ಅಲ್ಲದೇ ಪಕ್ಷಿಗಳ ಸಾವಿಗೆ ಕಾರಣರಾದವರ ವಿರುದ್ಧ ಪ್ರಕರಣ ದಾಖಲಿಸಲಾಗುವುದು ಎಂದರು. ಈ ವೇಳೆ ಉಪ ವಲಯ ಅರಣ್ಯಾಧಿಕಾರಿ ಎಸ್.ಎಂ.ಮಂಜುನಾಥ್, ಗಸ್ತು ಅರಣ್ಯ ಪಾಲಕ ಸುಂದರ ಇದ್ದರು.

# ಹುಣಸೂರು: ಉಡ ಸಹಿತ ಆರೋಪಿ ಬಂಧನ



ಹುಣಸೂರು, ಆ.29– ಜೀವಂತ ಉಡ ಮಾರಾಟ ಮಾಡಲೆತ್ನಿಸುತ್ತಿದ್ದ ವೇಳೆ ಅರಣ್ಯ ಸಂಚಾರಿ ದಳದ ಸಿಬಂದಿ ದಾಳಿ ನಡೆಸಿ ಆರೋಪಿ ಬಂಧಿಸಿ ನ್ಯಾಯಾಂಗ ಬಂಧನಕ್ಕೊಪ್ಪಿಸಿದ್ದಾರೆ.

ಹುಣಸೂರು ತಾಲೂಕಿನ ಒಂದನೇ ಪಕ್ಷಿರಾಜಪುರದ ನಿವಾಸಿ, ಹುಣಸೂರು–ನಾಗರಹೊಳೆ ಮುಖ್ಯರಸ್ತೆಯ ಆಜಾದ್ ನಗರ ಗೇಟ್‌ನ ತುಳಸಿ ಆದಿವಾಸಿ ನೀಲಾಂಬರಿ ಹೇರ್ ಆಯಿಲ್ ಅಂಗಡಿ ಮಾಲೀಕ ದೇವಕಾರಿ ಬಂಧಿತ ಆರೋಪಿ.

ಈತ ತನ್ನ ಅಂಗಡಿಯಲ್ಲಿ ಉಡವನ್ನು ಮಾರಾಟ ಮಾಡುತ್ತಿರುವ ಬಗ್ಗೆ ಬಂದ ಖಚಿತ ಮಾಹಿತಿ ಮೇರೆಗೆ ಅರಣ್ಯ ಸಂಚಾರಿ ದಳದ ಡಿಸಿಎಫ್ ಚಂದ್ರಶೇಖರಗೌಡ ಸಿ.ಪಾಟೀಲ್ ಮಾರ್ಗದರ್ಶನದಲ್ಲಿ ಎಸಿಎಫ್ ರುದ್ರೇಶ್, ಆರ್.ಎಫ್.ಓ.ಕೆ.ಸುರೇಂದ್ರ ನೇತೃತ್ವದ ತಂಡ ದಾಳಿ ನಡೆಸಿ, ಜೀವಂತ ಉಡ ಸಮೇತ ಆರೋಪಿಯನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೊಪ್ಪಿಸಿದ್ದಾರೆ. ಉಡವನ್ನು ನಾಗರಹೊಳೆ ಉದ್ಯಾನದಲ್ಲಿ ಬಂಧಮುಕ್ತಗೊಳಿಸಲಾಗಿದೆ. ಕಾರ್ಯಾಚರಣೆಯಲ್ಲಿ ಡಿಆರ್‌ಎಫ್‌ಒಗಳಾದ ಮೋಹನ್, ಮುತ್ತುರಾಜ್, ಸಿಬಂದಿ ಮಿಮಾವ್ ಸಾಬ್ ಸಾಗರಿ, ತಿರುಪತಿ ಪೂಜಾ, ವೆಂಕಟೇಶ್ ಭಾಗವಹಿಸಿದ್ದರು.

# ಮರಡಿಹುಂಡಿಯಲ್ಲಿ 4 ಮೇಕೆಗಳು ಸಾವು



ನಂಜನಗೂಡು, ಆ.29– ಜಮೀನಿನಲ್ಲಿ ಕಳೆನಾಶಕ ಸಿಂಪಡಿಸಿದ್ದ ಮೇವು ತಿಂದು 4 ಮೇಕೆಗಳು ಸಾವನ್ನಪ್ಪಿರುವ ಘಟನೆ ತಾಲೂಕಿನ ಬಿಳಿಕೆರೆ ಹೋಬಳಿ ಮರಡಿಹುಂಡಿ ಗ್ರಾಮದಲ್ಲಿ ಜರುಗಿದೆ. ಗ್ರಾಮದ ನಿವಾಸಿ ಮಹದೇವು ಅವರು ತಮ್ಮ 16 ಕುರಿಗಳನ್ನು ಮೇಯಿಸಲು ತೆರಳಿದ್ದ ವೇಳೆ ಗ್ರಾಮದ ಹೊರ ವಲಯದ ಜಮೀನಿನಲ್ಲಿ ಕಳೆ ನಾಶಕ ಸಿಂಪಡಿಸಿದ್ದ ಮೇವನ್ನು ತಿಂದು 6 ಮೇಕೆಗಳು ಅಸ್ವಸ್ಥಗೊಂಡಿದ್ದವು. ಈ ವೇಳೆ ಸ್ಥಳಕ್ಕಾಗಮಿಸಿದ ಪಶುವೈದ್ಯ ಡಾ.ನಿಖಿತ್ ಹಾಗೂ ಸಿಬ್ಬಂದಿ ಮೇಕೆಗಳಿಗೆ ಚಿಕಿತ್ಸೆ ನೀಡಿದ ಪರಿಣಾಮ 2 ಮೇಕೆಗಳು ಬದುಕುಳಿದಿದ್ದು, 4 ಮೇಕೆಗಳು ಸಾವನ್ನಪ್ಪಿವೆ. ಪಶು ಸಂಗೋಪನೆ ಇಲಾಖೆ ಸಹಾಯಕ ನಿರ್ದೇಶಕ ಮಲ್ಲಿಕಾರ್ಜುನ್ ಮಾತನಾಡಿ, ಮೇಕೆಗಳನ್ನು ಮರಣೋತ್ತರ ಪರೀಕ್ಷೆಗೆ ಒಳಪಡಿಸಿ ಮೇಕೆಗಳನ್ನು ಕಳೆದುಕೊಂಡ ರೈತನಿಗೆ ಪರಿಹಾರ ನೀಡಲು ಕ್ರಮ ಕೈಗೊಳ್ಳಲಾಗುವುದು ಎಂದರು.

# ಅತ್ತಿಗೋಡಲ್ಲಿ ಅದ್ಧೂರಿ ಗಿರಿಜಾ ಕಲ್ಯಾಣ ಮಹೋತ್ಸವ



ಅತ್ತಿಗೋಡು ಗ್ರಾಮದಲ್ಲಿ ಗಿರಿಜಾ ಕಲ್ಯಾಣ ನಡೆಯಿತು.

ಬೆಟ್ಟದಪುರ, ಆ.29– ಸಮೀಪದ ಅತ್ತಿಗೋಡು ಗ್ರಾಮದ ಈಶ್ವರ ದೇವಾಲಯದಲ್ಲಿ ಗುರುವಾರ ಗಿರಿಜಾ ಕಲ್ಯಾಣ ಮಹೋತ್ಸವ ಅದ್ದೂರಿಯಾಗಿ ನೆರವೇರಿತು.

ದೇವಾಲಯದ ಪ್ರಧಾನ ಅರ್ಚಕ ಅಮರಯ್ಯ ಹಿರೇಮಠ್ ನೇತೃತ್ವದಲ್ಲಿ ದೇವಾಲಯದ ಆವರಣದಲ್ಲಿ ಪಾರ್ವತಿ ಪರಮೇಶ್ವರ ಗಿರಿಜಾ ಕಲ್ಯಾಣ ಮಹೋತ್ಸವ ಮಂಗಳ ವಾದ್ಯಗಳೊಂದಿಗೆ ಅದ್ದೂರಿಯಾಗಿ ನೆರವೇರಿತು. ಗಿರಿಜಾ ಕಲ್ಯಾಣ ಅಂಗವಾಗಿ ದೇವಾಲಯವನ್ನು ವಿವಿಧ ಹೂಗಳಿಂದ ಅಲಂಕಾರಗೊಳಿಸಲಾಗಿತ್ತು. ಕಾರ್ಯಕ್ರಮದಲ್ಲಿ ನೂರಾರು ಮಹಿಳೆಯರು ಭಾಗವಹಿಸಿದ್ದರು. ಬಳಿಕ ದೇವಾಲಯಕ್ಕೆ ಆಗಮಿಸಿದ ಎಲ್ಲಾ ಭಕ್ತರಿಗೆ ಅನ್ನದಾನ ಹಮ್ಮಿಕೊಳ್ಳಲಾಗಿತ್ತು. ದೇವಸ್ಥಾನ ಸಮಿತಿ ಅಧ್ಯಕ್ಷ ಸುಜಾತ ಕಾಂತರಾಜ್, ಶೀಲಾ ಚಂದ್ರಶೇಖರ್, ಶುಭಾ ಗಣೇಶ್ ಹಾಗೂ ಬೆಟ್ಟದಪುರದ ವೀಣಾ ಮಾದಪ್ಪ ಕುಟುಂಬದವರು ಕಲ್ಯಾಣೋತ್ಸವಕ್ಕೆ ಸಕಲ ವ್ಯವಸ್ಥೆ ಮಾಡಿದರು.

ಕಾರ್ಯಕ್ರಮದಲ್ಲಿ ದೇವಾಲಯ ಸಮಿತಿ ಅಧ್ಯಕ್ಷ ಕಾಂತರಾಜ್, ಗೌರವಾಧ್ಯಕ್ಷ ಕೆಂಡಗಣ್ಣಶೆಟ್ಟಿ, ಉಪಾಧ್ಯಕ್ಷ ಎ.ಜೆ.ವಿರುಪಾಕ್ಷ ಸ್ವದೇಶ್, ಖಜಾಂಚಿ ಚಂದ್ರಶೇಖರ್, ಚಿಕ್ಕಸ್ವಾಮಿ, ಸುರೇಶ್, ಮಹದೇವ್, ಗಣೇಶ್, ಕೆಂಡಗಣಶೆಟ್ಟಿ ಹಾಗೂ ಗ್ರಾಮದ ವೀರಶೈವ ಲಿಂಗಾಯತ ಸಮಾಜದ ಬಂಧುಗಳು ಹಾಗೂ ಅಕ್ಕಪಕ್ಕದ ಗ್ರಾಮಸ್ಥರು ಭಾಗವಹಿಸಿದ್ದರು.

## ಹುಣಸೂರು ನಗರಸಭೆ ಚುನಾವಣೆಗೆ ನಿರ್ಲಕ್ಷ್ಯ

# ಅಧಿಕಾರಿಗಳ ವಿರುದ್ಧ ನಗರಸಭಾ ಸದಸ್ಯರ ಪ್ರತಿಭಟನೆ



ನಗರಸಭಾ ಸದಸ್ಯರು ಪ್ರತಿಭಟನೆ ನಡೆಸಿದರು.

ಹುಣಸೂರು, ಆ.29– ಸರ್ಕಾರ ನಗರಸಭೆ ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನಗಳಿಗೆ ಮೀಸಲಾತಿ ಪ್ರಕಟಿಸಿ ಚುನಾವಣೆ ನಡೆಸಲು ಆದೇಶ ಹೊರಡಿಸಿದ್ದರೂ, ಚುನಾವಣೆ ದಿನಾಂಕ ನಿಗದಿಪಡಿಸುವಲ್ಲಿ ಇಲ್ಲಿನ ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿದ್ದಾರೆ ಎಂದು ಆರೋಪಿಸಿ ನಗರಸಭಾ ಸದಸ್ಯರು ಪ್ರತಿಭಟನೆ ನಡೆಸಿದರು.

ನಗರದ ಉಪವಿಭಾಗಾಧಿಕಾರಿ ಕಚೇರಿ ಎದುರು ಜಮಾಯಿಸಿದ ನಗರಸಭಾ ಸದಸ್ಯರು ಪ್ರತಿಭಟನೆ ನಡೆಸಿ ಉಪವಿಭಾಗಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ನಗರಸಭಾ ಸದಸ್ಯ ಹೆಚ್.ಪಿ.ಸತೀಶ್ ಮಾತನಾಡಿ, ಹೈಕೋರ್ಟ್ ಆದೇಶದಂತೆ ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆ ನಡೆಸಲು ಸರ್ಕಾರ ಆದೇಶ ನೀಡಿದ್ದರೂ, ಜಿಲ್ಲಾಧಿಕಾರಿಗಳು ಹುಣಸೂರು ನಗರಸಭೆ ವರಿಷ್ಠರ ಚುನಾವಣೆ ನಡೆಸಲು ಉಪವಿಭಾಗಾಧಿಕಾರಿಗಳಿಗೆ ಸೂಚಿಸಿದ್ದರೂ, ಸ್ಥಳೀಯ ಅಧಿಕಾರಿಗಳು ಚುನಾವಣೆ ನಡೆಸಲು ಹಿಂಜರಿಯುತ್ತಿದ್ದಾರೆ. ಸದ್ಯದಲ್ಲೇ ಚುನಾವಣೆ ದಿನಾಂಕ ನಿಗದಿಪಡಿಸದಿದ್ದರೆ ಸಂಬಂಧಪಟ್ಟ ಸರ್ಕಾರದ ಪ್ರಾಧಿಕಾರದಲ್ಲಿ ಕರ್ತವ್ಯ ಲೋಪದಡಿ ದೂರು ಸಲ್ಲಿಸಲಾಗುವುದು ಎಂದರು.

ನಗರಸಭೆಯಲ್ಲಿ ಕಾಂಗ್ರೆಸ್‌ಗೆ ಬಹುಮತವಿಲ್ಲದ ಕಾರಣ ಅಧಿಕಾರ ಹಿಡಿಯಲು ಯಾವುದಾದರೊಂದು ತಂತ್ರ ರೂಪಿಸಲು ಕಾಲವಕಾಶ ಕೇಳಿದನಾಂಕ ಮುಂದೂಡಲು ಮಾಜಿ ಶಾಸಕರು ಅಧಿಕಾರಿಗಳ ಮೇಲೆ ಒತ್ತಡ ಹೇರುತ್ತಿರುವುದು ಸಂವಿಧಾನ ವಿರೋಧಿ ಚಟುವಟಿಕೆಯಾಗಿದೆ ಎಂದರು.

ಜೆಡಿಎಸ್, ಬಿಜೆಪಿ ಮೈತ್ರಿಕೂಟದಲ್ಲಿ ಬಹುಮತವಿದ್ದು ಕಾಂಗ್ರೆಸ್‌ನಲ್ಲಿ ನಿಚ್ಚಳ ಬಹುಮತ ಇಲ್ಲದ ಕಾರಣ ಸದಸ್ಯರಿಗಾಗಿ ಈಗಾಗಲೇ ಸಾಕಷ್ಟು ಕರಸತ್ತು ನಡೆಸುತ್ತಿದ್ದು, ಹುಡಾ ಅಧ್ಯಕ್ಷ ಸ್ಥಾನ ನೀಡುವ ಮತ್ತು 25 ರಿಂದ 30 ಲಕ್ಷ ರೂ. ಆಮೀಷ ತೋರುತ್ತಿದ್ದು, ಯಾರು ಸಹ ಆಮೀಷಕ್ಕೆ ಒಳಗಾಗದೆ ಒಮ್ಮತದಿಂದ ಇದ್ದೇವೆ. ನಮ್ಮ ಒಗ್ಗಟ್ಟನ್ನು ಬದಲಿಸಲು ಸಾಧ್ಯವಿಲ್ಲ ಎಂದರು. ಪಕ್ಷೇತರ ಅಭ್ಯರ್ಥಿ ರಮೇಶ್ ಮಾತನಾಡಿ, ಜನರಿಂದ ತಿರಸ್ಕೃತಗೊಂಡ ಪ್ರಭಾವಿ ನಾಯಕ ತಮಗೆ ನಗರಸಭೆ ಅಧಿಕಾರ ಹಿಡಿಯುವ ಸಾಕಷ್ಟು ಬಲ ಇಲ್ಲದ ಕಾರಣ ಹತಾಶರಾಗಿ ಹಿಂಬಾಗಿಲ ಮೂಲಕ ಕುತಂತ್ರ ರಾಜಕಾರಣ ನಡೆಸುತ್ತಿದ್ದಾರೆ. ಇದರಿಂದ ಏನೂ ಆಗುವುದಿಲ್ಲ. ಈ ಬಾರಿ ನಗರಸಭೆಯಲ್ಲಿ ಜೆಡಿಎಸ್, ಬಿಜೆಪಿ ಮೈತ್ರಿಕೂಟ ಅಧಿಕಾರ ಹಿಡಿಯುವುದು ಶತಸಿದ್ಧ ಎಂದರು.

ಪ್ರತಿಭಟನೆಯಲ್ಲಿ ಸದಸ್ಯರಾದ ಗಣೇಶ್ ಕುಮಾರಸ್ವಾಮಿ, ಶರವಣ, ಕೃಷ್ಣರಾಜಗುಪ್ತ, ಹರೀಶ್, ವಿವೇಕ್, ಸಿರಾಜ್, ದೇವರಾಜು.ಸಿ, ರಾಧಮ್ಮ, ರಾಣಿಪೇರು ಮಾಳ್, ಆಶಾ, ದೇವರಾಜ್ ಒಡೆಯರ್, ಆಸ್ವಾಳ್ ಕೆಂಪೇಗೌಡ, ಹೆಚ್.ಎಸ್.ಲೋಕೇಶ್, ರವಿ, ಮುದ್ದುರಾಮ್, ಗೋವಿಂದೇಗೌಡ, ಚಿದನಂದ, ಲೋಕೇಶ್, ರಮೇಶ್, ಉಮೇಶ್, ವಾಸು, ಕೃಷ್ಣ, ಹೆಚ್.ಎನ್.ಕುಮಾರ್ ಸೇರಿದಂತೆ ಅನೇಕರಿದ್ದರು.

# ಗಾಣಿಗರ ಅಭಿವೃದ್ಧಿಗಾಗಿ ಸಹಕಾರ ಸಂಘ ಸ್ಥಾಪನೆ

## ಸಂಘದ ರಾಜ್ಯಾಧ್ಯಕ್ಷ ಎಂ.ರಾಜಶೇಖರ್




ಗಾಣಿಗರ ಸೌಹಾರ್ದ ಸಹಕಾರಿ ಸಂಘವನ್ನು ಉದ್ಘಾಟಿಸಲಾಯಿತು.

ನಂಜನಗೂಡು, ಆ.29– ಗಾಣಿಗ ಸಮಾಜ ಅತ್ಯಂತ ಹಿಂದುಳಿದ ಸಮಾಜವಾಗಿದ್ದು, ಸಮಾಜದ ಅಭಿವೃದ್ಧಿಗಾಗಿ ತಾಲೂಕಿನಲ್ಲಿ ಗಾಣಿಗರ ಸೌಹಾರ್ದ ಸಹಕಾರ ಸಂಘ ಅಸ್ತಿತ್ವಕ್ಕೆ ತರಲಾಗಿದೆ. ಸಮಾಜದ ಬಂಧುಗಳು ಸಂಘವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಗಾಣಿಗ ಸಂಘದ ರಾಜ್ಯಾಧ್ಯಕ್ಷ ಎಂ.ರಾಜಶೇಖರ್ ತಿಳಿಸಿದರು.

ನಗರದ ಶ್ರವಣ ಕಲ್ಯಾಣ ಮಂಟಪದಲ್ಲಿ ತಾಲೂಕು ಗಾಣಿಗರ ಸೌಹಾರ್ದ ಸಹಕಾರಿ ಸಂಘ ಉದ್ಘಾಟಿಸಿ ಮಾತನಾಡಿದ ಅವರು, ನಮ್ಮ ಸಮಾಜ ಕಾಯಕ ಸಮಾಜಗಳಲ್ಲಿ ಒಂದಾಗಿದೆ. ಆದರೂ ನಮ್ಮ ಸಮಾಜದಲ್ಲಿ ಒಗ್ಗಟ್ಟು, ಶಿಕ್ಷಣದ ಕೊರತೆಯಿಂದಾಗಿ ನಾವು ಸಾಮಾಜಿಕ, ರಾಜಕೀಯವಾಗಿ ಹಿಂದುಳಿದಿದ್ದೇವೆ. ಇಂತಹ ಸನ್ನಿವೇಶದಲ್ಲಿ ನಮ್ಮ ಜನಾಂಗದ ಅಭಿವೃದ್ಧಿಗಾಗಿ ಗಾಣಿಗರ ಸೌಹಾರ್ದ ಸಹಕಾರಿ ಸಂಘ ಸ್ಥಾಪಿಸಿದ್ದೇವೆ. ಸಂಘದ ಮೂಲಕ ಸಾಲ ಸೌಲಭ್ಯ ದೊರೆಯಲಿದ್ದು, ಅದನ್ನು ಸದುಪಯೋಗಪಡಿಸಿಕೊಂಡು ಆರ್ಥಿಕವಾಗಿ ಸದೃಢರಾಗಿ ಎಂದ ಅವರು ಮುಂದಿನ ದಿನಗಳಲ್ಲಿ ರಾಜ್ಯ ಮಟ್ಟದ ಗಾಣಿಗರ ಪತ್ತಿನ ಸಹಕಾರ ಸಂಘ ಪ್ರಾರಂಭಿಸಲು ಉದ್ದೇಶಿಸಲಾಗಿದೆ ಎಂದರು.

ತಾಲೂಕು ಗಾಣಿಗರ ಸೌಹಾರ್ದ ಸಹಕಾರ ಸಂಘದ ಉಪಾಧ್ಯಕ್ಷ ಎಂ.ಬಿ.ಬಸವರಾಜು ಮಾತನಾಡಿ, ಸಹಕಾರ ಸಂಘದ ಮೂಲಕ ಸಮಾಜದ ಬಂಧುಗಳಿಗೆ ಆರ್ಥಿಕ ನೆರವು, ವಿದ್ಯಾರ್ಥಿಗಳ ಶಿಕ್ಷಣಕ್ಕೆ ನೆರವು ನೀಡುವ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಸಾಮಾಜಿಕ ಚಟುವಟಿಕೆಗಳಲ್ಲೂ ಕೂಡ ತೊಡಗಿಸಿಕೊಳ್ಳಲು ಉದ್ದೇಶಿಸಲಾಗಿದೆ ಎಂದರು.

ಸಮಾರಂಭದಲ್ಲಿ ಮೈಸೂರಿನ ಪ್ರಾಂತೀಯ ಅಧಿಕಾರಿ ಗುರುಪ್ರಸಾದ್ ಬಂಗೇರ, ಅಭಿವೃದ್ಧಿ ಅಧಿಕಾರಿ ಹೆಚ್.ಆರ್.ಸುರೇಶ್, ಸಂಗದ ಅಧ್ಯಕ್ಷ ಹೆಚ್.ಎಂ.ಶಂಕರ್, ನಿರ್ದೇಶಕರಾದ ಟಿ.ಎಂ.ಮಾದಶೆಟ್ಟಿ, ಬಿ.ಸ್ವಾಮಿ, ಎಂ.ಶಿವಣ್ಣ, ಸಿ.ರಾಮಚಂದ್ರು, ಆರ್.ಸಿದ್ದೇಶ್ವರ, ಆರ್.ಮಹೇಶ, ಮಹದೇವ, ಮಹದೇವಸ್ವಾಮಿ, ಶಿವಮಹದೇವು, ಕವಿತಾ, ಕೆ.ವಿ.ಅಶ್ವಿನಿ, ಕಾಂತರಾಜು, ಸಿದ್ದರಾಜು, ಬಿ.ಆರ್.ಸಂತೋಷ್, ಸಿಇಓ ಆರ್.ಪ್ರಫುಲ್ಲಾ, ಎನ್.ಎಲ್.ಶ್ರೀನಿವಾಸ್, ಜೆಡಿಎಸ್ ಜಿಲ್ಲಾಧ್ಯಕ್ಷ ನರಸಿಂಹಸ್ವಾಮಿ, ಗೋವಿಂದರಾಜು, ಜಿ.ಎಸ್.ಶೇಖರಪ್ಪ, ಬಿ.ಯೋಗೀಶ್ ಸೇರಿದಂತೆ ಸಮಾಜದ ಬಂಧುಗಳು ಇದ್ದರು.

# ಮದ್ಯವರ್ಜನ ಶಿಬಿರದಿಂದ ಸಮಾಜಕ್ಕೆ ಅನುಕೂಲ



ಮದ್ಯವರ್ಜನ ಶಿಬಿರವನ್ನು ಇನ್‌ಸ್ಪೆಕ್ಟರ್ ಶಬ್ಬೀರ್ ಹುಸೇನ್ ಉದ್ಘಾಟಿಸಿದರು.

ಹೆಚ್.ಡಿ.ಕೋಟೆ, ಆ.29– ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯ ಮದ್ಯವರ್ಜನ ಶಿಬಿರದಿಂದ ಸಮಾಜಕ್ಕೆ ಅನುಕೂಲವಾಗುತ್ತಿದೆ ಎಂದು ತಾಲೂಕು ಆರೋಗ್ಯಾಧಿಕಾರಿ ಡಾ.ಟಿ.ರವಿಕುಮಾರ್ ತಿಳಿಸಿದರು.


ಪಟ್ಟಣದ ಗುರುಭವನದಲ್ಲಿ ಶ್ರೀಧರ್ಮಸ್ಥಳ ಗ್ರಾಮಾಭಿವೃದ್ಧಿ ಜನಜಾಗೃತಿ ವೇದಿಕೆ, ತಾಲೂಕಿನ ವಿವಿಧ ಸಂಘ ಸಂಸ್ಥೆಗಳ ವತಿಯಿಂದ ಹಮ್ಮಿಕೊಂಡಿದ್ದ ಮದ್ಯವರ್ಜನ ಶಿಬಿರದಲ್ಲಿ ಮಾತನಾಡಿದ ಅವರು, ವ್ಯಕ್ತಿ ಆರೋಗ್ಯ ಏರುಪೇರಾಗಲು ಮದ್ಯ ಕಾರಣ. ಹೆಚ್ಚಾಗಿ ಜನರು ಮದ್ಯದ ದಾಸರಾಗುವುದರಿಂದ ಸಮಾಜದ ಸ್ವಾಸ್ಥ್ಯ ಹಾಳಾಗಲು ಕಾರಣವಾಗಿದೆ ಎಂದು.

ಇಲಾಖೆಗಳು ಹಲವು ಕಾರ್ಯಕ್ರಮ ಮಾಡುತ್ತವೆ. ಆದರೆ ಧರ್ಮಸ್ಥಳ ಸಂಸ್ಥೆ ಮಾತ್ರ ಮದ್ಯವರ್ಜನ ಶಿಬಿರ ನಡೆಸುತ್ತದೆ. ಮಹಿಳೆಯರ ಸಮಸ್ಯೆ ಗೊತ್ತಿರುವ ಕಾರಣ ಇಂತಹ ಶಿಬಿರಗಳನ್ನು ನಿರಂತರವಾಗಿ ಮಾಡಿಕೊಂಡು ಬರಲಾಗಿದೆ ಎಂದರು.

ಇಂದು ಗಂಡು, ಹೆಣ್ಣು ಭೇದ ಭಾವ ಇಲ್ಲದೇ ಎಲ್ಲರೂ ಮದ್ಯಪಾನ ಮಾಡುವುದನ್ನು ಒಂದು ಫ್ಯಾಷನ್ ಮಾಡಿಕೊಂಡಿದ್ದಾರೆ. ಇದು ಒಳ್ಳೆಯ ಬೆಳವಣಿಗೆ ಅಲ್ಲ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಪುರಸಭಾ ಸದಸ್ಯ ವೆಂಕಟೇಶ್ ಮಾತನಾಡಿದರು. ಈ ವೇಳೆ ಇನ್‌ಸ್ಪೆಕ್ಟರ್ ಶಬ್ಬೀರ್ ಹುಸೇನ್, ಉಪ ನಿರೀಕ್ಷಕ ಬಿ.ಪ್ರಕಾಶ್, ಲಯನ್ಸ್ ಕ್ಲಬ್ ಅಧ್ಯಕ್ಷ ಭಾಸ್ಕರ್, ಚಾ.ನಂಜುಂಡಮೂರ್ತಿ, ಮೆಡಿಕಲ್ ನಾಗಣ್ಣ, ಬ್ಯಾಂಕ್ ವೀರಪ್ಪ ಪುರಸಭಾ ಸದಸ್ಯೆ ಶಾಂತಮ್ಮ, ವಿನಯ್, ಡೈರಿ ಶ್ರೀಕಾಂತ್, ಭಾಸ್ಕರ್, ರಾಜು, ಜಯಲಕ್ಷ್ಮಿ, ವೀಣಾ, ಶಾಂತ ಇದ್ದರು.

## ನಾಗರಾಜೇ ಅರಸ್ ನಿಧನ



ಹೆಚ್.ಡಿ.ಕೋಟೆ, ಆ.29– ಪಟ್ಟಣದ ಅರಸು ಮೆಸ್ ಮಾಲೀಕ ನಾಗರಾಜೇ ಅರಸ್ (60) ಗುರುವಾರ ಬೆಳಗ್ಗೆ ನಿಧನರಾದರು. ಮೃತರು ಪತ್ನಿ, ಇಬ್ಬರು ಪುತ್ರಿಯರು, ಓರ್ವ ಪುತ್ರ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಸಂಜೆ ಪಟ್ಟಣದ ರುದ್ರಭೂಮಿಯಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

## ದೇವರಾಜು



ಹುಣಸೂರು, ಆ.29– ತಾಲೂಕು ಬ್ಲಾಕ್ ಕಾಂಗ್ರೆಸ್ ಮಾಜಿ ಅಧ್ಯಕ್ಷ ಬಸವರಾಜು ಅವರ ಸಹೋದರ ಹಾಗೂ ದಸಂಸ ಮುಖಂಡ ದೇವ ರಾಜು(55) ಗುರುವಾರ ಸಂಜೆ ನಿಧನರಾದರು. ಮೃತರು ಪತ್ನಿ, ಓರ್ವ ಪುತ್ರ, ಪುತ್ರಿ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಶುಕ್ರವಾರ ಮಧ್ಯಾಹ್ನ ಸ್ವಗ್ರಾಮದಲ್ಲಿ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

# ಕೇಂದ್ರದಿಂದ ಸಿಎಂರನ್ನು ರಾಜಕೀಯವಾಗಿ ತುಳಿಯುವ ಹುನ್ನಾರ

## ದಸಂಸ ಜಿಲ್ಲಾ ಸಂಚಾಲಕ ಶಿವಕುಮಾರ್ ಆರೋಪ



ಪೂರ್ವಭಾವಿ ಸಭೆಯಲ್ಲಿ ಕರಪತ್ರಗಳನ್ನು ಬಿಡುಗಡೆ ಮಾಡಲಾಯಿತು.

ತಿ.ನರಸೀಪುರ, ಆ.29– ದೇಶದಲ್ಲಿ ಒಕ್ಕೂಟ ವ್ಯವಸ್ಥೆ ಮೇಲೆ ನಂಬಿಕೆ ಇಲ್ಲದ ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ರಾಜ್ಯದಲ್ಲಿ ಶೋಷಿತ ಸಮುದಾಯಗಳ ಬಗ್ಗೆ ಕಾಳಜಿಯುಳ್ಳ, ಹಿಂದುಳಿದ ವರ್ಗ ಗಳ ಧ್ವನಿಯಾಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ರಾಜಕೀಯವಾಗಿ ತುಳಿಯುವ ಹುನ್ನಾರ ಮಾಡುತ್ತಿದೆ ಎಂದು ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಂಚಾಲಕ ಆಲಗೂಡು ಶಿವಕುಮಾರ್ ಆರೋಪಿಸಿದರು.

ಪಟ್ಟಣದ ಡಾ.ಬಿ.ಆರ್.ಅಂಬೇಡ್ಕರ್ ಸಮುದಾಯ ಭವನದಲ್ಲಿ ಗುರುವಾರ ನಡೆದ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಸೆ.3ರಂದು ನಡೆಯುವ ಪ್ರತಿಭಟನೆ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ತಳ ಸಮುದಾಯದ ನಾಯಕನನ್ನು ಬಲಿ ತೆಗೆದುಕೊಳ್ಳಲು ಬಯಸುವ ಜಾತಿವಾದಿ ಹಾಗೂ ಬ್ರಾಹ್ಮಣ್ಯದ ಹುನ್ನಾರವನ್ನು ಪ್ರಗತಿಪರ ಚಿಂತನೆಯುಳ್ಳವರು ಸಹಿಸಲು ಸಾಧ್ಯವಿಲ್ಲ. ಸಾಂವಿಧಾನಿಕ ಹುದ್ದೆಯಲ್ಲಿದ್ದು, ಕೇಂದ್ರ ಸರ್ಕಾರದ ಕೈಗೊಂಬೆಯಾಗಿರುವ ರಾಜ್ಯಪಾಲರ ನಡೆ ಸರಿಯಲ್ಲವೆಂದು ಕಿಡಿಕಾರಿದರು.

ಮುಡಾ ನಿವೇಶನ ಹಂಚಿಕೆ ಹಗರಣದಲ್ಲಿ ಸಿಎಂ ಸಿದ್ದರಾಮಯ್ಯ ಅವರ ಹಸ್ತಕ್ಷೇಪವಿಲ್ಲ. ರಾಜಕೀಯ ದುರುದ್ದೇಶದಿಂದ ಗೃಹಿಣಿಯಾಗಿರುವ ಅವರ ಪತ್ನಿ ಹೆಸರನ್ನು ಎಳೆದು ತರಲಾಗುತ್ತಿದೆ. ರಾಜ್ಯದಲ್ಲಿ 2 ಪ್ರಬಲ ಸಮುದಾಯಗಳಿಗೆ ಸೇರದ ಡಿ.ದೇವರಾಜ ಅರಸು, ಬಂಗಾರಪ್ಪ ಹಾಗೂ ಧರ್ಮಸಿಂಗ್ ಅವರಂತಹವರನ್ನು ಆಡಳಿತ ನಡೆಸಲು ಬಿಡದೆ, ರಾಜಕೀಯವಾಗಿ ಮೂಲೆ ಗುಂಪು ಮಾಡಿದರು. ಅವರ ಸಾಲಿಗೆ ಈಗ ಸಿದ್ದರಾಮಯ್ಯ ಅವರನ್ನು ತರಲಾಗುತ್ತಿದೆ. ಆದ್ದರಿಂದ ಶೋಷಿತರು, ಅಲ್ಪಸಂಖ್ಯಾತರು ಹಾಗೂ ಹಿಂದುಳಿದ ವರ್ಗಗಳು ಸಂಘಟಕರಾಗಿ ಸಿಎಂ ಅವರಿಗೆ ನೈತಿಕ ಸ್ಥೈರ್ಯ ತುಂಬಲು ಹೋರಾಟ ನಡೆಸಲು ಬೀದಿಗಿಳಿಯಬೇಕು ಎಂದರು.

ಯಜಮಾನ್ ಕೈಯಂಬಳ್ಳಿ ಕೃಷ್ಣ ಮಾತನಾಡಿದರು. ಸಭೆಯಲ್ಲಿ ದಸಂಸ ತಾಲೂಕು ಸಂಚಾಲಕ ಯಾಚೇನಹಳ್ಳಿ ಸೋಮಶೇಖರ್, ಮುಖಂಡರಾದ ಬನ್ನಹಳ್ಳಿಹುಂಡಿ ಉಮೇಶ್, ಆಲಗೂಡು ನಾಗರಾಜು, ಶಾಂತ, ಸುಜ್ಜಲೂರು ಶಿವಯ್ಯ, ಯಡದೊರೆ ನಾರಾಯಣ, ಸೀಹಳ್ಳಿ ರಂಗಸ್ವಾಮಿ, ಮಾದಿಗಹಳ್ಳಿ ರಾಮು, ಆದಿಬೆಟ್ಟಹಳ್ಳಿ ಅರ್ಜುನ, ಪಾಪಣ್ಣಿ, ಅರವಟ್ಟಿಗೆಕೊಪ್ಪಲು ಕೃಷ್ಣ, ಕೇತುಪುರ ಶಿವನಂಜು, ರಮೇಶ್, ಹ್ಯಾಕನೂರು ಮಹೇಶ, ಸುರೇಶ, ಕೊಳಗಹಳ್ಳಿ ಗುರು, ಬೇವಿನಹಳ್ಳಿ ದಿನೇಶ್ ಇತರರಿದ್ದರು.

**ಕೋಮುವಾದಿ ಭ್ರಷ್ಟ ಬಿಜೆಪಿ, ಜಾತಿವಾದಿ ಜೆಡಿಎಸ್ ಪಕ್ಷ ಹಾಗೂ ಕೇಂದ್ರ ಬಿಜೆಪಿ ಸರ್ಕಾರದ ಕೈಗೊಂಬೆಯಾಗಿರುವ ರಾಜ್ಯಪಾಲರ ನಡೆ ಖಂಡಿಸಿ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಸೆ.3ರಂದು ದಸಂಸ ವತಿಯಿಂದ ಬೃಹತ್ ಪ್ರತಿಭಟನಾ ಸಭೆ ಹಮ್ಮಿಕೊಳ್ಳಲಾಗಿದೆ. ರಾಜ್ಯದ ಎಲ್ಲಾ ಜಿಲ್ಲಾ ಹಾಗೂ ತಾಲೂಕು ಕೇಂದ್ರಗಳ ಸಾವಿರಾರು ಜನರು ಭಾಗವಹಿಸಲಿದ್ದಾರೆ. ಸಿಎಂ ತವರು ಮೈಸೂರು ಜಿಲ್ಲೆಯ ತಾಲೂಕುಗಳಿಂದ ಹೆಚ್ಚಿನ ಜನತೆ ಭಾಗವಹಿಸಿ ಹೋರಾಟ ಯಶಸ್ವಿಗೊಳಿಸಬೇಕು.**

-ಶಿವಕುಮಾರ್,
ದಸಂಸ ಜಿಲ್ಲಾ ಸಂಚಾಲಕ.

## ಸಂದರ್ಶನ

ಹೆಚ್.ಡಿ.ಕೋಟೆ, ಆ.29– ಪಟ್ಟಣದ ಶ್ರೀಆದಿಚುಂಚನಗಿರಿ ಪ್ರಥಮ ದರ್ಜೆ ಕಾಲೇಜು ಕ್ಯಾಂಪಸ್‌ನಲ್ಲಿ ಸೆ.2ರಂದು ಬೆಳಗ್ಗೆ 10 ಗಂಟೆಗೆ ಉದ್ಯೋಗ ಮಾರ್ಗ ದರ್ಶಿ ಸಂದರ್ಶನ ಕಾರ್ಯಕ್ರಮ ಏರ್ಪಡಿಸಲಾಗಿದೆ.

ಪದವಿ ಪೂರೈಸಿರುವ, ಸ್ನಾತಕೋತ್ತರ ಪದವಿ ಪಡೆದಿರುವಂತಹ ವಿದ್ಯಾರ್ಥಿಗಳಿಗೆ ಉಚಿತವಾಗಿ ನೇರ ಸಂದರ್ಶನ ಹಾಗೂ ಆಯ್ಕೆ ಮಾಡಿಕೊಳ್ಳಲಾಗುತ್ತದೆ ಎಂದು ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಡಾ. ಜಿ.ಎನ್. ವೆಂಕಟೇಶ್ ತಿಳಿಸಿದ್ದಾರೆ. ಮಾಹಿತಿಗೆ 9845669983, 9663160465 ಸಂಪರ್ಕಿಸಿ.

### ಮೈಸೂರಲ್ಲಿ ರಾಷ್ಟ್ರೀಯ ಕ್ರೀಡಾ ದಿನಾಚರಣೆ

# ವಿದ್ಯಾರ್ಥಿ ದಿಸೆಯಲ್ಲೇ ಕ್ರೀಡಾಸಕ್ತಿ ಉತ್ತಮ

**●ಶಾಸಕ ತನ್ವೀರ್ ಸೇಟ್ ಅಭಿಮತ ●ಹಾಕಿ ಮಾಂತ್ರಿಕ ಧ್ಯಾನ್‌ಚಂದ್ ಸ್ಮರಣೆ**





ಮೈಸೂರಿನ ಚಾಮುಂಡಿವಿಹಾರ ಕ್ರೀಡಾಂಗಣದಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಹಾಕಿ ಮಾಂತ್ರಿಕ ಮೇಜರ್ ಧ್ಯಾನ್‌ಚಂದ್ ಜನ್ಮದಿನಾಚರಣೆ ಹಾಗೂ ರಾಷ್ಟ್ರೀಯ ಕ್ರೀಡಾ ದಿನಾಚರಣೆಯ ಪ್ರಯುಕ್ತ ಆಯೋಜಿಸಿದ್ದ ಕ್ರೀಡಾಕೂಟಕ್ಕೆ ಶಾಸಕ ತನ್ವೀರ್ ಸೇಟ್ ಚಾಲನೆ ನೀಡಿದರು. ಮತ್ತೊಂದು ಚಿತ್ರದಲ್ಲಿ ವಾಲಿಬಾಲ್ ಸ್ಪರ್ಧೆಯಲ್ಲಿ ಪಾಲ್ಗೊಂಡಿರುವ ಮಹಿಳಾ ತಂಡ.

ಮೈಸೂರು,ಆ.29(ಎಂಟಿವೈ)– ಶಾಲಾ–ಕಾಲೇಜು ದಿಸೆಯಲ್ಲಿಯೇ ವಿದ್ಯಾರ್ಥಿಗಳಿಗೆ ಕ್ರೀಡಾಸಕ್ತಿ ಬೆಳೆಸುವ ಅಗತ್ಯವಿದೆ ಎಂದು ಶಾಸಕ ತನ್ವೀರ್ ಸೇಟ್ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರು ನಜರ್‌ಬಾದ್‌ನಲ್ಲಿರುವ ಚಾಮುಂಡಿವಿಹಾರ ಕ್ರೀಡಾಂಗಣದಲ್ಲಿ ಗುರುವಾರ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಹಾಕಿ ಮಾಂತ್ರಿಕ ಮೇಜರ್ ಧ್ಯಾನ್‌ಚಂದ್ ಜನ್ಮದಿನಾಚರಣೆ ಅಂಗವಾಗಿ ಆಯೋಜಿಸಿದ್ದ ರಾಷ್ಟ್ರೀಯ ಕ್ರೀಡಾ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕ್ರೀಡೆಗೆ ಪ್ರೋತ್ಸಾಹ ನೀಡುವ ಅನಿವಾರ್ಯತೆ ಇದೆ. ವಿದ್ಯಾರ್ಥಿದಿಸೆಯಲ್ಲಿ ಕ್ರೀಡೆಗಳಿಗೆ ಹೆಚ್ಚಿನ ಉತ್ತೇಜನ ನೀಡಬೇಕು. ಯಾವುದೇ ಸರ್ಕಾರ ಅಧಿಕಾರಕ್ಕೆ ಬಂದರೂ ಕ್ರೀಡೆಗೆ ನಿರೀಕ್ಷಿತ ಮಟ್ಟದಲ್ಲಿ ಕಾರ್ಯಕ್ರಮ ರೂಪಿಸಬೇಕು. ಶಾಲೆಯಲ್ಲಿ ಕ್ರೀಡಾ ಚಟುವಟಿಕೆಗೆ ಪೂರಕವಾದ ವಾತಾವರಣ ಸೃಷ್ಟಿಸಬೇಕಾಗಿದೆ. ಕ್ರೀಡಾ ಕ್ಷೇತ್ರದ ವ್ಯವಸ್ಥೆಯಲ್ಲಿ ಕೆಲ ಬದಲಾವಣೆ, ಸುಧಾರಣೆಗಳಾಗಬೇಕು.

ಈ ಹಿಂದೆ ನಾನು ಎರಡೂವರೆ ವರ್ಷ ಶಿಕ್ಷಣ ಸಚಿವನಾಗಿ ಕೆಲಸ ಮಾಡಿದ್ದೇನೆ. ಪ್ರಾಥಮಿಕ ಶಿಕ್ಷಣದಲ್ಲಿ ಹಲವಾರು ಬದಲಾವಣೆ ಮಾಡಿದ್ದೇನೆ. ಮಕ್ಕಳಿಗೆ ಪೂರಕವಾಗುವಂತಹ ಪಠ್ಯಕ್ರಮಗಳ ಜತೆಗೆ ಕ್ರೀಡೆಗೂ ಉತ್ತೇಜನ ನೀಡಬೇಕು. ದೇಶದ 130 ಕೋಟಿ ಜನಸಂಖ್ಯೆಯಲ್ಲಿ ಶೇ.24ರಷ್ಟು ಮಂದಿ 25 ವರ್ಷದೊಳಗಿನವರು ಇದ್ದಾರೆ. ವಿದ್ಯಾರ್ಥಿ ದಿಸೆಯಲ್ಲಿ ಕ್ರೀಡೆಗಳಿಗೆ ಪ್ರೋತ್ಸಾಹ ಕೊಡುತ್ತಿಲ್ಲ. ನಾವು ಭವಿಷ್ಯದ ನಾಯಕತ್ವ ರೂಪಿಸಬೇಕಾದರೆ ಕ್ರೀಡೆಗೆ ಬೆಂಬಲ ನೀಡಬೇಕು ಎಂದರು.

ಚಾಮುಂಡಿ ವಿಹಾರ ಕ್ರೀಡಾಂಗಣದಲ್ಲಿ ಹಲವು ಸಮಸ್ಯೆಗಳಿವೆ. ಕ್ರೀಡಾ ವಿದ್ಯಾರ್ಥಿಗಳ ಹಾಸ್ಟೆಲ್ ದುರಸ್ತಿಗೆ 50 ಲಕ್ಷ ರೂ. ಅನುದಾನ ಬಿಡುಗಡೆಯಾಗಿದೆ. ನಿಲಯದ ಒಳಚರಂಡಿ ವ್ಯವಸ್ಥೆಯನ್ನು ಸರಿಪಡಿಸಲು 25 ಲಕ್ಷ ರೂ.ಬೇಕಾಗಿದ್ದು, ತಕ್ಷಣವೇ ಟೆಂಡರ್ ಪ್ರಕ್ರಿಯೆ ಶುರುವಾಗಲಿದೆ. ಶಾಸಕರ ಅನುದಾನದಲ್ಲಿ 25 ಲಕ್ಷ ರೂ.ವೆಚ್ಚದಲ್ಲಿ ಪ್ರತ್ಯೇಕ ಶೌಚಾಲಯ ನಿರ್ಮಾಣ ಮಾಡಲಾಗುವುದು. ಕಾಂಪೌಂಡ್ ನಿರ್ಮಾಣಕ್ಕಾಗಿ ಸಿಎಸ್‌ಆರ್ ನಿಧಿಯಿಂದ 50 ಲಕ್ಷ ರೂ. ಕೇಳಲಾಗಿದೆ. ಮುಂದಿನ ದಿನಗಳಲ್ಲಿ ಅಭಿವೃದ್ಧಿಗೆ ಬೇಕಾದ ಅನುದಾನ ಕೊಡಿಸಲಾಗುವುದು ಎಂದು ಭರವಸೆ ನೀಡಿದರು.

ಶಾಸಕ ಟಿ.ಎಸ್.ಶ್ರೀವತ್ಸ ಮಾತನಾಡಿ, ಮೈಸೂರಿನಲ್ಲಿ ಕ್ರೀಡೆ, ಸಂಗೀತ ಸೇರಿದಂತೆ ಅನೇಕ ಕ್ಷೇತ್ರಗಳಲ್ಲಿ ಸಾಧನೆ ಮಾಡಿದವರು ಇದ್ದಾರೆ. ನಮ್ಮೂರಿನ ಹುಡುಗ 18 ಗಂಟೆಗಳ ಕಾಲ ಕೀ ಬೋರ್ಡ್ ನುಡಿಸಿ ವಿಶ್ವದಾಖಲೆ ಮಾಡಿರುವುದು ಸಂತೋಷ ತಂದಿದೆ. ಅಲ್ಲದೆ, ಸ್ವಾಮಿ ವಿವೇಕಾನಂದ ಕುರಿತು ಹನ್ನೊಂದು ಗಂಟೆಗಳ ಕಾಲ ಭಾಷಣ ಮಾಡಿ ಗಿನ್ನಿಸ್ ದಾಖಲೆ ಮಾಡಿದ್ದಾನೆ. ಹಾಗಾಗಿ, ನಮ್ಮಲ್ಲಿರುವ ಸಾಧಕರನ್ನು ಗುರುತಿಸಬೇಕು. ಯಾವುದೇ ಕ್ಷೇತ್ರದಲ್ಲಿ ಕೆಲಸ ಮಾಡಿದರೂ ಮಾನವೀಯ ಮೌಲ್ಯಗಳನ್ನು ಅನುಸರಿಸಿ ನಡೆಯಬೇಕು. ಕ್ರೀಡೆಯಿಂದ ಪರಸ್ಪರ ವಿಶ್ವಾಸ, ಉತ್ತಮ ವಾತಾವರಣ ನಿರ್ಮಾಣವಾಗಲಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ವಿವಿಧ ಕ್ರೀಡೆಗಳಲ್ಲಿ ಸಾಧನೆಗೈದಿರುವ ಎಂಟು ಮಂದಿ ಕ್ರೀಡಾಪಟುಗಳನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಸಹಾಯಕ ನಿರ್ದೇಶಕ ಭಾಸ್ಕರ್ ನಾಯ್ಕ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಭಾ ಕಾರ್ಯಕ್ರಮದ ನಂತರ ಲೆಮನ್ ಅಂಡ್ ಸ್ಪೂನ್ ಓಟ, ವಾಲಿಬಾಲ್, ಹಾಕಿ, ಬಾಸ್ಕೆಟ್ ಬಾಲ್, ಹಗ್ಗಜಗ್ಗಾಟ, ಹಾಗೂ ಇನ್ನಿತರ ಕ್ರೀಡಾ ಸ್ಪರ್ಧೆಗಳು ಜರುಗಿದವು.

## ರಂಗಭೂಮಿ ಕಲಾವಿದರಿಂದ ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

ಮೈಸೂರು,ಆ.29–ರಂಗಾಯಣವು ಸಿದ್ಧಪಡಿಸುವ ನಾಟಕಗಳಿಗೆ ಹಾಗೂ ರಂಗ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ರಂಗಭೂಮಿಯಲ್ಲಿ ಅನುಭವವಿರುವ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ರಾಷ್ಟ್ರೀಯ ನಾಟಕ ಶಾಲೆಯ ಪದವಿ, ರಾಜ್ಯದ ಯಾವುದೇ ರಂಗಶಿಕ್ಷಣ ಕೇಂದ್ರದಿಂದ ರಂಗಶಿಕ್ಷಣ ಪದವಿ, ಡಿಪ್ಲೊಮಾ ಪಡೆದವರಾಗಿರಬೇಕು. ರಂಗಭೂಮಿ ಅನುಭವ ಕಡ್ಡಾಯವಾಗಿದ್ದು, ಅರ್ಹ 22ರಿಂದ 35 ವರ್ಷದೊಳಗಿನ ವಯೋಮಿತಿಯುಳ್ಳ ಕಲಾವಿದರನ್ನು ರಂಗಾಯಣದ ನಿಯಮಾನುಸಾರ ತಾತ್ಕಾಲಿಕವಾಗಿ ಆಯ್ಕೆ ಮಾಡಿಕೊಳ್ಳಲಾಗುತ್ತದೆ. ಸಂದರ್ಶನದ ವೇಳೆ ಹಾಜರುಪಡಿಸಬೇಕಾದ ಮೂಲ ದಾಖಲಾತಿಗಳು ಜನ್ಮ ದಿನಾಂಕ ದೃಢೀಕರಣ ಪತ್ರ, ಎನ್.ಎಸ್.ಡಿ, ಡಿಪ್ಲೊಮಾ ಪ್ರಮಾಣ ಪತ್ರ, ರಂಗಶಿಕ್ಷಣ ಕೇಂದ್ರದ ಅನುಭವ ಪ್ರಮಾಣ ಪತ್ರ, ರಂಗಭೂಮಿ ಅನುಭವ ಕುರಿತ ಸ್ವವಿವರ ಪತ್ರ (ಅಗತ್ಯ ದಾಖಲೆಗಳೊಂದಿಗೆ) ಹಾಗೂ ಆಧಾರ್ ಕಾರ್ಡ್. ಆಸಕ್ತರು ಅರ್ಜಿ ನಮೂನೆಯನ್ನು www.rangayanamysore.karnataka.gov.inನಿಂದ ಡೌನ್‌ಲೋಡ್ ಮಾಡಿಕೊಂಡು ಸೆ.5ರೊಳಗೆ ವಿನೋಬಾ ರಸ್ತೆಯಲ್ಲಿರುವ ರಂಗಾಯಣದ ನಿರ್ದೇಶಕರ ವಿಳಾಸಕ್ಕೆ ಅರ್ಜಿ ಸಲ್ಲಿಸಬೇಕು ಎಂದು ರಂಗಾಯಣ ಉಪನಿರ್ದೇಶಕ ಡಾ.ಎಂ.ಡಿ. ಸುದರ್ಶನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸಾಂಸ್ಕೃತಿಕ ಕಲಾ ತಂಡಗಳಿಂದ ಅರ್ಜಿ ಆಹ್ವಾನ

ಮೈಸೂರು, ಆ.29–2024–25ನೇ ಸಾಲಿನ ವಿಶ್ವವಿಖ್ಯಾತ ನಾಡಹಬ್ಬ ಮೈಸೂರು ದಸರಾ ಮಹೋತ್ಸವದ ಹಿನ್ನೆಲೆ ಸಾಂಸ್ಕೃತಿಕ ಉಪ ಸಮಿತಿ ವತಿಯಿಂದ ನವರಾತ್ರಿಯ ಅ.3ರಿಂದ 11ರವರೆಗೆ ವಿವಿಧ ಕಲಾ ಪ್ರಕಾರಗಳ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಅರಮನೆ ಹಾಗೂ ಇತರೆ ವೇದಿಕೆಗಳಲ್ಲಿ ಆಯೋಜಿಸಲು ತೀರ್ಮಾನಿಸಲಾಗಿದ್ದು, ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನೀಡಲು ಕಲಾವಿದರಿಂದ ಅಥವಾ ಕಲಾ ತಂಡಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಸೆಪ್ಟೆಂಬರ್ 10 ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವಾಗಿದ್ದು, ಅರ್ಜಿಗಳನ್ನು ಕರ್ನಾಟಕ ಕಲಾಮಂದಿರದಲ್ಲಿರುವ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರ ಕಚೇರಿಗೆ ನೇರವಾಗಿ ಅಥವಾ ಅಂಚೆ ಮೂಲಕ ಹಾಗೂ ccdasara23@gmail.com ಇ–ಮೇಲ್ ಮೂಲಕ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂ.ಸಂ:0821–2513225 ಅನ್ನು ಸಂಪರ್ಕಿಸಬಹುದು.

## ಸರ್ವೆ ಇಲಾಖೆಯಲ್ಲಿ ರೈತರ ಅರ್ಜಿಗಳಿಗೆ ಸಕಾರಾತ್ಮಕವಾಗಿ ಸ್ಪಂದಿಸಿ

**ಭೂ ದಾಖಲೆಗಳ ಜಂಟಿ ನಿರ್ದೇಶಕ ಇ.ಪ್ರಕಾಶ್ ಸೂಚನೆ**

ಮೈಸೂರು,ಆ.29(ಎಂಟಿವೈ)– ಸರ್ವೆ ಇಲಾಖೆಯಲ್ಲಿ ರೈತರು ಸಲ್ಲಿಸುವ ಅರ್ಜಿಗಳಿಗೆ ಸಕಾರಾತ್ಮಕವಾಗಿ ಸ್ಪಂದಿಸಿ, ವಿಳಂಬ ಮಾಡದೆ ತ್ವರಿತಗತಿಯಲ್ಲಿ ಕೆಲಸ ಮಾಡಿಕೊಡುವುದರೊಂದಿಗೆ ತಂತ್ರಾಂಶದ ಮೂಲಕ ದಾಖಲೀಕರಿಸಬೇಕು ಎಂದು ಮೈಸೂರು ವಿಭಾಗದ ಭೂ ದಾಖಲೆಗಳ ಜಂಟಿ ನಿರ್ದೇಶಕ ಇ.ಪ್ರಕಾಶ ಸೂಚನೆ ನೀಡಿದ್ದಾರೆ.

ಮೈಸೂರಿನ ನಜರ್‌ಬಾದ್‌ನಲ್ಲಿರುವ ಮಿನಿ ವಿಧಾನಸೌಧದಲ್ಲಿರುವ ಭೂ ದಾಖಲೆಗಳ ಸಹಾಯಕ ನಿರ್ದೇಶಕರ ಕಚೇರಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ ಮಾತನಾಡಿದ ಅವರು, ಇಲಾಖೆಯ ಎಲ್ಲಾ ಕಾರ್ಯಗಳು ತಂತ್ರಾಂಶದ ಮೂಲಕವೇ ಕಡ್ಡಾಯವಾಗಿ ನಿರ್ವಹಿಸಬೇಕು. ಪ್ರತಿ ತಿಂಗಳು ಕೊನೆಯವರೆಗೂ ಕಾಯದೇ ಅಳತೆ ಮಾಡಿದ ಕಡತಗಳನ್ನು ಅಪ್‌ಲೋಡ್ ಮಾಡಬೇಕು. ಪ್ರತಿ ತಿಂಗಳು 25ನೇ ತಾರೀಕಿನೊಳಗೆ ನಿಗದಿತ ಗುರಿ ಸಾಧಿಸಬೇಕು. ಆ ನಿಟ್ಟಿನಲ್ಲಿ ಪರ್ಯಾವೇಕ್ಷಕರು, ಸಹಾಯಕ ನಿರ್ದೇಶಕರು ಕಾರ್ಯಪ್ರವೃತ್ತರಾಗಬೇಕು. ಇಲ್ಲದಿದ್ದರೆ ಸಂಬಂಧಪಟ್ಟ ಸಿಬ್ಬಂದಿಗಳ ವಿರುದ್ಧ ಶಿಸ್ತುಕ್ರಮ ಜರುಗಿಸುವುದಾಗಿ ಎಚ್ಚರಿಸಿದರು.

ರೈತರು ಸಲ್ಲಿಸುವ ಅರ್ಜಿಗಳ ಸ್ಥಿತಿಗತಿ ಬಗ್ಗೆ ಪ್ರತಿ ಹಂತದಲ್ಲಿಯೂ ಮಾಹಿತಿ ದೊರೆಯಬೇಕು. ವಿನಾ ಕಾರಣ ರೈತರನ್ನು ಕಚೇರಿಗೆ ಅಲೆದಾಡುವಂತೆ ಮಾಡಬಾರದು. ಅಲ್ಲದೆ, ಯಾವುದೇ ದೂರುಗಳು ಬಾರದಂತೆ ಸಕಾಲದಲ್ಲಿ ರೈತರಿಗೆ ಅನುಕೂಲವಗುವಂತೆ ಕರ್ತವ್ಯ ನಿರ್ವಹಿಸಿ ಎಂದು ಸೂಚಿಸಿದರು.



ಮೈಸೂರಿನ ನಜರ್‌ಬಾದ್‌ನ ಮಿನಿ ವಿಧಾನಸೌಧದಲ್ಲಿರುವ ಭೂ ದಾಖಲೆಗಳ ಸಹಾಯಕ ನಿರ್ದೇಶಕರ ಕಚೇರಿಗೆ ಮೈಸೂರು ವಿಭಾಗದ ಭೂ ದಾಖಲೆಗಳ ಜಂಟಿ ನಿರ್ದೇಶಕ ಇ.ಪ್ರಕಾಶ ಭೇಟಿ ನೀಡಿ, ಪರಿಶೀಲಿಸಿದರು

ಈ ಸಂದರ್ಭದಲ್ಲಿ ಭೂ ದಾಖಲೆಗಳ ಸಹಾಯಕ ನಿರ್ದೇಶಕ ಹೆಚ್.ಮಂಜುನಾಥ್, ಪರ್ಯಾವೇಕ್ಷಕರಾದ ಸ್ವಾಮಿ, ಕೀರ್ತಿಕುಮಾರ್, ನಾಗರಾಜು, ಭೂ ಮಾಪಕರಾದ ಪ್ರಕಾಶ, ಕಂಚಿನಕೆರೆ ದೇವರಾಜು, ರವಿ, ಎಂ.ಎಸ್. ಪ್ರದೀಪ್‌ಕುಮಾರ್, ನಾಗೇಂದ್ರಕುಮಾರ, ಶಾಂತಮಲ್ಲಪ್ಪ ರಾಘವೇಂದ್ರ ಸ್ವಾಮಿ, ಲಕ್ಷ್ಮಿ, ಬಿಂದು, ಶಾನವಾಜ್ ಹಾಗೂ ಸಂತೋಷ ಕುಮಾರ್, ಶ್ರೀಪತಿ ಸೇರಿದಂತೆ ಸಿಬ್ಬಂದಿ ಉಪಸ್ಥಿತರಿದ್ದರು.

### ಮಹಾರಾಷ್ಟ್ರದಲ್ಲಿ ಮಗಳ ಮೇಲೆ ತಂದೆಯಿಂದಲೇ ಅತ್ಯಾಚಾರ

**ಮುಂಬೈ:** ದೇಶದಲ್ಲಿ ಮಹಿಳೆಯರು ಮತ್ತು ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ಪ್ರಕರಣಗಳು ದಿನದಿಂದ ದಿನಕ್ಕೆ ಹೆಚ್ಚಾಗುತ್ತಲೇ ಇದೆ. 9 ವರ್ಷದ ಮಗಳ ಮೇಲೆ ಆಕೆಯ 30 ವರ್ಷದ ತಂದೆಯೇ ಅತ್ಯಾಚಾರವೆಸಗಿರುವ ಘಟನೆ ಮುಂಬೈನ ದಿಂಡೋಶಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ. ಜೂನ್‌ನಲ್ಲಿ ಮನೆಯಲ್ಲಿ ಯಾರೂ ಇಲ್ಲದ ವೇಳೆ ಆರೋಪಿ ತನ್ನ ಮಗಳ ಮೇಲೆ ಅತ್ಯಾಚಾರವೆಸಗಿದ್ದು, ಯಾರಿಗೂ ಹೇಳದಂತೆ ಬೆದರಿಕೆ ಹಾಕಿದ್ದಾನೆ. ಇತ್ತೀಚೆಗೆ ಬಾಲಕಿ ತನ್ನ ತಾಯಿಗೆ ನಡೆದ ಘಟನೆಯನ್ನು ವಿವರಿಸಿದಾಗ ಪ್ರಕರಣ ಬೆಳಕಿಗೆ ಬಂದಿದೆ. ಆರೋಪಿಯನ್ನು ಬಂಧಿಸಿ ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿದೆ.

### ಮಲ್ಲಿಕಾರ್ಜುನ ಖರ್ಗೆ ಕುಟುಂಬದ ಟ್ರಸ್ಟ್‌ಗೆ ಐದು ಎಕರೆ ಭೂಮಿ ಮಂಜೂರು ವಿಚಾರ

# ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿಗೆ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಎದಿರೇಟು

**●ಮೈಸೂರು ಹೆಬ್ಬಾಳಲ್ಲಿ 2 ಎಕರೆ ಭೂಮಿ ಪಡೆದು 18 ವರ್ಷ ಖಾಲಿ ಬಿಟ್ಟಿರುವುದಕ್ಕೆ ಆಕ್ರೋಶ**

**●ಅಲ್ಲಿ ಬರೀ ಶೆಡ್ ಹಾಕಿ ಉದ್ಯಮ ಸ್ಥಾಪನೆ ಮಾಡದಿರುವುದಕ್ಕೆ ಕಟು ಟೀಕೆ**

ಬೆಂಗಳೂರು ಆ.29(ಕೆಎಂಶಿ)– ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಪುತ್ರ ರಾಹುಲ್ ಖರ್ಗೆ ಅವರ ಸಿದ್ಧಾರ್ಥ ವಿಹಾರ ಟ್ರಸ್ಟ್‌ಗೆ ಏರೋಸ್ಪೇಸ್ ಪಾರ್ಕಿನಲ್ಲಿ 5 ಎಕರೆ ಸಿ.ಎ.ನಿವೇಶನ ಕೊಟ್ಟಿದ್ದಕ್ಕೆ ಎಗರಾಡುತ್ತಿರುವ ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಸತ್ಯ ಹರಿಶ್ಚಂದ್ರರೇನಲ್ಲ ಎಂದು ಕೈಗಾರಿಕಾ ಸಚಿವ ಎಂ.ಬಿ ಪಾಟೀಲ್ ಇಂದಿಲ್ಲಿ ಕಿಡಿಕಾರಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 2006ರಲ್ಲಿ ಮೈಸೂರಿನ ಹೆಬ್ಬಾಳದಲ್ಲಿ 2 ಎಕರೆ ಜಾಗ ಪಡೆದುಕೊಂಡಿರುವ ಅವರು 18 ವರ್ಷಗಳಾದರೂ ಅಲ್ಲಿ ಏನೂ ಮಾಡದೆ ಕಾಟಾಚಾರಕ್ಕೆ ಒಂದು ಶೆಡ್ ಹಾಕಿಕೊಂಡು ಕೂತಿರುವ ಆಸಾಮಿ. ಅವರೊಬ್ಬ ಶೆಡ್ ಗಿರಾಕಿಯೇ ವಿನಾ ರಾಹುಲ್ ಖರ್ಗೆ ಅವರಂತೆ ಉದ್ಯಮಶೀಲರಲ್ಲ. ಇಂಥವರು ನಮಗೆ ಪಾಠ ಮಾಡಲು ಬರುತ್ತಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ರಾಹುಲ್ ಖರ್ಗೆ ಎರಡು ಬಾರಿ ಯುಪಿಎಸ್ಸಿ ಪರೀಕ್ಷೆ ಪಾಸು ಮಾಡಿದ್ದಾರೆ; ಎಂಜಿನಿಯರಿಂಗ್ ಪದವೀಧರರು. ಡಿಆರ್‌ಡಿಓ ಪ್ರಶಸ್ತಿ ಪುರಸ್ಕೃತರಾಗಿದ್ದಾರೆ. ಇಂಥ ಅರ್ಹರಿಗೆ ಸಿ.ಎ. ನಿವೇಶನ ಕೊಡದೆ ಬಿಜೆಪಿಯವರಂತೆ ನಿಯಮಗಳನ್ನು ಗಾಳಿಗೆ ತೂರಿ ಯಾರ್‍ಯಾರಿಗೋ ಕೊಡಬೇಕಾಗಿತ್ತೇನು?

ನಾರಾಯಣಸ್ವಾಮಿ ಈಗ ತಮಗೆ ಮಂಜೂರಾಗಿರುವ ಕೈಗಾರಿಕಾ ನಿವೇಶನದ ಸಮರ್ಪಕ ಬಳಕೆಗೆ ಮತ್ತೊಮ್ಮೆ 6 ತಿಂಗಳ ಕಾಲಾವಕಾಶ ಪಡೆದುಕೊಂಡಿದ್ದಾರೆ. ಇಲ್ಲೂ ಅವರು ವಿಫಲರಾದರೆ, ನಿಯಮಗಳ ಪ್ರಕಾರ ಆ ಜಮೀನನ್ನು ಸರ್ಕಾರದ ವಶಕ್ಕೆ ಪಡೆಯುತ್ತೇವೆ ಎಂದು ಎಚ್ಚರಿಕೆ ನೀಡಿದ್ದಾರೆ.



ದಲಿತರಾದ ನಾರಾಯಣಸ್ವಾಮಿ ಸ್ವತಃ ತಮ್ಮ ಸಮುದಾಯದ ಹಿರಿಯರೂ, ಮುತ್ಸದ್ದಿಗಳೂ ಆದ ಮಲ್ಲಿಕಾರ್ಜುನ ಖರ್ಗೆ ಅವರ ಕುಟುಂಬದ ವಿರುದ್ಧ ವಿನಾ ಕಾರಣ ಆರೋಪ ಮಾಡುತ್ತಿದ್ದಾರೆ. ಇದು ಬಿಜೆಪಿಯ ಕುತಂತ್ರ. ದಲಿತರು ಪರಸ್ಪರ ಹೊಡೆದಾಡುತ್ತಿದ್ದರೆ ಅವರಿಗೆ ಲಾಭವಿದೆ. ತಮಗೆ ನೀಡಿರುವ ಕೈಗಾರಿಕಾ ನಿವೇಶನದಲ್ಲಿ ನಾರಾಯಣಸ್ವಾಮಿ ಇಷ್ಟು ಹೊತ್ತಿಗೆ ಶೇ.51ರಷ್ಟು ಭೂಮಿಯ ಬಳಕೆ ಮಾಡಿಕೊಳ್ಳಬೇಕಾಗಿತ್ತು.

ಆದರೆ ಅವರು ಕೇವಲ ಶೇಕಡ 5ರಷ್ಟು ಭೂಮಿಯಲ್ಲಿ ಕಾಟಾಚಾರಕ್ಕೆ ಶೆಡ್ ಹಾಕಿ, 'ಬಾಡಿಗೆಗೆ ಇದೆ' ಎಂದು ಬೋರ್ಡ್ ನೇತು ಹಾಕಿದ್ದಾರೆ. ಇಂಥ ಲಜ್ಜೆಗೆಟ್ಟ ವ್ಯಕ್ತಿ ದೇಶದ ನೇತಾರರಲ್ಲಿ ಒಬ್ಬರಾದ ಮಲ್ಲಿಕಾರ್ಜುನ ಖರ್ಗೆ ಅವರ ವಿರುದ್ಧ ಮಾತನಾಡುವ ದುಸ್ಸಾಹಸ ಮಾಡುತ್ತಿದ್ದಾರೆ ಎಂದು ಅವರು ಹರಿಹಾಯ್ದರು.

ನಾರಾಯಣಸ್ವಾಮಿ 2006ರಲ್ಲಿ 'ಬೃಂದಾವನ್ ಸಾಫ್ಟ್‌ವೇರ್' ಎನ್ನುವ ಕಂಪನಿ ಶುರು ಮಾಡುವುದಾಗಿ ಭೂಮಿ ಪಡೆದುಕೊಂಡರು. ಆ ಮೇಲೆ ಅಲ್ಲಿ ಅದೇ ಹೆಸರಿನ ಗಾರ್ಮೆಂಟ್ಸ್ ಕಾರ್ಖಾನೆ ಆರಂಭಿಸುತ್ತೇನೆ ಎಂದರು. ಬಳಿಕ ಗೋದಾಮು ಮಾಡುತ್ತೇನೆಂದರು. ಅವರು ಕಾಲಕಾಲಕ್ಕೆ ಬೇರೆಬೇರೆ ಉದ್ದೇಶಕ್ಕೆ ಬದಲಿಸಿಕೊಂಡರೇ ವಿನಾ ಏನನ್ನೂ ದಡ ಮುಟ್ಟಿಸಲಿಲ್ಲ. ಇದಾದ ಮೇಲೆ ಸರ್ಕಾರವು ನಿಯಮದಂತೆ 2016ರ ನ.11ರಂದು ಜಮೀನನ್ನು ವಾಪಸ್ ಪಡೆಯಲು ಆದೇಶಿಸಿತು. ಇದರ ವಿರುದ್ಧ ಹೈಕೋರ್ಟಿಗೆ ಹೋಗಿ ತಡೆಯಾಜ್ಞೆ ತಂದ ಈ ವ್ಯಕ್ತಿ, ಈಗ ಪುಕ್ಕಟೆ ಪ್ರಚಾರಕ್ಕೆ ಇಳಿದಿದ್ದಾರೆ ಎಂದು ಅವರು ವಿವರಿಸಿದರು.

ನಾರಾಯಣಸ್ವಾಮಿ ರಾಜಕೀಯದಲ್ಲಿ ಮೇಲಕ್ಕೆ ಬರಲು ಖರ್ಗೆಯವರೇ ಕಾರಣರು. ಅವರು ರೈಲ್ವೆ ಸಚಿವರಾಗಿದ್ದಾಗ ಈ ವ್ಯಕ್ತಿಯನ್ನು ರೈಲ್ವೆ ಬಳಕೆದಾರರ ಸಮಿತಿಯ ಅಧ್ಯಕ್ಷರನ್ನಾಗಿ ಮಾಡಿ, ರೈಲ್ವೆ ಭವನದಲ್ಲಿ ಕಚೇರಿ ಕೂಡ ಕೊಟ್ಟಿದ್ದರು. ಆದರೂ ನಾರಾಯಣಸ್ವಾಮಿ ಉಂಡ ಮನೆಗೆ ಎರಡು ಬಗೆಯುತ್ತಿದ್ದಾರೆ. ಹೀಗೆ ಮಾತನಾಡಿದರೆ ಬಿಜೆಪಿಯಲ್ಲಿ ಇನ್ನೂ ಮೇಲೇರಬಹುದು ಎನ್ನುವ ಭ್ರಮೆಯಲ್ಲಿ ಅವರಿರಬಹುದು ಎಂದು ಪಾಟೀಲ್ ಕುಟುಕಿದ್ದಾರೆ.

ಮುರುಗೇಶ ನಿರಾಣಿ ಹಿಂದೆ ಕೈಗಾರಿಕಾ ಸಚಿವರಾಗಿದ್ದಾಗ ಬಾಗಲಕೋಟೆಯ ನವನಗರ ಕೈಗಾರಿಕಾ ಪ್ರದೇಶದಲ್ಲಿ 2012ರ ಮಾರ್ಚ್ 12ರಂದು ತಮಗೆ ತಾವೇ 25 ಎಕರೆ ಕೊಟ್ಟುಕೊಂಡು, ಅಲ್ಲಿ ತೇಜಸ್ ಇಂಟರ್‌ನ್ಯಾಷನಲ್ ಸ್ಕೂಲ್ ಕಟ್ಟಿದ್ದಾರೆ. ಅದು ಆಗ್ರೋಟೆಕ್ ಪಾರ್ಕ್‌ಗೆ ಮೀಸಲಾಗಿದ್ದ ಜಾಗ. ಆಮೇಲೆ ಪುನಃ ಕೈಗಾರಿಕಾ ಸಚಿವರಾದಾಗ ಕೂಡ 2022ರ ಡಿ.19ರಂದು ಅಲ್ಲೇ ಮತ್ತೆ 6.17 ಎಕರೆ ತೆಗೆದುಕೊಂಡು, ತಮಗೆ ತಾವೇ ಅಭಿನಂದನಾ ಪತ್ರ ಬರೆದುಕೊಂಡಿದ್ದಾರೆ. ಇಂಟರ್ನೆಟ್ ಜಾಲಾಡಿದರೆ ಇವರೆಲ್ಲರ ಜಾತಕ ಬಯಲಾಗುತ್ತದೆ ಎಂದು ಎಂ.ಬಿ ಪಾಟೀಲ್ ಅಂಕಿಅಂಶಗಳ ಸಹಿತ ವಿವರಿಸಿದರು.

ಇವರು ಹೇಳುವ ಹಾಗೆ ಈ ನಿವೇಶನಕ್ಕೆ 72 ಅರ್ಜಿ ಬಂದಿರಲಿಲ್ಲ. ಬಂದಿದ್ದು ಕೇವಲ 6 ಅರ್ಜಿ. ಅದರಲ್ಲಿ ಮೂರು ವಸತಿ ಉದ್ದೇಶದ್ದು. ಅಲ್ಲಿ ಈಗಾಗಲೇ ಅಂತಹ ಉದ್ದೇಶಕ್ಕೆ ಕೊಟ್ಟಿದ್ದರಿಂದ ಅವುಗಳನ್ನು ತಿರಸ್ಕರಿಸಲಾಗಿದೆ. ಉಳಿದಂತೆ ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರಕ್ಕೆ ಅರ್ಜಿ ಬಂದಿದ್ದರೂ ಸಮರ್ಪಕ ದಾಖಲೆ ಸಲ್ಲಿಸಿರಲಿಲ್ಲ. ಇನ್ನು ಉಳಿದಿದ್ದು ರಾಹುಲ್ ಮಾತ್ರ. ಇವರು ಎಲ್ಲ ರೀತಿಯಲ್ಲೂ ಸಮರ್ಥರಿದ್ದು, ಸಾಮಾನ್ಯ ವರ್ಗದ ಕೋಟಾದಲ್ಲೂ ಅವರು ಅರ್ಹರಾಗಿದ್ದರು ಎಂದು ತಿರುಗೇಟು ನೀಡಿದರು.

ಆರೆಸ್ಸೆಸ್ ಅಂಗವಾಗಿರುವ ರಾಷ್ಟ್ರೋತ್ಥಾನ ಪರಿಷತ್ತಿಗೆ ಹೈಟೆಕ್ ಡಿಫೆನ್ಸ್ ಪಾರ್ಕಿನಲ್ಲಿ ವಿವಿಧೋದ್ದೇಶ ವಾಣಿಜ್ಯ ಸಂಕೀರ್ಣಕ್ಕೆಂದು 2013ರಲ್ಲಿ 5 ಎಕರೆ ಕೊಡಲಾಗಿದೆ. ಇದುವರೆಗೂ ಅವರು ಅಲ್ಲಿ ಏನೂ ಮಾಡಿಲ್ಲ. ಕೋವಿಡ್ ನೆವ ಹೇಳಿಕೊಂಡು ಮತ್ತೆ ಮತ್ತೆ ಕಾಲಾವಕಾಶ ಕೇಳಿಕೊಂಡು ಬಂದಿದ್ದಾರೆ.

ಚಾಣಕ್ಯ ವಿ.ವಿ.ಯದೂ ಇದೇ ಕತೆಯಾಗಿದೆ. 2025ರ ಜೂನ್ ಒಳಗೆ ಅವರು 116 ಎಕರೆಯಲ್ಲಿ ಕನಿಷ್ಠ ಶೇ.51ರಷ್ಟು ಜಾಗವನ್ನು ಬಳಕೆ ಮಾಡದಿದ್ದರೆ ಉಳಿದ ಜಾಗವನ್ನು ವಾಪಸ್ ತೆಗೆದುಕೊಳ್ಳಲಾಗುವುದು ಎಂದು ಪಾಟೀಲ ಹೇಳಿದ್ದಾರೆ.

ಚಾಣಕ್ಯ ವಿವಿಗೂ ಕೇವಲ 50 ಕೋಟಿಗೆ ಈ ಜಮೀನು ನೀಡಿದ್ದು, ಇದರಿಂದ ಕೆಐಎಡಿಬಿಗೆ 137 ಕೋಟಿ ರೂಪಾಯಿ ನಷ್ಟ ಆಗಿದೆ. ಇದರ ವಿರುದ್ಧ ಏಕೆ ನಾರಾಯಣಸ್ವಾಮಿ ರಾಜ್ಯಪಾಲರಿಗೆ ದೂರು ನೀಡಿಲ್ಲ ಎಂದು ಸಚಿವರು ಪ್ರಶ್ನಿಸಿದರು

## ಮೈಸೂರು ಚಿತ್ರಮಂದಿರಗಳಲ್ಲಿ

| | |
|---|---|
| **ಪದ್ಮ ಚಿತ್ರಮಂದಿರ** | (ದೂ: 2521923) |
| ಮಿ. ಬಚ್ಚನ್ (ತೆ) | 4 ಪ್ರದರ್ಶನಗಳು |
| **ವುಡ್‌ಲ್ಯಾಂಡ್ಸ್ ಚಿತ್ರಮಂದಿರ** | (ದೂ: 2422871) |
| ರಾಯನ್ (ತ) | 4 ಪ್ರದರ್ಶನಗಳು |
| **ಬಾಲಾಜಿ ಚಿತ್ರಮಂದಿರ** | (ದೂ: 2497199) |
| ಭೀಮಾ (ಕ) | 4 ಪ್ರದರ್ಶನಗಳು |
| **ಮಹದೇಶ್ವರ ಚಿತ್ರಮಂದಿರ** | (ಮೊ:9900820093) |
| ಕರಿಯ (ಕ) | 4 ಪ್ರದರ್ಶನಗಳು |
| **ಗಾಯಿತ್ರಿ** | |
| ಭೀಮಾ (ಕ) | 4 ಪ್ರದರ್ಶನಗಳು |
| **ರಾಜಕಮಲ್** | |
| ಸರಿಪೋದಾ ಶನಿವಾರಂ (ತೆ) | 4 ಪ್ರದರ್ಶನಗಳು |
| **ಸಂಗಂ** | |
| ಭೀಮಾ (ಕ) | 4 ಪ್ರದರ್ಶನಗಳು |
| **ಲಿಡೋ** | |
| ಗೌರಿ (ಕ) | 4 ಪ್ರದರ್ಶನಗಳು |
| **ತಿಬ್ಬಾದೇವಿ** | |
| ಸ್ತ್ರೀ–2 (ಹಿ) | 4 ಪ್ರದರ್ಶನಗಳು |
| **ಪ್ರಭಾ** | |
| ಅಹೋ ವಿಕ್ರಮಾರ್ಕ (ಕ) | 4 ಪ್ರದರ್ಶನಗಳು |

### ಡಿಆರ್‌ಸಿ ಸಿನಿಮಾಸ್
ದೂ : 4240422/4241800

| | |
|---|---|
| ಸ್ಕ್ರೀನ್ 1 | ವಾಝಾ ಬಯೋಪಿಕ್ ಆಫ್ ಎ ಬಿಲಿಯನ್ ಬಾಯ್ಸ್ (ಮ): ಬೆ.10.20ಕ್ಕೆ, ಕೃಷ್ಣಂ ಪ್ರಣಯ ಸಖಿ (ಕ): ಮ.12.55ಕ್ಕೆ, ಸಂ.4ಕ್ಕೆ, ಸರಿಪೋದಾ ಶನಿವಾರಂ (ತೆ): ರಾ.7.10ಕ್ಕೆ, ರಾ.10.30ಕ್ಕೆ. |
| ಸ್ಕ್ರೀನ್ 2 | ಪೆಪೆ (ಕ): ಬೆ.11ಕ್ಕೆ, ಸಂ.4.30ಕ್ಕೆ, ಸ್ತ್ರೀ 2 (ಹಿಂ): ಮ.1.30ಕ್ಕೆ, ರಾ.7ಕ್ಕೆ, ರಾ.10ಕ್ಕೆ. |
| ಸ್ಕ್ರೀನ್ 3 | ಅಫ್ರೇಡ್ (ಇಂ): ಬೆ.11.30ಕ್ಕೆ, ರಾ.10ಕ್ಕೆ, ಕೊಟೇಷನ್ ಗ್ಯಾಂಗ್ ಪಾರ್ಟ್ 1 (ತ): ಮ.1.30ಕ್ಕೆ, ಸರಿಪೋದಾ ಶನಿವಾರಂ (ತೆ): ಸಂ.4ಕ್ಕೆ, ಲಾಫಿಂಗ್ ಬುದ್ಧ (ಕ): ರಾ.7.20ಕ್ಕೆ. |
| ಸ್ಕ್ರೀನ್ 4 | ಕೃಷ್ಣಂ ಪ್ರಣಯ ಸಖಿ (ತ): ಬೆ.10.05ಕ್ಕೆ, ರಾ.7.05ಕ್ಕೆ, ರಾ.10.10ಕ್ಕೆ, ಭೀಮಾ (ಕ): ಮ.1.15ಕ್ಕೆ, ಅಹೋ ವಿಕ್ರಮಾರ್ಕ (ತೆ): ಸಂ.4.15ಕ್ಕೆ. |

### ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

| | |
|---|---|
| ಸ್ಕ್ರೀನ್ 1 | ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ. |
| ಸ್ಕ್ರೀನ್ 2 | ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ. |
| ಸ್ಕ್ರೀನ್ 3 | ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ. |
| ಸ್ಕ್ರೀನ್ 4 | ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ. |

### ಮೈಸೂರು ವಿಷನ್ ಸಿನಿಮಾ
ದೂ : 0821–2973519

| | |
|---|---|
| ಸ್ಕ್ರೀನ್ 1 | ಕೃಷ್ಣಂ ಪ್ರಣಯ ಸಖಿ (ಕ): ಬೆ.10.30ಕ್ಕೆ, ಪೆಪೆ (ಕ): ಮ.1.35ಕ್ಕೆ, ಲಾಫಿಂಗ್ ಬುದ್ಧ (ಕ): ಸಂ.4.05ಕ್ಕೆ, ವಾಝಾ ಬಯೋಪಿಕ್ ಆಫ್ ಎ ಬಿಲಿಯನ್ ಬಾಯ್ಸ್ (ಮ): ಸಂ.6.45ಕ್ಕೆ, ಸ್ತ್ರೀ 2 (ಹಿಂ): ರಾ.9.15ಕ್ಕೆ. |
| ಸ್ಕ್ರೀನ್ 2 | ಕೃಷ್ಣಂ ಪ್ರಣಯ ಸಖಿ (ಕ): ಮ.12.30ಕ್ಕೆ, ಸಂ.6.25ಕ್ಕೆ, ರಾ.9.30ಕ್ಕೆ, ಭೀಮಾ (ಕ): ಮ.3.35ಕ್ಕೆ. |
| ಸ್ಕ್ರೀನ್ 3 | ಭೀಮಾ (ಕ): ಮ.12.45ಕ್ಕೆ, ಕೃಷ್ಣಂ ಪ್ರಣಯ ಸಖಿ (ಕ): ಮ.3.45ಕ್ಕೆ, ಸ್ತ್ರೀ 2 (ಹಿಂ): ಸಂ.6.45ಕ್ಕೆ, ದೇವಧೂತನ್ (ಮ): ರಾ.9.30ಕ್ಕೆ. |
| ಸ್ಕ್ರೀನ್ 4 | ಪೆಪೆ (ಕ): ಬೆ.10.40ಕ್ಕೆ, ಮ.3.45ಕ್ಕೆ, ಅಹೋ ವಿಕ್ರಮಾರ್ಕ (ತೆ): ಮ.1.05ಕ್ಕೆ, ಸರಿಪೋದಾ ಶನಿವಾರಂ (ತೆ): ಸಂ.6.15ಕ್ಕೆ, ರಾ.9.30ಕ್ಕೆ. |

### ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

## ಮಾರುಕಟ್ಟೆಗೆ ಬಂದಿವೆ ಬಣ್ಣ ಬಣ್ಣದ ಗೌರಿ–ಗಣೇಶ ಮೂರ್ತಿಗಳು



ಮೈಸೂರು, ಆ.29(ಆರ್‌ಕೆ)–ಗೌರಿ–ಗಣೇಶ ಹಬ್ಬ ಸಮೀಪಿಸುತ್ತಿರುವಂತೆಯೇ ಮೈಸೂರು ನಗರದಾದ್ಯಂತ ಗೌರಿ–ಗಣಪತಿ ಮೂರ್ತಿಗಳನ್ನು ಮಾರಾಟಕ್ಕಿಡಲಾಗಿದೆ.

ಪುಟ್ಟ ಗಣಪನಿಂದ ಬೃಹದಾಕಾರದ ವಿವಿಧ ರೂಪದ ವರ್ಣರಂಜಿತ ಮಣ್ಣಿನಿಂದ ಮಾಡಿದ ಸುಂದರ ಮೂರ್ತಿಗಳನ್ನು ಕಳೆದ ನಾಲ್ಕೈದು ದಿನಗಳಿಂದಲೇ ಪ್ರಮುಖ ರಸ್ತೆ, ಸರ್ಕಲ್, ಸಾರ್ವಜನಿಕ ಸ್ಥಳಗಳಲ್ಲಿ ಪ್ರದರ್ಶಿಸಲಾಗುತ್ತಿದೆ.

ವಿವಿ ಮೊಹಲ್ಲಾದ ಟೆಂಪಲ್ ರಸ್ತೆ, ಅಗ್ರಹಾರ ಸರ್ಕಲ್, ನಂಜುಮಳಿಗೆ ಸರ್ಕಲ್, ಹೆಬ್ಬಾಳಿನ ಸೂರ್ಯ ಬೇಕರಿ ಬಳಿ, ಎಸ್‌ಬಿಐ ಎದುರಿನ ಮಾರುಕಟ್ಟೆ, ಹೆಬ್ಬಾಳು ಮುಖ್ಯ ರಸ್ತೆ, ಮೇಟಗಳ್ಳಿ, ವಿಜಯನಗರ 4ನೇ ಹಂತದ ಬಸವನಹಳ್ಳಿ ರಸ್ತೆ, ದಟ್ಟಗಳ್ಳಿ ಸೇರಿದಂತೆ ವಿವಿಧ ಬಡಾವಣೆಗಳಲ್ಲಿ ಮೂರ್ತಿಗಳನ್ನು ಮಾರಾಟಕ್ಕೆ ಇರಿಸಲಾಗಿದೆ.

ಗಣಪತಿ ಪ್ರತಿಷ್ಠಾಪಿಸಲು ಅಲ್ಲಲ್ಲಿ ಕೆಲ ಯುವಕರ ಗುಂಪು, ವಿವಿಧ ಸೇವಾ ಸಂಘಗಳು ಸ್ಥಳ ಗುರ್ತಿಸಿ ಸಂಬಂಧಪಟ್ಟ ವಿವಿಧ ಇಲಾಖೆಗಳಿಂದ ಅನುಮತಿ ಪಡೆಯುವ ಪ್ರಕ್ರಿಯೆಯಲ್ಲಿ ತೊಡಗಿದ್ದು, ಹಿಂದಿನ ದಿನ ಹಾಗೂ ಹಬ್ಬದ ದಿನ ಗೌರಿ–ಗಣೇಶನ ಮೂರ್ತಿಗಳನ್ನು ಖರೀದಿಸುತ್ತಾರೆ. ಈ ನಡುವೆ ಪಿಓಪಿ ಗಣಪತಿ ಮೂರ್ತಿ ತಯಾರಿಸಬಾರದೆಂದು ಮೈಸೂರು ಮಹಾನಗರ ಪಾಲಿಕೆ ಸೂಚನೆ ನೀಡಿರುವುದರಿಂದ ಮಣ್ಣಿನಿಂದ ಮಾಡಿದ ಮೂರ್ತಿಗಳನ್ನು ಮಾತ್ರ ಮಾರಾಟಕ್ಕಿರಿಸಲಾಗಿದೆ. ಒಟ್ಟಾರೆ ಗೌರಿ–ಗಣೇಶ ಹಬ್ಬಕ್ಕೆ ಮೈಸೂರು ನಗರ ಸಜ್ಜಾಗುತ್ತಿದೆ.

## ಉತ್ತರ ಕ್ರಿಯಾದಿ ಆಹ್ವಾನ ಪತ್ರಿಕೆ



**ಶ್ರೀಮತಿ ಶಾರದಮ್ಮ**

ಇವರು ದಿ: 21–08–2024ರಂದು ದೈವಾಧೀನರಾದರೆಂದು ತಿಳಿಸಲು ವಿಷಾದಿಸುತ್ತೇವೆ. ತತ್ಸಂಬಂಧವಾಗಿ ಮೃತರ **ಉತ್ತರ ಕ್ರಿಯಾದಿ ಕಾರ್ಯವನ್ನು** ದಿನಾಂಕ 31–08–2024ನೇ ಶನಿವಾರ ಬೆ.11 ಗಂಟೆಗೆ ಶ್ರೀ ಮರುಳೇಶ್ವರ ದೇವಸ್ಥಾನ ಶಾಂತಿಧಾಮ ಆವರಣ, ಕಾವೇರಿ ಶಾಲೆ ಎದುರು, ಮೈಸೂರು ಇಲ್ಲಿ ಏರ್ಪಡಿಸಲಾಗಿದೆ. ತಾವುಗಳು ಆಗಮಿಸಿ ಮೃತರ ಆತ್ಮಕ್ಕೆ ಚಿರಶಾಂತಿ ಕೋರಬೇಕಾಗಿ ವಿನಂತಿ.

ದುಃಖತಪ್ತರು: ದೊಡ್ಡಮೂಗೇಗೌಡರ ದೇವೇಗೌಡರ ಕುಟುಂಬ ಮಕ್ಕಳು, ಸೊಸೆಯಂದಿರು, ಹೆಣ್ಣುಮಕ್ಕಳು, ಅಳಿಯಂದಿರು, ಮೊಮ್ಮಕ್ಕಳು ಮತ್ತು ಕುಟುಂಬವರ್ಗದವರು, ಕೆ.ಜಿ.ಕೊಪ್ಪಲು ಗ್ರಾಮಸ್ಥರು

## 6th Year Remembrance



**Dr. (Mrs.) IVY M. HANS**

22.12.1952 30.08.2018

Those we love don't go away, they walk beside us everyday. Unseen, unheard but always near, still loved, still missed and held so dear.

- Rev. Dr. P.H. Hans (Husband)
- Dr. Shwetha M. Hans (Daughter)
- Mr. Shashidhar (Son-in-law)







**IN THE COURT OF THE III ADDITIONAL SENIOR CIVIL JUDGE AND CJM AT MYSORE**

**O.S.208/2020**

**The South Indian Bank Limited Mysore Main Branch Mysore Represented by its,** Chief Branch Manager: **Sri. Kuraian Alex.**

.............PLAINTIFF

Vs

1. **Mrs. Deepa George** Aged about 41 years, W/o. Saji PV, # 110, JSS Doctors Quarters, Hosamata Road, Mysore 570004.
2. **Mr. Saji P V** Aged about 44 years, S/o Varghese, #110, JSS Doctors Quarters, Hosamata Road, Mysore 570004.
3. **Mr. George C.** (Died) S/o Cherian

....DEFENDANTS

**PAPER PUBLICATION TO THE DEFENDANTS**

1. **Mrs. Deepa George** Aged about 41 years, W/o. Mr. Saji PV, # 110, JSS Doctors Quarters, Hosamata Road, Mysore.
2. **Mr. Saji P V** Aged about 44 years, S/o. Mr. Varghese, #110, JSS Doctors Quarters, Hosamata Road, Mysore 570004.
3. **Mr.George C.** (Died) S/o Cherian.

Whereas The South Indian Bank Limited, Mysore Main Branch, Mysore has instituted a suit against you for the recovery of **Rs.8,43,457.00 /- (Rupees Eight Lakh Forty Three Thousand Four Hundred Fifty Seven only)** and interest thereon at 13.20% per annum with monthly rests from the date of filing this suit till realization. You are hereby summoned to appear in this Court (III Addl Senior Civil Judge & CJM at Mysore) in person or through a pleader duly instructed and able to answer all material questions relating to the suit on the **15h Day of October 2024** at **11.00 am** to answer the claim. Take the notice that in default of your appearance on the day above mentioned, the suit will be heard and determined in your absence.

Given under my hand and seal of this court on this the **24th Day of August 2024.**

**By Order of the Court**
**Chief Ministrial Office Court of the Senior Civil Judge and CJM, Mysuru**

**Abhinandan H,** BAL.LLM.,
Advocate for Plaintiff
Office at:- Docket Law Associates Court
# 990, 1 Floor, E&F Block,
Panchamanthra Road,
Kuvempunagara, Mysore-570023.







## ಸಾರ್ವಜನಿಕ ಪ್ರಕಟಣೆ

ಸಾರ್ವಜನಿಕರಿಗೆ ಈ ಮೂಲಕ ತಿಳಿಸುವುದೇನೆಂದರೆ ನನ್ನ ಕಕ್ಷಿದಾರರಾದ ಎಸ್.ಕಾಡಪ್ಪ ಶೆಟ್ಟಿರವರ ಮಗ ಶ್ರೀ ಕೆ.ಶಂಕರ ಶೆಟ್ಟಿರವರು ಶ್ರೀ ಹೊನ್ನೇಗೌಡ, ಶ್ರೀ ಕುಮಾರ್, ಶ್ರೀ ಗಿರಿಗೌಡ ಮತ್ತು ಶ್ರೀ ದಾಸೇಗೌಡರವರುಗಳ ಕುಟುಂಬದವರೊಂದಿಗೆ ಷೆಡ್ಯೂಲ್ ಸ್ವತ್ತುಗಳಿಗೆ ಸಂಬಂಧಿಸಿದಂತೆ ಜಂಟಿ ಅಭಿವೃದ್ಧಿ ಕರಾರು ಹೊಂದಲು ಆಸಕ್ತಿ ಉಳ್ಳವರಾಗಿರುತ್ತಾರೆ.

ಯಾವುದೇ ವ್ಯಕ್ತಿ ಅಥವಾ ವ್ಯಕ್ತಿಗಳು ಕ್ರಯ, ದಾನ, ಭೋಗ್ಯ, ಅಡಮಾನ ಅನುವಂಶೀಯತೆ, ವಿಲ್, ಪಾಲುದಾರಿಕೆ. ಬಾಡಿಗೆ, ಪರವಾನಗಿ ಅಥವಾ ಮತ್ಯಾವುದೇ ರೀತಿಯಲ್ಲಿ ಅನುಸೂಚಿ ಸ್ವತ್ತುಗಳಿಗೆ ಸಂಬಂಧಿಸಿದಂತೆ ಹಕ್ಕು ಅಥವಾ ಆಸಕ್ತಿ ಹೊಂದಿದ್ದಲ್ಲಿ ಸದರಿ ವ್ಯಕ್ತಿಯು ನನ್ನ ಈ ಕೆಳಗಿನ ವಿಳಾಸಕ್ಕೆ ದಾಖಲಾತಿಗಳೊಂದಿಗೆ ಈ ದಿನದಿಂದ 14 ದಿನಗಳ ಒಳಗಾಗಿ ಸಂಪರ್ಕಿಸಲು ತಿಳಿಸಿದೆ. ತಪ್ಪಿದ್ದಲ್ಲಿ ಯಾವುದೇ ವ್ಯಕ್ತಿಗಳಿಗೂ ಅನುಸೂಚಿ ಸ್ವತ್ತುಗಳಿಗೆ ಸಂಬಂಧಿಸಿದಂತೆ ಯಾವುದೇ ಹಕ್ಕು ಅಥವ ಆಸಕ್ತಿ ಇಲ್ಲವೆಂದು ಪರಿಗಣಿಸಲಾಗುವುದು ಮತ್ತು ನನ್ನ ಕಕ್ಷಿದಾರರು ಜಂಟಿ ಅಭಿವೃದ್ಧಿ ಕರಾರು ಮಾಡಿಕೊಳ್ಳುವರು.

ಅನುಸೂಚಿ ಸ್ವತ್ತು

ಮೈಸೂರು ತಾಲ್ಲೂಕು, ಇಲವಾಲ ಹೋಬಳಿ, ಗೋಹಳ್ಳಿ ಗ್ರಾಮಕ್ಕೆ ಸೇರಿದ ಜಮೀನಿನ ಸರ್ವೇ ನಂ. 57/3ರ ವಿಸ್ತೀರ್ಣ 22 ಗುಂಟೆ, ಸರ್ವೆ ನಂ. 57/4ರ ವಿಸ್ತೀರ್ಣ 1 ಎಕರೆ 4 ಗುಂಟೆ, ಸರ್ವೇ ನಂ. 57/5ರ ವಿಸ್ತೀರ್ಣ 22 ಗುಂಟೆ ಮತ್ತು ಸರ್ವೇ ನಂ. 57/6ರ ವಿಸ್ತೀರ್ಣ 22 ಗುಂಟೆ ಜಮೀನುಗಳ ಸ್ವತ್ತು.

ಐಟಂ ನಂ. 1 : ಚೆಕ್ಕುಬಂದಿ: ಸರ್ವೇ ನಂ. 57/3 ; ಪೂರ್ವಕ್ಕೆ: ಲಾ.ಹಿ.ನಂ. 56 ; ಪಶ್ಚಿಮಕ್ಕೆ: ಲಾ.ಹಿ.ನಂ. 59; ಉತ್ತರಕ್ಕೆ: ಬ್ಲಾಕ್ ನಂ. 1 ; ದಕ್ಷಿಣಕ್ಕೆ: ಬ್ಲಾಕ್ ನಂ. 1.

ಐಟಂ ನಂ. 2 : ಚೆಕ್ಕುಬಂದಿ: ಸರ್ವೇ ನಂ. 57/4 ; ಪೂರ್ವಕ್ಕೆ: ಸರ್ಕಾರಿ ಖರಾಬು & ಬೀರೇಗೌಡರವರ ಜಮೀನು ; ಪಶ್ಚಿಮಕ್ಕೆ: ಮಹೇಶರವರ ಜಮೀನು ; ಉತ್ತರಕ್ಕೆ: ಕೃಷ್ಣೇಗೌಡರವರ ಜಮೀನು ; ದಕ್ಷಿಣಕ್ಕೆ: ನಾರಾಯಣಗೌಡರವರ ಜಮೀನು.

ಐಟಂ ನಂ. 3 : ಚೆಕ್ಕುಬಂದಿ: ಸರ್ವೇ ನಂ. 57/5 ; ಪೂರ್ವಕ್ಕೆ: ಲಾ.ಹಿ. 56 ; ಪಶ್ಚಿಮಕ್ಕೆ: ಲಾ.ಹಿ. 59 ; ಉತ್ತರಕ್ಕೆ: ಬ್ಲಾಕ್ ನಂ. 1 ; ದಕ್ಷಿಣಕ್ಕೆ: ಬ್ಲಾಕ್ ನಂ. 1.

ಐಟಂ ನಂ. 4 : ಚೆಕ್ಕು ಬಂದಿ: ಸರ್ವೇ ನಂ. 57/6 ; ಪೂರ್ವಕ್ಕೆ: ಕೆಂಚೇಗೌಡರವರ ಜಮೀನು ; ಪಶ್ಚಿಮಕ್ಕೆ: ಪುಟ್ಟಗಿರಿಗೌಡರವರ ಜಮೀನು ; ಉತ್ತರಕ್ಕೆ: ವೆಂಕಟೇಶ್‌ರವರ ಪಾಲಿಗೆ ಬಂದಂತಹ ಸ್ವತ್ತು ; ದಕ್ಷಿಣಕ್ಕೆ: ಕೃಷ್ಣೇಗೌಡರವರ ಜಮೀನು.

ಸಹಿ/– ಶ್ರೀ ಎಮ್.ಎಸ್. ಜಿನಚಂದ್ರನ್,
B.Sc., LL.B., ವಕೀಲರು, # 1206/A,
CH-31/A, 1ನೇ ಮಹಡಿ, ನ್ಯೂ ಕಾಂತ ರಾಜ್ ಅರಸ್ ರಸ್ತೆ, ಬಲ್ಲಾಳ್ ವೃತ್ತದ ಹತ್ತಿರ,
ಚಾಮರಾಜಪುರಂ, ಮೈಸೂರು–570005.
Mob: 9986139767

ದಿನಾಂಕ: 28–8–2024
ಸ್ಥಳ: ಮೈಸೂರು



**ಸ್ಥಾಪನೆ: 2015 Regd. No. 42540 Mob: 8904771073**

## ದಿ ಭಾವಸಾರ ಕ್ಷತ್ರಿಯ ಹೌಸಿಂಗ್ ಕೋ–ಆಪರೇಟಿವ್ ಸೊಸೈಟಿ ಲಿ.,

ನಂ. 279, ಬೆಂಕಿನವಾಬ ರಸ್ತೆ, ಮಂಡಿ ಮೊಹಲ್ಲಾ, ಮೈಸೂರು–570021

**ಆಹ್ವಾನ ಪತ್ರಿಕೆ**

ಮೇಲ್ಕಂಡ ನಮ್ಮ ಸಂಘದ 2023–24ನೇ ಸಾಲಿನ 9ನೇ ವಾರ್ಷಿಕ ಮಹಾಸಭೆಯನ್ನು ದಿ. 1-9-2024ನೇ ಭಾನುವಾರ ಸಂಜೆ 6 ಗಂಟೆಗೆ ಲಷ್ಕರ್ ಮೊಹಲ್ಲಾದ ಕಬೀರ್ ರಸ್ತೆಯಲ್ಲಿ ರುವ "ಶ್ರೀ ಪಾಂಡುರಂಗ ವಿಠ್ಠಲಸ್ವಾಮಿ" ದೇವಸ್ಥಾನದ ಆವರಣ ಮೈಸೂರು, ಇಲ್ಲಿ ಸಂಘದ ಅಧ್ಯಕ್ಷರಾದ ಶ್ರೀ ಆರ್.ವಿ. ಶಿವಾಜಿರಾವ್ ರಂಪೊರೆರವರ ಘನ ಅಧ್ಯಕ್ಷತೆಯಲ್ಲಿ ನಡೆಸಲು ನಿರ್ದೇಶಕ ಮಂಡಳಿಯು ತೀರ್ಮಾನಿಸಿದೆ. ಎಲ್ಲಾ ಸದಸ್ಯರಿಗೂ ಆಹ್ವಾನ ಪತ್ರಿಕೆಯನ್ನು ಕಳುಹಿಸಲಾಗಿದ್ದು, ಪತ್ರಿಕೆ ತಲುಪದೇ ಇದ್ದಲ್ಲಿ ಇದೇ ಆಹ್ವಾನ ಪತ್ರಿಕೆ ಎಂದು ತಿಳಿದು ದಯಮಾಡಿ ಸದರಿ ಮಹಾಸಭೆಯಲ್ಲಿ ಭಾಗವಹಿಸಬೇಕಾಗಿ ವಿನಂತಿ.

ಸಹಿ/– ಆಡಳಿತ ಮಂಡಳಿಯ ಆದೇಶದ ಮೇರೆಗೆ,
ಶ್ರೀ ಆರ್.ವಿ. ಶಿವಾಜಿರಾಜ್ ರಂಪೊರೆ, ಅಧ್ಯಕ್ಷರು

ಸಹಿ/–ಕಾರ್ಯದರ್ಶಿ



## ಸಾರ್ವಜನಿಕ ಪ್ರಕಟಣೆ

ಮೈಸೂರು ಜಿಲ್ಲೆ, ಮೈಸೂರು ತಾಲೂಕು, ಜಂತಗಳ್ಳಿಯಲ್ಲಿರುವ ಸರ್ವೆ ನಂ. 105ರ 7 ಎಕರೆ 2 ಗುಂಟೆ ಜಮೀನು ಶ್ರೀ ವೆಂಕಟರಮಣ ಭಟ್ ಬಿನ್ ರಮಣ ಭಟ್‌ರವರ ಸಂಪೂರ್ಣ ಮಾಲೀಕತ್ವಕ್ಕೆ ಒಳಪಟ್ಟ ಸ್ವತಾಗಿರುತದೆ. ಸದರಿ ಸ್ವತ್ತನ್ನು ಶ್ರೀ ವೆಂಕಟರಮಣ ಭಟ್ ಅವರಿಂದ ನಂ. 138, 1ನೇ ಮುಖ್ಯ ರಸ್ತೆ, 9ನೇ ಅಡ್ಡ ರಸ್ತೆ, ಕೆ.ಆರ್.ಪುರಂ, ಬೆಂಗಳೂರು ಇಲ್ಲಿ ವಾಸವಾಗಿರುವ ಶ್ರೀ ಕಾಡೇಗೌಡನ ಮಗನಾದ ಶ್ರೀ ಕೆ.ನಾಗರಾಜ್ ರವರು ಖರೀದಿ ಮಾಡುತ್ತಿದ್ದಾರೆ.

ಆದುದರಿಂದ ಈ ಸದರಿ ಸರ್ವೆ ನಂ. 105ರಲ್ಲಿನ 7 ಎಕರೆ 2 ಗುಂಟೆ ಜಮೀನಿಗೆ ಸಂಬಂಧಿಸಿದಂತೆ ಶ್ರೀ ವೆಂಕಟರಮಣ ಭಟ್‌ರವರನ್ನು ಬಿಟ್ಟು ಮೇಲೆ ಯಾರಾದರೂ ಕಾನೂನುಬದ್ಧ ಹಿತಾಸಕ್ತಿಯನ್ನು ಹೊಂದಿರುವ ಸಾರ್ವಜನಿಕರಾಗಲಿ ಅಥವಾ ಯಾವುದೇ ವ್ಯಕ್ತಿಗಳಾಗಲಿ, ಸಂಬಂಧಿಕರಾಗಲಿ, ಏನಾದರೂ ಸದರಿ ಸ್ವತ್ತಿನ ಮೇಲೆ ಕಾನೂನುಬದ್ಧ ಹಕ್ಕುಳ್ಳಂತವರಿಂದ ತಂಟೆ ತಕರಾರು ಅಥವಾ ಆಕ್ಷೇಪಣೆ ಇದ್ದಲ್ಲಿ ಸದರಿ ಸ್ವತ್ತನ್ನು ಖರೀದಿಸುತಿರುವವರ ಈ ಕೆಳಕಂಡ ಮೊ. ಸಂಖ್ಯೆಗೆ ಕರೆಮಾಡಿ ತಮ್ಮ ಆಕ್ಷೇಪಣೆಯನ್ನು 10 ದಿನಗಳೊಳಗಾಗಿ ತಿಳಿಸತಕ್ಕದ್ದು.

ಒಂದು ವೇಳೆ ಯಾವುದೇ ಆಕ್ಷೇಪಣೆ ಅಥವಾ ತಂಟೆ ತಕರಾರು ಬಾರದೇ ಇದ್ದ ಪಕ್ಷದಲ್ಲಿ ಖರೀದಿದಾರರು ಸದರಿ ಸ್ವತ್ತಿಗೆ ಸಂಬಂಧಿಸಿದಂತೆ ಯಾರಿಂದಲೂ ಆಕ್ಷೇಪಣೆ ಇಲ್ಲವೆಂದು ಪರಿಗಣಿಸಿ ತಮ್ಮ ವಕೀಲರ ಮೂಲಕ ಸದರಿ ಸ್ವತ್ತಿನ ಶುದ್ಧಕ್ರಯಕ್ಕೆ ಬೇಕಾದ ಕಾನೂನುಬದ್ಧ ಕ್ರಮಗಳನ್ನು ಕೈಗೊಳ್ಳುತ್ತಾರೆ.

**ಸಹಿ/– ಜಯತೀರ್ಥ, ವಕೀಲರು**
ಎಲ್‌ಐಜಿ 78, 2ನೇ ಮಹಡಿ, ಮೊದಲನೆ ಹಂತ, ಕುವೆಂಪುನಗರ, ಮೈಸೂರು.
ಮೊ.8088132823, 8971367878



## ಮೈಸೂರು ಮತ್ತು ಚಾಮರಾಜನಗರ ಜಿಲ್ಲಾ ಪೊಲೀಸ್ ಸಹಕಾರ ಸಂಘ ನಿಯಮಿತ (ರಿ.),

ಪೊಲೀಸ್ ಅಧೀಕ್ಷಕರ ಕಛೇರಿ ಆವರಣ, ಜಲಪುರಿ, ಮೈಸೂರು – 570019.

**ವಾರ್ಷಿಕ ಮಹಾಸಭೆ ಆಹ್ವಾನ ಪತ್ರಿಕೆ**

ಮೈಸೂರು ಮತ್ತು ಚಾಮರಾಜನಗರ ಜಿಲ್ಲಾ ಪೊಲೀಸ್ ಸಹಕಾರ ಸಂಘದ 2023–24ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯನ್ನು ದಿನಾಂಕ 31.08.2024ರಂದು ಶನಿವಾರ ಬೆಳಗ್ಗೆ 11:00 ಗಂಟೆಗೆ ಸಂಘದ ಅಧ್ಯಕ್ಷರಾದ ಶ್ರೀ ವಿಷ್ಣುವರ್ಧನ ಎನ್ IPS ಪೊಲೀಸ್ ಅಧೀಕ್ಷಕರು, ಮೈಸೂರು ಜಿಲ್ಲೆರವರ ಅಧ್ಯಕ್ಷತೆಯಲ್ಲಿ ಜಿಲ್ಲಾ ಪೊಲೀಸ್ ಅಧೀಕ್ಷಕರ ಕಛೇರಿ ಸಭಾಂಗಣ ಜಲಪುರಿ, ಮೈಸೂರಿನಲ್ಲಿ ನಡೆಸಲಾಗುತ್ತಿದ್ದು, ಮಹಾಸಭೆಯ ಆಹ್ವಾನ ಪತ್ರಿಕೆಯನ್ನು ಈಗಾಗಲೇ ಪ್ರತೀ ಸದಸ್ಯರುಗಳಿಗೆ ಠಾಣಾವಾರು ಕಳುಹಿಸಲಾಗಿರುತ್ತದೆ. ಮಾನ್ಯ ಸದಸ್ಯರುಗಳಿಗೆ ಆಹ್ವಾನ ಪತ್ರಿಕೆ ತಲುಪದಿದ್ದಲ್ಲಿ ಅನ್ಯತಾ ಭಾವಿಸದೇ ಇದೇ ಆಹ್ವಾನ ಪತ್ರಿಕೆ ಎಂದು ತಿಳಿದು ಮಹಾಸಭೆಗೆ ಹಾಜರಾಗಬೇಕೆಂದು ಕೋರಲಾಗಿದೆ.

ಆಡಳಿತ ಮಂಡಳಿ ಅಪ್ಪಣೆ ಮೇರೆ

ಸಹಿ/– ಸುರೇಶ ಟಿ ಎಸ್, ಮುಖ್ಯಕಾರ್ಯನಿರ್ವಹಣಾಧಿಕಾರಿ

**IN THE COURT OF THE HON'BLE I ADDL., SENIOR CIVIL JUDGE & CJM AT MYSURU**

**O.S. NO. 1464 OF 2023**

Plaintiffs : Smt. Nanjamma and Others

V/s

Defendants : 1. Sri.Mahadevu S/o Nanjaiah @ Sotthigegowda Aged about 75 Years
3. Smt. Lakshmi D/o Mahadevu Aged about 48 years,
5. Sri. Lokesh, S/o Mahadevu Aged about 40 years,
6. Sri. Chandra, S/o Mahadevu, Aged about 43 years, All are Residing at: D.No. 301/4, Kurubara Beedi, Kadakola Village, Jayapura Hobli, Mysore.

**PAPER PUBLICATION**

Whereas, the above plaintiffs have filed the above suit against the defendants seeking the relief of Partition & Separate Possession hence the Defendant No.1, 3, 5 and 6 are hereby directed to appear before this Hon'ble Court either in person or through your counsel on dated 27.09.2024 at 11 A.M, failure of which, the same will be heard and disposed off exparte.

Given under my hand and seal of the court on this 27th day of August 2024 at Mysuru.

**Advocate for Plaintiffs**
**V.S.Divya.** B.A. Bed.,LL.B,
**Advocate KAR 86/2020**

**BY ORDER OF THE COURT**
**Chief Ministerial Officer**
**Court of Senior Civil Judge and CJM., Mysuru**

No.649, 2nd cross, Kashipathi Agrahara, Mysuru. Mob: 9164225709.

ಯೋಜನಾ ಸಮನ್ವಯಾಧಿಕಾರಿ,
**ಸಮಗ್ರ ಬುಡಕಟ್ಟು ಅಭಿವೃದ್ಧಿ ಯೋಜನೆ,**
ಮೈಸೂರು ಜಿಲ್ಲೆ, ಮೈಸೂರು.
E-Mail ID:itdpmysuru@gmail.com
ದಿನಾಂಕ: 27.08.2024

**ಇಂಗ್ಲೀಷ್ ಶಿಕ್ಷಕರಿಂದ ಅರ್ಜಿ ಆಹ್ವಾನ**

ಮೈಸೂರು ಜಿಲ್ಲೆಯಲ್ಲಿ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯಡಿ ವಿವಿಧ ತಾಲ್ಲೂಕುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶ್ರೀ ಮಹರ್ಷಿ ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ಶಾಲೆಗಳಿಗೆ 2024–25ನೇ ಸಾಲಿಗೆ ತಾತ್ಕಾಲಿಕವಾಗಿ ಗೌರವಧನದ ಆಧಾರದ ಮೇಲೆ ಇಂಗ್ಲೀಷ್ ಭಾಷೆ ಬೋಧಿಸುವ ಅತಿಥಿ ಶಿಕ್ಷಕರನ್ನು ನೇಮಕ ಮಾಡಿ ಕೊಳ್ಳಲು ಅರ್ಜಿಯನ್ನು ಆಹ್ವಾನಿಸಲಾಗಿದ್ದು, ಇಂಗ್ಲೀಷ್ ಐಚ್ಛಿಕ ವಿಷಯದಲ್ಲಿ ಪದವಿ ಮತ್ತು ಬಿ.ಇಡಿ. ಅಥವಾ ಪದವಿ ಮತ್ತು ಡಿ.ಇಡಿ ವಿದ್ಯಾರ್ಹತೆಯನ್ನು ಹೊಂದಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ವಿದ್ಯಾರ್ಹತೆ ಹಾಗೂ ಸ್ವವಿವರಗಳೊಂದಿಗೆ ನಗರದ ಪಡುವಾರಳ್ಳಿಯ ಸಮಗ್ರ ಬುಡಕಟ್ಟು ಅಭಿವೃದ್ಧಿ ಯೋಜನೆಯ ಯೋಜನಾ ಸಮನ್ವಯಾಧಿಕಾರಿಗಳ ಕಛೇರಿಗೆ ದಿನಾಂಕ: 05.09.2024ರ ಒಳಗೆ ಅರ್ಜಿಯನ್ನು ಸಲ್ಲಿಸಲು ಕೊನೆಯ ದಿನಾಂಕವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಮೊ.ಸಂ.9742099989

DIPR/DDMYS-479/KSMCA-323/2024-25 ಸಹಿ/– ಯೋಜನಾ ಸಮನ್ವಯಾಧಿಕಾರಿ